ಸಂಪುಟ: 04 ಸಂಚಿಕೆ: 50 ಪುಟಗಳು: 08 ಶನಿವಾರ 04 ಮೇ 2024

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833

₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಟೀಕೆಗಳಿಗೆ ನಮ್ಮ ಜೀವನ, ವ್ಯಕ್ತಿತ್ವ, ನಡವಳಿಕೆಗಳೇ ಉತ್ತರ ಹೇಳಬೇಕೇ ಹೊರತು ಮಾತಿನಿಂದ ಹೇಳಿ ಪ್ರಯೋಜನವಿಲ್ಲ

# ರಾಯ್‌ಬರೇಲಿಯಿಂದ ರಾಹುಲ್ ಸ್ಪರ್ಧೆ





**ಅಮೇಥಿಯಿಂದ ಕೆ.ಎಲ್.ಶರ್ಮಾ ಕಣಕ್ಕೆ**

ಕುಟುಂಬದ ಭದ್ರಕೋಟೆಯಾದ ರಾಯ್‌ಬರೇಲಿಯಿಂದ ಸಂಸದ ರಾಹುಲ್ ಗಾಂಧಿ ಸ್ಪರ್ಧಿಸಲಿದ್ದು , ಹಿರಿಯ ನಾಯಕ ಕೆ.ಎಲ್.ಶರ್ಮಾ ಅಮೇಥಿಯಿಂದ ಕಣಕ್ಕಿಳಿಯಲಿದ್ದಾರೆ. 11 ಗಂಟೆಗಳ ಸುದೀರ್ಘ ಸಮಾಲೋಚನೆ ಬಳಿಕ ಅಮೇಥಿ ಮತ್ತು ರಾಯ್‌ಬರೇಲಿ ಲೋಕಸಭಾ ಕ್ಷೇತ್ರಗಳ ನಿರ್ಧಾರವನ್ನು ಪ್ರಕಟಿಸಿದ್ದು , ಕೈ ಪಕ್ಷ ಅಚ್ಚರಿಯ ನಡೆ ಅನುಸರಿಸಿದೆ. ಅಮೇಥಿ ಲೋಕಸಭೆ ಕ್ಷೇತ್ರದಿಂದ ಮತ್ತೆ ಸ್ಪರ್ಧಿಸಲಿದ್ದಾರೆ ಎಂದು ಹೇಳಲಾಗುತ್ತಿದ್ದ ರಾಹುಲ್ ಗಾಂಧಿ , ರಾಯ್‌ಬರೇಲಿ ಕ್ಷೇತ್ರದಿಂದ ಕಣಕ್ಕಿಳಿಯಲಿದ್ದಾರೆ ಎಂದು ಕಾಂಗ್ರೆಸ್ ಘೋಷಿಸಿದೆ.

## ಕಾಂಗ್ರೆಸ್‌ಗೆ ಪ್ರತಿಷ್ಠಿತ ಕ್ಷೇತ್ರ

ರಾಯ್‌ಬರೇಲಿ ಕ್ಷೇತ್ರವು ಕಾಂಗ್ರೆಸ್‌ಗೆ ಪ್ರತಿಷ್ಠಿತ ಕ್ಷೇತ್ರವಾಗಿದೆ ಏಕೆಂದರೆ ಇದನ್ನು ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರು ಮೂರು ಬಾರಿ ಮತ್ತು ಇಂದಿರಾ ಅವರ ಪತಿ ಫಿರೋಜ್ ಗಾಂಧಿಯವರು 1952 ಮತ್ತು 1957 ರಲ್ಲಿ ಸ್ಪರ್ಧಿಸಿ ಗೆದ್ದಿದ್ದರು. ಸೋನಿಯಾ ಗಾಂಧಿ 2004 ರಿಂದ 2024 ರವರೆಗೆ ಪ್ರತಿನಿಧಿಸಿದ್ದರು. ರಾಹುಲ್ ಗಾಂಧಿಯವರು 2004 ರಿಂದ 2019 ರವರೆಗೆ ಮೂರು ಬಾರಿ ಅಮೇಥಿಯನ್ನು ಪ್ರತಿನಿಧಿಸಿದ್ದರು ಮತ್ತು 2019 ರ ಲೋಕಸಭೆ ಚುನಾವಣೆಯಲ್ಲಿ ಕೇಂದ್ರ ಸಚಿವೆ ಸ್ಮೃತಿ ಇರಾನಿ ಅವರನ್ನು 50,000 ಕ್ಕೂ ಹೆಚ್ಚು ಮತಗಳಿಂದ ಸೋಲಿಸಿದರು. ಇರಾನಿ ವಿರುದ್ಧ ಗಾಂಧಿ ಕುಟುಂಬದ ಆಪ್ತ ಕೆ.ಎಲ್.ಶರ್ಮಾ ಕಣಕ್ಕಿಳಿದಿದ್ದಾರೆ. ಮೇ 20 ರಂದು ಐದನೇ ಹಂತದಲ್ಲಿ ಅಮೇಥಿ ಮತ್ತು ರಾಯ್ ಬರೇಲಿ ಲೋಕಸಭಾ ಕ್ಷೇತ್ರಗಳಿಗೆ ಚುನಾವಣೆ ನಿಗದಿಯಾಗಿದೆ.

1 ರಾಹುಲ್‌ಗೆ ದಿನೇಶ್ ಪ್ರತಾಪ್ ಸಿಂಗ್ ಸವಾಲು

2 ಅಮೇಥಿಯಲ್ಲಿ ಸ್ಮೃತಿಗೆ ಸುಲಭ ತುತ್ತು ರಾಹುಲ್ ಗಾಂಧಿಯವರು 2004 ರಿಂದ 2019 ರವರೆಗೆ ಮೂರು ಬಾರಿ ಅಮೇಥಿಯನ್ನು ಪ್ರತಿನಿಧಿಸಿದ್ದರು

3 2019ರ ಲೋಕಸಭೆ ಚುನಾವಣೆಯಲ್ಲಿಯೂ ಅವರು ಸೋನಿಯಾ ಗಾಂಧಿ ಎದುರು ಸ್ಪರ್ಧಿಸಿ ಸೋತಿದ್ದರು.

4 ರಾಯ್‌ಬರೇಲಿ ಕ್ಷೇತ್ರವು ಕಾಂಗ್ರೆಸ್‌ಗೆ ಪ್ರತಿಷ್ಠಿತ ಕ್ಷೇತ್ರವಾಗಿದೆ

5 ಸೋನಿಯಾ ಗಾಂಧಿ ಅವರು ಇತ್ತೀಚೆಗೆ ರಾಜ್ಯಸಭೆಗೆ ಆಯ್ಕೆ

## ವಿಜಯಮಾಲೆ ಧರಿಸಲು ಸ್ಮೃತಿ ಇರಾನಿ ತಯಾರಿ



2019ರ ಲೋಕಸಭೆ ಚುನಾವಣೆಯಲ್ಲಿ ಅಮೇಥಿ ಕ್ಷೇತ್ರದಲ್ಲಿ ರಾಹುಲ್ ಗಾಂಧಿ ಅವರು, ಕೇಂದ್ರ ಸಚಿವೆ ಸ್ಮೃತಿ ಇರಾನಿ ಅವರ ಎದುರು ಸೋಲು ಅನುಭವಿಸಿದ್ದರು. ಈ ಬಾರಿ ಅಮೇಥಿಯಲ್ಲಿ ಮತ್ತೆ ವಿಜಯಮಾಲೆ ಧರಿಸಲು ಸ್ಮೃತಿ ಇರಾನಿ ಬಯಸಿದ್ದಾರೆ. ಅವರಿಗೆ ಕಿಶೋರಿ ಲಾಲ್ ಶರ್ಮಾ ಪ್ರಬಲ ಎದುರಾಳಿಯಾಗುತ್ತಾರೆಯೇ ಎನ್ನುವುದು ಕುತೂಹಲ ಮೂಡಿಸಿದೆ.

• ಉದಯವಾಹಿನಿ, ನವದೆಹಲಿ

ಸೋನಿಯಾ ಗಾಂಧಿ ಅವರು ಇತ್ತೀಚೆಗೆ ರಾಜ್ಯಸಭೆಗೆ ಆಯ್ಕೆಯಾದ ಹಿನ್ನೆಲೆಯಲ್ಲಿ ರಾಯ್ಬರೇಲಿ ಕ್ಷೇತ್ರ ಖಾಲಿಯಾಗಿತ್ತು.ರಾಹುಲ್ ಗಾಂಧಿ ಮತ್ತು ಕಿಶೋರಿ ಲಾಲ್ ಶರ್ಮಾ ಇಬ್ಬರೂ ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿರುವ ಇಂದು ತಮ್ಮ ಉಮೇದುವಾರಿಕೆ ಸಲ್ಲಿಸಿದರು.

ಈ ಎರಡೂ ಕ್ಷೇತ್ರಗಳಲ್ಲಿ ಮೇ 20ರಂದು ಐದನೇ ಹಂತದ ಚುನಾವಣೆ ನಡೆಯಲಿದೆ. ರಾಹುಲ್ ಗಾಂಧಿ ಅವರು ಹಾಲಿ ಸಂಸದರಾಗಿರುವ ಕೇರಳದ ವಯನಾಡು ಕ್ಷೇತ್ರದಿಂದಲೂ ಸ್ಪರ್ಧಿಸಿದ್ದು, ಈಗಾಗಲೇ ಅಲ್ಲಿ ಮತದಾನ ನಡೆದಿದೆ. ಆದರೆ ಎಡಪಕ್ಷಗಳು ಮೈತ್ರಿ ಒಪ್ಪಂದಕ್ಕೆ ಒಪ್ಪದೆ ಅಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿವೆ. ಹೀಗಾಗಿ ರಾಹುಲ್ ಗಾಂಧಿ ಅವರಿಗೆ ಅಲ್ಲಿ ಗೆಲುವು ಸುಲಭವಿಲ್ಲ ಎಂದು ವಿಶ್ಲೇಷಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಅವರು ಇನ್ನೊಂದು ಸುರಕ್ಷಿತ ಕ್ಷೇತ್ರ ಹುಡುಕುವುದು ಅನಿವಾರ್ಯವಾಗಿತ್ತು. ರಾಯ್ಬರೇಲಿ ಕ್ಷೇತ್ರ ದಿಂದ ಪ್ರಿಯಾಂಕಾ ಗಾಂಧಿ ವಾದ್ರಾ ಸ್ಪರ್ಧಿಸುವ ಬಗ್ಗೆ ವದಂತಿ ದಟ್ಟವಾಗಿತ್ತು. ಆದರೆ ತಾಯಿ ಸೋನಿಯಾ ಪರವಾಗಿ ಈ ಕ್ಷೇತ್ರದಲ್ಲಿ ದಶಕದಿಂದಲೂ ಹೆಚ್ಚು ಸಮಯದಿಂದ ಓಡಾಡಿದ್ದ ಪ್ರಿಯಾಂಕಾ, ಚುನಾವಣಾ ಅಖಾಡಕ್ಕೆ ಇಳಿಯಲು ಈ ಬಾರಿ ಕೂಡ ನಿರಾಕರಿಸಿದ್ದಾರೆ. ಎರಡೂ ಸ್ಥಾನಗಳನ್ನು ಗಾಂಧಿ -ನೆಹರು ಕುಟುಂಬದ ಸಾಂಪ್ರದಾಯಿಕ ಭದ್ರಕೋಟೆ ಎಂದು ಪರಿಗಣಿಸಲಾಗುತ್ತದೆ ಏಕೆಂದರೆ ಗಾಂಧಿ ಕುಟುಂಬಸ್ಥರು ಹಲವಾರು ದಶಕಗಳಿಂದ ಈ ಕ್ಷೇತ್ರಗಳನ್ನು ಪ್ರತಿನಿಧಿಸಿದ್ದಾರೆ.

## ಬಿಜೆಪಿಯಿಂದ ದಿನೇಶ್ ಸಿಂಗ್ ಅಭ್ಯರ್ಥಿ



ಸೋನಿಯಾ ಗಾಂಧಿ ಅವರು ಸತತ ನಾಲ್ಕು ಬಾರಿ ಲೋಕಸಭೆ ಪ್ರವೇಶಿಸಿದ್ದ ರಾಯ್‌ಬರೇಲಿ ಕ್ಷೇತ್ರದಿಂದ ಬಿಜೆಪಿಯು ದಿನೇಶ್ ಪ್ರತಾಪ್ ಸಿಂಗ್ ಅವರನ್ನು ಅಭ್ಯರ್ಥಿಯನ್ನಾಗಿ ಘೋಷಿಸಿದೆ. ದಿನೇಶ್ ಪ್ರತಾಪ್ ಸಿಂಗ್ ಅವರು ಪ್ರಸ್ತುತ ಉತ್ತರ ಪ್ರದೇಶದ ಯೋಗಿ ಆದಿತ್ಯನಾಥ್ ಸರ್ಕಾರದಲ್ಲಿ ಸಚಿವರಾಗಿದ್ದಾರೆ. 2019ರ ಲೋಕಸಭೆ ಚುನಾವಣೆಯಲ್ಲಿಯೂ ಅವರು ಸೋನಿಯಾ ಗಾಂಧಿ ಎದುರು ಸ್ಪರ್ಧಿಸಿ ಸೋತಿದ್ದರು. ಈ ಬಾರಿ ಅವರ ಮಗನಿಗೆ ಸವಾಲು ಹಾಕುತ್ತಿದ್ದಾರೆ. ಸಿಂಗ್ ಈ ಹಿಂದೆ ಕಾಂಗ್ರೆಸ್‌ನಲ್ಲಿದ್ದವರು. 2010 ಮತ್ತು 2016ರಲ್ಲಿ ವಿಧಾನ ಪರಿಷತ್ ಸದಸ್ಯರಾಗಿದ್ದರು. 2018ರಲ್ಲಿ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ್ದರು. 2019ರ ಚುನಾವಣೆಯಲ್ಲಿ ಸೋತ ಅವರನ್ನು 2022ರಲ್ಲಿ ಮತ್ತೆ ವಿಧಾನ ಪರಿಷತ್ ಸದಸ್ಯರನ್ನಾಗಿ ಬಿಜೆಪಿ ಆಯ್ಕೆ ಮಾಡಿತ್ತು.

## ಯಾರೇ ಬರಲಿ, ನನಗೆ ಮುಖ್ಯವಲ್ಲ

ನಾನು ಸೋನಿಯಾ ಗಾಂಧಿ ವಿರುದ್ಧ ಹೋರಾಡಿದ್ದೇನೆ. ಹೀಗಾಗಿ ಪ್ರಿಯಾಂಕಾ ಅಥವಾ ರಾಹುಲ್ ಗಾಂಧಿ ಯಾರೇ ಬರಲಿ, ನನಗೆ ಮುಖ್ಯವಲ್ಲ. ಯಾವ ಗಾಂಧಿ ಬಂದರೂ ರಾಯ್ಬರೇಲಿಯಲ್ಲಿ ಸೋಲುತ್ತಾರೆ ಎಂದು ಸಿಂಗ್ ಹೇಳಿದ್ದಾರೆ.

## ನಾಮಪತ್ರ ಸಲ್ಲಿಸಿದ ರಾಹುಲ್ ಗಾಂಧಿ

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕೇರಳದ ವಯನಾಡ್ ಕ್ಷೇತ್ರದ ಜೊತೆಗೆ ರಾಯ್ ಬರೇಲಿ ಲೋಕಸಭಾ ಕ್ಷೇತ್ರದಿಂದಲೂ ಸ್ಪರ್ಧಿಸಿದ್ದು, ಇಂದು ನಾಮಪತ್ರ ಸಲ್ಲಿಸಿದರು. ಈ ವೇಳೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ, ಪ್ರಿಯಾಂಕಾ ಗಾಂಧಿ, ರಾಜಸ್ಥಾನ ಮಾಜಿ ಸಿಎಂ ಅಶೋಕ್ ಗೆಹ್ಲೋಟ್ ಮೊದಲಾದವರು ಉಪಸ್ಥಿತರಿದ್ದರು. ಇನ್ನು ಅಮೇಥಿ ಕ್ಷೇತ್ರದಿಂದ ಕೆ.ಎಲ್ ಶರ್ಮಾ ತಮ್ಮ ನಾಮಪತ್ರ ಸಲ್ಲಿಸಿದ್ದಾರೆ. ರಾಯ್ ಬರೇಲಿ ಕ್ಷೇತ್ರದಿಂದ ಬಿಜೆಪಿ ದಿನೇಶ್ ಪ್ರತಾಪ್ ಸಿಂಗ್ ಅವರನ್ನು ಕಣಕ್ಕಿಳಿಸಿದೆ.

## ರಾಯಬರೇಲಿ ಫಲಿತಾಂಶ ನಾನೇ ಹೇಳ್ತಿನಿ

ಒಂದೇ ಪ್ರಯತ್ನದಲ್ಲಿ ಚಂದ್ರಯಾನ ಮಿಷನ್ ಲಾಂಚ್ ಆಯಿತು ಆದರೆ 20 ಬಾರಿ ಪ್ರಯತ್ನಿಸಿದರೂ 'ರಾಹುಲ್ ಬಾಬಾ' ಲಾಂಚ್ ಯಶಸ್ವಿಯಾಗಲಿಲ್ಲ ಎಂದು ಅಮಿತ್ ಶಾ ಟೀಕಿಸಿದ್ದಾರೆ. ಅಮೇಥಿ ಬಿಟ್ಟು ರಾಹುಲ್ ಗಾಂಧಿ ಓಡಿದ್ದಾರೆ. ಅಲ್ಲಿ ಅವರ ಗೆಲುವು ಸಾಧ್ಯವಿಲ್ಲ ಎಂಬುದು ಅರ್ಥವಾಗಿದೆ ಹೀಗಾಗಿ ಬೇರೆ ಅಭ್ಯರ್ಥಿ ಹಾಕಿ ರಾಯಬರೇಲಿ ಕ್ಷೇತ್ರಕ್ಕೆ ಓಡಿದ್ದಾರೆ ಎಂದು ಅಮಿತ್ ಶಾ ಹೇಳಿದ್ದು, ' ಈ ರಾಯಬರೇಲಿ ಕ್ಷೇತ್ರದ ಫಲಿತಾಂಶವನ್ನು ನಾನೇ ಹೇಳುತ್ತೇನೆ , ಬಿಜೆಪಿ ಅಭ್ಯರ್ಥಿ ದಿನೇಶ್ ಪ್ರತಾಪ್ ಸಿಂಗ್ ವಿರುದ್ಧ ರಾಹುಲ್ ಹೀನಾಯವಾಗಿ ಸೋಲುತ್ತಾರೆ' ಎಂದು ಅಮಿತ್ ಶಾ ಭವಿಷ್ಯ ನುಡಿದಿದ್ದಾರೆ.

## ಯಾರಾದರೂ ಪಾಕಿಸ್ತಾನ್ ಜಿಂದಾಬಾದ್ ಎಂದರೆ ಗುಂಡಿಕ್ಕಿ ಕೊಲ್ಲುತ್ತೇವೆ

• ಉದಯವಾಹಿನಿ, ರಾಯಚೂರು

ಯಾರಾದರೂ ಪಾಕಿಸ್ತಾನ ಜಿಂದಾಬಾದ್ ಎಂದರೆ ನಮಗೆ ತಿಳಿಸಿ ನಾವು ಅವರನ್ನು ಗಲಿಗೇರಿಸಲ್ಲ ಬದಲಾಗಿ ಗುಂಡಿಕ್ಕಿ ಕೊಲ್ಲುತ್ತೆವೆ ಎಂದು ಸಚಿವ ಜಮೀರ್ ಅಹ್ಮದ್ ತಿಳಿಸಿದರು. ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ ಮಾತನಾಡಿದ ಅವರು, ಪಾಕಿಸ್ತಾನ್ ಜಿಂದಾಬಾದ್ ಅಂದರೆ ತಿಳಿಸಿ, ಗುಂಡು ಹಾರಿಸುತ್ತೇವೆ. ಸರ್ಕಾರಕ್ಕೆ ತಿಳಿಸಿ ಅವರನ್ನು ಗಲ್ಲಿಗೇರಿಸಲ್ಲ ನಾವೇ ಗುಂಡಿಕ್ಕಿ ಸಾಯಿಸುತ್ತೇವೆ. ಎಂದು ಸಚಿವ ಜಮೀರ್ ಹೇಳಿಕೆ ನೀಡಿದರು. ಅಂತವರು ಯಾರಾದರೂ ಘೋಷಣೆ ಕೂಗಿದರೆ ನಾವೇ ಡಿಶುಂ ಡಿಶುಂ ಅಂತ ಗುಂಡಿಕ್ಕಿ ಕೊಲ್ಲುತ್ತೆವೆ. ಬಿಜೆಪಿ ಅವರಿಗೂ ಈ ತರದ್ದೇ ಬೇಕು ಅಲ್ವಾ ಬಿಜೆಪಿಯವರಿಗೆ ಒಟ್ಟಿನಲ್ಲಿ ಅಧಿಕಾರಕ್ಕೆ ಬರಬೇಕು ಎಂದು ರಾಯಚೂರು ಜಿಲ್ಲೆಯ ಸಿಂಧನೂರಿನಲ್ಲಿ ಸಚಿವ ಜಮೀರ್ ಅಹ್ಮದ್ ಹೇಳಿಕೆ ನೀಡಿದರು.

## ದೀರ್ಘದಂಡ ನಮಸ್ಕಾರ ಹಾಕಿ ಮತಯಾಚಿಸಿದ ರಾಜೂಗೌಡ

• ಉದಯವಾಹಿನಿ, ಯಾದಗಿರಿ

ಇತ್ತೀಚಿಗೆ ಕಾಂಗ್ರೆಸ್ಸಿನ ರಾಜಾ ವೆಂಕಟಪ್ಪ ನಾಯಕ ಅವರು ನಿಧನರಾದ ಹಿನ್ನೆಲೆಯಲ್ಲಿ, ಯಾದಗಿರಿ ಜಿಲ್ಲೆಯ ಸುರಪುರ ಕ್ಷೇತ್ರಕ್ಕೆ ಇದೀಗ ಉಪಚುನಾವಣೆ ನಡೆಯುತ್ತಿದ್ದು ಅಲ್ಲಿ ಬಿಜೆಪಿ ಅಭ್ಯರ್ಥಿ ರಾಜುಗೌಡ ಸ್ಪರ್ಧಿಸಲಿದ್ದಾರೆ. ಹಾಗಾಗಿ ಹಿಂದೆ ಅವರು ಯಾದಗಿರಿ ಜಿಲ್ಲೆ ಹುಣಸಗಿ ತಾಲ್ಲೂಕಿನಲ್ಲಿ ಮತಯಾಚನೆ ಮಾಡಿದರು. ನನಗೆ ತಂದೆ ತಾಯಿ ಇಲ್ಲ ಇಲ್ಲಿ ಬಂದಂತಹ ಎಲ್ಲಾ ತಾಯಂದಿರ ಹತ್ತಿರ ನನ್ನ ಕಾರ್ಯಕರ್ತರ ಹತ್ತಿರ ಎಲ್ಲಾ ಅಣ್ಣ-ತಮ್ಮಂದಿರ ಹತ್ತಿರ ಎಲ್ಲಾ ನನ್ನ ಬಿಜೆಪಿ ಕಾರ್ಯಕರ್ತರು ನಿಮಗೆ ಕೈ ಮುಗಿದು ನಿಮ್ಮ ಕಾಲಿಗೆ ನಮಸ್ಕಾರ ಮಾಡಿ ಕೇಳುತ್ತೇನೆ ನಮಗೆ ಆಶೀರ್ವಾದ ಮಾಡಿ ಎಂದು ಕೇಳಿಕೊಳ್ಳುತ್ತೇನೆ ಎಂದು ವೇದಿಕೆ ಮೇಲೆ ದೀರ್ಘ ದಂಡ ನಮಸ್ಕಾರ ಹಾಕಿದರು.

## ಬಿಜೆಪಿ ನನ್ನ ತಾಯಿ, ಕೊನೆಯ ವರೆಗೂ ಬೇರೆ ಪಕ್ಷಕ್ಕೆ ಸೇರುವುದಿಲ್ಲ

• ಉದಯವಾಹಿನಿ, ಶಿವಮೊಗ್ಗ

ಬಿಜೆಪಿ ಉಚ್ಚಾಟಿತ ನಾಯಕ ಈಶ್ವರಪ್ಪ ಬಿಜೆಪಿ 27 ಸ್ಥಾನಗಳನ್ನು ಗೆಲ್ಲಬೇಕು, ಸ್ವತಂತ್ರ ಅಭ್ಯರ್ಥಿಯಾಗಿ ನಾನು ಒಂದು ಸ್ಥಾನವನ್ನು ಗೆಲ್ಲಬೇಕು ಮತ್ತು ಕರ್ನಾಟಕದಲ್ಲಿ ಒಟ್ಟು 28 ಸದಸ್ಯರು (28 ಸ್ಥಾನಗಳಲ್ಲಿ) ನರೇಂದ್ರ ಮೋದಿಯವರನ್ನು ಪ್ರಧಾನಿಯನ್ನಾಗಿ ಮಾಡಲು ಕೊಡುಗೆ ನೀಡುತ್ತಾರೆ ಎಂದು ನಾನು ಬಯಸುತ್ತೇನೆ ಅಂತ ಹೇಳಿದ್ದಾರೆ. ಬಿಜೆಪಿ ನನ್ನ ತಾಯಿ. ನನ್ನ ಪದವಿಯ ನಂತರ ನಾನು ಬಿಜೆಪಿಗೆ ಸೇರಿಕೊಂಡೆ ಮತ್ತು ಅಂದಿನಿಂದ ಇಂದಿನವರೆಗೆ ನಾನು ಅದರ ತತ್ವಗಳಿಗೆ ಬದ್ಧನಾಗಿದ್ದೇನೆ. ನಾನು ಇಲ್ಲಿಯವರೆಗೆ ಯಾವುದೇ ಪಕ್ಷಕ್ಕೆ ಸೇರಿಲ್ಲ. ಮತ್ತು ಕೊನೆಯವರೆಗೂ ಬೇರೆ ಯಾವುದೇ ಪಕ್ಷಕ್ಕೆ ಸೇರುವುದಿಲ್ಲ ಅಂತ ಹೇಳಿದ್ದಾರೆ.

## ನೇಹಾ ಹಿರೇಮಠ್ ಕೊಲೆ ಪ್ರಕರಣವನ್ನು ಸಿಬಿಐಗೆ ವಹಿಸಿ

• ಉದಯವಾಹಿನಿ, ಬೆಳಗಾವಿ

ಬೆಳಗಾವಿ ಜಿಲ್ಲೆಯ ಹುಕ್ಕೇರಿಯಲ್ಲಿ ಬಿಜೆಪಿ ಸಮಾವೇಶದಲ್ಲಿ ನೇಹಾ ಹಿರೇಮಠ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾತನಾಡಿದ ಅವರು ಈ ಪ್ರಕರಣವನ್ನು ಸಿಬಿಐ ವಹಿಸಿ ಎಂದು ಅಗ್ರಹ ಪಡಿಸಿದರು. ಬೆಳಗಾವಿ ಜಿಲ್ಲೆಯ ಹುಕ್ಕೇರಿಯಲ್ಲಿ ಬಿಜೆಪಿ ಸಮಾವೇಶ ನಡೆಯುತ್ತಿದ್ದು ಈ ಒಂದು ಸಮಾವೇಶದಲ್ಲಿ ಭಾಗಿಯಾಗಿರುವ ಕೇಂದ್ರ ಸಚಿವ ಅಮಿತ್ ಶಾ ಅವರು ಮಾತನಾಡಿ, ವೈಯಕ್ತಿಕ ವಿಚಾರಕ್ಕೆ ವಿದ್ಯಾರ್ಥಿನಿ ನೇಹಾ ಕೊಲೆ ನಡೆದಿಲ್ಲ ಮತಾಂತರ ಆಗಲು ನೇಹಾ ಹಿರೇಮಠ ಒಪ್ಪದಿದ್ದಕ್ಕೆ ಹತ್ಯೆಯಾಗಿದೆ ಎಂದು ಅವರು ತಿಳಿಸಿದರು. ನೇಹಾ ಕೊಲೆಗೆ ನ್ಯಾಯ ಸಿಗಬೇಕು ಅಂದರೆ ಪ್ರಕರಣವನ್ನು ಸಿಬಿಐಗೆ ವಹಿಸಲಿ ಎಂದರು.

## ಗ್ಯಾರಂಟಿ ಯೋಜನೆಗೆ ಎಸ್‌ಸಿ ಎಸ್‌ಟಿ ಅನುದಾನ ಬಳಕೆ

• ಉದಯವಾಹಿನಿ, ಬಾಗಲಕೋಟೆ

ಎಸ್.ಸಿ, ಎಸ್.ಟಿ ಸಮುದಾಯಗಳ ಅಭಿವೃದ್ಧಿ ಯೋಜನೆಗಳಿಗಾಗಿ ಮೀಸಲಿಟ್ಟಿದ್ದ 25,296 ಕೋಟಿ ಹಣವನ್ನು ಗ್ಯಾರಂಟಿ ಯೋಜನೆಗಳಿಗಾಗಿ ರಾಜ್ಯ ಕಾಂಗ್ರೆಸ್ ಸರ್ಕಾರ' ಗುಳುಂ ಮಾಡಿದೆ ಎಂದು ಮಾಜಿ ಸಚಿವ ಅರವಿಂದ ಲಿಂಬಾವಳಿ ಆರೋಪಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 'ಗ್ಯಾರಂಟಿಗಳ ಆಮಿಷವೊಡ್ಡಿ ಅಧಿಕಾರಕ್ಕೆ ಬಂದ ಸರ್ಕಾರ ಒಂದೇ ಒಂದು ರೂಪಾಯಿಯ ಅಭಿವೃದ್ಧಿ ಕಾರ್ಯವಿಲ್ಲ. ಶಾಸಕರ ಕ್ಷೇತ್ರ ಅನುದಾನವಿಲ್ಲ. ಅಲ್ಪಸಂಖ್ಯಾತರಿಗೆ ಬಡ್ಡಿ ರಹಿತ ಸಾಲ, ವಕ್ಫ್ ಆಸ್ತಿಗಳ ಅಭಿವೃದ್ಧಿಗಾಗಿ ಮತ್ತು ಸಂರಕ್ಷಣೆಗಾಗಿ ವಿಶೇಷ ಅನುದಾನ ಬಿಡುಗಡೆಗಾಗಿ ಸರ್ಕಾರದ ಬಳಿ ಹಣವಿದೆ. ಆದರೆ ರೈತರಿಗೆ ಬರಗಾಲ ಪರಿಹಾರ ನೀಡಲು ಹಣವಿಲ್ಲ' ಎಂದು ವಾಗ್ದಾಳಿ ನಡೆಸಿದರು.

## ಬಿಜೆಪಿಗೆ ಹೆಚ್ಚಿನ ಮತ ಹಾಕಿಸಲು ಪ್ರಕೋಷ್ಠಗಳು ಶ್ರಮಿಸಬೇಕು: ಬಸವರಾಜ ಬೊಮ್ಮಾಯಿ

• ಉದಯವಾಹಿನಿ, ಗದಗ





ಲೋಕಸಭೆ ಚುನಾವಣೆ ಪಕ್ಷದ ಪ್ರಕೋಷ್ಠಗಳಿಗೂ ಪರೀಕ್ಷೆಯಾಗಿದ್ದು, ಎಲ್ಲಾ ಪ್ರಕೋಷ್ಠಗಳು ಬಿಜೆಪಿಗೆ ಹೆಚ್ಚಿನ ಮತ ಹಾಕಿಸಲು ಶ್ರಮಿಸಬೇಕು ಎಂದು ಮಾಜಿ ಮುಖ್ಯಮಂತ್ರಿ, ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಅವರು ಇಂದು ಗದಗದಲ್ಲಿ ರಾಜ್ಯ ಬಿಜೆಪಿ ವಿವಿಧ ಪ್ರಕೋಷ್ಠಗಳ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಒಂದು ದೇಶ, ರಾಜ್ಯ ಅಭಿವೃದ್ಧಿ ಹೊಂದಬೇಕೆಂದರೆ ಎಲ್ಲಾ ವೃತ್ತಿಯವರು ಕೆಲಸ ಮಾಡಿದಾಗ ಮಾತ್ರ ಸಾಧ್ಯ. ಸರ್ಕಾರ ಮತ್ತು ಎಲ್ಲಾ ವೃತ್ತಿ ಬಾಂಧವರ ನಡುವೆ ಸೇತುವೆಯಾಗಿ ಕೆಲಸ ಮಾಡಲು ಪ್ರಕೋಷ್ಠಗಳನ್ನು ಮಾಡಿದೆ. ಎಲ್ಲಾ ಪ್ರಕೋಷ್ಠಗಳು ಸಕ್ರೀಯವಾಗಿ ಕೆಲಸ ಮಾಡಿ, ಪಕ್ಷಕ್ಕೆ ಹೆಚ್ಚಿನ ಮತ ಹಾಕುವಂತೆ ನೋಡಿಕೊಳ್ಳಬೇಕು ಎಂದರು.

ಈ ರೀತಿಯ ಪ್ರಕೋಷ್ಠಗಳು ಬೇರೆ ಪಕ್ಷದಲ್ಲಿಲ್ಲ. ಅವರು ನಿಮ್ಮ ವೃತ್ತಿಗಳ ಬಗ್ಗೆ ತಲೆ ಕೆಡಿಸಿಕೊಳ್ಳುವುದಿಲ್ಲ. ಉದಾಹರಣೆಗೆ ವೈದ್ಯರ ಪ್ರಕೋಷ್ಠ ವೈದ್ಯರ ಸಮಸ್ಯೆ ಇದ್ದಾಗ ಅದನ್ನು ನಮ್ಮ ಪ್ರಕೋಷ್ಠ ವಿವರವಾಗಿ ಸರ್ಕಾರಕ್ಕೆ ಮಾಹಿತಿ ನೀಡಬೇಕು. ಬಿಜೆಪಿ ಗೆದ್ದರೆ ನಿಮ್ಮ ವೃತ್ತಿಗಳು ಸುರಕ್ಷಿತವಾಗಿರುತ್ತವೆ. ನರೇಂದ್ರ ಮೋದಿಯವರು ಎಲ್ಲಾರ ಬಗ್ಗೆ ಯೋಚಿಸುತ್ತಾರೆ. ಅವರು ಬೀದಿ ಬದಿ ವ್ಯಾಪಾರಿಗಳ ಬಗ್ಗೆ ಚಿಂತನೆ ಮಾಡಿ ಅವರಿಗೆ ಆರ್ಥಿಕ ನೆರವು ನೀಡಿದರು. ಸುಮಾರು 18 ವೃತ್ತಿಗಳಿಗೆ ನೆರವು ನೀಡುವ ವಿಶ್ವಕರ್ಮ ಯೋಜನೆ ಜಾರಿ ಮಾಡಿದರು. ಎಪಿಎಂಸಿ ವ್ಯಾಪಾರಸ್ಥರು, ಮೀನುಗಾರರು, ವಿದೇಶಿ ಕಂಪನಿಗಳ ದಾಳಿಯಾದಾಗ ಸಣ್ಣ ವ್ಯಾಪಾರಸ್ಥರನ್ನು ರಕ್ಷಣೆಯನ್ನು ಬಿಜೆಪಿ ಮಾಡಿದೆ. ಈ ಚುನಾವಣೆ ಪ್ರಕೋಷ್ಠಗಳಿಗೂ ಪರೀಕ್ಷೆ. ಮೋದಿಯವರ ಅಲೆ ಇದೆ. ದೊಡ್ಡ ಅಂತರದಲ್ಲಿ ಗೆಲುವು ಸಾಧಿಸುವುದು ಖಚಿತ. ಅದಕ್ಕಾಗಿ ಎಲ್ಲಾರೂ ಪ್ರಾಮಾಣಿಕವಾಗಿ ಕೆಲಸ ಮಾಡುವಂತೆ ಹೇಳಿದರು.

## ರೈತರ ಸಾಲ ಮನ್ನಾ ಮಾಡದಿದ್ದರೆ ಹೋರಾಟ

• ಉದಯವಾಹಿನಿ, ಬೆಂಗಳೂರು



**ಸರ್ಕಾರಕ್ಕೆ ಎಚ್ಚರಿಕೆ ನೀಡಿದ ರಾಜಾಹುಲಿ**

ಲೋಕಸಭಾ ಚುನಾವಣಾ ಕಾವು ರಾಜ್ಯದಲ್ಲಿ ಜೋರಾಗಿದೆ. ಇತ್ತ ಏಪ್ರಿಲ್ 26 ರಂದು 14 ಲೋಕಸಭಾ ಕ್ಷೇತ್ರಗಳ ಚುನಾವಣೆ ನಡೆಸಿದ್ದು, ಬಾಕಿ 14 ಕ್ಷೇತ್ರಗಳ ಚುನಾವಣೆ ಮೇ 7 ರಂದು ನಡೆಯಲಿದೆ. ಇತ್ತ ಚುನಾವಣೆ ಹಿನ್ನೆಲೆ ಪ್ರಚಾರದ ಭರಾಟೆ ಜೋರಾಗಿದ್ದು, ರಾಜ್ಯ ಸರ್ಕಾರಕ್ಕೆ ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಅವರು ಎಚ್ಚರಿಕೆ ನೀಡಿದ್ದಾರೆ.

ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿಯವರ ಪರ ಚುನಾವಣಾ ಪ್ರಚಾರ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಯಡಿಯೂರಪ್ಪ ಅವರು, ಯೋಗ್ಯತೆ ಇದ್ದರೆ ರೈತರ ಸಂಪೂರ್ಣ ಸಾಲ ಮನ್ನಾ ಮಾಡಿ, ಇಲ್ಲದಿದ್ದರೆ ಬೀದಿಗಿಳಿದು ಹೋರಾಟ ಮಾಡಲಿದ್ದೇನೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಹೇಳಿದ್ದಾರೆ. ಮೋದಿಯವರು ಕಳೆದಹತ್ತು ವರ್ಷದಲ್ಲಿ ಒಂದು ದಿನವೂ ರಜೆ ತೆಗೆದುಕೊಳ್ಳದೇ ಕೆಲಸ ಮಾಡಿದ್ದಾರೆ. ತಮ್ಮ ತಾಯಿ ತಿರಿಕೊಂಡಾಗ ಅಂತ್ಯ ಸಂಸ್ಕಾರ ಮಾಡಿ ಮತ್ತೆ ಕರ್ತವ್ಯಕ್ಕೆ ಹಾಜರಿಯಾಗಿದ್ದರು. ದೇಶಕ್ಕೆ ಸ್ವಾತಂತ್ರ್ಯ ಬಂದ ಸಂದದರ್ಭದಲ್ಲಿ ಕಾಂಗ್ರೆಸ್ ನ್ನು ವಿಸರ್ಜಿಸುವಂತೆ ಮಹಾತ್ಮಾ ಗಾಂಧಿಜಿ ಸೂಚಿಸಿದರು. ಆಗ ಕಾಂಗ್ರೆಸ್ ವಿಸರ್ಜಿಸಲಿಲ್ಲ. ಈಗ ಜನರು ಮಹಾತ್ಮಾ ಗಾಂಧಿಯವರ ಆದೇಶ ಪಾಲನೆ ಮಾಡಿ ಕಾಂಗ್ರೆಸ್ ನ್ನು ನಿರ್ಮೂಲನೆ ಮಾಡುತ್ತಿದ್ದಾರೆ ಎಂದರು.

## ಕೋವಿಡ್ ಲಸಿಕೆ: ಕಾಂಗ್ರೆಸ್ ಅಪಪ್ರಚಾರ



**ಬೆಂಗಳೂರು:** ಕೋವಿಶೀಲ್ಡ್ ಲಸಿಕೆ ವಿರುದ್ಧ ವಿರೋಧ ಪಕ್ಷಗಳು ಅದರಲ್ಲೂ ಕಾಂಗ್ರೆಸ್ ಅಪಪ್ರಚಾರ ಮಾಡುತ್ತಿದೆ ಎಂದು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ, ಖ್ಯಾತ ಹೃದ್ರೋಗ ತಜ್ಞರು ಡಾ.ಸಿ.ಎನ್. ಮಂಜುನಾಥ್ ತಿಳಿಸಿದ್ದಾರೆ.

ಈ ಬಗ್ಗೆ ಡಾ. ಮಂಜುನಾಥ್ ಅವರ ಅಭಿಪ್ರಾಯವನ್ನು ಬಿಜೆಪಿ ತನ್ನ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದು, ಕೋವಿಶೀಲ್ಡ್ ಲಸಿಕೆಯಿಂದ ಆಗಬಹುದಾದ ಅಡ್ಡಪರಿಣಾಮ ಅತಿ ವಿರಳ. ಕೊರೊನಾದಿಂದ ಕಾಪಾಡಿದ್ದೇ ವ್ಯಾಕ್ಸಿನ್. ಬಹುತೇಕ ಅಡ್ಡಪರಿಣಾಮಗಳು ಲಸಿಕೆ ಪಡೆದ ಕೆಲವೇ ತಿಂಗಳಲ್ಲಿ ಕಂಡುಬರುತ್ತವೆ. ಈಗಾಗಲೇ ಲಸಿಕೆ ಪಡೆದು ಮೂರು ವರ್ಷ ಕಳೆದ ಕಾರಣ ಜನತೆ ಆತಂಕ ಪಡಬೇಕಾಗಿಲ್ಲ ಎಂದು ಡಾ. ಮಂಜುನಾಥ್ ಹೇಳಿದ್ದಾರೆ.

# ಕೇಂದ್ರ ಸರ್ಕಾರ ಪ್ರಜ್ವಲ್ ರೇವಣ್ಣ ಅವರನ್ನು ರಕ್ಷಣೆ ಮಾಡುತ್ತಿದೆ

● ಪ್ರಜ್ವಲ್ ರೇವಣ್ಣ ವಿರುದ್ಧ ರೇಪ್ ಕೇಸ್ ದಾಖಲು ● ಪ್ರಜ್ವಲ್ ಎಲ್ಲೇ ಇದ್ದರೂ ಹಿಡಿದುಕೊಂಡು ಬರುತ್ತೇವೆ : ಸಿದ್ದರಾಮಯ್ಯ ಹೇಳಿಕೆ

• ಉದಯವಾಹಿನಿ, ಮುಂಡಗೋಡು

ಕೇಂದ್ರ ಸರ್ಕಾರ ಪ್ರಜ್ವಲ್ ರೇವಣ್ಣ ಅವರನ್ನು ರಕ್ಷಣೆ ಮಾಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.ಅವರು ಇಂದು ಬಾಗಲಕೋಟೆ ಹೆಲಿಪ್ಯಾಡಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಯಾರಾದರೂ ಅಂತರರಾಷ್ಟ್ರೀಯ ಪ್ರಯಾಣ ಮಾಡುವಾಗ ಪಾಸ್ ಪೋರ್ಟ್, ವೀಸಾ ಚೆಕ್ ಆಗುತ್ತದೆ. ಕೇಂದ್ರ ಸರ್ಕಾರಕ್ಕೆ ತಿಳಿಯದಂತೆ ಯಾರೂ ದೇಶದ ಹೊರಗೆ ಹೋಗಲು ಸಾಧ್ಯವಿಲ್ಲ ಎಂದರು. ರೇವಣ್ಣ ದುಬೈಗೆ ತೆರಳಿರುವ ಬಗ್ಗೆ ಮಾತನಾಡಿದ ಅವರು ಯಾವ ದೇಶದಲ್ಲಿದ್ದರೂ ಕರೆತರುತ್ತೇವೆ. ಅವರು ದೇಶಕ್ಕೆ ಬರಲೇಬೇಕು. ಪ್ರಜ್ವಲ್ ರೇವಣ್ಣ ಅವರ ರಾಜತಾಂತ್ರಿಕ ಪಾಸ್ ಪೋರ್ಟ್ ನ್ನು ರದ್ದು ಮಾಡಲು ಪ್ರಧಾನಿಗಳಿಗೆ ಪತ್ರ ಬರೆದಿದ್ದೇನೆ ಎಂದರು. ಪ್ರಜ್ವಲ್ ರೇವಣ್ಣ ಅವರ ಮೇಲೆ ಬಲಾತ್ಕಾರ ಮಾಡಿರುವ ಆರೋಪವಿದೆ

ಪ್ರಜ್ವಲ್ ರೇವಣ್ಣ ಅವರ ಮೇಲೆ ಬಲಾತ್ಕಾರ ಮತ್ತು ಲೈಂಗಿಕ ಶೋಷಣೆ ಮಾಡಿರುವ ಆರೋಪವಿದೆ. ಪ್ರಜ್ವಲ್ ರೇವಣ್ಣ ಅವರ ಬಗ್ಗೆ ತಿಳಿದೂ ಬಿಜೆಪಿ ಜೆಡಿಎಸ್ ನೊಂದಿಗೆ ಮೈತ್ರಿ ಮಾಡಿಕೊಂಡಿದೆ ಎಂದರು. ಪ್ರಜ್ವಲ್ ರೇವಣ್ಣ ಅವರ ಪ್ರಕರಣದಲ್ಲಿ ಸಂತ್ರಸ್ತ ಮಹಿಳೆಗೆ ರಕ್ಷಣೆ ನೀಡಲು ಸೂಚಿಸಿರುವುದಾಗಿ ಮುಖ್ಯಮಂತ್ರಿಗಳು ಹೇಳಿದರು. ಕುಮಾರಸ್ವಾಮಿ ಹಾಗೂ ದೇವೇಗೌಡರು ತಮ್ಮ ಮನೆಗೆ ವಕೀಲರನ್ನು ಕರೆಸಿ ಚರ್ಚೆ ಯಾಕೆ ಮಾಡಿದ್ದಾರೆ. ಚುನಾವಣಾ ಪ್ರಚಾರಕ್ಕಾಗಿ ಹೋದಾಗ ನಾನು ಬೇರೆಯಲ್ಲ, ಪ್ರಜ್ವಲ್ ರೇವಣ್ಣ ಬೇರೆಯಲ್ಲ ಎಂದಿದ್ದಾರೆ. ರಾಜಕೀಯ ಹಾಗು ಕೃತ್ಯಗಳನ್ನು ಒಟ್ಟಿಗೆ ಮಾಡುತ್ತಾರೆ ಎಂದರು.

ಪ್ರಜ್ವಲ್ ರೇವಣ್ಣ ಎಲ್ಲೇ ಇದ್ದರೂ ಹಿಡಿದುಕೊಂಡು ಬರುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿಕೆ ನೀಡಿದರು.



> ಹಿಂದೂ ರಾಷ್ಟ್ರ ಮಾಡಕೋಸ್ಕರ ಮಾಡಬಾರದ ಕೆಲಸ ಮಾಡುತ್ತಾರೆ, ಕಾನೂನು ಬಾಹಿರವದಂತಹ ಅನೇಕ ಚಟುವಟಿಕೆಗಳನ್ನು ಬಿಜೆಪಿಯವರು ಮಾಡುತ್ತಾರೆ. ಸಮಾಜ ಸಮಾನತೆ ಕೈಯಲ್ಲಿ ನಂಬಿಕೆ ಇಲ್ಲ. ದೇಶದ ಐಕ್ಯತೆಯಲ್ಲಿ ನಂಬಿಕೆ ಇಲ್ಲ. ಸಮಾನತೆಯಲ್ಲಿ ನಂಬಿಕೆ ಇಲ್ಲ.ಸಂವಿಧಾನದಲ್ಲಿ ನಂಬಿಕೆ ಇಲ್ಲ ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಲ್ಲ. ಹಾಗಾಗಿ ಅವರು ಕಾನೂನು ಬಾಹಿರ ಚಟುವಟಿಕೆಗಳನ್ನು ಮಾಡುತ್ತಾರೆ. -ಸಿದ್ದರಾಮಯ್ಯ, ಸಿಎಂ

## ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿಕೆಗೆ ಸಿಎಂ ತಿರುಗೇಟು

ಅಮಿತ್ ಶಾ ಅವರು ರಾಜಕೀಯ ಹೇಳಿಕೆ ನೀಡಿದ್ದಾರೆ. ಆರೋಪಿಯನ್ನು ತಕ್ಷಣ ಬಂಧಿಸಲಾಗಿದೆ. ಪ್ರಕರಣವನ್ನು ಸಿಐಡಿ ಗೆ ವಹಿಸಿ ವಿಶೇಷ ನ್ಯಾಯಾಲಯವನ್ನು ಸ್ಥಾಪಿಸಲಾಗಿದೆ ಎಂದರು. ಅಮಿತ್ ಶಾ ಮಣಿಪುರದಲ್ಲಿ ಏನು ಕ್ರಮ ಕೈಗೊಂಡಿದ್ದಾರೆ ಎಂದರು. ಬಿಜೆಪಿಗೆ ಸಂವಿಧಾನ, ಪ್ರಜಾಪ್ರಭುತ್ವ, ಮೀಸಲಾತಿ, ಐಕ್ಯತೆ, ಸಮಾನತೆಯಲ್ಲಿ ನಂಬಿಕೆ ಇಲ್ಲ. ಅಮಾಯಕರ ಕಣ್ಣೀರು, ಅವರಿಗೆ ಕಿರುಕುಳ ಕೊಟ್ಟು ಸಮಾಜ ಒಡೆಯುವುದು ಬಿಜೆಪಿಗೆ ರೂಢಿಯಾಗಿದೆ ಎಂದರು.

ಬಿಜೆಪಿಯವರು ತಪ್ಪು ಮಾಡಿದ್ದಾರೆ.ಪ್ರಜ್ವಲ್ ರೇವಣ್ಣ ವಿಡಿಯೋಗಳು ಎಂದು ಗೊತ್ತಿತ್ತು.

ಆದರೂ ಯಾಕೆ ಜೆಡಿಎಸ್ ನೊಂದಿಗೆ ಮೈತ್ರಿ ಮಾಡಿಕೊಂಡರು ಪ್ರಜ್ವಲ್ ರೇವಣ್ಣ ವಿರುದ್ಧ ರೇಪ್ ಕೇಸ್ ದಾಖಲಾಗಿದೆ. ನನ್ನನ್ನು ರೇಪ್ ಮಾಡಿದ್ದಾನೆ ಎಂದು ಮಹಿಳೆಯೇ ಹೇಳಿದ್ದಾಳೆ. ಸಂತ್ರಸ್ತರು ಯಾವತ್ತೂ ಸುಳ್ಳು ಹೇಳಲ್ಲ. ಗೊತ್ತಿದ್ದರೂ ಯಾಕೆ ಬಿಜೆಪಿಯವರು ಜೆಡಿಎಸ್ ನೊಂದಿಗೆ ಮೈತ್ರಿ ಮಾಡಿಕೊಂಡರು ಎಂದು ವಾಗ್ದಾಳಿ ನಡೆಸಿದರು.

ಮದುವೆಯಾಗಿರುವಂತಹ ಮಹಿಳೆ ಬಹಿರಂಗವಾಗಿ ನನ್ನ ಮೇಲೆ ಅತ್ಯಾಚಾರ ಆಗಿದೆ ಎಂದು ಹೇಳಿದರೆ ಅದನ್ನು ಒಪ್ಪಿಕೊಳ್ಳಬೇಕಾಗುತ್ತದೆ.

ಒಂದು ವೇಳೆ ಸುಳ್ಳು ಹೇಳಿದರೆ ಅವರ ಮಾನ ಮರ್ಯಾದೆ ಹೋಗಲ್ವಾ ಆ ಒಂದು ಮಹಿಳೆ ಅತ್ಯಾಚಾರ ಮಾಡಿದಾರೆ ಎಂದು ಹೇಳಿದರು ಕೂಡ ಗೊತ್ತಿದ್ದರೂ ಕೂಡ ಬಿಜೆಪಿಯವರು ಪ್ರಜ್ವಲ್ ಗೆ ಸೀಟು ಕೊಟ್ಟರು. ಯಾಕೆ ಕೊಡಬೇಕು ಎಂದು ಪ್ರಶ್ನಿಸಿದರು. ಮೋದಿ ಅವರು ಮತ್ತು ಅಮಿತ್ ಶಾ ಅವರು ಭ್ರಷ್ಟಾಚಾರದ ಬಗ್ಗೆ ಮಾತನಾಡುತ್ತಾರೆ ಈಗ ಅನೇಕ ಜನ ಐಟಿ ಹಾಗೂ ಇಡಿ ಕೇಸ್ ನಲ್ಲಿ ಇರುವಂತವರನ್ನು ಸೇರಿಸಿಕೊಂಡಿದ್ದಾರೆ. ಇದಕ್ಕೆ ಏನು ಹೇಳುತ್ತೀರಿ ಅವರು ಅಧಿಕಾರ ಉಳಿಸಿಕೊಳ್ಳುವಗೋಸ್ಕರ ಏನು ಮಾಡೋದಕ್ಕೂ ಹೆಸಲ್ಲ ಎಂದು ಮೋದಿ ಶಾ ವಿರುದ್ಧ ವಾಗ್ದಾಳಿ ನಡೆಸಿದರು.

**ಈ ದಿನದ ದರ** ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,173/Gram(24ct) ₹6,575/Gram(22ct) | ಬೆಳ್ಳಿ: ₹82.50/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಹೆಣ ಹೊರುವವರಿಗೆ ಹಿಂದಾದರೇನು ಮುಂದಾದರೇನು

ಇದೊಂದು ಗಾದೆ. ಹೆಣ ಹೊರಬೇಕು. ಹಿಂದಿಬ್ಬರು ಮುಂದಿಬ್ಬರು. ಅಡ್ಡಿಯಾಗದಂತೆ ಇನ್ನೂ ಹೆಚ್ಚಿನವರು ಹೆಗಲಕೊಡಬಹುದು. ಮುಂದಿನವರಿಗೆ ಪ್ರಾಶಸ್ತ್ಯ ಹಿಂದಿನವರಿಗೆ ಅಪ್ರಾಶಸ್ತ್ಯ ಎಂದಿಲ್ಲ. ಸಮತೋಲನದ ಹೊರುವಿಕೆ ಸಾಗುವಿಕೆಯಲ್ಲಿ ಎಲ್ಲರದೂ ಸಮ ಪಾತ್ರ. ಹೊರುವುದು ಸಾಗಿಸುವುದಕ್ಕೆ. ಪೋಜಿಗಾಗಿ ಅಲ್ಲ. ಕೆಲವರಿಗೆ ಇಲ್ಲಿಯೂ ಸಹ ಮುಂದೆ ಹೊತ್ತು ಸೈ ಎನಿಸಿಕೊಳ್ಳುವ, ಫೋಟೋ ತೆಗೆಸಿಕೊಳ್ಳುವ ಮಾಧ್ಯಮದಲ್ಲಿ ತೋರಿಕೊಳ್ಳುವ ಚಪಲ! ಕಾರ್ಯಕ್ರಮಕ್ಕೆ ಆಮಂತ್ರಿಸುವುದು ಎಲ್ಲರೂ ಸೇರಿ ಕಾರ್ಯ ನೆರವೇರಿಸಲೆಂದು. ಆಮಂತ್ರಣ ಪತ್ರಿಕೆ ಒಂದು ಉಪಾಯ. ಅದು ಅನಿವಾರ್ಯವಲ್ಲ. ಮುದ್ರಣ ಇಲ್ಲದಿದ್ದಾಗ ಪತ್ರಿಕೆ ಎಲ್ಲಿತ್ತು? ಹೆಸರು ಮೇಲಿದ್ದರೇನು ಕೆಳಗಿದ್ದರೇನು? ಕೆಳಗೆ ಹೆಸರಿಲ್ಲದಿದ್ದರೆ ಇದು ಮೇಲಾಗುವುದೆಂತು? ಮೇಲೆಯೇ ಇರಬೇಕೆಂದರೆ ಕೆಳಗಿರುವವರಾರು? ಕಾರ್ಯಕ್ರಮದಲ್ಲಿ ಭಾಗವಹಿಸುವುದು ಅದರ ಈಡೇರಿಕೆಗೆ ಹೊರತು ತಮ್ಮ ತಮ್ಮ ಪ್ರತಿಷ್ಠೆ ತೋರಿಸಲು ಅಲ್ಲ.

## ಕರ್ನಾಟಕ ಶಾಸ್ತ್ರೀಯ ಸಂಗೀತ

• ಉದಯವಾಹಿನಿ, ಬೆಂಗಳೂರು



ಶ್ರೀ ರಾಮ ಸೇವಾ ಮಂಡಳಿಯ ವತಿಯಿಂದ 86ನೇ ಶ್ರೀರಾಮನವಮಿ ಸಂಗೀತೋತ್ಸವದ ಅಂಗವಾಗಿ ಮೇ 6, ಸೋಮವಾರ ಸಂಜೆ 6-30ಕ್ಕೆ ವಿ|| ಎಂ.ಬಿ. ಹರಿಹರನ್ ಮತ್ತು ವಿ|| ಎಸ್. ಅಶೋಕ್ (ಬೆಂಗಳೂರು ಸಹೋದರರು) ಇವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗಿದೆ. ವಾದ್ಯ ಸಹಕಾರ : ವಿ|| ಹೆಚ್.ಕೆ. ವೆಂಕಟ್ರಾಮ್ (ಪಿಟೀಲು), ವಿ|| ಹೆಚ್.ಎಸ್. ಸುಧೀಂದ್ರ (ಮೃದಂಗ), ವಿ|| ಬಿ.ಆರ್. ರವಿಕುಮಾರ್ (ಘಟ). ಸ್ಥಳ : ಕೋಟೆ ಪ್ರೌಢಶಾಲಾ ಆವರಣ, ಮಕ್ಕಳಕೂಟದ ಹತ್ತಿರ, ಚಾಮರಾಜಪೇಟೆ, ಬೆಂಗಳೂರು-560018

## ಯಜಮಾನಿಯರೇ ಗಮನಿಸಿ : ಗೃಹಲಕ್ಷ್ಮಿ ಹಣ ಬಂದಿಲ್ಲದವರು ತಪ್ಪದೇ ಈ ಕೆಲಸ ಮಾಡಿ

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯಡಿ ಮನೆಯ ಯಜಮಾನಿಯರಿಗೆ ಪ್ರತಿತಿಂಗಳು 2,000 ರೂ. ನೀಡಲಾಗುತ್ತಿದ್ದು, ಇನ್ನೂ ಹಣ ಬಾರದೇ ಇರುವ ಫಲಾನುಭವಿಗಳು ತಪ್ಪದೇ ಈ ಕೆಲಸ ಮಾಡಿದ್ರೆ ಖಾತೆಗೆ ಒಟ್ಟಿಗೆ ಹಣ ಜಮಾ ಆಗಲಿದೆ. ರಾಜ್ಯ ಸರ್ಕಾರವು ಮೊದಲಿಗೆ ಪೆಂಡಿಂಗ್‌ಇರುವ ಎಲ್ಲಾ ಹಣವನ್ನು ಫಲಾನುಭವಿಗಳಿಗೆ ಬಿಡುಗಡೆ ಮಾಡಿದ ಬಳಿಕ ಎಂಟನೇ ಕಂತಿನ ಹಣವನ್ನ ಬಿಡುಗಡೆ ಮಾಡಲಾಗುವುದು ಎನ್ನಲಾಗಿದೆ. ಇನ್ನೂ ಸಾಕಷ್ಟು ಜನ ಬ್ಯಾಂಕ್ ನಲ್ಲಿ ಖಾತೆ ಹೊಂದಿದ್ದರು ಕೂಡ ಆಧಾರ ಸೀಡಿಂಗ್ ಮಾಡಿಕೊಂಡಿಲ್ಲ. ಹೀಗಾಗಿ ಅವರಿಗೆ ಹಣ ಬರುತ್ತಿಲ್ಲ. ಗೃಹಲಕ್ಷ್ಮಿ ಯೋಜನೆಯಡಿ ನೋಂದಾಯಿಸಿಕೊಂಡರೂ ಸಹಾಯಧನ ಪಾವತಿಯಾಗದ ಫಲಾನುಭವಿಗಳು ಕೂಡಲೇ ಅರ್ಜಿಯೊಂದಿಗೆ ಇ-ಕೆವೈಸಿ ಸಂಬಂಧಿತ ಸಮಸ್ಯೆಗಳನ್ನು ಬ್ಯಾಂಕ್‌ಗಳಲ್ಲಿ ಪರಿಹರಿಸಿಕೊಳ್ಳಬೇಕು. ಬಳಿಕ ನ್ಯಾಯಬೆಲೆ ಅಂಗಡಿಗಳಿಗೆ ಹೋಗಿ, ಇ-ಕೆವೈಸಿ ಅಪ್‌ಡೇಟ್ ಮಾಡಿಸಿ, ದೃಢೀಕರಣ ಪಡೆದು ಅವುಗಳನ್ನು ತಮ್ಮ ಸಮೀಪದ ನ್ಯಾಯಬೆಲೆ ಅಂಗಡಿ ಕೇಂದ್ರಗಳ ಕಾರ್ಯಕರ್ತೆಯರಿಗೆ ಒದಗಿಸಿದರೆ, ಸಹಾಯಧನ ಪಾವತಿಸಲು ಕ್ರಮವಹಿಸಲಾಗುವುದು ಎನ್ನಲಾಗಿದೆ.

## 76 ಮೋಟಾರ್ ವೆಹಿಕಲ್ ಇನ್‌ಸ್ಪೆಕ್ಟರ್ ಹುದ್ದೆಗಳಿಗೆ ಇಂದೇ ಆನ್‌ಲೈನ್ ಅರ್ಜಿ ಸಲ್ಲಿಸಿ

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ಉದ್ಯೋಗ ಹುಡುಕುವವರಿಗೆ ಇಲ್ಲಿದೆ ಗುಡ್‌ನ್ಯೂಸ್. ಕರ್ನಾಟಕ ಲೋಕ ಸೇವಾ ಆಯೋಗ ಖಾಲಿ ಇರುವ ಒಟ್ಟು 76 ಮೋಟಾರ್ ವೆಹಿಕಲ್ ಇನ್ ಪೆಕ್ಟರ್ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನಿಸಿದೆ ಹಿಂದೆ ಅರ್ಜಿ ಸಲ್ಲಿಕೆಗೆ ಮೇ 21 ಕೊನೆಯ ದಿನಾಂಕ ಅಧಿಸೂಚನೆ ಹೊರಡಿಸಲಾಗಿತ್ತು. ಇದೀಗ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಿ ಕರ್ನಾಟಕ ಲೋಕಸೇವಾ ಆಯೋಗ ಪ್ರಕಟಣೆ ಹೊರಡಿಸಿದೆ. ಆಸಕ್ತರು ಮೇ 2ರಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಕೊನೆಯ ದಿನಾಂಕ ಜೂನ್ 1 ಹುದ್ದೆಗಳ ವಿವರ, ವಿದ್ಯಾರ್ಹತೆ ಉಳಿಕೆ ಮೂಲ ವೃಂದದಲ್ಲಿ 70 ಮತ್ತು ಹೈದರಾಬಾದ್ ಕರ್ನಾಟಕ ವೃಂದದಲ್ಲಿ 6 ಹುದ್ದೆಗಳಿವೆ. ಕೆಪಿಎಸ್‌ಸಿಯ ಅಧಿಕೃತ ಅಧಿಸೂಚನೆಯ ಪ್ರಕಾರ, ಅಭ್ಯರ್ಥಿಯು ಅಂಗೀಕೃತ ಮಂಡಳಿ, ವಿಶ್ವವಿದ್ಯಾನಿಲಯದಿಂದ ಎಸ್ಸೆಸ್ಸೆಲ್ಸಿ, ಡಿಪ್ಲೋಮಾ, ಆಟೋ ಮೊಬೈಲ್/ ಮೆಕ್ಯಾನಿಕಲ್ ಎಂಜಿನಿಯರಿಂಗ್‌ನಲ್ಲಿ ಬಿ.ಟೆಕ್ ಪಡೆದುಕೊಂಡಿರಬೇಕು. ಜತೆಗೆ ಲೈಸನ್ಸ್ ಹೊಂದಿರಬೇಕು.

## ಬೆಂಗಳೂರಿನ ಹಲವೆಡೆ ಗುಡುಗು ಸಹಿತ ಮಳೆ: ವಾಹನ ಸವಾರರು ಪರದಾಟ

• ಉದಯವಾಹಿನಿ, ಬೆಂಗಳೂರು

ಬಿರು ಬಿಸಿನಿಂದ ಕಂಗೆಟ್ಟಿದ್ದಂತ ಸಿಲಿಕಾನ್ ಸಿಟಿಯಲ್ಲಿ ಇದೀಗ ವರುಣಾಗಮನವಾಗಿದೆ. ಗುಡುಗು ಸಹಿತ ಮಳೆಯಾಗುತ್ತಿದ್ದು, ವಾಹನ ಸವಾರರು ಪರದಾಡುವಂತೆ ಆಗಿದೆ. ಬೆಂಗಳೂರಿನಲ್ಲಿ ನಿನ್ನೆಯಷ್ಟೇ ಕೆಲ ಪ್ರದೇಶಗಳಲ್ಲಿ ಮಳೆಯಾಗಿತ್ತು. ಇಂದು ಮತ್ತೆ ಮಳೆ ಆರಂಭಗೊಂಡಿದೆ. ಬೆಂಗಳೂರಿನ ಕೇಂದ್ರ ಸ್ಥಾನವಾಗಿರುವಂತ ಮೆಜೆಸ್ಟಿಕ್ ಸುತ್ತಾಮುತ್ತ ಗುಡುಗು ಸಹಿತ ಮಳೆ ಸುರಿಯುತ್ತಿದೆ. ರೇಸ್ ಕೋರ್ಸ್, ಶಿವಾನಂದ ಸರ್ಕಲ್, ಚಾಲುಕ್ಯ ಸರ್ಕಲ್, ಮೈಸೂರು ಬ್ಯಾಂಕ್ ವೃತ್ತ, ಮಾರ್ಕೆಟ್, ಹೊಸಕೇಟೆ, ಕೆ ಆರ್ ಪುರಂ, ವೈಟ್ ಫೀಲ್ಡ್ ಸೇರಿದಂತೆ ವಿವಿಧೆಡೆ ಮಳೆಯಾಗುತ್ತಿದೆ. ದಿಢೀರ್ ಸುರಿಯುತ್ತಿರುವ ಮಳೆಯಿಂದಾಗಿ ರಾಜ್ಯದ ರಾಜಧಾನಿ ಜನತೆಯನ್ನು ತಂಪು ಮಾಡಿದ್ದರೇ, ವಾಹನ ಸವಾರರು ರಸ್ತೆಯಲ್ಲಿ ನೀರು ಹರಿದು ಪರದಾಡುವಂತ ಸ್ಥಿತಿ ನಿರ್ಮಾಣವಾಗಿದೆ. ಕಳೆದ ಕೆಲ ಗಂಟೆಯಿಂದ ಮಳೆಯಾಗುತ್ತಿದ್ದು, ಗುಡುಗು ಸಹಿತ ಧಾರಾಕಾರ ಮಳೆ ಬೆಂಗಳೂರಿನ ವಿವಿಧೆಡೆಯಾಗುತ್ತಿದೆ. ಈ ಮೂಲಕ ಬಿಸಿನಿಂದ ತತ್ತರಿಸಿದ್ದಂತ ಬೆಂಗಳೂರು ಜನತೆಗೆ ವರುಣ ತಂಪೆರೆದಿದ್ದಾನೆ.

## 1 ವಾರದಲ್ಲಿ ವಿಡಿಯೋ ಬಹಿರಂಗ ಮಾಡಿದವರ ವಿಚಾರ ಹೊರಬರಲಿದೆ

• ಉದಯವಾಹಿನಿ, ಬೆಂಗಳೂರು

ಲೈಂಗಿಕ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂಸದ ಪ್ರಜ್ವಲ್ ರೇವಣ್ಣ ಅವರ ವಿಡಿಯೋ ಬಹಿರಂಗ ಮಾಡಿದ ವಿಚಾರ 1 ವಾರದಲ್ಲಿ ಹೊರಬರಲಿದೆ ಎಂದು ಬಿಜೆಪಿ ಮುಖಂಡ ಹಾಗೂ ವಕೀಲ ದೇವರಾಜೇಗೌಡ ತಿಳಿಸಿದರು.ಬೆಂಗಳೂರಿನಲ್ಲಿ ಇಂದು ಎಸ್‌ಐಟಿ ವಿಚಾರಣೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜ್ವಲ್ ರೇವಣ್ಣ ವಿಡಿಯೋ ಬಹಿರಂಗ ಮಾಡಿದ ವ್ಯಕ್ತಿಯ ಹೆಸರು 1 ವಾರದಲ್ಲಿ ಬಹಿರಂಗವಾಗಲಿದೆ. ಒಂದು ವಾರದಲ್ಲಿ ಎಚ್ ಡಿ ಕುಮಾರಸ್ವಾಮಿ ಈ ವಿಚಾರ ತಿಳಿಸಲಿದ್ದಾರೆ ಯಾರು ವಿಡಿಯೋ ಬಿಡುಗಡೆ ಮಾಡಿದ್ದರು ಅನ್ನುವುದು ಹೊರಗಡೆ ಬರುತ್ತದೆ ಎಂದು ಬೆಂಗಳೂರಿನಲ್ಲಿ ಬಿಜೆಪಿ ಮುಖಂಡ ವಕೀಲ ದೇವರಾಜ ಗೌಡ ತಿಳಿಸಿದರು. ನಿನ್ನೆ ಎಸ್‌ಐಟಿ ವಿಚಾರಣೆಗೆ ಕರೆದಿದ್ದರು.ಇಂದು ಕೂಡ ಎಸ್‌ಐಟಿ ವಿಚಾರಣೆ ಬಂದಿದ್ದೆ ವಿಡಿಯೋ ವೈರಲ್ ಮಾಡಿದವರ ಬಗ್ಗೆ ಇದ್ದ ಮಾಹಿತಿಯನ್ನು ನೀಡಿದ್ದೇನೆ. ಯಾರು ಎಂದು ಈಗ ಇಲ್ಲಿ ಹೇಳುವುದಕ್ಕೆ ಸಾಧ್ಯವಿಲ್ಲ.

# ಪ್ರಜ್ವಲ್ ರೇವಣ್ಣ ಪ್ರಕರಣ ಬಿಜೆಪಿ, ಜೆಡಿಎಸ್ ಗೆಲುವಿಗೆ ತೊಡಕಾಗುತ್ತದಾ?

■ ಕಳೆದ ಲೋಕಸಭಾ ಚುನಾವಣೆಯಲ್ಲಿ ಮಾಡಿದ ಸಾಧನೆಯನ್ನು ರಿಪೀಟ್ ಮಾಡುವ ಕನಸನ್ನು ಬಿಜೆಪಿ ಹೊಂದಿದೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಈಗಾಗಲೇ ಮೊದಲ ಹಂತದ ಚುನಾವಣೆಗಳು ಮುಗಿದಿವೆ. ಇನ್ನೇನು ಎರಡನೇ ಹಂತದ ಚುನಾವಣೆಗಳು ಮೇ 7 ರಂದು ನಡೆಯಲಿವೆ. ಇದೇ ದಿನ ದೇಶದಲ್ಲಿ ಮೂರನೇ ಹಂತದ ಚುನಾವಣೆಗಳು ನಡೆಯಲಿವೆ. ಕರ್ನಾಟಕದಲ್ಲಿ ಅತಿ ಹೆಚ್ಚು ಸ್ಥಾನಗಳನ್ನು ಗೆಲ್ಲುವುದು ಬಿಜೆಪಿಗೆ ಅನಿವಾರ್ಯವಾಗಿದೆ.

ಕಳೆದ ಲೋಕಸಭಾ ಚುನಾವಣೆಯಲ್ಲಿ ಮಾಡಿದ ಸಾಧನೆಯನ್ನು ರಿಪೀಟ್ ಮಾಡುವ ಕನಸನ್ನು ಬಿಜೆಪಿ ಹೊಂದಿದೆ. 2019ರಲ್ಲಿ ನಡೆದಿದ್ದ ಚುನಾವಣೆಯಲ್ಲಿ ಬಿಜೆಪಿ 28 ಕ್ಷೇತ್ರಗಳಲ್ಲಿ 25 ಕ್ಷೇತ್ರಗಳನ್ನು ಗೆದ್ದು ಕೊಂಡಿತ್ತು. ಇದೇ ಸಾಧನೆಯನ್ನು ಪುನಃ ಮಾಡುವ ಆಸೆಯೊಂದಿಗೆ ಕಮಲ ಪಡೆ ಈ ಬಾರಿ ಚುನಾವಣೆಗೆ ಸ್ಪರ್ಧಿಸಿದೆ. ಅಂದಹಾಗೆ ಈ ಬಾರಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಮಾಡಿಕೊಂಡು ಚುನಾವಣೆ ಎದುರಿಸುತ್ತಿವೆ.

2019ರ ಲೋಕಸಭಾ ಚುನಾವಣೆಯಲ್ಲಿ ಒಬ್ಬರಿಗೊಬ್ಬರು ಕೆಸರು ಎರೆಚುತ್ತಾ ಸಾಗಿದ ಪಕ್ಷಗಳು ಇಂದು ವೇದಿಕೆಯ ಮೇಲೆ ಕೈ ಕೈ ಹಿಡಿದುಕೊಂಡು ಮತ ಕೇಳುತ್ತಿವೆ. ಇದೆಲ್ಲಾ ರಾಜಕೀಯ ಪಡಸಾಲೆಯಲ್ಲಿ ಕಾಮನ್. ಆದರೆ ಈ ಬಾರಿ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳಿಗೆ ಪ್ರಜ್ವಲ್ ರೇವಣ್ಣ ಪ್ರಕರಣ ನುಂಗಲಾರದ ತುತ್ತಾಗಿದೆ.



☛ ಉದಯವಾಹಿನಿ ಚಿತ್ರ

**ಎರಡನೇ ಹಂತದ ಚುನಾವಣೆ**

**ಮೊದಲ ಹಂತದ ಚುನಾವಣೆಗಳು ಕರ್ನಾಟಕದಲ್ಲಿ ಮುಗಿದಿದ್ದು, ಈ ಭಾಗದಲ್ಲಿ ಒಕ್ಕಲಿಗರ ಪ್ರಾಬಲ್ಯ ಹೆಚ್ಚಾಗಿದೆ. ಹಳೆಯ ಮೈಸೂರು ಭಾಗದ 14 ಕ್ಷೇತ್ರಗಳಲ್ಲಿ ಚುನಾವಣೆಗಳು ಮುಗಿದಿವೆ. ಉಳಿದ 14 ಕ್ಷೇತ್ರಗಳ ಚುನಾವಣೆ ಮೇ 7 ರಂದು ನಡೆಯಲಿದೆ. ಈ ಭಾಗದಲ್ಲಿ ಲಿಂಗಾಯತ ಸಮುದಾಯ ಪ್ರಾಬಲ್ಯ ಹೊಂದಿದೆ. ಕರ್ನಾಟಕದ ಅತಿ ದೊಡ್ಡ ಸಮುದಾಯ ಎಂಬ ಹೆಗ್ಗಳಿಕೆಗೆ ಲಿಂಗಾಯತ ಸಮುದಾಯಕ್ಕಿದೆ.**

**ಉತ್ತರ ಕರ್ನಾಟಕದಲ್ಲಿ ಜೆಡಿಎಸ್‌ನ ಪ್ರಭಾವ ಅಷ್ಟಾಗಿ ಇಲ್ಲದೆ ಇರುವುದು ನಿಜ. ಆದರೆ ಈ ಭಾಗದಲ್ಲಿ ಇನ್ನು ಚುನಾವಣೆಗಳು ನಡೆಯಬೇಕಿದೆ. 14 ಲೋಕಸಭಾ ಕ್ಷೇತ್ರಗಳಿಗೆ ಚುನಾವಣೆ ಇದೇ ಮೇ 7 ರಂದು ನಡೆಯಲಿದೆ. ಪ್ರಜ್ವಲ್ ಪ್ರಕರಣ ಈ ಎರಡೂ ಪಕ್ಷಗಳ ಇಮೇಜ್‌ಗೆ ಧಕ್ಕೆ ತಂದಿದೆ. ಈಗಾಗಲೇ ಜೆಡಿಎಸ್ ಪಕ್ಷದಿಂದ ಪ್ರಜ್ವಲ್ ರೇವಣ್ಣ ಅವರನ್ನು ಅಮಾನತ್ತು ಮಾಡಲಾಗಿದೆ.**

ಈ ಹಗರಣವನ್ನು ಬೆಳಕಿಗೆ ತರುವುದು ವಿಭಿನ್ನ ರಾಜಕೀಯ ಪರಿಣಾಮಗಳನ್ನು ಉಂಟುಮಾಡಬಹುದು. ಇದು ಜೆಡಿಎಸ್ ಮತ್ತು ಬಿಜೆಪಿಗೆ ಪ್ರತ್ಯೇಕವಾಗಿ, ಪರಿಣಾಮ ಬೀರಬಹುದು.

ಈ ಸಂಪೂರ್ಣ ಪ್ರಕರಣದ ತನಿಖೆಗಾಗಿ ಕರ್ನಾಟಕ ಸರ್ಕಾರ ಎಸ್‌ಐಟಿಯನ್ನು ರಚಿಸಿದೆ. ಹಾಸನ ಜಿಲ್ಲೆಯಲ್ಲಿ ಅಶ್ಲೀಲ ವಿಡಿಯೋಗಳು ಹರಿದಾಡುತ್ತಿದ್ದು, ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಪ್ರಕರಣಗಳು ನಡೆದಿರುವುದು ಗಮನಕ್ಕೆ ಬಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಪ್ರಜ್ವಲ್ ರೇವಣ್ಣ ರಾಸ ಲೀಲೆ ಪ್ರಕರಣ ಈಗ ರಾಜಕೀಯ ತಿರುವು ಪಡೆದುಕೊಂಡಿದೆ. ಈ ವಿಚಾರ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಗೆ ತೊಡಕಾಗಬಹುದು ಎನ್ನಲಾಗುತ್ತಿದೆ. ಇದನ್ನೇ ಅಸ್ತ್ರವನ್ನಾಗಿ ಮಾಡಿಕೊಂಡು ಕಾಂಗ್ರೆಸ್ ಬಿಜೆಪಿ ಭದ್ರ ಕೋಟೆಯಲ್ಲಿ ಮತಬೇಟೆ ನಡೆಸಲು ಮುಂದಾಗಿದೆ. ಉತ್ತರ ಕರ್ನಾಟಕ ಭಾಗದಲ್ಲಿ ಕಳೆದ ಬಾರಿ ಕ್ಲೀನ್ ಸ್ವೀಪ್ ಸಾಧನೆ ಮಾಡಿದ್ದ ಬಿಜೆಪಿಗೆ ಪೆನ್ ಡ್ರೈವ್ ಪ್ರಕರಣ ತೊಡಕಾಗುತ್ತಾ ಎಂಬುದಕ್ಕೆ ಜೂನ್ 4 ರಂದು ಉತ್ತರ ಸಿಗಲಿದೆ.

**ಮೇ 1 ರಂದು ನಡೆದ ಚುನಾವಣಾ ಪ್ರಚಾರದಲ್ಲಿ ಕೇಂದ್ರ ಗೃಹ ಖಾತೆ ಸಚಿವ ಅಮಿತ್ ಶಾ, ಈ ಬಗ್ಗೆ ಧ್ವನಿ ಎತ್ತಿದ್ದಾರೆ. ಅಲ್ಲದೆ ಅವರ ಪಕ್ಷ ಇಂತಹ ಕೃತ್ಯ ಎಸಗಿದವರ ಪರ ನಿಲ್ಲುವುದಿಲ್ಲ ಎಂದು ತಿಳಿಸಿದ್ದಾರೆ. ಈ ಪ್ರಕರಣ ಬೆಳಕಿಗೆ ಬಂದ ಮೇಲೆ ಶಾ ಇದೇ ಮೊದಲ ಬಾರಿಗೆ ತುಟಿ ಬಿಚ್ಚಿದ್ದರು. ಅಲ್ಲದೆ ಚುನಾವಣೆಗಳು ಮುನ್ನವೇ ಕಾಂಗ್ರೆಸ್ ಸರ್ಕಾರ ಏಕೆ ಇವರ ವಿರುದ್ಧ ಕ್ರಮವನ್ನು ಕೈಗೊಂಡಿಲ್ಲ ಎಂದು ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದಿದ್ದರು. -ಅಮಿತ್ ಶಾ**

## ಅರ್ಜುನನ ಸಮಾಧಿ ಕುರಿತಂತೆ ಧ್ವನಿ ಎತ್ತಿದ ದಾಸ

• ಉದಯವಾಹಿನಿ, ಬೆಂಗಳೂರು

ವಿಶ್ವವಿಖ್ಯಾತ ನಾಡಹಬ್ಬ ದಸರಾದಲ್ಲಿ 8 ಬಾರಿ ಅಂಬಾರಿ ಹೊತ್ತು ತನ್ನದೇ ಆದ ಛಾಪು ಮೂಡಿಸಿ ಸಾಂಸ್ಕೃತಿಕ ರಾಯಭಾರಿ ಎಂದೇ ಖ್ಯಾತಿ ಪಡೆದಿದ್ದ ಸಾಕಾನೆ ಅರ್ಜುನ ಕಳೆದ ವರ್ಷ ಡಿಸೆಂಬರ್ 04ರಂದು ನಡೆದ ಕಾಡಾನೆ ಸೆರೆ ಕಾರ್ಯಾಚರಣೆ ವೇಳೆ ಗಂಭೀರವಾಗಿ ಗಾಯಗೊಂಡು ಮೃತಪಟ್ಟಿತ್ತು.

ಇದೀಗ ಅರ್ಜುನನ ಸಮಾಧಿ ಕುರಿತಂತೆ ನಟ ದರ್ಶನ್ ಧ್ವನಿ ಎತ್ತಿದ್ದು, ಸಾಮಾಜಿಕ ಜಾಲತಾಣದಲ್ಲಿ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿರುವ ನಟ ದರ್ಶನ್, ದಸರಾ ಸಡಗರದ ವೇಳೆ ಬಹಳಷ್ಟು ಬಾರಿ ಅಂಬಾರಿ ಹೊತ್ತು ತನ್ನ ಗಜಗಾಂಭೀರ್ಯಕ್ಕೆ ಹೆಸರುವಾಸಿಯಾಗಿದ್ದ ಅರ್ಜುನ ಕಳೆದ ವರ್ಷ ನಡೆದ ಕಾಡಾನೆ ಕಾರ್ಯಾಚರಣೆಯಲ್ಲಿ ಸಾವನ್ನಪ್ಪಿರುವುದು ತಿಳಿದೇ ಇದೆ. ಆತನ ಸಮಾಧಿಗೆ ಯಾರು ದಿಕ್ಕು-ದೆಸೆ ಇಲ್ಲದಂತೆ ಭಾಸವಾಗುತ್ತಿದೆ. ಆತನಿಗೆ ಸಲ್ಲಬೇಕಾದ ಗೌರವ ಆದಷ್ಟು ಬೇಗ ದೊರೆಯಲಿ. ಇನ್ನೇನು ಮಳೆಗಾಲ ಶುರುವಾಗುವ ಮುನ್ನ ಇದಕ್ಕೊಂದು ಒಳ್ಳೆ ವ್ಯವಸ್ಥೆಯಾಗಲಿ ಎಂಬ ಕೋರಿಕೆ ನಮ್ಮದು ಎಂದು ಬರೆದುಕೊಂಡಿದ್ದಾರೆ.



☛ ಉದಯವಾಹಿನಿ ಚಿತ್ರ

ಸ್ವತಃ ಪ್ರಾಣಿಪ್ರಿಯರಾಗಿರುವ ನಟ ದರ್ಶನ ತಮ್ಮ ಮನೆ ಹಾಗೂ ಫಾರ್ಮ್‌ಹೌಸ್?ನಲ್ಲಿ ವಿವಿಧ ತಳಿಯ ಪ್ರಾಣಿ ಪಕ್ಷಿಗಳನ್ನು ಸಾಕಿದ್ದಾರೆ. ಮೈಸೂರು ಮೃಗಾಲಯ ಸೇರಿದಂತೆ ಅನೇಕ ಕಡೆ ಪ್ರಾಣಿ ಪಕ್ಷಿಗಳನ್ನು ದತ್ತು ಪಡೆದಿದ್ದಾರೆ.

**2023ರ ವರ್ಷಾಂತ್ಯದಲ್ಲಿ ತೆರೆಕಂಡ ಕಾಟೇರ ಚಿತ್ರ ಶುರುವಾಗುವ ಮುನ್ನ 'ನಾಡ ದೇವಿ ಚಾಮುಂಡಿಯ ಅಂಬಾರಿಯನ್ನು ಹೊತ್ತು ದಸರೆಯ ವೈಭವವನ್ನು ಜಗತ್ತಿನಾದ್ಯಂತ ಕಣ್ತುಂಬಿಸಿ ಕಣ್ಮರೆಯಾದ ದೈತ್ಯ ಮತ್ತು ದೈವ ಜೀವ ಅರ್ಜುನನಿಗೆ ನಮ್ಮ ಕಾಟೇರ ಚಿತ್ರ ಅರ್ಪಣೆ' ಎಂದು ಬರೆದುಕೊಳ್ಳುವ ಮೂಲಕ ತಮ್ಮ ಪ್ರಾಣಿಪ್ರೀತಿಯನ್ನು ತೋರ್ಪಡಿಸಿದ್ದರು.**

## ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯವೆಸಗಿದ ಪ್ರಕರಣ

• ಉದಯವಾಹಿನಿ, ಬೆಂಗಳೂರು



☛ ಉದಯವಾಹಿನಿ ಚಿತ್ರ


**ಅರ್ಜಿ ವಾಪಸ್ ಪಡೆದ ಎಚ್ ಡಿ ರೇವಣ್ಣ**

ಮಹಿಳೆಯ ಮೇಲೆ ಲೈಂಗಿಕ ದೌರ್ಜನ್ಯಸಗಿದ ಕೇಸ್ ಸಂಬಂಧಿಸಿದಂತೆ ಶಾಸಕ ಊಆ ರೇವಣ್ಣ ನಿನ್ನೆ ನಿರೀಕ್ಷಣಾ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಅರ್ಜಿ ಕುರಿತಂತೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಇಂದು ವಿಚಾರಣೆ ನಡೆಯಿತು. ನಂತರ ಎಸ್‌ಐಟಿ ಹೇಳಿಕೆ ಹಿನ್ನೆಲೆಯಲ್ಲಿ ಇದೀಗ ರೇವಣ್ಣ ನಿರೀಕ್ಷಣಾ ಜಾಮೀನು ಅರ್ಜಿಯನ್ನು ವಾಪಸ್ ಪಡೆದುಕೊಂಡಿದ್ದಾರೆ ಎಂದು ತಿಳಿದುಬಂದಿದೆ. ಅರ್ಜಿ ಕುರಿತಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ವಿಚಾರಣೆ ನಡೆಯಿತು.ಎಸ್‌ಐಡಿ ಪರ ಎಸ್‌ಪಿಬಿ ಬ್ಯಾತ ಎನ್ ಜಗದೀಶ್ ಅವರು ವಾದ ಮಂಡಿಸಿದ್ದು, ಎಚ್ ಡಿ ರೇವಣ್ಣ ವಿರುದ್ಧ ಅತ್ಯಾಚಾರದ ಆರೋಪ ಸೇರಿಸಿಲ್ಲ ತಿಳಿಸಿದರು. ಅತ್ಯಾಚಾರದ ಆರೋಪ ಇಲ್ಲದಿರುವುದರಿಂದ ನಿರೀಕ್ಷಣ ಜಾಮೀನು ಅಗತ್ಯವಿಲ್ಲ ಆದರೆ ಜಾಮೀನು ನೀಡಬಹುದಾದ ಆರೋಪಗಳು ಮಾತ್ರವಿದೆ ಎಂದರು.

ಹೀಗಾಗಿ ನಿರೀಕ್ಷಣಾ ಜಾಮೀನು ಅರ್ಜಿ ಊರ್ಜಿತವಲ್ಲ.ಈ ದಿನ ದವರೆಗೆ ಜಾಮೀನು ರಹಿತ ಪ್ರಕರಣ ದಾಖಲಿಸಿಲ್ಲ. ಹೈಕೋರ್ಟಿಗೆ ಎಸ್ಪಿಪಿ ನೀಡಿದ ಮಾಹಿತಿ ದಾಖಲಿಸಿಕೊಂಡ ಕೋರ್ಟ್. ಹಾಗಾಗಿ ಎಸ್‌ಐಟಿ ಹೇಳಿಕೆ ಹಿನ್ನೆಲೆಯಲ್ಲಿ ಇದೀಗ ಎಚ್ ಡಿ ರೇವಣ್ಣ ಅರ್ಜಿ ವಾಪಸ್ ಪಡೆದುಕೊಂಡಿದ್ದಾರೆ.

## ಲೈಂಗಿಕ ದೌರ್ಜನ್ಯ ಕೇಸ್ : ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ 2ನೇ ಎಫ್‌ಐಆರ್ ದಾಖಲು

• ಉದಯವಾಹಿನಿ, ಬೆಂಗಳೂರು



ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ದೂರು ಸಲ್ಲಿಕೆಯಾಗಿದ್ದು, ಇದೀಗ ಪ್ರಜ್ವಲ್ ರೇವಣ್ಣ ವಿರುದ್ಧ ಮತ್ತೊಂದು ಎಫ್‌ಐಆರ್ ದಾಖಲಾಗಿದೆ. ಸಂತ್ರಸ್ತ ಮಹಿಳೆಯ ಪತಿ ಸಿಐಡಿ ಅಧಿಕಾರಿಗಳಿಗೆ ದೂರು ಸಲ್ಲಿಸಿದ್ದಾರೆ.

ನಿನ್ನೆ ಹಾಸನ ಮೂಲದ ಸಿಐಡಿಗೆ ನೊಂದ ಮಹಿಳೆಯ ಪತಿಯಿಂದ ಪ್ರಜ್ವಲ್ ರೇವಣ್ಣ ವಿರುದ್ಧ ದೂರು ಸಲ್ಲಿಸಿದ್ದಾರೆ. ದೂರು ಆಧರಿಸಿ ಇದೀಗ ಸಿಐಡಿ ಅಧಿಕಾರಿಗಳು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ. ಎಫ್‌ಐಆರ್‌ನಲ್ಲಿ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಎ 1 ಆರೋಪಿ ಎಂದು ಹೇಳಲಾಗುತ್ತಿದೆ.

ಈ ವೇಳೆ ಸಂತ್ರಸ್ತ ಮಹಿಳೆ ದೂರಿನಲ್ಲಿ ಉಲ್ಲೇಖಿಸಿದ್ದು, ಮಗಳ ಓದಿನ ಬಗ್ಗೆ ಸಂತ್ರಸ್ತ ಮಹಿಳೆ ಸಹಾಯ ಕೇಳಿದ್ದಳು. ಹಾಸನದ ಸಂಸದರ ಮನೆಗೆ ಬರುವಂತೆ ತಿಳಿಸಿದರು.

ಬೇರೆಯವರನ್ನ ಕಳಿಸಿ ನಮ್ಮನ್ನು ಮಾತ್ರ ಇರುವಂತೆ ಹೇಳಿದ್ದರು. ನಂತರ ರೂಮಿಗೆ ಕರೆದೋಯ್ದು ಅತ್ಯಾಚಾರಕ್ಕೆ ಯತ್ನಿಸಿದರು. ನಿನ್ನ ಪತಿಗೆ ಕಡಿಮೆ ಮಾತಾಡಲು ಹೇಳು ಇಲ್ಲ ಅಂದರೆ ಸರಿ ಇರಲ್ಲ. ನನ್ನ ಬಳಿ ಗನ್ ಇದೆ ನಾವು ಹೇಳಿದಂತೆ ಕೇಳದಿದ್ದರೆ ಪತಿಯನ್ನು ಮುಗಿಸುವೆ ಎಂದು ನನಗೆ ಬೆದರಿಕೆ ಹಾಕಿದ್ದರು.

ಅದಕ್ಕೆ ನಾನು ಹೆದರಿಕೊಂಡು ಸುಮ್ಮನೆ ಕುಳಿತುಕೊಂಡೆ. ನಂತರ ನನ್ನ ಮೇಲೆ ಪ್ರಜ್ವಲ್ ಅತ್ಯಾಚಾರ ಎಸಗಿದ್ದಾರೆ. ಅತ್ಯಾಚಾರ ಎಸಗಿದ ದೃಶ್ಯವನ್ನು ಮೊಬೈಲ್ ನಲ್ಲಿ ಸೆರೆಹಿಡಿದರು.ವಿಡಿಯೋದಲ್ಲಿ ನನ್ನ ಮುಖ ಇಲ್ಲ ಈ ವಿಚಾರ ಹೇಳಿದರೆ ವಿಡಿಯೋ ವೈರಲ್ ಮಾಡುವ ಬೆದರಿಕೆ ಕೂಡ ಹಾಕಿದ್ದರು ಎಂದು ಮಹಿಳೆ ದೂರು ಸಲ್ಲಿಸಿದ್ದಾಳೆ ಇದೀಗ ಸಂತ್ರಸ್ತ ಮಹಿಳೆ ಹೇಳಿಕೆಯನ್ನು ಉಲ್ಲೇಖಿಸಿದ್ದಾರೆ.

## ದೇಶದ ಸರ್ವತೋಮುಖ ಅಭಿವೃದ್ಧಿಗೆ ಮೋದಿಯವರಿಗೆ ಮತ ಕೊಡಿ

• ಉದಯವಾಹಿನಿ, ಬೆಂಗಳೂರು

ದೇಶವನ್ನು 10 ವರ್ಷಗಳ ಕಾಲ ಸರ್ವತೋಮುಖ ಅಭಿವೃದ್ಧಿಯತ್ತ ಒಯ್ದ ನರೇಂದ್ರ ಮೋದಿಯವರು ಸಮರ್ಥ ನಾಯಕ. ದೇಶ, ಬಡವರಿಗೆ ಒಳ್ಳೆಯದು ಮಾಡಿದ್ದಾರೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ತಿಳಿಸಿದರು.ಬೀದರ್‌ನಲ್ಲಿ ರೆಡ್ಡಿ ಸಮುದಾಯದ ಸಾರ್ವಜನಿಕ ಸಭೆಯಲ್ಲಿ ಇಂದು ಮಾತನಾಡಿದ ಅವರು, ಇಲ್ಲಿನ ಕಾಂಗ್ರೆಸ್ ಅಭ್ಯರ್ಥಿಗೆ ರಾಹುಲ್ ಗಾಂಧಿ ಯವರಂತೆ ಸಮಸ್ಯೆಗಳ ಅರಿವಿಲ್ಲ ಎಂದು ಟೀಕಿಸಿದರು.

ಭಗವಂತ ಖೂಬಾ ಅವರು ಜನರ ಸಮಸ್ಯೆಗಳ ಪರಿಹಾರಕ್ಕೆ ಶ್ರಮಿಸಿದ್ದಾರೆ. ಜನಮೆಚ್ಚುಗೆ ಗಳಿಸಿದ್ದಾರೆ ಎಂದು ವಿಶ್ಲೇಷಿಸಿದರು.

ರೈತ ಯೋಜನೆಗಳು, ಅಭಿವೃದ್ಧಿಗೆ ಸಂಸತ್ತಿನಲ್ಲಿ ಮನವಿ ಮಾಡಲು ಬಿಜೆಪಿಯ ಸಮರ್ಥ ಅಭ್ಯರ್ಥಿ ಆಯ್ಕೆ ಮಾಡಿ ಎಂದು ವಿನಂತಿಸಿದರು. ಫಲಿತಾಂಶ ಬಂದ ಬಳಿಕ ರಾಹುಲ್ ಗಾಂಧಿಯವರು ವಿದೇಶಕ್ಕೆ ಓಡಿ ಹೋಗಲಿದ್ದಾರೆ. ಯಾಕೆಂದರೆ ಫಲಿತಾಂಶ ಈಗಾಗಲೇ ಗೊತ್ತಾಗಿದೆ ಎಂದು ತಿಳಿಸಿದರು.



☛ ಉದಯವಾಹಿನಿ ಚಿತ್ರ

ದೇಶದ ಭವಿಷ್ಯ, ಸುರಕ್ಷತೆ, ಅಭಿವೃದ್ಧಿಗೆ ಮೋದಿಜೀ, ಬಿಜೆಪಿ ಆಯ್ಕೆ ಅನಿವಾರ್ಯ.

ಕಾಂಗ್ರೆಸ್ ಪಕ್ಷ ಈ ದೇಶಕ್ಕೆ ಒಳ್ಳೆಯದು ಮಾಡಿಲ್ಲ. 50 ವರ್ಷಕ್ಕೂ ಹೆಚ್ಚು ಕಾಲ ಆಳ್ವಿಕೆ ನಡೆಸಿದರೂ ದೇಶಕ್ಕೆ ಅಭಿವೃದ್ಧಿ ತಂದಿಲ್ಲ ಎಂದು ಆಕ್ಷೇಪಿಸಿದರು. ಮೋದಿಜೀ ಅವರ ನೇತೃತ್ವದಲ್ಲಿ ದೇಶದ ಸರ್ವತೋಮುಖ ಅಭಿವೃದ್ಧಿ ಆಗಿದೆ. ಖೂಬಾ ಅವರ ಮೂಲಕ ಮೋದಿಯವರಿಗೆ ನಿಮ್ಮ ಮತ ಕೊಡಿ ಎಂದು ವಿನಂತಿಸಿದರು.


**ಮೋದಿಯವರು ಜಾತಿ, ಮತ ಭೇದವಿಲ್ಲದೆ ಅಭಿವೃದ್ಧಿಯತ್ತ ದೇಶವನ್ನು ಕೊಂಡೊಯ್ದಿದ್ದಾರೆ. ಆದರೂ ಅವರ ಕುರಿತು ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಟೀಕಿಸಿದರು. ಜಮ್ಮು- ಕಾಶ್ಮೀರದಲ್ಲಿ 370ನೇ ವಿಧಿ ರದ್ದು ಮಾಡಿ ಪ್ರಶಾಂತ ಪರಿಸ್ಥಿತಿ ನಿರ್ಮಿಸಿದ್ದನ್ನು ಪ್ರಸ್ತಾಪಿಸಿದರು.**

ಶಾಸಕ ಗಾಲಿ ಜನಾರ್ದನ ರೆಡ್ಡಿ ಅವರು ಮಾತನಾಡಿ, ಮೋದಿ ಮೋದಿ ಎಂದು ಘೋಷಣೆ ಕೂಗಿದವರಿಗೆ ಕಪಾಳಕ್ಕೆ ಹೊಡೆಯಿರಿ ಎಂದು ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ತಂಗಡಗಿ ಹೇಳಿದ್ದಾರೆ. ಅದು ಖಂಡನೀಯ ಎಂದರು.

ಇದು ಭಾರತದ ಸಂಸ್ಕಾರ, ಸಂಸ್ಕೃತಿಯಲ್ಲ ಎಂದು ನುಡಿದರು. ಮೋದಿ ಮೋದಿ ಎಂದು ಸ್ಮರಣೆ ಮಾಡಿ ಖೂಬಾರಿಗೆ ಮತ ಕೊಡಿ ಎಂದು ವಿನಂತಿಸಿದರು.

## ಅತ್ಯಾಚಾರ ಎಸಗಿದ ಪ್ರಜ್ವಲ್ ರೇವಣ್ಣ ಪ್ರಧಾನಿ ಮೋದಿ ಬೆಂಬಲಿಸಿದ್ದಾರೆ

• ಉದಯವಾಹಿನಿ, ಬೆಂಗಳೂರು



400 ಮಹಿಳೆಯರ ಮೇಲೆ ಅತ್ಯಾಚಾರ ಎಸಗಿದ ರೇವಣ್ಣ ಅವರನ್ನು ಬೆಂಬಲಿಸಿದ ಪ್ರಧಾನಿ ನರೇಂದ್ರ ಮೋದಿ ಅವರು ಮಹಿಳೆಯರ ಕ್ಷಮೆಯಾಚಿಸಬೇಕು ಎಂದು ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಆಗ್ರಹಿಸಿದ್ದಾರೆ.

400 ಮಹಿಳೆಯರ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿದ ರೇವಣ್ಣ ಪ್ರಕರಣ ಇಲ್ಲಿ ದೊಡ್ಡ ವಿಷಯವಾಗಿದೆ ಮತ್ತು ಅವರನ್ನು ಪ್ರಧಾನಿ ಮೋದಿ ಬೆಂಬಲಿಸಿದ್ದಾರೆ ಅಂಥ ಹೇಳಿದರು. ಮೊದಲು ಪ್ರಧಾನಿ ಮೋದಿ ಅವರು ಮಹಿಳೆಯರ ಕ್ಷಮೆಯಾಚಿಸಬೇಕು' ಎಂದು ಶಿವಮೊಗ್ಗದಲ್ಲಿ ಸುದ್ದಿ ಸಂಸ್ಥೆಯೊಂದರ ವರದಿಗಾರರೊಂದಿಗೆ ಮಾತನಾಡಿದ ಅವರು, 'ಮೊದಲು ಪ್ರಧಾನಿ ಮೋದಿ ಅವರು ಮಹಿಳೆಯರ ಕ್ಷಮೆಯಾಚಿಸಬೇಕು' ಎಂದು ಒತ್ತಾಯಿಸಿದರು. ಪ್ರಧಾನಿ ಭಾರತದ ತಾಯಂದಿರು ಮತ್ತು ಸಹೋದರಿಯರ ಕ್ಷಮೆಯಾಚಿಸಬೇಕು. ಪ್ರಜ್ವಲ್ ರೇವಣ್ಣ 400 ಮಹಿಳೆಯರ ಮೇಲೆ ಅತ್ಯಾಚಾರವೆಸಗಿ ವಿಡಿಯೋ ಮಾಡಿದ್ದಾರೆ. ಇದು ಲೈಂಗಿಕ ಹಗರಣವಲ್ಲ, ಸಾಮೂಹಿಕ ಅತ್ಯಾಚಾರ ಎಂದು ಮಾಜಿ ಕಾಂಗ್ರೆಸ್ ಅಧ್ಯಕ್ಷರು ಆರೋಪಿಸಿದರು.

**ಕರ್ನಾಟಕದ ಮುಂಭಾಗದ ವೇದಿಕೆಯಲ್ಲಿ ಸಾಮೂಹಿಕ ಅತ್ಯಾಚಾರಿಯನ್ನು ಪ್ರಧಾನಿ ಬೆಂಬಲಿಸಿದರು. ನೀವು ಈ ಅತ್ಯಾಚಾರಿಗೆ ಮತ ಹಾಕಿದರೆ ಅದು ನನಗೆ ಸಹಾಯ ಮಾಡುತ್ತದೆ ಎಂದು ಅವರು (ಮೋದಿ) ಕರ್ನಾಟಕಕ್ಕೆ ಹೇಳಿದರು ಎಂದು ರಾಹುಲ್ ಗಾಂಧಿ ಆರೋಪಿಸಿದರು, ಪ್ರಧಾನಿ ನಿಮ್ಮ ಮತವನ್ನು ಕೇಳಿದಾಗ, ಪ್ರಜ್ವಲ್ ಏನು ಮಾಡಿದ್ದಾರೆಂದು ಕರ್ನಾಟಕದ ಪ್ರತಿಯೊಬ್ಬ ಮಹಿಳೆಗೆ ತಿಳಿದಿರಬೇಕು ಅಂತ ಹೇಳಿದರು.**

# 149 ದಿನಗಳ ಬಳಿಕ ರಾಜಧಾನಿಯಲ್ಲಿ ಮೊದಲ ಮಳೆ ಪುಳಕ

■ ನಗರದ ಎಲ್ಲೆಡೆಯೂ ಮಳೆಯಾಗದಿದ್ದರೂ, ಹೆಚ್ಚಿನ ಬಡಾವಣೆಗಳಲ್ಲಿ ಸಾಧಾರಣ ಪ್ರಮಾಣದ ಮಳೆಯಾಗಿದೆ

• ಉದಯವಾಹಿನಿ, ಬೆಂಗಳೂರು

ಐದೂವರೆ ತಿಂಗಳಿನಿಂದ ಒಂದು ಹನಿಯೂ ಮಳೆ ಕಾಣದಿದ್ದ ಬೆಂಗಳೂರು ನಗರದಲ್ಲಿ ಗುರುವಾರ ಈ ವರ್ಷದ ಮೊದಲ ಮಳೆ ಜನರಲ್ಲಿ ಹರುಷ ತಂದಿತು. ರಣಬಿಸಿಲಿನಿಂದ ಕೆಂಗೆಟ್ಟಿದ್ದ ರಾಜಧಾನಿಗರು ಬಿಸಿಲಿನ ಧಗೆಗೆ ಬೆದರಿ ಬೆವರು ಹರಿಸುತ್ತಿರುವ ಸಮಯದಲ್ಲೇ ಸಂಜೆಯ ವರ್ಷಾಧಾರೆ ನಗರದ ಬಹುತೇಕ ಕಡೆಗಳಲ್ಲಿ ಆಹ್ಲಾದಕರ ವಾತಾವರಣ ಮೂಡಿಸಿತು.

**ಗಾಳಿ ಬೀಸುವಿಕೆ ಹೆಚ್ಚಿದ್ದ ಕಾರಣ ಮಳೆ ಬಿದ್ದರೂ, ನೀರು ಹರಿದುಹೋಗುವಷ್ಟು ಪ್ರಮಾಣದಲ್ಲಿ ಇರಲಿಲ್ಲ ಎಂದು ಯಲಹಂಕದಲ್ಲಿರುವ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ (ಕೆಎಸ್‌ಎನ್‌ಡಿಎಂ) ಪ್ರತಿನಿಧಿಗಳು ತಿಳಿಸಿದರು.**

ನಗರದ ಎಲ್ಲೆಡೆಯೂ ಮಳೆಯಾಗದಿದ್ದರೂ, ಹೆಚ್ಚಿನ ಬಡಾವಣೆಗಳಲ್ಲಿ ಸಾಧಾರಣ ಪ್ರಮಾಣದ ಮಳೆಯಾಗಿದೆ. ಸಂಜೆ 6.45ರ ಸುಮಾರಿಗೆ ನಗರದ ಕೇಂದ್ರ, ದಕ್ಷಿಣ ಹಾಗೂ ಪೂರ್ವ ಭಾಗದಲ್ಲಿ ಮಳೆ ಸುರಿದಿದೆ. ಅರ್ಧಗಂಟೆ ಅಂತರದಲ್ಲಿ 2-3 ಬಾರಿ ವರ್ಷಾಧಾರೆಯಿಂದಾಗಿ ತಂಪನೆಯ ವಾತಾವರಣ ಕಂಡಿತು.

ಇದರಿಂದ ರಾತ್ರಿಯ ಉಷ್ಣಾಂಶದಲ್ಲಿ ಹೊಂದಿಷ್ಟು ಇಳಿಕೆಯಾಗಿ ಧಗೆ ಕಡಿಮೆಯಾದ ಅನುಭವ ಉಂಟಾಯಿತು. ಮಳೆಯ ಜತೆಗೆ ಗುಡುಗು-ಮಿಂಚಿನ ಆರ್ಭಟವೂ ಇತ್ತು. ಹಲವೆಡೆ ಗಾಳಿಯ ವೇಗ ಹೆಚ್ಚಿದ್ದರಿಂದ ವರ್ಷಾಧಾರೆ ಕಡಿಮೆಯಾಯಿತು.




☛ ಉದಯವಾಹಿನಿ ಚಿತ್ರ

**ಮಳೆಯಿಂದಾಗಿ ಪಾಲಿಕೆ ವ್ಯಾಪ್ತಿಯಲ್ಲಿ 10 ಕಡೆಗಳಲ್ಲಿ ಮರ, ಕೊಂಬೆಗಳು ಧರೆಗುರುಳಿವೆ. ಶ್ರೀನಗರದಲ್ಲಿ ತೆಂಗಿನ ಮರವೊಂದು ಮನೆ ಮೇಲೆ ಬಿದ್ದಿದೆ. ಇದರ ಹೊರತಾಗಿ ಪದ್ಮನಾಭನಗರ, ಬನಶಂಕರಿ, ವಿಜಯನಗರ, ಶಂಕರಪುರ ಬಳಿ ಮರದ ಕೊಂಬೆಗಳು ನೆಲಕ್ಕುರುಳಿವೆ. ಸಣ್ಣ ಕೊಂಬೆಗಳು ಕೂಡ ಕೆಲ ಮನೆಗಳ ಮೇಲೆ ಬಿದ್ದಿವೆಯಾದರೂ ಯಾವುದೇ ಹಾನಿ ಸಂಭವಿಸಿಲ್ಲ ಎಂದು ಬಿಬಿಎಂಪಿ ಸಹಾಯವಾಣಿ ಸಿಬ್ಬಂದಿ ತಿಳಿಸಿದ್ದಾರೆ.**

**ನಗರದಲ್ಲಿ ಈ ವಾರಾಂತ್ಯದವರೆಗೂ ಗುಡುಗು-ಮಿಂಚು ಸಮೇತ ಸಾಧಾರಣ ಪ್ರಮಾಣದ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮಹಾನಗರದೆಲ್ಲೆಡೆಯೂ ವರ್ಷಾಧಾರೆ ಆಗದಿದ್ದರೂ, ಅಲ್ಲಲ್ಲಿ ಮಳೆಯಾಗಬಹುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.**

| ಎಲ್ಲೆಲ್ಲಿ ಎಷ್ಟು ಮಳೆ (ಮಿ.ಮೀ.ಗಳಲ್ಲಿ) | |
|---|---|
| ವಿದ್ಯಾಪೀಠ | 20 |
| ಮಾರುತಿಮಂದಿರ | 12 |
| ಹಂಪಿನಗರ | 11 |
| ಬಿದರಹಳ್ಳಿ | 15 |
| ಆವಲಹಳ್ಳಿ | 12 |
| ರಾಜಾಜಿನಗರ | 7 |
| ನಾಯಂಡಹಳ್ಳಿ | 7 |
| ಎಚ್‌ಎಸ್‌ಆರ್ ಲೇಔಟ್ | 5 |



### ನ.21ರಂದು ಕಡೆಯ ಮಳೆ ಆಗಿತ್ತು

**ನಗರದಲ್ಲಿ ಕಳೆದ ವರ್ಷ ನ.21ರಂದು ಬಿದ್ದ ಮಳೆಯೇ ಕೊನೆಯದು. ಆ ಬಳಿಕ ಐದೂವರೆ ತಿಂಗಳು (149 ದಿನ) ಮಳೆಯೇ ಆಗಿರಲಿಲ್ಲ. ಕಳೆದ ವಾರಾಂತ್ಯದ ಕೆಂಗೇರಿ ಬಳಿ ತುಂತುರು ಮಳೆಯಾಗಿದ್ದರೂ, ಮಳೆ ಮಾಪನದಲ್ಲಿ ದಾಖಲಾಗಿರಲಿಲ್ಲ. ಹೀಗಾಗಿ ಗುರುವಾರ ಬಿದ್ದ ಮಳೆಯೇ ಈ ವರ್ಷದ ಮೊದಲ ವರ್ಷಾಧಾರೆಯಾಗಿದೆ.**

ಎಚ್‌ಎಸ್‌ಆರ್ ಲೇಔಟ್ ಸಹಿತ ಕೆಲ ಬಡಾವಣೆಗಳಲ್ಲಿ ಮರಗಳ ಟೊಂಗೆಗಳು ಧರೆಗುರುಳಿದವು. ವಿಜಯನಗರದ ಟಿಟಿಎಂಸಿ ಬಳಿ ವಿದ್ಯುತ್ ಕಂಬವೊಂದು ಸ್ಕೂಟರ್ ಮೇಲೆ ಬಿದ್ದ ಘಟನೆ ನಡೆದಿದೆ. ಮೈಸೂರು ರಸ್ತೆಯ ಬ್ಯಾಟರಾಯನಪುರ ಬಳಿ ಪೆಟ್ಟಿ ಅಂಗಡಿಯ ಮೇಲಿದ್ದ ಶೀಟ್ ಹಾರಿ ವಾಹನಗಳ ಮೇಲೆ ಬಿದ್ದಿತಾದರೂ ಯಾವುದೇ ಅವಘಡ ಸಂಭವಿಸಲಿಲ್ಲ. ಇದರ ಹೊರತಾಗಿಯೂ ಕೆ.ಆರ್.ಮಾರುಕಟ್ಟೆ, ಚಾಮರಾಜಪೇಟೆ, ಸಂಪಂಗಿರಾಮನಗರ, ವಿದ್ಯಾಪೀಠ, ಮಾರುತಿಮಂದಿರ, ರಾಜಾಜಿನಗರ, ಹಂಪಿನಗರ, ಆರ್.ಆರ್.ನಗರ, ಮಾರತ್ ಹಳ್ಳಿ, ಎಚ್‌ಎಎಲ್ ವಿಮಾನನಿಲ್ದಾಣ, ಹೂಡಿ, ಹೆಬ್ಬಾಳ, ಯಲಹಂಕದಲ್ಲಿ ಅಲ್ಪ ಪ್ರಮಾಣದ ಮಳೆಯಾಗಿದೆ.

# 11 ಗ್ರಾಮಗಳಲ್ಲಿ ನೀರು ಕುಡಿಯಲು ಯೋಗ್ಯವಲ್ಲ: ಜಿಲ್ಲಾಧಿಕಾರಿ

## ■ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಹೇಳಿಕೆ, ಕಚೇರಿ ಸಭಾಂಗಣದಲ್ಲಿ ನಡೆದ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

• ಉದಯವಾಹಿನಿ, ಚಿಕ್ಕಬಳ್ಳಾಪುರ



ಉದಯವಾಹಿನಿ ಚಿತ್ರ

**ಟ್ಯಾಂಕ್ ಸ್ವಚ್ಛಗೊಳಿಸಲು ಅಗತ್ಯ ಕ್ರಮ**

ಜಿಲ್ಲೆಯಾದ್ಯಂತ ಕುಡಿಯುವ ನೀರಿನ ಪರೀಕ್ಷೆಯನ್ನು ನಿರಂತರ ಮಾಡಲಾಗುತ್ತಿದೆ. ಜಿಲ್ಲೆಯ 11 ಗ್ರಾಮಗಳ ಟ್ಯಾಂಕ್ ನೀರು ಕುಡಿಯಲು ಯೋಗ್ಯವಲ್ಲ ಎಂದು ಪರೀಕ್ಷೆಯಿಂದ ಸಾಬೀತು ಆಗಿದೆ. ಈ ಹಿನ್ನೆಲೆಯಲ್ಲಿ ಟ್ಯಾಂಕ್ ಸ್ವಚ್ಛಗೊಳಿಸಲು ಅಗತ್ಯ ಕ್ರಮಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಹೇಳಿದರು.ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ಮುಂದಿನ ದಿನಗಳಲ್ಲಿ ನಿಯಮಿತವಾಗಿ ನೀರು ಪರೀಕ್ಷೆ ಮಾಡುವ ಪ್ರಕ್ರಿಯೆಯನ್ನು ಮತ್ತಷ್ಟು ಚುರುಕುಗೊಳ್ಳಿಸಬೇಕು. ನೀರಿನ ಟ್ಯಾಂಕ್‌ಗಳು, ನೀರಿನ ಸಂಗ್ರಹ ತಾಣ, ಸಂಪುಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ಸೂಚಿಸಿದರು.

ಕಾಲರಾ ರೋಗವು ಅಶುದ್ಧ ನೀರಿನ ಸೇವನೆಯಿಂದ ಕಾಣಿಸಿಕೊಳ್ಳಲಿದೆ. ಡೆಂಗಿ, ಇತರ ಕೀಟ ಜನ್ಯ ರೋಗಗಳು ಸೊಳ್ಳೆಯಿಂದ ಹರಡುವುದರಿಂದ ಜನರು ಸ್ವಚ್ಛತೆ ಆದ್ಯತೆ ನೀಡಿ ಸೊಳ್ಳೆಗಳ ಉತ್ಪತ್ತಿ ತಮ್ಮ ಮನೆಗಳ ಸುತ್ತಮುತ್ತ ತಡೆಗಟ್ಟಬೇಕು. ಚರಂಡಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ನೀರು ಪೂರೈಕೆ ಪೈಪ್ ಲೈನ್ ಗಳು ಒಡೆದುಹೋಗದಂತೆ ನೀಡಿಕೊಳ್ಳಬೇಕು. ದುರಸ್ಥಿ ಕಾರ್ಯಗಳನ್ನು ತುರ್ತಾಗಿ ಕೈಗೊಳ್ಳಬೇಕು. ಈ ಕುರಿತು ಸ್ಥಳೀಯ ಮಟ್ಟದ ಅಧಿಕಾರಿಗಳು ನಿಗಾವಹಿಸಬೇಕು ಎಂದು ನಿರ್ದೇಶಿಸಿದರು.

ಜಿಲ್ಲೆಯಲ್ಲಿರುವ 44 ನೀರಿನ ಟ್ಯಾಂಕರ್ ವಾಹನಗಳ ಮಾಲಿಕರಿಗೆ ಮಾಹಿತಿ ನೀಡಿ, ಯಾವುದೇ ಕ್ಷಣದಲ್ಲಿ ತಮ್ಮ ವಾಹನವನ್ನು ಕುಡಿಯುವ ನೀರಿನ ಉದ್ದೇಶಕ್ಕಾಗಿ ಜಿಲ್ಲಾಡಳಿತ ಅಧೀನಕ್ಕೆ ಪಡೆಯಬಹುದು ಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಅಪರ ಜಿಲ್ಲಾಧಿಕಾರಿ ಎನ್. ತಿಪ್ಪೇಸ್ವಾಮಿ, ಉಪವಿಭಾಗಾಧಿಕಾರಿ ಡಿ.ಎಚ್. ಅಶ್ವಿನ್ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಹಾಜರಿದ್ದರು.

ಅಧಿಕ ತಾಪಮಾನ; ಮುನ್ನಚ್ಚರಿಕೆ ಕ್ರಮಕ್ಕೆ ಸೂಚನೆ ಅಧಿಕ ತಾಪಮಾನ ಹೆಚ್ಚಳದಿಂದ ತೀವ್ರ ಬಿಸಿಗಾಳಿ ಜಿಲ್ಲೆಯಾದ್ಯಂತ ಬೀಸುತ್ತಿರುವುದರಿಂದ ಅನಾರೋಗ್ಯದ ದುಷ್ಪರಿಣಾಮದಿಂದ ತಪ್ಪಿಸಿಕೊಳ್ಳಲು ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ತೀವ್ರ ಬಿಸಿಗಾಳಿಯಿಂದ ಕುಡಿಯುವ ನೀರಿನ ಸಮಸ್ಯೆಯ ತೀವ್ರತೆಯು ಹೆಚ್ಚಾಗುವ ಸಾಧ್ಯತೆ ಇದೆ.

ಈ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯ ಆಗದಂತೆ ಕ್ರಮವಹಿಸಲು ಸೂಚಿಸಿದರು. ಬಿಸಿಗಾಳಿಯಿಂದ ಪ್ರತಿಕೂಲ ಅನಾರೋಗ್ಯ ಪರಿಣಾಮ ತಡೆಗಟ್ಟಲು ಜಿಲ್ಲೆಯ ಸಮಸ್ತ ಜನರು ಸರ್ಕಾರ ಸೂಚಿಸಿರುವ ಸಲಹೆ ಪಾಲಿಸುವಂತೆ ಜಿಲ್ಲಾಧಿಕಾರಿ ಮನವಿ ಮಾಡಿದರು. ನಿತ್ಯ ಹೀಗೆ ಮಾಡಿ ಮಧ್ಯಾಹ್ನ 12ರಿಂದ 3 ರವರೆಗೆ ಬಿಸಿಲಿನಲ್ಲಿ ಓಡಾಡಬಾರದು.

> **ಬಾಯಾರಿಕೆ ಇಲ್ಲದಿದ್ದರೂ ಸಾಕಷ್ಟು ನೀರು ಕುಡಿಯಿರಿ. ಹಗುರವಾದ ತಿಳಿ ಬಣ್ಣದ ಸಡಿಲವಾದ ಮತ್ತು ರಂಧ್ರವಿರುವ ಹತ್ತಿ ಬಟ್ಟೆ ಧರಿಸಿ ರಕ್ಷಣಾತ್ಮಕ ಕನ್ನಡಕ ಛತ್ರಿ,ಟೋಪಿ ಬೂಟುಗಳು ಅಥವಾ ಚಪ್ಪಲ್ ಬಳಸಿ ದೇಹ ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್ ಚಹಾ ಕಾಫಿ ಮತ್ತು ಕಾರ್ಬೋನೇಟೆಡ್ ತಂಪು ಪಾನೀಯ ಸೇವಿಸದಿರಿ ಹೆಚ್ಚು ಪ್ರೋಟೀನ್ ಅಂಶ ಇರುವ ಆಹಾರ ಮತ್ತು ಹಳೆಯ ಆಹಾರ ಸೇವಿಸಬೇಡಿ ನಿಂಬೆ ನೀರು ಮಜ್ಜಿಗೆ ಇತ್ಯಾದಿಗಳನ್ನು ಬಳಸಿ ದೇಹವನ್ನು ಮರು- ಜಲೀಕರಣ ಮಾಡಲು ಸಹಾಯ ಮಾಡುತ್ತದೆ ಪ್ರಾಣಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ನೀಡಿ. ತೋಟಗಳಲ್ಲಿ ಕೆಲಸ ಮಾಡುವ ರೈತರು ಟೋಪಿ ಅಥವಾ ಛತ್ರಿ ಬಳಸಿ ಮತ್ತು ನಿಮ್ಮ ತಲೆ ಕುತ್ತಿಗೆ ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆ ಬಳಸಿ**

> **ಜಿಲ್ಲೆಯ 45 ಗ್ರಾಮ, 17 ವಾರ್ಡ್‌ಗಳಲ್ಲಿ ಪ್ರಸ್ತುತ ಕುಡಿಯುವ ನೀರಿನ ಸಮಸ್ಯೆ ಇದೆ. ಖಾಸಗಿ ಕೊಳವೆ ಬಾವಿಗಳ ಮೂಲಕ ನೀರು ಪೂರೈಸಲಾಗುತ್ತಿದೆ. ಮುಂದಿನ ದಿನಗಳಲ್ಲಿ 144 ಗ್ರಾಮ ಮತ್ತು 24 ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವ ಆಗಬಹುದು. ಇದನ್ನು ಗಮನದಲ್ಲಿ ಇಟ್ಟುಕೊಂಡು ನೀರಿನ ಪೂರೈಕೆಗೆ ಅಗತ್ಯ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು ಎಂದು ತಿಳಿಸಿದರು.**
> **- ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ**

## ಮಿನಿ ನ್ಯೂಸ್

### ಸಿಡಿಲು ಬಡಿದು ಹೊತ್ತಿ ಉರಿದ ಜಾನಪದಲೋಕದ ಗಿರಿಜನ ಮನೆ

• ಉದಯವಾಹಿನಿ, ರಾಮನಗರ

ರಾಜ್ಯದ ಹಲವು ಜಿಲ್ಲೆಗಳಲ್ಲಿ ಗುಡುಗು, ಬಿರುಗಾಳಿ ಸಹಿತ ಭಾರಿ ಮಳೆಯಾಗುತ್ತಿದೆ. ಕೆಲವೆಡೆ ಸಿಡಿಲು ಬಡಿದು ಅವಾಂತರಗಳು ಸೃಷ್ಟಿಯಾಗಿವೆ. ಸಿಡಿಲು ಬಡಿದು ಪ್ರವಾಸಿ ತಾಣದ ಜಾನಪದಲೋಕದ ಗಿರಿಜನ ಮನೆಗೆ ಬೆಂಕಿ ಹೊತ್ತಿ ಉರಿದ ಘಟನೆ ರಾಮನಗರದಲ್ಲಿ ನಡೆದಿದೆ. ರಾಮನಗರದ ಪ್ರಖ್ಯಾತ ಜಾನಪದ ಲೋಕದಲ್ಲಿರುವ ಗಿರಿಜನ ಮನೆ ಮೇಲೆ ಸಿಡಿಲು ಬಡಿದ ಹೊಡೆತಕ್ಕೆ ಬೆಂಕಿ ಹೊತ್ತಿಕೊಂಡಿದೆ. ಹುಲ್ಲಿನಿಂದ ನಿರ್ಮಾಣ ಮಾಡಿದ್ದ ಹಾಡಿ ಜನರ ಗಿರಿಜನ ಮನೆ ಬೆಂಕಿಗಾಹುತಿಯಾಗಿದೆ. ಘಟನಾ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ. ಸಿಡಿಲ ಆರ್ಭಟಕ್ಕೆ ಪ್ರವಾಸಿಗರು ಆತಂಕಕ್ಕೀಡಾಗಿದ್ದಾರೆ. ಇನ್ನು ಬೆಂಗಳೂರು ನಗರ ಜಿಲ್ಲೆಯ ಆನೇಕಲ್, ಹೆಬ್ಬಗೋಡಿ, ರಾಮನಗರ, ಮೈಸೂರಿನ ಹಲವೆಡೆಗಳಲ್ಲಿ ಬಿರುಗಳಿ ಸಹಿತ ಆಲಿಕಲ್ಲು ಮಳೆಯಾಗುಗಿದ್ದು, ಹಲವೆಡೆ ಅವಾಂತರಗಳು ಸೃಷ್ಟಿಯಾಗಿವೆ.

### ಬಿಸಿಲ ಬೇಗೆಗೆ ಮಳೆಯ ಸಿಂಚನ

• ಉದಯವಾಹಿನಿ, ಕೆಜಿಎಫ್

ಬಿಸಿಲಿನ ಬೇಗೆಯಿಂದ ಬಸವಳಿದ ತಾಲ್ಲೂಕಿನ ಜನತೆ ಸಂಜೆ ಸುರಿದ ಮಳೆಯಿಂದ ನೆಮ್ಮದಿಯ ನಿಟ್ಟುಸಿರು ಬಿಟ್ಟರು.ತಾಲ್ಲೂಕಿನಾದ್ಯಂತ ಸಂಜೆ ನಾಲ್ಕು ಗಂಟೆ ವೇಳೆಗೆ ಗುಡುಗು ಸಹಿತ ಸಣ್ಣಗೆ ಮಳೆ ಸುರಿಯಲಾರಂಭಿಸಿತು. ಹಲವು ದಿನಗಳಿಂದ ಹೆಚ್ಚಾದ ಬಿಸಿಲಿನ ತಾಪದಿಂದ ಪರಿತಪಿಸುತ್ತಿದ್ದ ಜನರು ಉಲ್ಲಾಸದ ನಗೆ ಬೀರಿದರು. ತಾಲ್ಲೂಕಿನಾದ್ಯಂತ ಮಧ್ಯಾಹ್ನದಿಂದಲೇ ಮೋಡ ಕವಿದ ವಾತಾವರಣ ಇತ್ತು. ಕೆಜಿಎಫ್ ಹಾಗೂ ಸುತ್ತಮುತ್ತ ಸುಮಾರು 15 ನಿಮಿಷ ಸಾಧಾರಣ ಮಳೆ ಸುರಿಯಿತು. ಕೆಲವೆಡೆ ಕೇವಲ ಗುಡುಗಿನ ಶಬ್ದ ಮಾತ್ರ ಕೇಳಿತು. ಮಳೆ ಸುರಿಯಲಿಲ್ಲ. ಹವಾಮಾನ ಇಲಾಖೆಯು ಸೋಮವಾರ ಕೋಲಾರ ಜಿಲ್ಲೆಯಲ್ಲಿ 'ಆರೆಂಜ್ ಅಲರ್ಟ್' ಘೋಷಿಸಿತ್ತು. ನಾಲ್ಕೈದು ದಿನ ಒಣ ಹವೆ ಇರುತ್ತದೆ ಎಂದು ತಿಳಿಸಿತ್ತು. ಕೆಲವೇ ನಿಮಿಷ ಬಿದ್ದ ಮಳೆ ಮತ್ತು ತಂಗಾಳಿ ಜನರಿಗೆ ನೆಮ್ಮದಿ ತಂದಿವೆ.

### ಅವರಗೆರೆ ಹೊಂಬಮ್ಮ ದೇವಿಯ ಅದ್ದೂರಿ ರಥೋತ್ಸವ


• ಉದಯವಾಹಿನಿ, ರಾಮನಗರ

ಜಿಲ್ಲೆ ರಾಮನಗರ ತಾಲೂಕು ಬಿಡದಿ ಹೋಬಳಿ ಅವರಗೆರೆ ಗ್ರಾಮದಲ್ಲಿ ಇಂದು ನಡೆದ ಹೊಂಬಮ್ಮ ದೇವಿಯ ರಥೋತ್ಸವ ಅದ್ದೂರಿಯಾಗಿ ಜರುಗಿತು. ಈ ಕಾರ್ಯಕ್ರಮಕ್ಕೆ ಸುತ್ತಮುತ್ತ ಇರುವ 33 ಗ್ರಾಮಗಳ ಭಕ್ತಾದಿಗಳು ಪಾಲ್ಗೊಂಡು ಗ್ರಾಮ ದೇವತೆಯ ಹಾಗೂ ಬ್ರಹ್ಮರಥೋತ್ಸವದ ದರ್ಶನ ಹಾಗೂ ಆಶೀರ್ವಾದ ಪಡೆದು ಕಣ್ತುಂಬಿಕೊಂಡು ಪುನೀತರಾದರು. ಪ್ರತಿ ವರ್ಷದಂತೆ ಈ ವರ್ಷವೂ ದೇವಿಯ ಪೂಜೆ ,ಹೋಮ, ಅವನ ಅಗ್ನಿಕೊಂಡ, ಬ್ರಹ್ಮ ರಥೋತ್ಸವ ವಿಜೃಂಭಣೆಯಿಂದ ನಡೆಯಿತು. ಈ ರಥೋತ್ಸವಕ್ಕೆ 33 ಗ್ರಾಮಗಳ ಭಕ್ತಾದಿಗಳು, ಗ್ರಾಮದ ಮುಖ್ಯಸ್ಥರುಗಳು ಆಗಮಿಸಿ ದೇವಿಯ ಕೃಪೆಗೆ ಪಾತ್ರರಾದರು.


ಉದಯವಾಹಿನಿ ಚಿತ್ರ

## ಕಾರ್ಮಿಕರಿಗೆ ಸುಳ್ಳು ಜಾತಿನಿಂದನೆ ದೂರು ದಾಖಲು

• ಉದಯವಾಹಿನಿ, ಬಂಗಾರಪೇಟೆ


ಉದಯವಾಹಿನಿ ಚಿತ್ರ

ಕರ್ನಾಟಕ ರಾಜ್ಯರಸ್ತೆ ಸಾರಿಗೆ ನಿಗಮದಲ್ಲಿ ಎಟಿಎಸ್ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ನೇತಾವತಿ ಅವರು ತನ್ನ ಅದೀನ ಅಧಿಕಾರಿಗಳಿಗೆ ಮತ್ತು ಕಾರ್ಮಿಕರಿಗೆ ಸುಳ್ಳು ಜಾತಿನಿಂದನೆ ದೂರು ದಾಖಲಿಸುವುದಗಿ ಬೆದರಿಕೆ ಹಾಕಿರುವುದು ಸಮಾಜಸವಲ್ಲ, ಎಂದು ಕರ್ನಾಟಕ ರಿಪಬ್ಲಿಕನ್ ಸಂಘಟನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಚಿಕ್ಕನಾರಾಯಣ ಆರೋಪಿಸಿದರು.


ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಕರೆಯಲಾಗಿದ್ದ ಪತ್ರಿಕಾ ಘೋಷ್ಠಿ, ಉದ್ದೇಶಿಸಿ ಮಾತನಾಡಿದ ಅವರು ನಾನು ಭೋವಿ ಸಮುದಾಯಕ್ಕೆ ಸೇರಿದವರಾಗಿದ್ದು ನನ್ನ ವಿರುದ್ಧ ಯಾರೇ ಮಾತನಾಡಿದರು ನಿಮ್ಮ ವಿರುದ್ಧ ಸುಳ್ಳು ಜಾತಿನಿಂದಲೇ ಪ್ರಕರಣ ದಾಖಲಿಸುತ್ತೇನೆ ಎಂದು ತನ್ನ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಇತರೆ ಸಿಬ್ಬಂದಿಗಳಿಗೆ ಬೆದರಿಕೆ ಹಾಕುತ್ತಿದ್ದಾರೆ.

ವಾಹನಗಳಿಗೆ ಸಂಬಂಧಪಟ್ಟಂತೆ ಹಳೆಯ ಟೈರುಗಳಿಗೆ ರಿ ಬೋಲ್ಟ ಮಾಡಿ ಹೊಸ ಟೈರುಗಳನ್ನು ಖರೀದಿಸಲಾಗಿದೆ ಎಂದು ನಕಲಿ ದಾಖಲೆ ಸೃಷ್ಟಿಸಿ ಸರಿ ಸುಮಾರು ಎರಡು ಕೋಟಿ ರೂಗಳ ಹಗರಣ ನಡೆಸಿರುತ್ತಾರೆ. ಇದರೊಟ್ಟಿಗೆ ಡೀಸೆಲ್ ಖರೀದಿಯಲ್ಲಿ ಬಹುದೊಡ್ಡ ಹಗರಣ ನಡೆದಿರುವುದರ ಬಗ್ಗೆ ಸಾಕ್ಷಿಗಳಿವೆ ಈ ಕೂಡಲೇ ಮೇಲಾಧಿಕಾರಿಗಳು ಇವರ ಭ್ರಷ್ಟಾಚಾರ ಮತ್ತು ದೌರ್ಜನ್ಯಗಳ ಉಪಟಳಕ್ಕೆ ಅಂತ್ಯ ಹಾಕಿ ವರ್ಗಾವಣೆ ಮಾಡದೆ ಹೋದರೆ ಕೆಜಿಎಫ್ ಸಾರಿಗೆ ಡಿಪೋ ಮುಂದೆ ತಮಟೆ ಚಳುವಳಿ ನಡೆಸುತ್ತೇವೆ ಎಂದು ಪತ್ರಿಕಾ ಹೇಳಿಕೆಯಲ್ಲಿ ಎಚ್ಚರಿಕೆ ಕೊಟ್ಟರು.

ಈ ಸಂದರ್ಭದಲ್ಲಿ ರಾಜ್ಯ ಕರ್ನಾಟಕ ರಾಜ್ಯ ಪ್ರಧಾನ ಕಾರ್ಯದರ್ಶಿ ಯುವ ಘಟಕ ಚಿಂಟು ಆರ್ಟ್ಸ ರಾಮಚಂದ್ರ, ಸಂಘಟನ ರಾಜ್ಯ ಕಾರ್ಯದರ್ಶಿ ಮಂಜುನಾಥ್, ರಾಜ್ಯ ಮಹಿಳಾ ಪ್ರಧಾನ ಕಾರ್ಯದರ್ಶಿ ಅಶ್ವಿನಿ, ಕೋಲಾರ ಜಿಲ್ಲಾಧ್ಯಕ್ಷ ವಿ. ಅಂಬರೀಶ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ ವಿ ಶ್ರೀನಾಥ್, ಉಪಸ್ಥಿತರಿದ್ದರು

## ಭಕ್ತರ ಬವಣೆ, ಸಂಕಷ್ಟ ಕಳೆಯುವ ಬಡಗೂಡಮ್ಮ

• ಉದಯವಾಹಿನಿ, ನಾಗಮಂಗಲ


ಉದಯವಾಹಿನಿ ಚಿತ್ರ

ನಾಡಿನ ವಿವಿಧ ಭಾಗಗಳಿಂದ ಹರಕೆಹೊತ್ತು ಬರುವ ಭಕ್ತರ ಬವಣೆ, ಸಂಕಷ್ಟ ಕಳೆಯುವ ಶಕ್ತಿದೇವತೆ ಬಡಗೂಡಮ್ಮ ಈ ಭಾಗದ ಭಕ್ತರ ಆರಾಧ್ಯ ದೇವಿಯಾಗಿ ನೆಲೆ ನಿಂತಿದ್ದಾಳೆ.

ಪಟ್ಟಣದ ಟಿ.ಬಿ.ಬಡಾವಣೆಯಲ್ಲಿ ಶ್ರೀಬಡಗೂಡಮ್ಮ ದೇವಿಯ ದೇವಾಲಯವಿದೆ. ಪಡುವಲಪಟ್ಟಣ ರಸ್ತೆಯಲ್ಲಿ ಮತ್ತೊಂದು ದೇವಾಲಯವನ್ನು ನಿರ್ಮಿಸಿ ಅಲ್ಲಿ ಉತ್ಸವ ಮೂರ್ತಿಯನ್ನಿಟ್ಟು ಪೂಜಿಸಲಾಗುತ್ತಿದೆ.

ಬಡಗೂಡಮ್ಮ ದೇವಿಯ ಮೂಲಮೂರ್ತಿಯು ರುಂಡವಿಲ್ಲದ ಮುಂಡಾಕೃತಿಯಲ್ಲಿ ನೆಲೆಸಿದ್ದು ತ್ರಿಶೂಲ, ಖಡ್ಗ ಸೇರಿದಂತೆ ಢಮರುಗದೊಂದಿಗೆ ಅಭಯಹಸ್ತಳಾಗಿ ನೆಲೆನಿಂತಿರುವುದು ಕ್ಷೇತ್ರದ ವಿಶೇಷವಾಗಿದೆ.

ದೇವಾಲಯಗಳ ನಾಡು ಎಂದೇ ಪ್ರಸಿದ್ಧಿ ಪಡೆದಿರುವ ನಾಗಮಂಗಲದ ಬಡಗಲ ದಿಕ್ಕಿನ ಹಿರಿಕೆರೆ ಕೋಡಿಯ ಮೇಲೆ ನೆಲೆಸಿದ್ದು, ಪ್ರತಿ ಭಾನುವಾರ, ಮಂಗಳವಾರ, ಶುಕ್ರವಾರ, ಅಮಾವಾಸ್ಯೆ ಮತ್ತು ಹುಣ್ಣಿಮೆಯ ದಿನಗಳಲ್ಲಿ ವಿಶೇಷ ಪೂಜೆಯೊಂದಿಗೆ ಬಡಗೂಡಮ್ಮ ದರ್ಶನ ನೀಡುತ್ತಾಳೆ. ಪಟ್ಟಣ ಸೇರಿದಂತೆ ಸುತ್ತ-ಮುತ್ತಲಿನ ಗ್ರಾಮಗಳಾದ ಉಪ್ಪಾರಹಳ್ಳಿ, ನರಿಗುಡ್ಡೆ, ಮದಲಹಳ್ಳಿ, ಬಸವೇಶ್ವರನಗರ, ಸಾರಿಮೇಗಲಕೊಪ್ಪಲು ಸೇರಿದಂತೆ 12 ತತ್ತಿನ ಗ್ರಾಮಗಳು ಈ ದೇವಿಯ ಧಾರ್ಮಿಕ ಕಾರ್ಯ ನಿರ್ವಹಿಸುವ ಹಕ್ಕನ್ನು ಹೊಂದಿವೆ. ದೇವಿಯ ಜಾತ್ರಾ ಮಹೋತ್ಸವ ಸಮಯದಲ್ಲಿ ಪ್ರತಿ ಗ್ರಾಮದ ಗ್ರಾಮಸ್ತರು ಒಂದೊಂದು ಧಾರ್ಮಿಕ ಕೈಂಕರ್ಯ ಹಂಚಿಕೆ ಮಾಡಿಕೊಂಡು ತಮ್ಮ ಸೇವೆ ಸಲ್ಲಿಸುತ್ತಾರೆ. ಪ್ರತಿ ವರ್ಷ ಯುಗಾದಿ ನಂತರದಲ್ಲಿ ಮೂರನೇ ಶನಿವಾರ ಹಬ್ಬ ಮತ್ತು ರಥೋತ್ಸವ ಜರುಗುವುದು ರೂಢಿಯಾಗಿದೆ. ಜೊತೆಗೆ ದೇವಿಯ ತವರುಮನೆ ಎಂದು ಕರೆಯಲಾಗುವ ಉಪ್ಪಾರಹಳ್ಳಿ ಗ್ರಾಮಸ್ಥರಿಂದ ರಥೋತ್ಸವದ ಹಿಂದಿನ ದಿನ ಶುಭ ಗೋಧೂಳಿ ಲಗ್ನದಲ್ಲಿ ಧಾರ್ಮಿಕ ಪೂಜೆಗಳೊಂದಿಗೆ ಕೊಂಡೋತ್ಸವಕ್ಕೆ ಅಗ್ನಿಸ್ಪರ್ಷ ಮಾಡುವುದು ವಾಡಿಕೆ.

> **ಪಟ್ಟಣದ ಉತ್ಸವ ಮೂರ್ತಿಯ ಇರುವ ದೇವಾಲಯದಿಂದ ಹೊರಡುವ ಪಾಲಕ್ಕಿ ಉತ್ಸವವು ತಮಟೆ, ನಗಾರಿ, ಪೂಜೆ ಕುಣಿತ, ಸೋಮನ ಕುಣಿತ ಪಟದ ಕುಣಿತಗಳೊಂದಿಗೆ ಟಿ.ಬಿ.ಬಡಾವಣೆಯಲ್ಲಿರುವ ಮೂಲ ಸನ್ನಿಧಿಗೆ ಬಂದ ನಂತರ ಮಹಾರಥೋತ್ಸವ ನಡೆಯುತ್ತದೆ.**

## ಮುಳುಗಿ ಅಣ್ಣ ಸಾಯುತ್ತಿದ್ದರೂ ವಿಡಿಯೋ ಮಾಡುತ್ತಿದ್ದ ತಂಗಿ

• ಉದಯವಾಹಿನಿ, ಕೋಲಾರ

ನದಿ ಆಗಿರಬಹುದು ಅಥವಾ ಕೃಷಿ ಹೋಂಡ ಆಗಿರಬಹುದು ಇನ್ ಯಾವುದೇ ನೀರಿನ ಸೆಲೆಯಲ್ಲಿ ಈಜಲು ತೆರಳಿದವರು ಮುಳುಗುತ್ತಿದ್ದನ್ನು ಕಂಡು ಯಾರಾದರೂ ಜೀವ ಉಳಿಸಲು ಪ್ರಯತ್ನಿಸುತ್ತಾರೆ. ಆದರೆ ಇಲ್ಲಿ ಅಣ್ಣನೊಬ್ಬ ಕೃಷಿ ಹೊಂಡದಲ್ಲಿ ಮುಳುಗಿ ಈಜಲು ಬಾರದೆ ಮುಳುಗುತ್ತಿದ್ದರು ಕೂಡ ಆತನ ತಂಗಿಯೊಬ್ಬಳು ವಿಡಿಯೋ ಮಾಡುತ್ತಿದ್ದಳು.

ಆದರೆ ದುರಾದೃಷ್ಟವಶಾತ್ ಆ ಯುವಕ ಹೊಂಡದಲ್ಲಿ ಮುಳುಗಿ ಸಾವನ್ನಪ್ಪಿರುವ ಘಟನೆ ಕೋಲಾರ ತಾಲ್ಲೂಕಿನ ನಾಗನಾಳ ಗ್ರಾಮದಲ್ಲಿ ಸಂಭವಿಸಿದೆ. ಘಟನೆ ಬುಧವಾರ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ.ಮೃತ ಯುವಕನನ್ನು ಗೌತಮ್ ಗೌಡ (26) ಎಂದು ಗುರುತಿಸಲಾಗಿದೆ. ಈತ ಮೈಸೂರಿನ ರಾಘವೇಂದ್ರನಗರ ಬಡಾವಣೆ ನಿವಾಸಿಯಾಗಿದ್ದಾರೆ. ಗೌತಮ್ ಗೌಡ ತಂದೆಯ ಊರಾದ ವೇಮಗಲ್ ಸಮೀಪದ ನಾಗನಾಳ ಗ್ರಾಮಕ್ಕೆ ಆಗಮಿಸಿದ್ದರು. ಈ ವೇಳೆ, ಸರಿಯಾಗಿ ಈಜು ಬಾರದಿದ್ದರೂ ಈಜಲು ಹೋಗಿದ್ದರು. ಆರಂಭದಲ್ಲಿ ಚೆನ್ನಾಗಿಯೇ ಈಜುತ್ತಿದ್ದ ಅವರು ಕ್ರಮವೇಣ ಮುಳುಗಲಾರಂಭಿಸಿದರು. ಈ ವೇಳೆ ಗೌತಮ್ ತಂಗಿ ವಿಡಿಯೋ ಮಾಡುತ್ತಿದ್ದಳು ಆದರೆ ಅಣ್ಣ ಈಜುತ್ತಿದ್ದಾನೆ ಎಂದು ತಿಳಿದುಕೊಂಡು ಆಕೆ ವಿಡಿಯೋ ಮಾಡುವುದನ್ನು ಮುಂದುವರಿಸಿದಳು. ಆದರೆ ಅಣ್ಣ ಮುಳುಗುತ್ತಿರುವುದು ಆಕೆಗೆ ಕಂಡು ಬಾರದೆ ಇರುವುದರಿಂದ ದುರಾದೃಷ್ಟವಶಾತ್ ಗೌತಮ್ ಮುಳುಗಿ ಸಾವನ್ನಪ್ಪಿದ್ದಾನೆ.

## ಜ್ಯೋತಿ ಕಲಾಕೇಂದ್ರದ ವಿದ್ಯಾರ್ಥಿಗಳ ನೃತ್ಯ ಪ್ರದರ್ಶನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಮನಗರ

ನಗರದ ಕಲಾಜ್ಯೋತಿ ಕಲಾಕೇಂದ್ರದ ಎಬಿಸಿಡಿ ನೃತ್ಯ ಶಾಲೆಯ ವಿದ್ಯಾರ್ಥಿಗಳು ದೂರದರ್ಶನ ಚಂದನ ವಾಹಿನಿಯಲ್ಲಿ ಪ್ರಸಾರವಾಗುವ 'ಶಕ್ತಿ ಮಹಿಳಾ ಕಾರ್ಯಕ್ರಮ'ದಲ್ಲಿ ನೃತ್ಯ ಪ್ರದರ್ಶನ ನೀಡುವ ಮೂಲಕ ಗಮನ ಸೆಳೆದಿದ್ದಾರೆ. ಕಲಾಕೇಂದ್ರದ ವಿದ್ಯಾರ್ಥಿಗಳ ತಂಡವು 'ಶಕ್ತಿ ಮಹಿಳಾ ಕಾರ್ಯಕ್ರಮ'ಕ್ಕೆ ಆಯ್ಕೆಯಾಗಿತ್ತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಪ್ರದರ್ಶಿಸಿದ ಜಾನಪದ ಕಲೆಗಳ ಪಟ ಕುಣಿತ ಹಾಗೂ ಕಂಸಾಳೆ ನೃತ್ಯ ಪ್ರದರ್ಶನ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. ನೃತ್ಯ ತಂಡದಲ್ಲಿ ಸದಸ್ಯರಾದ ದೀಪಿಕಾ, ಬಿಂದು, ಸತ್ಯ, ನಿಸರ್ಗ, ಗೀತಾ, ಭವಿತ, ಧೃತಿ, ಮೌಲ್ಯ ಹಾಗೂ ಮಾನ್ಯ ಅವರಿದ್ದರು ಎಂದು ತಂಡದ ಭಾಗವಾದ ಕಲಾ ಕೇಂದ್ರದ ರೇಣುಕ ಪ್ರಸಾದ್ ತಿಳಿಸಿದರು.

> **ಕೇಂದ್ರ ವಿದ್ಯಾರ್ಥಿಗಳು ಕನ್ನಡವಷ್ಟೇ ಅಲ್ಲದೆ, ತೆಲುಗು ಮತ್ತು ತಮಿಳು ಟಿವಿ ಚಾನೆಲ್‌ಗಳಲ್ಲಿ ಸಹ ಹಲವಾರು ನೃತ್ಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಕೀರ್ತಿ ತಂದಿದ್ದಾರೆ. ಜೀ ಕನ್ನಡ ವಾಹಿನಿಯ ಡಾನ್ಸ್ ಕರ್ನಾಟಕ ಡಾನ್ಸ್, ಸ್ಟಾರ್ ಸುವರ್ಣ ಚಾನೆಲ್ ಸುವರ್ಣ ಸೂಪರ್ ಸ್ಟಾರ್ ಕಾರ್ಯಕ್ರಮದಲ್ಲಿ ಸಹ ನೃತ್ಯ ಪ್ರದರ್ಶನ ನೀಡಿದ್ದಾರೆ ಎಂದು ಹೇಳಿದರು.**

## ಅಂಗಡಿ ಮಳಿಗೆ ಹರಾಜಿಗೆ ಒತ್ತಾಯ

• ಉದಯವಾಹಿನಿ, ಹಾರೋಹಳ್ಳಿ



ಉದಯವಾಹಿನಿ ಚಿತ್ರ

ಇಲ್ಲಿನ ಪಟ್ಟಣ ಪಂ। ವ್ಯಾಪ್ತಿಯ ಮಳಿಗೆಗಳನ್ನು ಹತ್ತಾರು ವರ್ಷದಿಂದ ಹರಾಜು ಮಾಡಿಲ್ಲ ಎಂದು ಆರೋಪಿಸಿ ದಲಿತ ಸಂಘಟನೆಗಳ ಮುಖಂಡರು ತಹಶೀಲ್ದಾರ್ ಪಟ್ಟಣ ಪಂ. ಆಡಳಿತಾಧಿಕಾರಿ ವಿಜಿಯಣ್ಣ ಅವರಿಗೆ ಮನವಿ ನೀಡಿದರು.ಹಾರೋಹಳ್ಳಿಯ ತಾಲ್ಲೂಕು ಕಚೇರಿಗೆ ಬುಧವಾರ ಭೇಟಿ ನೀಡಿದ ದಲಿತ ಸಂಘಟನೆಗಳ ಮುಖಂಡರು ತಹಶೀಲ್ದಾರ್ ಅವರಿಗೆ ದೂರುಗಳ ಸುರಿಮಳೆಯನ್ನೇ ಸುರಿಸಿದರು.

ಸಮತಾ ಸೈನಿಕ ದಳದ ರಾಜ್ಯ ಯುವಘಟಕದ ಅಧ್ಯಕ್ಷ ಜಿ.ಗೋವಿಂದಯ್ಯ ಮಾತನಾಡಿ, ಐದು ತಿಂಗಳ ಹಿಂದೆ ಅಂಗಡಿ ಮಳಿಗೆಗಳನ್ನು ಹರಾಜಿಗೆ ಆಗ್ರಹಿಸಿ ಅಹೋರಾತ್ರಿ ಧರಣಿ ನಡೆಸಲಾಗಿತ್ತು. ಅಂದು ತಹಶೀಲ್ದಾರ್ ಮತ್ತು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು ಆದಷ್ಟು ಬೇಗ ಮಳಿಗೆಗಳನ್ನು ಹರಾಜು ನಡೆಸುವುದಾಗಿ ಭರವಸೆ ನೀಡಿದ್ದರು. ಆದರೆ ಐದು ತಿಂಗಳು ಕಳೆದರು ಯಾವುದೇ ರೀತಿಯ ಪ್ರಯೋಜನವಾಗಿಲ್ಲ. ರಸ್ತೆಯನ್ನು ಅಗಲೀಕರಣ ನಡೆಸುತ್ತೇವೆ ಎಂದು ಸುಳ್ಳು ಹೇಳಿದ ಅಧಿಕಾರಿಗಳು ನಮ್ಮ ಹೋರಾಟದ ಹಾದಿಯನ್ನು ತಪ್ಪಿಸಿದರು. ಆದರೆ ಮುಂದೆ ಹಾಗಾಗುವುದಿಲ್ಲ. ಚುನಾವಣಾ ನೀತಿ ಸಂಹಿತೆ ಮುಗಿದ ತಕ್ಷಣ ಕೂಡಲೇ ಅಂಗಡಿ ಮಳಿಗೆಗಳನ್ನು ಹರಾಜು ನಡೆಸಬೇಕೆಂದು ಒತ್ತಾಯಿಸಿದರು.

> **ಕಾರು ಶೋರೂಂ ತೆರವುಗೊಳಿಸಿ**
> **ದ್ಯಾವಸಂದ್ರ ಗ್ರಾ.ಪಂ ವ್ಯಾಪ್ತಿಯ ಗಾಂಧಿ ಫಾರಂ ಬಳಿ ಕಾರು ಕಂಪನಿಯೊಂದು ಜಮೀನು ಖರೀದಿಸಿ ಅದನ್ನು ವ್ಯವಸಾಯಕ್ಕಾಗಿ ಬಳಸದೇ ಬೇರೆ ಉದ್ದೇಶಕ್ಕಾಗಿ ಬಳಸುತ್ತಿದೆ. ಜಿಲ್ಲಾಧಿಕಾರಿ ಅದನ್ನು ತೆರವುಗೊಳಿಸುವಂತೆ ಆದೇಶ ನೀಡಿದ್ದರೂ ಸಹ ತಹಶೀಲ್ದಾರ್ ಯಾವುದೇ ರೀತಿಯ ಕ್ರಮ ಕೈಗೊಂಡಿಲ್ಲ. ಆದಷ್ಟು ಬೇಗ ಗಮನಹರಿಸಬೇಕು ಎಂದರು. ದಲಿತ ಕುಂದುಕೊರತೆ ಸಭೆಗಳನ್ನು ನಡೆಸಬೇಕು, ನೂತನ ತಾಲ್ಲೂಕು ಹರೋಹಳ್ಳಿಯಲ್ಲಿ ಅಂಬೇಡ್ಕರ್ ಸಮುದಾಯ ಭವನ ಅಂಬೇಡ್ಕರ್ ಪ್ರತಿಮೆ ಸ್ಥಾಪಿಸಬೇಕು ಎಂದು ಒತ್ತಾಯಿಸಿದರು.**

## ಭವಾನಿ ರೇವಣ್ಣ ಸಂಬಂಧಿ ನ್ಯಾಯಾಂಗ ಬಂಧನಕ್ಕೆ

• ಉದಯವಾಹಿನಿ, ಮೈಸೂರು



ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಭವಾನಿ ರೇವಣ್ಣ ಸಂಬಂಧಿ ಸತೀಶ್ ಬಾಬು ಜೈಲುಪಾಲಾಗಿದ್ದಾರೆ.

ವಿಡಿಯೋದಲ್ಲಿದ್ದ ಸಂತ್ರಸ್ತ ಮಹಿಳೆಯಾಗಿರುವ ನನ್ನ ತಾಯಿಯನ್ನು ಅಪಹರಿಸಿದ್ದಾರೆ ಎಂದು ಮಹಿಳೆಯ ಮಗ ಮೈಸೂರು ಕೆ.ಆರ್.ನಗರ ಠಾಣೆಯಲ್ಲಿ ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ಹೆಚ್.ಡಿ.ರೇವಣ್ಣ ಹಾಗೂ ಸತೀಶ್ ಬಾಬು ವಿರುದ್ಧ ಎಫ್ ಐ ಆರ್ ದಾಖಲಾಗಿತ್ತು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ಸತೀಶ್ ಬಾಬುಗೆ ಕೋರ್ಟ್ 14 ದಿನಗಳ ಕಾಲ ನ್ಯಾಯಾಂಗ ಬಂಧನ ವಿಧಿಸಿದೆ ಎಂದು ತಿಳಿದುಬಂದಿದೆ.

# ಕಾಳ್ಗಿಚ್ಚಿನ ಆತಂಕ, ಪ್ರಾಣಿಗಳಿಗೆ ನೀರಿಗೆ ಬರ

## ■ ಬಿಸಿಲಿನ ತಾಪ ಏರುತ್ತಿದ್ದು, ಅರಣ್ಯದಲ್ಲಿನ ತೇವಾಂಶ ಕ್ಷೀಣಿಸುತ್ತಿದೆ

• ಉದಯವಾಹಿನಿ, ಗೋಣಿಕೊಪ್ಪಲು


ಉದಯವಾಹಿನಿ ಚಿತ್ರ

**ಅರಣ್ಯ ಚಿಗುರಿ ಕಾಳ್ಚಿನ ಆತಂಕ ದೂರ**

ಮೇ ತಿಂಗಳು ಬಂದರೂ ಧರೆಗೆ ಹನಿಯದ ಮಳೆ ಒಂದೆಡೆಯಾದರೆ, ಬಿರುಬಿಸಿಲಿನ ತಾಪ ಅತಿಯಾಗಿ ನಾಗರಹೊಳೆ ರಾಷ್ಟ್ರೀಯ ಉದ್ಯಾನಕ್ಕೆ ಮತ್ತೆ ಕಾಳ್ಗಿಚ್ಚಿನ ಆತಂಕ ಎದುರಾಗಿದೆ.

ಬಿಸಿಲಿನ ತಾಪ ಏರುತ್ತಿದ್ದು, ಅರಣ್ಯದಲ್ಲಿನ ತೇವಾಂಶ ಕ್ಷೀಣಿಸುತ್ತಿದೆ. ಇದರಿಂದ ಗಿಡಗಂಟಿಗಳು ಚಿಗುರೊಡೆಯಲು ಏದುಸಿರು ಬಿಡುತ್ತಿವೆ.

ಭೂಮಿಯಲ್ಲಿನ ತೇವಾಂಶವನ್ನು ಹೀರಿಕೊಂಡು ಚಿಗುರೊಡೆದಿದ್ದ ಗಿಡಮರಗಳ ಹಸಿರು ಬಾಡ ತೊಡಗಿದೆ. ಹಸಿರೊಡೆದಿದ್ದ ಲಂಟಾನಗಳು ಮತ್ತೆ ಒಣಗುತ್ತಿವೆ. ಅರಣ್ಯದೊಳಗೆ ಒಣಗಿದ್ದ ಕಸಕಡ್ಡಿಗಳ ನಡುವೆ ಹಸಿರು ಕಾಣದಿರುವುದರಿಂದ ಅರಣ್ಯಕ್ಕೆ ಮತ್ತೆ ಕಾಳ್ಚಿನ ಆತಂಕ ಎದುರಾಗಿದೆ. ಹೀಗಾಗಿ ಈಗಲೂ ಕಾಳ್ಗಿಚ್ಚು ನಿವಾರಣಾ ಕಾವಲುಗಾರರು ಗ್ರಾಮಗಳ ಗಡಿಗಳಲ್ಲಿ,ರಸ್ತೆ ಬದಿಯಲ್ಲಿ ಕಾವಲು ಕಾಯುತ್ತಿದ್ದಾರೆ.

ನಾಗರಹೊಳೆ ಅರಣ್ಯ ಭಾಗಕ್ಕೆ ವಾಡಿಕೆಯಂತೆ ಮಾರ್ಚ್ ಅಥವಾ ಏಪ್ರಿಲ್‌ನಲ್ಲಿ ಮುಂಗಾರು ಪೂರ್ವ ಮಳೆ ಉತ್ತಮವಾಗಿ ಬೀಳುತ್ತಿತ್ತು.

ಇದರಿಂದ ಮೇ ಆರಂಭವಾಗುವ ವೇಳೆಗೆ ಅರಣ್ಯ ಚಿಗುರಿ ಕಾಳ್ಚಿನ ಆತಂಕ ದೂರವಾಗುತ್ತಿತ್ತು. ಗಿಡಮರಗಳು ಚಿಗುರಿ ಕಂಗೊಳಿಸುತ್ತಿದ್ದವು. ಗುಲ್ ಮೋಹರ್ ಕೂಡ ಸಮೃದ್ಧವಾಗಿ ಅರಳಿ ಇಡೀ ಅರಣ್ಯಕ್ಕೆ ಸೊಬಗು ತುಂಬುತ್ತಿತ್ತು. ಆದರೆ ಈ ಬಾರಿ ಹವಾಗುಣದ ವೈಪರೀತ್ಯದಿಂದ ಮೇ ಕಾಲಿಟ್ಟರೂ ಅರಣ್ಯಕ್ಕೆ ಮಳೆ ಹನಿ ಬಿದ್ದಿಲ್ಲ.

ನಾಗರಹೊಳೆಯ ಆನೆಚೌಕೂರು ವಲಯದ ಮಾವಕಲ್ಲು ಅರಣ್ಯ ಈಗಲೂ ಒಣಗಿದಂತೆಯೇ ಇದೆ. ಗೋಣಿಕೊಪ್ಪಲು, ಆನೆಚೌಕೂರು, ಪಿರಿಯಾಪಟ್ಟಣ ಅರಣ್ಯದ ಹೆದ್ದಾರಿ ಬದಿಯಲ್ಲಿರುವ ಗುಲ್ ಮೋಹರ್ ಹೂವು ಮಾತ್ರ ಬಿರುಬಿಸಿಲಿನ ನಡುವೆ ಅರಳಿದ್ದರೂ ಬಿಸಿಲಿನ ತಾಪಕ್ಕೆ ಬಳಲಿದಂತಿದೆ.

ಒಣಗಿದ ಕೆರೆಗಳು : ಮತ್ತೊಂದು ಕಡೆ ಅರಣ್ಯದಂಚಿನ ಕೆರೆಗಳು ನೀರಿನಲ್ಲದೆ ಬಣಗುಡುತ್ತಿವೆ. ಬೂದಿತಿಟ್ಟು, ಮುಮ್ಮಡಿಕಾವಲು, ಅಳ್ಳೂರು, ಮುತ್ತೂರು, ಮಾಲ್ದಾರೆ ಮೊದಲಾದ ಭಾಗದ ಅರಣ್ಯದೊಳಗಿನ ಕೆರೆಗಳು ಸಂಪೂರ್ಣವಾಗಿ ಒಣಗಿ ಹೋಗಿವೆ. ನಾಗರಹೊಳೆ ವನ್ಯಜೀವಿ ವಿಭಾಗದ ಕೆರೆಯೊಂದು ಬೂದಿತಿಟ್ಟು ಬಳಿ ಸಂಪೂರ್ಣವಾಗಿ ಒಣಗಿರುವುದು. ಆನೆಚೌಕೂರು ಪಿರಿಯಾಪಟ್ಟಣ ಹೆದ್ದಾರಿಯಲ್ಲಿ ಒಣಗಿರುವ ಅರಣ್ಯ.

> **'ಪ್ರಾಣಿಗಳ ಅಲೆದಾಟ' ಕಳೆದ ವರ್ಷ ಈ ಕೆರೆಗಳಲ್ಲಿ ಇದೇ ಅವಧಿಯಲ್ಲಿ ನೀರು ತುಂಬಿ ಪ್ರಾಣಿಗಳ ದಾಹ ನೀಗಿಸುತ್ತಿತ್ತು. ಸಂಜೆ ವೇಳೆಯಲ್ಲಿ ವನ್ಯ ಜೀವಿಗಳು ನೀರು ಕುಡಿಯಲು ಗುಂಪು ಗುಂಪಾಗಿ ಬರುತ್ತಿದ್ದವು. ಕೆರೆಗಳ ಬಳಿ ಈಗ ಅವುಗಳ ಸುಳಿವೇ ಇಲ್ಲದಾಗಿದೆ. ಕೆರೆದಡದ ಗಿಡಮರಗಳು ಒಣಗಿ ಬರಡಾಗಿವೆ. ಕಾಡೊಳಗೆ ನೀರಿರುವ ಕೆರೆಗಳತ್ತ ಪ್ರಾಣಿಗಳು ಸಾಗಿವೆ ಎನ್ನುತ್ತಾರೆ ಕಾಡಂಚಿನ ಗ್ರಾಮಸ್ಥರು.**

> **'ಇಲಾಖೆ ಎಚ್ಚರ' ಅರಣ್ಯದೊಳಗಿನ ಹೆಚ್ಚಿನ ಕೆರೆಗಳಲ್ಲಿ ಹಳೆಯ ನೀರಿದೆ. ಬತ್ತಿಹೋಗಿರುವ ಕೆಲವೇ ಕೆರೆಗಳಿಗೆ ಮಾತ್ರ ಟ್ಯಾಂಕರ್ ಮೂಲಕ ನೀರು ತುಂಬಿಸಲಾಗುತ್ತಿದೆ. ವನ್ಯಜೀವಿಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಎಚ್ಚರ ವಹಿಸಲಾಗಿದೆ ಎಂದು ಮತ್ತಿಗೋಡು ವನ್ಯಜೀವಿ ವಿಭಾಗದ ವಲಯ ಅರಣ್ಯಾಧಿಕಾರಿ ದೇವರಾಜು ಹೇಳಿದರು.**

# ಎರಡು ದಶಕಗಳು ಕಳೆದರೂ ಕಾಣದ ಡಾಂಬರು

## ■ ರಸ್ತೆ ದುರಸ್ತಿಗೆ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದ ಗ್ರಾಮದ ಮುಖಂಡರು

• ಉದಯವಾಹಿನಿ, ಬಾಗೇಪಲ್ಲಿ


ಉದಯವಾಹಿನಿ ಚಿತ್ರ

ಎರಡು ದಶಕಗಳು ಕಳೆದರೂ ದೇವಿಕುಂಟೆ ರಸ್ತೆಗೆ ಮರು ಡಾಂಬರೀಕರಣ ಮಾಡಿಸಿಲ್ಲ. ಇದರಿಂದಾಗಿ ವಾಹನ ಸವಾರರು ನಿತ್ಯವೂ ಪರದಾಡುವಂತಾಗಿದ್ದು, ರಸ್ತೆ ದುರಸ್ತಿ ಮಾಡಲು ಕ್ರಮ ಕೈಗೊಳ್ಳಬೇಕೆಂದು ಗ್ರಾಮದ ಮುಖಂಡರು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರರವರಿಗೆ ಮನವಿ ಸಲ್ಲಿಸಿದ್ದಾರೆ.

ಚಿಕ್ಕಬಳ್ಳಾಪುರ ನಗರದ ಹೊರವಲಯದಲ್ಲಿನ ಜಿಲ್ಲಾಡಳಿತ ಭವನದಲ್ಲಿ ಗುರುವಾರ ತಾಲ್ಲೂಕಿನ ದೇವಿಕುಂಟೆ ಗ್ರಾಮಸ್ಥರು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರರವರನ್ನು ಭೇಟಿ ಮಾಡಿದರು. ಈ ವೇಳೆ ಮಾರಗಾನಕುಂಟೆ ಗ್ರಾಮ ಪಂಚಾಯತಿ ಕೇಂದ್ರದಿಂದ ದೇವಿಕುಂಟೆಗೆ ಸಂಪರ್ಕಿಸುವ ರಸ್ತೆಯು ಸಂಪೂರ್ಣವಾಗಿ ಹದೆಗಿಟ್ಟಿದ್ದು, ವಾಹನ ಸಂಚಾರ ಮಾಡಲು ಪರದಾಡುವಂತಾಗಿದೆ. ಏಕೆಂದರೆ ಸುಮಾರು 20 ವರ್ಷಗಳಿಂದ ದುರಸ್ತಿ ಮಾಡದೆ,ನಿರ್ಲಕ್ಷಿಸಲಾಗಿದೆ. ಸತತ ಮಳೆ ಹಾಗೂ ವಾಹನಗಳ ಸಂಚಾರದಿಂದ ರಸ್ತೆಯು ಅವ್ಯವಸ್ಥೆಗೊಂಡಿದ ಮಣ್ಣಿನ ರಸ್ತೆ ಆಗಿರುವುದರಿಂದ ಶಾಲಾ ಮಕ್ಕಳ ಓಡಾಟಕ್ಕೆ, ವಯೋವೃದ್ಧರು ಹಾಗೂ ಗರ್ಭಿಣಿ ಮಹಿಳೆಯರು ಆಸ್ಪತ್ರೆಗೆ ಆಂಬುಲೆನ್ಸ್‌ನಲ್ಲಿ ಹೋಗಲು ತೊಂದರೆ ಅನುಭವಿಸುವಂತಾಗಿದೆ.

ಹಾಗಾಗಿ ಆದಷ್ಟು ಶೀಘ್ರವಾಗಿ ರಸ್ತೆ ದುರಸ್ತಿ ಮಾಡಿಸಿ,ಮರುಡಾಂಬೀಕರಣಕ್ಕೆ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಯವರಿಗೆ ಮನವಿ ಸಲ್ಲಿಸಿದ್ದಾರೆ. ಮತದಾನ ಬಹಿಷ್ಕರಿಸಿ ಗಮನ ಸೆಳೆದಿದ್ದರು

ಕಳೆದ ಏಪ್ರಿಲ್ 26ರಂದು ಲೋಕಸಭೆಗೆ ನಡೆದ ಮತದಾನವನ್ನು ದೇವಿಕುಂಟೆ ಗ್ರಾಮಸ್ಥರು ಬಹಿಷ್ಕರಿಸಿ,ನಮ್ಮೂರಿಗೆ ರಸ್ತೆ ಬೇಕು ಎಂದು ಪಟ್ಟು ಹಿಡಿದಿದ್ದರು. ಇದರಿಂದಾಗಿ ಅಂದ ತಹಶೀಲ್ದಾರ್ ಪ್ರಶಾಂತ್ ಕೆ ಪಾಟೀಲ, ಜಿಲ್ಲಾ ಪಂಚಾಯತಿ ಉಪನಿರ್ದೇಶಕ ಭಾಸ್ಕರ್, ಗುಡಿಬಂಡೆ ತಹಶೀಲ್ದಾರ್ ಮನಿಷಾ,ಪೊಲೀಸ್ ಇನ್ಸಪೆಕ್ಟರ್ ಪ್ರಶಾಂತ್ ವರ್ಣಿ, ಲೋಕೋಪಯೋಗಿ ಇಲಾಖೆಯ ಲೋಕೇಶ್ ಸೇರಿದಂತೆ ಹಲವಾರು ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ, ಗ್ರಾಮಸ್ಥರ ಮನವೊಲಿಸಿ ಮತದಾನ ಮಾಡುವಂತೆ ಹಾಗೂ ಮತದಾನದ ಬಳಿಕೆ ಜಿಲ್ಲಾಧಿಕಾರಿಯವರೊಂದಿಗೆ ಚರ್ಚಿಸಲಾಗುವುದು ಎಂದು ತಿಳಿಸಿದ್ದರು. ಅದರಂತೆ ಮತದಾನ ಬಹಿಷ್ಕಾರ ಹಿಂಪಡೆದು ಮಧ್ಯಾಹ್ನ 2.30 ಗಂಟೆಯ ನಂತರ ಗ್ರಾಮಸ್ಥರು ಮತದಾನ ಮಾಡಿದ್ದರು.

ಈ ಬಗ್ಗೆ ನಮ್ಮ ಪಿಕ ದಲ್ಲೂ ಏ.27 ರಂದು ವಿವರವಾದ ಸುದ್ದಿ ಪ್ರಕಟವಾಗಿತ್ತು. ಅದರಂತೆ ಅಧಿಕಾರಿಗಳು ಕೊಟ್ಟ ಮಾತಿನಂತೆ ತಹಶೀಲ್ದಾರ್ ಪ್ರಶಾಂತ್ ಕೆ ಪಾಟೀಲರ ಮೂಲಕ ಗ್ರಾಮದ ಮುಖಂಡರೊಂದಿಗೆ ಜಿಲ್ಲಾಧಿಕಾರಿಯವರನ್ನು ಭೇಟಿ ಮಾಡಿದ್ದಾರೆ. ಈ ಸಂಧರ್ಭದಲ್ಲಿ ಗ್ರಾಮ ಪಂಚಾಯತಿ ಸದಸ್ಯ ಡಿ.ಸಿ ಶ್ರೀನಿವಾಸ್, ಯುವ ಮುಖಂಡರಾದ ಪವನ್ ಕಲ್ಯಾಣ್, ರಾಜಶೇಖರ,ನರಸಿಂಹ ಮತ್ತಿತರರು ಉಪಸ್ಥಿತರಿದ್ದರು.

**ರಸ್ತೆ ದುರಸ್ತಿ ಮಾಡಲು ಕ್ರಮ**

> **ಜಿಲ್ಲಾಧಿಕಾರಿ ಚುನಾವಣಾ ನೀತಿ ಸಂಹಿತೆ ಗ್ರಾಮಕ್ಕೆ ಭೇಟಿ**
> **ಚುನಾವಣಾ ನೀತಿ ಸಂಹಿತೆ ಜಾರಿ ಯಲ್ಲಿರುವುದರಿಂದಾಗಿ, ಚುನಾವಣಾ ಫಲಿತಾಂಶ ಪ್ರಕಟವಾದ ನಂತರ ಜೂನ್ ತಿಂಗಳಿನಲ್ಲಿ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರರವರು ದೇವಿಕುಂಟೆ ಗ್ರಾಮಕ್ಕೆ ಭೇಟಿ ಮಾಡಿ,ರಸ್ತೆಗೆ ಮರು ಡಾಂಬರೀಕರಣದ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.**

ಅಂತರಾಳದಿಂದ..
EDITORIAL

# ಅಮೆರಿಕದ ಬುದ್ಧಿಗೇಡಿಗಳ ವರದಿಯಲ್ಲಿ ಭಾರತದ ಬಗ್ಗೆ ಹಸಿ ಸುಳ್ಳುಗಳು

ಧಾರ್ಮಿಕ ಸ್ವಾತಂತ್ರ್ಯದ ಕುರಿತು ಅಮೆರಿಕ ಸರ್ಕಾರದ ಕಮಿಷನ್ ಆನ್ ಇಂಟರ್‌ನ್ಯಾಷನಲ್ ರಿಲಿಜಿಯಸ್ ಫ್ರೀಡಂ ವರದಿ ಬಿಡುಗಡೆ ಮಾಡಿದೆ. ಭಾರತ ಸೇರಿ 17 ದೇಶಗಳಲ್ಲಿ ಧಾರ್ಮಿಕ ಸ್ವಾತಂತ್ರ್ಯದ ಕುರಿತು ಕಳವಳ ವ್ಯಕ್ತಪಡಿಸಿದೆ. ''ಯುಎಸ್‌ಸಿಐಆರ್‌ಎಫ್ ವರದಿಯು ಪಕ್ಷಪಾತ ಹಾಗೂ ರಾಜಕೀಯ ಪ್ರೇರಿತವಾಗಿ ತಯಾರಿಸಿದ್ದಾಗಿದೆ'' ಎಂಬುದಾಗಿ ಅಸಮಾಧಾನ ವ್ಯಕ್ತಪಡಿಸಿದೆ. ''ಇದಕ್ಕೂ ಮೊದಲು ಕೂಡ ಇಂತಹ ವರದಿಗಳನ್ನು ಅದು ಪ್ರಕಟಿಸಿತ್ತು. ಭಾರತದ ಕುರಿತು ಷಡ್ಯಂತ್ರದಿಂದ ಕೂಡಿದ ವರದಿ ಬಿಡುಗಡೆ ಮಾಡುವುದು ಅದಕ್ಕೆ ರೂಢಿಯೇ ಆಗಿದೆ. ಯುಎಸ್‌ಸಿಐಆರ್‌ಎಫ್ ವರದಿಯಲ್ಲಿ ಯಾವುದೇ ಹುರುಳಿಲ್ಲ'' ಎಂದಿದೆ ಭಾರತ. ಈ ವರದಿ ಯಾರೋ ಅಡ್ಡಕಸಬಿಗಳು ತಯಾರಿಸಿದ ವರದಿಯಂತೆ ಕಾಣಿಸುತ್ತಿದೆ. ಬಹುಶಃ ಅವರು ಭಾರತಕೆಕ ಬಂದು ಇಲ್ಲಿನ ಧಾರ್ಮಿಕ ಸಹಿಷ್ಣುತೆ, ಸಹಬಾಳ್ವೆ ಇತ್ಯಾದಿಗಳನ್ನು ನೋಡಿದ್ದರೆ ಇಂಥ ವರದಿ ತಯಾರಿಸುತ್ತಿರಲಿಲ್ಲ. ಭಾರತದಿಂದ ಆಚೆಗೆ ಕುಳಿತು ಭಾರತದ ವಿರುದ್ಧವೇ ಯುಟ್ಯೂಬ್ ವಿಡಿಯೋ ಮಾಡಿ ಬಿಡುವ ಬುದ್ಧಿವಂತರ ಮಾತುಗಳನ್ನು ಕೇಳಿಕೊಂಡು ಇದನ್ನು ತಯಾರಿಸಿದಂತೆ ಇದೆ. ಈ ವರದಿಯ ಅಕ್ಷರಕ್ಷರವೂ ಸುಳ್ಳು ಎಂಬುದಕ್ಕೆ ಸಾಕ್ಷಿಗಳನ್ನು ನೀಡಬಹುದು. ಸಿಪಿಎ (ಸೆಂಟರ್ ಫಾರ್ ಪಾಲಿಸಿ ಅನಾಲಿಸಿಸ್) ಎಂಬ ಜಾಗತಿಕ ಸಂಸ್ಥೆ ಕಳೆದ ವರ್ಷ ನೀಡಿರುವ ಜಾಗತಿಕ ವರದಿಯಲ್ಲಿ, ಜಗತ್ತಿನ ಇತರ ದೇಶಗಳಿಗೆ ಹೋಲಿಸಿದರೆ, ಅಲ್ಪಸಂಖ್ಯಾತರನ್ನು ಒಳಗೊಳ್ಳುವ ಕ್ರಮಗಳಲ್ಲಿ ಭಾರತ ನಂ.1 ಸ್ಥಾನದಲ್ಲಿದೆ ಎಂದು ಹೇಳಿದೆ. ಇದೊಂದು ಸ್ವತಂತ್ರ ಅಂತಾರಾಷ್ಟ್ರೀಯ ಸಂಸ್ಥೆ. 110 ರಾಷ್ಟ್ರಗಳಲ್ಲಿ ಸಮೀಕ್ಷೆ ನಡೆಸಿ ಆ ವರದಿ ನೀಡಿತ್ತು. ಭಾರತವೇ ಅಲ್ಪಸಂಖ್ಯಾತರಿಗೆ ಹೆಚ್ಚು ಸುರಕ್ಷಿತ ಜಾಗ. ಬೇರೆ ದೇಶಗಳಿಗೆ ಹೋಲಿಸಿದರೆ ಭಾರತದಲ್ಲಿ ಅಲ್ಪಸಂಖ್ಯಾತರ ಮೇಲೆ ಯಾವುದೇ ನಿರ್ಬಂಧ ಇಲ್ಲ. ಭಾರತದ ಸಂವಿಧಾನವು ಸಂಸ್ಕೃತಿ ಮತ್ತು ಶಿಕ್ಷಣ ಎರಡರಲ್ಲೂ ಧಾರ್ಮಿಕ ಅಲ್ಪಸಂಖ್ಯಾತರನ್ನು ಪ್ರೋತ್ಸಾಹಿಸುವ ವಿಶಿಷ್ಟ, ವಿಶೇಷ ವಿಧಿಗಳನ್ನು ಹೊಂದಿದೆ ಎಂದೂ ಈ ವರದಿ ಉಲ್ಲೇಖಿಸಿದೆ. ಭಾರತದ ನಂತರದ 4 ಸ್ಥಾನಗಳಲ್ಲಿ ಪನಾಮಾ, ಜಪಾನ್, ದಕ್ಷಿಣ ಕೊರಿಯಾ ನಂತರದ ಸ್ಥಾನದಲ್ಲಿ ಅಮೆರಿಕ ದೇಶ ಇದೆ. ಯುಎಸ್‌ಸಿಐಆರ್‌ಎಫ್ ಇದನ್ನು ಗಮನಿಸಿದಂತಿಲ್ಲ. ನಮ್ಮ ದೇಶದಲ್ಲಿ ಆರು ಧರ್ಮಗಳ (ಮುಸ್ಲಿಂ, ಕ್ರೈಸ್ತ, ಸಿಖ್, ಜೈನ, ಬೌದ್ಧ, ಪಾರ್ಸಿ) ಅಲ್ಪಸಂಖ್ಯಾತರು ಒಟ್ಟಾಗಿ ಒಟ್ಟಾರೆ ಜನಸಂಖ್ಯೆಯ 19.3%ದಷ್ಟು ಇದ್ದಾರೆ. ಅಲ್ಪಸಂಖ್ಯಾತರ ಹಿತವನ್ನೂ ಬಹುಸಂಖ್ಯಾತರಂತೆಯೇ ಕಾಯಲು ನಮ್ಮ ಸಂವಿಧಾನದಲ್ಲೂ ಧರ್ಮನಿರಪೇಕ್ಷತೆಯನ್ನು ಸೇರಿಸಲಾಗಿದೆ. ಅಲ್ಪಸಂಖ್ಯಾತ ಹಿತಚಿಂತನೆ ನೋಡಿಕೊಳ್ಳುವುದಕ್ಕಾಗಿಯೇ ಕೇಂದ್ರದಲ್ಲಿ ಅಲ್ಪಸಂಖ್ಯಾತರ ವ್ಯವಹಾರಗಳ ಸಚಿವಾಲಯ ಇದೆ. ಈ ದೇಶದ ಮುಖ್ಯಮಂತ್ರಿ, ರಾಜ್ಯಪಾಲ, ರಾಷ್ಟ್ರಪತಿ ಹುದ್ದೆಯನ್ನೂ ಭಾರತೀಯ ಅಲ್ಪಸಂಖ್ಯಾತರು ಜನಮತದಿಂದಲೇ ಅಲಂಕರಿಸಿದ್ದಾರೆ. ಭಾರತದ ಜನಸಂಖ್ಯೆಯ ಸುಮಾರು 14%ದಷ್ಟು, ಅಂದರೆ 20 ಕೋಟಿ ಮಂದಿ ಮುಸ್ಲಿಮರು ಇಲ್ಲಿ ಇದ್ದಾರೆ. ಇದು ದೇಶದ ಎರಡನೇ ಅತಿ ದೊಡ್ಡ ಧಾರ್ಮಿಕ ಸಮುದಾಯ. ಇಂಡೋನೇಷ್ಯಾ ಹಾಗೂ ಪಾಕಿಸ್ತಾನದ ಬಳಿಕ ಅತಿ ಹೆಚ್ಚು ಮುಸ್ಲಿಮರು ಇರುವ ದೇಶ ಎಂದರೆ ಭಾರತ. ಇನ್ನುಳಿದ ಇಸ್ಲಾಮಿಕ್ ದೇಶಗಳೆನಿಸಿಕೊಂಡವು ಕೂಡ ಭಾರತದಷ್ಟು ಸಂಖ್ಯೆಯ ಮುಸ್ಲಿಮರನ್ನು ಹೊಂದಿಲ್ಲ. ಭಾರತದಲ್ಲಿ ಎರಡೂ ಧರ್ಮಗಳೂ ಸಾಕಷ್ಟು ಸಾಮರಸ್ಯದಿಂದ ಬಾಳುತ್ತಿವೆ. ಪಾಕಿಸ್ತಾನ, ಇರಾನ್ ಮುಂತಾದ ಅಪ್ಪಟ ಮುಸ್ಲಿಂ ದೇಶಗಳಿಗಿಂತ ಭಾರತೀಯ ಮುಸ್ಲಿಮರು ಹೆಚ್ಚು ಸ್ವಾತಂತ್ರ್ಯ ಮತ್ತು ಸೌಕರ್ಯ ಹೊಂದಿದ್ದಾರೆ. ಹಾಗೆ ನೋಡಿದರೆ ಮುಸ್ಲಿಂ ದೇಶಗಳಲ್ಲೇ ಮುಸ್ಲಿಮರು ಸುರಕ್ಷಿತವಾಗಿಲ್ಲ. ಪಾಕಿಸ್ತಾನ, ಆಫ್ಘಾನಿಸ್ತಾನದ ಮಸೀದಿಗಳಲ್ಲೇ ಬಾಂಬ್ ಇಟ್ಟು ಸ್ಫೋಟಿಸಲಾಗುತ್ತಿದೆ. ಅಲ್ಲಿಯ ಅಲ್ಪಸಂಖ್ಯಾತರು ನಿತ್ಯ ನರಕ ಯಾತನೆ ಅನುಭವಿಸುತ್ತಿದ್ದಾರೆ. ಈ ಸೋಗಲಾಡಿ ವರದಿ ಅದನ್ನೇನಾದರೂ ನೆನಪಿಸಿಕೊಂಡಿದೆಯೇ ಈ ವರದಿಯನ್ನು ಹೊರಡಿಸಿದ ಅಮೆರಿಕದ ಬುಡದಲ್ಲಿ ಏನಿದೆ ಎಂದು ಸ್ವಲ್ಪ ನೋಡೋಣ. ಅತಿ ಹಳೆಯ ಪ್ರಜಾಪ್ರಭುತ್ವ ದೇಶ ಎನಿಸಿಕೊಂಡ ಆ ದೇಶದಲ್ಲಿ ಇನ್ನೂವರೆಗೂ ಒಬ್ಬ ಮಹಿಳೆಯೂ ಅಧ್ಯಕ್ಷರಾಗಲು ಸಾಧ್ಯವಾಗಲಿಲ್ಲ. ಬರಾಕ್ ಒಬಾಮರಂಥ ಅಲ್ಪಸಂಖ್ಯಾತರು ಅಧ್ಯಕ್ಷರಾಗಲು ಹಲವು ಶತಮಾನಗಳೇ ಬೇಕಾಯಿತು. ಮಹಿಳೆಯರೂ ತಮ್ಮ ಮತದಾನದ ಹಕ್ಕನ್ನು ಪಡೆಯಲು ಬಡಿದಾಡಬೇಕಾಯಿತು. ಇನ್ನು ಅಲ್ಲಿನ ಆಫ್ರಿಕನ್ ಸಮುದಾಯ ಅನುಭವಿಸುತ್ತಿರುವ ಸಂಕಷ್ಟವನ್ನು ಹೇಳಬೇಕಾಗಿಯೇ ಇಲ್ಲ. ಇವರನ್ನು ಇಲ್ಲಿ ನೂರಾರು ವರ್ಷಗಳ ಕಾಲ ಜೀತದಾಳುಗಳಾಗಿ ದುಡಿಸಿಕೊಳ್ಳಲಾಗುತ್ತಿತ್ತು. ಇದನ್ನು ಹೋಗಲಾಡಿಸಲು ಲಿಂಕನ್‌ನಂಥ ಮುತ್ಸದ್ದಿ ಬಲಿದಾನ ಮಾಡಬೇಕಾಯಿತು. ಈಗಲೂ ಅಲ್ಲಿ ಕರಿಯರ ಸಮುದಾಯದ ಮೇಲೆ ದೌರ್ಜನ್ಯ ನಡೆಯುತ್ತಲೇ ಇದೆ. ಇದನ್ನು ವಿರೋಧಿಸಿ ನಡೆಸಲಾಗುತ್ತಿರುವ ಬ್ಲ್ಯಾಕ್ ಲೈವ್ಸ್ ಮ್ಯಾಟರ್ ಚಳವಳಿಯನ್ನೂ ಇಲ್ಲಿ ನೆನಪಿಸಿಕೊಳ್ಳಬಹುದು. ಇನ್ನು ಅಲ್ಲಿನ ಮೂಲವಾಸಿ ಅಮೆರಿಕನ್ ಸಮುದಾಯದವರನ್ನು ಯಾವ ರೀತಿ ನಿರ್ಮೂಲನ ಮಾಡಲಾಯಿತು ಎಂಬುದು ಚರಿತ್ರೆಯಲ್ಲಿ ಸೇರಿಹೋಗಿರುವ ಕರಾಳ ಅಧ್ಯಾಯಗಳಲ್ಲೊಂದು. ಇಂದು ಹುಡುಕಿದರೂ ಆ ಜನಾಂಗ ಅಲ್ಲಿ ಸಿಗುವುದಿಲ್ಲ. ಇನ್ನು ಮುಸ್ಲಿಮರ ವಿಷಯಕ್ಕೆ ಬಂದರೆ, 9/11 ಘಟನೆಯ ನಂತರ ಅಲ್ಲಿ ಪ್ರತಿಯೊಬ್ಬ ಮುಸ್ಲಿಮನನ್ನೂ ಶಂಕಿತ ಭಯೋತ್ಪಾದಕನಂತೆಯೇ ನೋಡಲಾಗುತ್ತದೆ. ಮುಸ್ಲಿಮರನ್ನು ಈ ಅನುಮಾನದಿಂದಾಗಿಯೇ ಅಲ್ಲಿನ ಸರ್ಕಾರಿ ಆಡಳಿತಾತ್ಮಕ ಹುದ್ದೆಗಳಲ್ಲಿ ಒಳಬಿಟ್ಟುಕೊಳ್ಳಲಾಗುತ್ತಿಲ್ಲ. ಇಂಥ ದೇಶ, ಭಾರತದಂಥ ವಸುಧೈವ ಕುಟುಂಬಕಂ ಮಂತ್ರವನ್ನು ಸಾರಿದ ಪುರಾತನ ಸಂಸ್ಕೃತಿಯ ದೇಶಕ್ಕೆ ಬುದ್ಧಿವಾದ ಹೇಳುವುದು ಒಂದು ಕೆಟ್ಟ ಜೋಕ್.

> ''ಭಾರತ ಸೇರಿ 17 ದೇಶಗಳಲ್ಲಿ ಜನರು ತಮ್ಮ ಧರ್ಮವನ್ನು ಅನುಸರಿಸುವ, ಧಾರ್ಮಿಕ ವಿಚಾರಗಳ ಮೇಲೆ ನಂಬಿಕೆ ಇರಿಸುವ ಸ್ವಾತಂತ್ರ್ಯದ ಉಲ್ಲಂಘನೆಯಾಗುತ್ತಿದೆ. ಧಾರ್ಮಿಕ ಸ್ವಾತಂತ್ರ್ಯಕ್ಕೆ ಧಕ್ಕೆ ತರುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಭಾರತದಲ್ಲಿ ರಾಷ್ಟ್ರೀಯವಾದಿ ನೀತಿಗಳ ಹೇರಿಕೆಯಿಂದಾಗಿ ಇತರ ಧರ್ಮಗಳಲ್ಲಿ ನಂಬಿಕೆ ಇಟ್ಟುಕೊಂಡವರಿಗೆ ಸಮಸ್ಯೆಯಾಗಿದೆ. ದ್ವೇಷ ಕಾರುವ ವಾಕ್ಚಾತುರ್ಯ, ಕೋಮುವಾದದಿಂದ ಕೂಡಿದ ಹಿಂಸಾಚಾರಗಳನ್ನು ನಿಯಂತ್ರಿಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ. ಇದು ಭಾರತದಲ್ಲಿ ಧಾರ್ಮಿಕ ಸ್ವಾತಂತ್ರ್ಯಕ್ಕೆ ಧಕ್ಕೆ ತರುತ್ತಿರುವುದಕ್ಕೆ ಉದಾಹರಣೆಯಾಗಿದೆ'' ಎಂದು ಹೇಳಿದೆ. ಇದಕ್ಕೆ ಭಾರತ ಸರ್ಕಾರ ತಿರುಗೇಟು ನೀಡಿದ್ದು,




• ಹಿಂದಿನ ಸಂಚಿಕೆಯಿಂದ

ಅದೊಂದು ಅದ್ಭುತ ದ್ವಂದ್ವ. ಮೊದಮೊದಲು ರಾಧೇಯನು ತಮ್ಮನ ಬಾಣಗಳಿಂದ ನೊಂದನು. ನೋವು ಸಹಿಸಲಾಗದೆ ರಥದ ಮೂಕಿಯ ಮೇಲೆ ಒರಗಿ ಮೂರ್ಛೆಹೋದನು. ಎಚ್ಚೆತ್ತು ಮುಂದುವರೆಸಿದನು. ಸಾತ್ಯಕಿ ಮೊದಲಾದವರು ಯುಧಿಷ್ಠಿರನ ನೆರವಿಗೆ ಬಂದರೂ ಅವರನ್ನೆಲ್ಲ ನಿವಾರಿಸಿ ದ್ವಂದ್ವವನ್ನೇ ಮುಂದುವರೆಸಿ, ತನ್ನ ಎಂದಿನ ತಂತ್ರದಂತೆ ಮೊದಲು ಯುಧಿಷ್ಠಿರನ ಬಿಲ್ಲನ್ನು ಮುರಿದು, ನಗುನಗುತ್ತ ಅವನ ಕವಚವನ್ನು ಹರಿದ. ಯುಧಿಷ್ಠಿರನ ಮೈಯೆಲ್ಲ ರಕ್ತಮಯವಾದದ್ದನ್ನು ನೋಡಲಾಗದಿದ್ದರೂ, ಯುದ್ಧವೆಂದ ಮೇಲೆ ಮಾಡಲೇಬೇಕಲ್ಲ! ನಗುತ್ತಲೇ ಯುಧಿಷ್ಠಿರನೆಸೆದ ಭಲ್ಲೆಯೊಂದನ್ನು ಎರಡಾಗಿ ಕತ್ತರಿಸಿದ. ಯುಧಿಷ್ಠಿರನ ಪತಾಕೆಯನ್ನು ನೆಲಕ್ಕೊರನಿಸಿದ. ಕ್ಷಣಮಾತ್ರದಲ್ಲಿ ಕೊಲ್ಲಬಹುದಾದ ಅಸಹಾಯನನ್ನಾಗಿಸಿದ ಮೇಲೆ, ಅವನನ್ನು ತನ್ನ ಬಿಲ್ಲಿನ ತುದಿಯಿಂದ ಮುಟ್ಟಿ, ''ಯುಧಿಷ್ಠಿರ, ನೀನು ಪ್ರಖ್ಯಾತ ಕುರುವಂಶದಲ್ಲಿ ಹುಟ್ಟಿದವನು, ಪಾಂಡವ ಜ್ಯೇಷ್ಠ. ನಾನೋ, ನೀನು ಹೇಳಿದ ಹಾಗೆ ಕೇವಲ ಸೂತಪುತ್ರ. ಕ್ಷತ್ರಿಯನಾದ ನೀನು ಶತ್ರುಗಳನ್ನು ಕೊಲ್ಲುವುದರಲ್ಲಿ ನಿಷ್ಣಾತನಾಗಿರಬೇಕಲ್ಲವೆ? ಆದರೆ ಹಾಗೇನೂ ಕಾಣಿಸುತ್ತಿಲ್ಲವಲ್ಲ? ಸ್ವಭಾವದಿಂದ ನೀನು ಬ್ರಾಹ್ಮಣ; ಕ್ಷತ್ರಿಯನಾಗಿ ಹುಟ್ಟಬಾರದಿತ್ತು.

ನಿನಗಿಂತ ಮಿಗಿಲಾದ ಶೂರರೊಡನೆ ಹೋರಾಡಲು ಹೋಗಬೇಡ. ಸೋಲಿಸುವೆನೆಂಬ ದೃಢವಿಶ್ವಾಸವಿಲ್ಲದೆ ಯಾರನ್ನೂ ದ್ವಂದ್ವಕ್ಕೆ ಕರೆಯಬೇಡ. ಮನೆಗೆ ಹೋಗು ಮಗು, ಅಥವಾ ನಿನ್ನ ತಮ್ಮ ಅರ್ಜುನನಿದ್ದಲ್ಲಿಗೆ ಹೋಗು. ನೀನು ರಾಧೇಯನನ್ನು ದ್ವಂದ್ವದಲ್ಲಿ ಎಂದೂ ಕೊಲ್ಲಲಾರೆ ಎಂದು ಹೇಳಿ, ಮರುಕ್ಷಣವೇ ರಾಧೇಯನು ಮುಖ ತಿರುಗಿಸಿ ಹೊರಟುಹೋದ. ತನ್ನನ್ನು ತಾನೇ ಶಿಕ್ಷಿಸಿಕೊಳ್ಳುವವನಂತೆ, ಇಮ್ಮಡಿ ಶೌರ್ಯದಿಂದ ಸೈನ್ಯವನ್ನು ಕೊಚ್ಚತೊಡಗಿದ. ಭೀಮ ಮೊದಲಾದ ವೀರರು ಧಾವಿಸಿ ಬಂದರೂ, ಅವನ ಪ್ರತಾಪವನ್ನು ಸ್ವಲ್ಪವೂ ತಡೆಯಲು ಸಾಧ್ಯವಾಗಲಿಲ್ಲ. ರಾಧೇಯನ ಮೇಲೆ ಕೋಪಗೊಂಡ ಭೀಮನು ಅವನನ್ನೆ ಅನುಸರಿಸಿಕೊಂಡು ಹೋದ. ಬರುತ್ತಿರುವ ಭೀಮನನ್ನು ಕಂಡು ಶಲ್ಯನು, ''ರಾಧೇಯ, ನೋಡು. ಭೀಮನಿಗೆ ನಿನ್ನ ಮೇಲೆ ಕೋಪ ಬಂದಿದೆ. ಅಭಿಮನ್ಯುವನ್ನು ಕೌರವರು ಕೊಂದಾಗಲಾಗಲಿ, ಅವನ ಮಗ ಘಟೋತ್ಕಚ ಸತ್ತಾಗಲಾಗಲಿ ಅವನಿಗೆ ಇಷ್ಟು ಕೋಪ ಬಂದಿರಲಿಲ್ಲ. ಇಂದು ಅವನು ಸಾಕ್ಷಾತ್ ಯಮನಂತೆಯೇ ಕಾಣುತ್ತಿರುವನು. ಏಕೆಂದು ನನಗೆ ಅಚ್ಚರಿಯಾಗಿದೆ ಎನ್ನಲು, ರಾಧೇಯನು, ''ಹೌದು, ನಾನು ಅವನ ಅಣ್ಣನನ್ನು ಇದೇ ತಾನೆ ಅಪಮಾನಿಸಿದೆನಲ್ಲ, ಅದಕ್ಕೆ ಭೀಮನಿಗೆ ಕೋಪ ಬಂದಿದೆ. ಪಾಂಡವರಲ್ಲಿ ಜ್ಯೇಷ್ಠನೆಂದರೆ ಸಾಕ್ಷಾತ್ ದೇವರಂತೆ; ನಿನಗೆ ತಿಳಿಯದೆ ಪಾಂಡವಜ್ಯೇಷ್ಠನು ಇತರ ಪಾಂಡವರ ಪ್ರೇಮ, ಭಕ್ತಿಗಳಿಗೆ ಬಾಧ್ಯನಾಗುತ್ತಾನೆ. ಅವನಿಗಾಗಿ ಅವರು ಸಾಯಲೂ ಸಿದ್ಧ. ನಾನೀಗ ಭೀಮನೊಡನೆ ಯುದ್ಧಮಾಡುವೆ ಎಂದನು. ಅವರಿಬ್ಬರ ಕಾಳಗವೂ ಬಹಳ ಹೊತ್ತು ನಡೆಯಿತು.

ಮುಂದುವರಿಯುವುದು...

# ನೃತ್ಯಗುರು ಸಹನಾ ಚೇತನ ರವರ "ಕವಿ ಕಂಡ ಯುಗಾದಿ" ಸಂಪಾದನಾ ಕೃತಿಯ ಪರಿಚಯ



ಸಾಮಾಜಿಕ ಕಳಕಳಿ
ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ
ಶಿಕ್ಷಕಿ, ಹಾಸನ

• ಉದಯವಾಹಿನಿ, ವಿಶೇಷ

**ಗುರುವಾಗಿ ದಾರಿಯನು ತೋರಿಸುತ ಕಲಿಸುತಿರಲು**
**ಮರುಳಾಗಿ ಬಾಳದಲೆ ಸಾಗುತಿರಲು**
**ಗರಿಯನ್ನು ಕೆದರುತಲಿ ನವಿಲಿನದೆ ಕುಣಿತದಲಿ**
**ಸರಿಯಾಗಿ ಕಾಣುತಿರೆ ಲಕ್ಷ್ಮಿ ದೇವಿ.......**

ಈ ಮೇಲೆ ತಿಳಿಸಿದಂತೆ ನೃತ್ಯ ಗುರು ಸಹನಾ ಚೇತನ ರವರು ಭರತನಾಟ್ಯದಲ್ಲಿ ಗುರುವಾಗಿದ್ದು ಅದೇ ರಂಗದಲ್ಲಿ ಹಲವಾರು ಶಿಷ್ಯರನ್ನು ಪಡೆದವರು. ಮಹಿಳೆಯು ಸಹ ಏನಾದರೂ ಸಾಧನೆ ಮಾಡಬಹುದು ಎಂಬುದನ್ನು ಇವರನ್ನು ನೋಡಿದರೆ ತಿಳಿಯುತ್ತದೆ. ಹೊಸ ವರ್ಷವು ಕ್ಯಾಲೆಂಡರ್ ಗೆ ಸೀಮಿತವಾಗದೆ ಪಂಚಾಂಗದ ಹೊಸ ವರ್ಷವಾದಂತಹ ಯುಗಾದಿ ಹಬ್ಬವನ್ನು ಮರೆಯದಂತೆ ಆಚರಿಸಬೇಕು. ಸಾಹಿತ್ಯ ಕ್ಷೇತ್ರಕ್ಕೆ ತನ್ನದೇ ಆದ ಅಳಿಲು ಸೇವೆಯನ್ನು ಸಲ್ಲಿಸುತ್ತಿರುವ ಶ್ರೀಮತಿ ಸಹನಾ ಚೇತನ್ ರವರು ತಮ್ಮ ಪತಿಯಾದಂತಹ ಶ್ರೀ ಚೇತನ್ ಎಸ್ ರವರ ಸಹಕಾರದಿಂದ ಯುಗಾದಿ ಹಬ್ಬಕ್ಕೆ ಸಂಬಂಧಿಸಿದಂತೆ ಕವನಗಳನ್ನು ಆಹ್ವಾನಿಸಲು ಪ್ರಾರಂಭಿಸಿದರಂತೆ ಸಾಹಿತ್ಯ ಲೋಕದಲ್ಲಿ ಓದುಗರು ಕಡಿಮೆಯಾಗುತ್ತಿರುವುದು ಗಮನಿಸಿ ಸಾಹಿತ್ಯದ ಬೆಲೆ ಕಡಿಮೆಯಾಗಬಾರದು ಎಂಬುದು ಇವರ ಆಸೆಯಾಗಿತ್ತು. ನಿಸ್ವಾರ್ಥ ಸೇವೆಯಲ್ಲಿ ಇವರು ಹದಿನಾಲ್ಕು ನೇ ವರ್ಷದ ಕವನ ಸಂಕಲನವನ್ನು ಹೊರ ತಂದಿದ್ದಾರೆ . ಇಲ್ಲಿ ಯಾವುದೇ ರೀತಿಯ ಮರುಳಾಗಿ ಬಾಳದಲೆ ಪ್ರೇಮದಾಯಕರಾದವರು. ಗರಿ ಬಿಚ್ಚಿ ಕುಣಿಯುವ ನವಿಲಿನ ರೀತಿಯ ಸೌಂದರ್ಯದ ಜೊತೆಗೆ ಬಹುಮುಖ ಪ್ರತಿಭೆ ಯಾದವರು. ಸದಾ ನಗು ಮುಖವನ್ನು ಹೊಂದಿದ್ದು. ಶಾಂತಿ ಮತ್ತು ತಾಳ್ಮೆಯಲ್ಲಿ ಕಾರ್ಯವನ್ನು ನಿರ್ವಹಿಸುವ ಶ್ರೀಮತಿ ಸಹನಾ ಚೇತನ ರವರು ಪ್ರತಿ ವರ್ಷವೂ ಯುಗಾದಿಯ ಹಬ್ಬದಂದು ಯುಗಾದಿಗೆ ಸಂಬಂಧಿಸಿದಂತಹ ಕವನಗಳನ್ನು ಸಂಗ್ರಹಿಸಿ ಕವನ ಸಂಕಲನ ಮಾಡುವುದನ್ನು ಬಿಡದೆ 14 ವರ್ಷ ಅವರು ಪೂರೈಸಿದ್ದಾರೆ. ಮತ್ತು ಯಶಸ್ವಿಯಾಗಿದ್ದಾರೆ. ರಾಜ್ಯದ ಎಲ್ಲಾ ಮೂಲೆಯ ಕವಿಗಳ ಕವನ ಸಂಕಲನಗಳನ್ನು ಸಂಗ್ರಹಿಸಿ ಸಂಪಾದನಾ



ಕೃತಿಯನ್ನು ಹೊರ ತರುತ್ತಿದ್ದಾರೆ . ಇತ್ತೀಚೆಗೆ ಅವರು ವಿದ್ಯಾರ್ಥಿಗಳಿಗೂ ಪ್ರೋತ್ಸಾಹವನ್ನು ನೀಡುತ್ತಿದ್ದಾರೆ. 2024 ರ ಸಾಲಿನ ಕವಿ ಕಂಡ ಯುಗಾದಿ ಈ ಕವನ ಸಂಕಲನದ ಸಂಗ್ರಹದಲ್ಲಿ ಬಂದಂತಹ ಕವನಗಳೆಲ್ಲ ಪ್ರಬುದ್ಧತೆಯನ್ನು ಒಳಗೊಂಡಂತಹ ಕವನಗಳಾಗಿದ್ದು. ಇಂದಿಗೂ ಸಾಹಿತ್ಯ ಲೋಕದಲ್ಲಿ ಓದುಗರು ರಚಿಸುವವರು ಇದ್ದಾರೆ ಎಂಬುದನ್ನು ತಿಳಿದುಕೊಂಡರು.

ಯಾವುದೇ ರೀತಿಯ ಶುಲ್ಕವನ್ನು ಪಡೆಯದಂತೆ ನಿಸ್ವಾರ್ಥ ಸೇವೆಯಲ್ಲಿ ಕವನಗಳನ್ನು ಸಂಗ್ರಹಿಸಿ ಸಂಪಾದನಾ ಕೃತಿಯನ್ನು ಮಾಡಿ ಕವನಗಳನ್ನು ಅವರ ಕವಿಗಳ ಮನೆಗಳಿಗೆ ಪುಸ್ತಕಗಳನ್ನು ತಲುಪಿಸುವ ಕೆಲಸವನ್ನು ಯಶಸ್ವಿಯಾಗಿ 14 ವರ್ಷ ನಡೆಸಿದ್ದಾರೆ. ಪುಸ್ತಕದ ವಿಶೇಷವೆಂದರೆ ಹಿಂದೂ ಧರ್ಮದ ಉಳಿವಿನ ಜೊತೆಗೆ ಸಂಸ್ಕೃತಿಯನ್ನು ಉಳಿಸುವ ಅಂಶಗಳನ್ನು ಒಳಗೊಂಡಿದ್ದಾರೆ.ಈ ಪುಸ್ತಕ ತೆರೆದ ನಂತರದಲ್ಲಿ ಸಂಪಾದಕೀಯ ವನ್ನು ನೃತ್ಯ ಗುರು ಸಹನಾ ಚೇತನ್ ರವರು ಬರೆದಿದ್ದು ಅವರ ಕನ್ನಡದ ಮೇಲಿನ ಪ್ರೀತಿಯನ್ನು ಕಾಣಬಹುದಾಗಿದೆ. ಹೊಸ ಯುವ ಕವಿಗಳ ಹುಡುಕಾಟದ ಜೊತೆಯಲ್ಲಿ ಸಾಹಿತ್ಯವನ್ನು ಉಳಿಸುವ ಕಾರ್ಯವನು ಕೈಗೊಂಡಿದ್ದು 14 ವರ್ಷ ಸಂಪೂರ್ಣವಾಗಿ ಯಶಸ್ವಿಯಾಗಿ ನಡೆಸಿದ್ದಾರೆ. ಈ ಪುಸ್ತಕದಲ್ಲಿ ಸಂಪಾದಕೀಯದ ಮಾತಿನಂತೆ 90ಕ್ಕೂ ಹೆಚ್ಚು ಕವನಗಳನ್ನು ಆಯ್ದುಕೊಂಡಿದ್ದು. ಈ ಪುಸ್ತಕದಲ್ಲಿ 6ನೇ ತರಗತಿಯ ಶಿವಮೊಗ್ಗದ ಸಂಸ್ಕೃತಿ ವಿ. ಮತ್ತು ಏಳನೇ ತರಗತಿಯ ಹಾಸನದ ಕು.ಟೀಷ್ಮಾ ಗೌಡ. ಕೆ.ಆರ್ . ತಮ್ಮ ಯುಗಾದಿಯ ಮುಗ್ಧ ಯೋಚನೆಯನ್ನು ಕವನದ ಮುಖೇನ ಬಿಂಬಿಸಿರುವುದನ್ನು ತಿಳಿಸಿದ್ದಾರೆ. ಮತ್ತು ಮನಪೂರ್ವಕ ಶ್ಲಾಘನೆ ಮಕ್ಕಳಿಗೆ ನೀಡಿದ್ದಾರೆ. ನಾನು ಕಂಡಂತೆ ಇವರು ಬಹಳಷ್ಟು ಅವಕಾಶವನ್ನು ನೀಡಿದ್ದಾರೆ.

> **ಪುಸ್ತಕಕ್ಕೆ ಯಾವುದೇ ಹಣ ಪಡೆಯದೇ ಪ್ರತಿಯೊಬ್ಬರಿಗೂ ಉಚಿತವಾಗಿ ಪುಸ್ತಕಗಳನ್ನು ನೀಡುವುದರ ಜೊತೆಗೆ ಸಾಹಿತ್ಯದ ಸೇವೆಯನ್ನು ಮಾಡುತ್ತಿದ್ದಾರೆ ಪುಸ್ತಕದ ಸಂಪಾದಕೀಯದ ನಂತರ ನೋಡಿದರೆ ಎಸ್ ಎಲ್ ಚನ್ನಬಸಪ್ಪ ( ಗೌರವಾಧ್ಯಕ್ಷರು ) ಎನ್ ಆರ್ ಪ್ರಕಾಶ್ ( ಅಧ್ಯಕ್ಷರು) ಶುಭಕೋರಿದ್ದಾರೆ. ಆನಂತರದಲ್ಲಿ ಸಹಚೇತನ ನಾಟ್ಯಲಯದ ವಿವರಗಳನ್ನು ಸುಶ್ರೀ ಪ್ರಕಾಶನವರು ನೀಡಿದ್ದಾರೆ. ನಂತರ ಪರಿವಿಡಿಯನ್ನು ನೋಡಬಹುದು ಒಟ್ಟು 95 ಕವನಗಳನ್ನು ಈ ಕವಿ ಕಂಡ ಯುಗಾದಿ 2024ನೇ ಸಾಲಿನ ಕವನ ಸಂಕಲನ ಒಳಗೊಂಡಿದ್ದು ಒಟ್ಟು 126 ಪುಟಗಳನ್ನು ಒಳಗೊಂಡಿದೆ. ಅದರಲ್ಲಿ ಕೆಲವು ಕವನಗಳನ್ನು ನೋಡಬಹುದೆಂದರೆ.**

ಮುಂದುವರಿಯಲಿದೆ....

## ಓಂಕಾರ ಆಶ್ರಮದಲ್ಲಿ ನಿರಂತರ ಭಜನೋತ್ಸವ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ನಶಿಸಿ ಹೋಗುತ್ತಿರುವ ಭಜನಾ ಪದ್ಧತಿಯ ಪುನರುತ್ಥಾನಕ್ಕಾಗಿ ವಿಶ್ವಶಾಂತಿಗಾಗಿ ವಿಶ್ವಕ್ಕೆ ಜ್ಞಾನದ ಬೆಳಕನ್ನು ಹರಡಿದ ಹಿಂದೂ ಧರ್ಮದ ಸಂಘಟನೆಯ ನಿಟ್ಟಿನಲ್ಲಿ ಅಖಿಲ ಕರ್ನಾಟಕ ಭಜನಾ ಪರಿಷತ್ತು (ರಿ ) ಗಿರಿನಗರ, ವತಿಯಿಂದ ಆಯೋಜನೆ ಬೆಂಗಳೂರಿನ ಕೆಂಗೇರಿ- ಉತ್ತರಹಳ್ಳಿ ಮುಖ್ಯರಸ್ತೆಯಲ್ಲಿರುವ ಶ್ರೀನಿವಾಸಪುರದ ಓಂಕಾರ ಆಶ್ರಮದಲ್ಲಿ( ಜೆ ಎಸ್ ಎಸ್ ಇಂಜಿನಿಯರಿಂಗ್ ಕಾಲೇಜು ಹಿಂಭಾಗ) ನಿರಂತರ ಭಜನೋತ್ಸವದ ಸಮಾರೋಪ ಸಮಾರಂಭವನ್ನು ಆಯೋಜಿಸಲಾಗಿತ್ತು

ಓಂಕಾರಶ್ರಮದ ಪೂಜ್ಯ ಶ್ರೀ ಮಧುಸೂದನಂದಪುರಿ ಸ್ವಾಮಿಗಳು, ಕೆ ಆರ್ ಪುರಂ ರಾಮಕೃಷ್ಣ ವಿವೇಕಾನಂದ ಸಾಧನ ಕೇಂದ್ರದ ಚಂದ್ರೇಶಾನಂದ ಜಿ ರವರ ದಿವ್ಯ ಸಾನಿಧ್ಯದಲ್ಲಿ, ಕರ್ನಾಟಕ ದಕ್ಷಿಣ ಪ್ರಾಂತ ಸಂಘ ಚಾಲಕರಾದ ಜಿ.ಎಸ್ ಉಮಾಪತಿ ದಿಕ್ಸೂಚಿ ಭಾಷಣ ಮಾಡಿದರು.

ಆಯೋಜಕರಾದ ಅಧ್ಯಕ್ಷ ಡಾ.ಕೆ ವಿ ಮುರಳಿಧರ ಶರ್ಮ ಪ್ರಾಸ್ತವಿಕ ಮಾತುಗಳನ್ನು ಆಡುತ್ತ ಸತ್ಸಂಗ ಭಜನಾ ಮಹಾ ಮಂಡಳಿ ಸಭಾ ರಾಷ್ಟ್ರಮಟ್ಟದಲ್ಲಿ ಭಜನಾಮೇಳ ಆಯೋಜಿಸುವಲ್ಲಿ ಒಂದು ದಿಟ್ಟ ಹೆಜ್ಜೆ ಇಟ್ಟು 365 ದಿನಗಳ ನಿರಂತರ ಭಜನೋತ್ಸವವನ್ನು ಆರಂಭಿಸಿ, ನಶಿಸಿ ಹೋಗುತ್ತಿರುವ ಭಜನಾ ಪದ್ಧತಿಯ ಪುನರುತ್ಥಾನಕ್ಕಾಗಿ ವಿಶ್ವಶಾಂತಿಗಾಗಿ ವಿಶ್ವಕ್ಕೆ ಜ್ಞಾನದ ಬೆಳಕನ್ನು ಹರಡಿದ ಹಿಂದೂ ಧರ್ಮದ ಸಂಘಟನೆಯ ನಿಟ್ಟಿನಲ್ಲಿ ಆಯೋಜಿಸಿ ಬೆಂಗಳೂರು ಮಹಾನಗರದ ಹಲವಾರು ಭಜನಾ ಮಂಡಳಿಗಳನ್ನು ಒಂದೇ ವೇದಿಕೆಯಲ್ಲಿ ತರುವ ಉದ್ದೇಶದಿಂದ 2019-20 ರಲ್ಲಿ 365 ದಿನಗಳ ನಿರಂತರ ಭಜನಾ ಉತ್ಸವವನ್ನು ಏರ್ಪಡಿಸಲಾಗಿತ್ತು. ಅದರ ಸಮಾರೋಪ ಸಮಾರಂಭ ಇದಾಗಿದ್ದು ಮುಂದಿನ ದಿನಗಳಲ್ಲಿ ನಗರದ ನಾನಾ ಭಾಗಗಳಲ್ಲಿ ನಾನಾ ಭಜನಾ ಮಂಡಳಿಗಳ ಒಕೆನಾ, ಧರ್ಮ ಜಾಗೃತಿ ಮಾಡಲು ಸಂಕಲ್ಪ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸಮಾರಂಭದ ವೇದಿಕೆಯಲ್ಲಿ ಅಖಿಲ ಭಾರತ ಬ್ರಾಹ್ಮಿನ್ ಫೆಡರೇಷನ್ ಮಾಲಿನಿ, ಗ್ಲೋಬಲ್ ವಿಷ್ಣು ಸಹಸ್ರನಾಮ ಫೆಡರೇಶನ್ ನಿರ್ದೇಶಕಿ ಮಂಗಳ ಭಾಸ್ಕರ್, ಏಕೆ ಬಿಎಮ್‌ಎಸ್ ಉಪಾಧ್ಯಕ್ಷ ಎಂಆರ್ ಶಿವಶಂಕರ್, ಕೊಟ್ಟೂರು ಅಮರನಾಥ ಯಾತ್ರಾ, ಸೇವಾ ಸಮಿತಿಯ ಕಾರ್ಯದರ್ಶಿ ಸಾಯಿ ಸತೀಶ್ ಕೋರಗಲ್ ಮತ್ತು ಏಕೆ ಬಿಪಿಯ ಕಾರ್ಯದರ್ಶಿ ಮಲ್ಲಿಕಾರ್ಜುನ ಟಿ ಎಸ್ ಉಪಸ್ಥಿತರಿದ್ದರು ಹಿರಿಯ ಭಜನಾ ಸಂಘಟಕ ಕೀರ್ತಿಶೇಷ ಡಾ ಬ್ರಹ್ಮತೇಜ ವೆಂಕಟರಾಮಯ್ಯ ಮಾರ್ಗದರ್ಶನದಲ್ಲಿ ಅಖಿಲ ಕರ್ನಾಟಕ ಸತ್ಸಂಗ ಭಜನಾ ಮಹಾಮಂಡಳಿಯ ವತಿಯಿಂದ ವರ್ಷಾದ್ಯಂತ ನಡೆದ ಭಜನಾತ್ಸವದಲ್ಲಿ ಪಾಲ್ಗೊಂಡ ಅನೇಕ ಭಜನಾ ಮಂಡಳಿಗಳಿಗೆ ಪ್ರಶಸ್ತಿ ಪತ್ರ ಮತ್ತು ಸ್ಮರಣಿಕೆಯನ್ನು ವಿತರಿಸಲಾಯಿತು. ವಿದ್ವಾನ್ ಖಾಸಿಂಮಲ್ಲಿಗೆ ಮಡುವು ನೇತೃತ್ವದ ತಂಡದ ಮಕ್ಕಳಿಂದ ವಿಶೇಷ ಶಿವ ತಾಂಡವ ಸ್ತೋತ್ರದ ಪ್ರಸ್ತುತಿ ನಡೆಯಿತು.

## ಬೆಂಗಳೂರಿನಲ್ಲಿ ಯುಪಿಎಸ್‌ಸಿ ತಯಾರಿ ಕುರಿತ ಸೆಮಿನಾರ್ ಆಯೋಜಿಸಿದ ವಿಷನ್ ಐಎಎಸ್

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಸಿವಿಲ್ ಸರ್ವೀಸಸ್ ಎಕ್ಸಾಮಿನೇಷನ್ (ಸಿಎಸ್‌ಇ) ಎಂಬುದು ಯೂನಿಯನ್ ಪಬ್ಲಿಕ್ ಸರ್ವಿಸ್ ಕಮಿಷನ್ ಭಾರತದಾದ್ಯಂತ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆ ಆಗಿದೆ. ಭಾರತೀಯ ಆಡಳಿತ ಸೇವೆ(ಐಎಎಸ್), ಭಾರತೀಯ ವಿದೇಶಾಂಗ ಸೇವೆ (ಐಎಫ್‌ಎಸ್) ಮತ್ತು ಭಾರತೀಯ ಪೊಲೀಸ್ ಸೇವೆ (ಐಪಿಎಸ್) ಸೇರಿದಂತೆ ಭಾರತ ಸರ್ಕಾರದ ಉನ್ನತ ನಾಗರಿಕ ಸೇವೆಗಳಿಗೆ ನೇಮಕಾತಿ ನಡೆಸುವ ಸಲುವಾಗಿ ಈ ಪರೀಕ್ಷೆ ನಡೆಸಲಾಗುತ್ತದೆ.

ಗಣಿತವನ್ನು ಐಚ್ಛಿಕ ವಿಷಯವನ್ನಾಗಿ ಆರಿಸಿಕೊಂಡಿದ್ದ ಕುಶ್ ಅಪಾರವಾದ ಶ್ರದ್ಧೆ ಮತ್ತು ಛಲದಿಂದ ಯಶಸ್ಸು ಸಾಧಿಸಿದ್ದಾರೆ. ನೆರುಲ್‌ನ ಡೆಲ್ಲಿ ಪಬ್ಲಿಕ್ ಸ್ಕೂಲ್‌ನಲ್ಲಿ ತನ್ನ ಶಾಲಾ ಶಿಕ್ಷಣವನ್ನು ಪೂರ್ಣಗೊಳಿಸಿದ ಅವರು ನಂತರ ಎಲೆಕ್ಟ್ರಿಕಲ್ ಇಂಜಿನಿಯರಿಂಗ್‌ನಲ್ಲಿ ಬಿ.ಟೆಕ್ ಮತ್ತು ಬಾಂಬೆಯ ಪ್ರತಿಷ್ಠಿತ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ ಕಮ್ಯುನಿಕೇಷನ್ ಆಂಡ್ ಸಿಗ್ನಲ್ ಪ್ರೊಸೆಸಿಂಗ್‌ನಲ್ಲಿ ಎಂ.ಟೆಕ್ ಅನ್ನು ಪೂರ್ಣಗೊಳಿಸಿದ್ದಾರೆ.


> **ಈ ಕುರಿತಂತೆ ವಿಷನ್ ಐಎಎಸ್ ಸಂಸ್ಥೆಯು ಅಖಿಲ ಭಾರತ ಮಟ್ಟದಲ್ಲಿ 11ನೇ ರಾಂಕ್ ಗಳಿಸಿದ್ದ ತಮ್ಮ ವಿದ್ಯಾರ್ಥಿ ಶ್ರೀ ಕುಶ್ ಮೋಟ್ವಾನಿ ಅವರಿಂದ ಯುಪಿಎಸ್‌ಸಿ ತಯಾರಿ ಕುರಿತು ಸೆಮಿನಾರ್ ಆಯೋಜಿಸಿತ್ತು. ಈ ಕಾರ್ಯಕ್ರಮದಲ್ಲಿ ಹಲವಾರು ಯುಪಿಎಸ್‌ಸಿ ಆಕಾಂಕ್ಷಿಗಳು ಭಾಗವಹಿಸಿದ್ದರು.**

ಸಂಶೋಧನಾ ಇಂಜಿನಿಯರ್‌ನಿಂದ ಹಿಡಿದು ಭಾರತೀಯ ಕಾರ್ಪೊರೇಟ್ ಕಾನೂನು ಸೇವೆ ಮತ್ತು ನಂತರ ಡೇಟಾ ವಿಜ್ಞಾನಿಯಾಗುವವರೆಗಿನ ಕುಶ್ ಅವರ ವೃತ್ತಿ ಪ್ರಯಾಣವು ವಿಶಿಷ್ಟವಾಗಿದೆ ಮತ್ತು ಅವರ ಬಹುಮುಖ ಆಸಕ್ತಿ, ಸಾಮರ್ಥ್ಯಕ್ಕೆ ಪುರಾವೆಯಾಗಿದೆ. ಈ ಸಮಾವೇಶದಲ್ಲಿ ಶ್ರೀ ಕುಶ್ ಮೋಟ್ವಾನಿ ಅವರು ತಮ್ಮ ಸ್ಫೂರ್ತಿದಾಯಕ ಕತೆಯನ್ನು ಹೇಳಿಕೊಂಡರು. ಸಮಯವನ್ನು ಪರಿಣಾಮಕಾರಿಯಾಗಿ ನಿರ್ವಹಿಸುವ ಕುರಿತು, ಅಧ್ಯಯನ ಯೋಜನೆಗಳನ್ನು ಹಾಕಿಕೊಳ್ಳುವ ಕುರಿತು, ಪೂರ್ವಸಿದ್ಧತಾ ಪ್ರಯಾಣದ ಉದ್ದಕ್ಕೂ ಸ್ಫೂರ್ತಿ ಕಾಪಾಡಿಕೊಳ್ಳುವ ಕುರಿತು ಅವರು ಆಕಾಂಕ್ಷಿಗಳಿಗೆ ಮಾರ್ಗದರ್ಶನ ನೀಡಿದರು.

ವಿಜಯನಗರದ ವಿಷನ್ ಐಎಎಸ್ ಬೆಂಗಳೂರು ಕೇಂದ್ರಕ್ಕೆ ಸೆಮಿನಾರ್ ಸಲುವಾಗಿ ಆಗಮಿಸಿದ್ದ ಎಲ್ಲಾ ಆಕಾಂಕ್ಷಿಗಳು ಕಾರ್ಯಕ್ರಮದ ಕುರಿತು ಮೆಚ್ಚುಗೆ ಸೂಚಿಸಿದರು. ಈ ಸೆಮಿನಾರ್ ಭವಿಷ್ಯದ ರಾಷ್ಟ್ರ ನಾಯಕರ ಪ್ರಯಾಣದಲ್ಲಿ ಸ್ಫೂರ್ತಿ ಮೂಡಿಸಲು ಯಶಸ್ವಿಯಾಯಿತು.

## ಮಳೆಗೆ ನಗರದಲ್ಲಿ ಹಲವು ಅವಾಂತರ; ಬಿಬಿಎಂಪಿ ವಿರುದ್ಧ ಆಕ್ರೋಶ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಆರು ತಿಂಗಳ ಸುದೀರ್ಘ ಕಾಯುವಿಕೆ ನಂತರ ಅಂತೂ ಇಂತು ಬೆಂಗಳೂರಿನಲ್ಲಿ ಉತ್ತಮವಾಗಿ ಮಳೆಯಾಗಿದೆ. ತೀರಾ ಹೆಚ್ಚು ಮಳೆಯಾಗದಿದ್ದರೂ, ವಾತಾವರಣ ತಂಪಾಗುವಂತೆ ಮಳೆಯಾಗಿದ್ದು, ಜನರಲ್ಲಿ ನೆಮ್ಮದಿ ತರಿಸಿದೆ.

ಆದರೆ ಆರು ತಿಂಗಳು ಮಳೆ ಬಿಡುವು ಕೊಟ್ಟಿದ್ದರೂ ಬಿಬಿಎಂಪಿ ಮಾತ್ರ ನಗರದಲ್ಲಿ ಮಳೆಯಾದರೆ ಆಗುವ ಸಮಸ್ಯೆಗಳನ್ನು ಬಗೆಹರಿಸುವ ಗೋಜಿಗೆ ಹೋಗಿಲ್ಲ. ಸಾಧಾರಣ ಮಳೆಗೆ ನಗರದ ಹಲವು ಕಡೆ ರಸ್ತೆಗಳು ಜಲಾವೃತವಾಗಿದ್ದು, ಟ್ರಾಫಿಕ್ ಜಾಮ್ ಉಂಟಾಗಿದೆ. ಹಲವು ಕಡೆಗಳಲ್ಲಿ ಅಂಡರ್ ಪಾಸ್‌ಗಳಲ್ಲಿ ನೀರು ತುಂಬಿಕೊಂಡಿದ್ದು, ವಾಹನ ಸಂಚಾರಕ್ಕೆ ಅಡ್ಡಿಯಾಗಿದೆ. ಇಷ್ಟು ಸಮಯ ಸಿಕ್ಕರೂ ಸಮಸ್ಯೆ ಸರಿಪಡಿಸಲು ಮುಂದಾಗದ ಬಿಬಿಎಂಪಿ ಅಧಿಕಾರಿಗಳ ವಿರುದ್ಧ ಜನ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಎಕ್ಸ್‌ನಲ್ಲಿ ಬೆಂಗಳೂರು ವೆದರ್ ಮ್ಯಾನ್ ಎನ್ನುವ ಬಳಕೆದಾರರು ನೀರು ತುಂಬಿಕೊಂಡಿರುವ ಚಿತ್ರವನ್ನು ಹಂಚಿಕೊಂಡು ಬಿಬಿಎಂಪಿ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದರು. ಹೊರ ವರ್ತೂಲ ರಸ್ತೆಯ ಹೊರಮಾವು ಅಂಡರ್ ಪಾಸ್‌ನಲ್ಲಿ ನೀರು ತುಂಬಿಕೊಂಡು ಸಮಸ್ಯೆ ಉಂಟಾಗಿತ್ತು. ಸ್ಥಳದಲ್ಲಿ ಕೆಲಸ ಮಾಡುತ್ತಿದ್ದ ಸಂಚಾರ ಪೊಲೀಸ್ ಸಿಬ್ಬಂದಿ ಅಭಿಲಾಷ್ ಮಳೆ ನೀರು ಚರಂಡಿಗೆ ಹೋಗುವಂತೆ ಮಾಡುವ ಮೂಲಕ ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು. ರಾಮಮೂರ್ತಿ ನಗರ ಸಂಪರ್ಕ ಕಲ್ಪಿಸುವ ಮುಖ್ಯರಸ್ತೆಯ ಚರಂಡಿಯಲ್ಲಿ ಮಣ್ಣು ಕಸ ತುಂಬಿರುವುದರಿಂದ ಅನೇಕ ಕಡೆಗಳಲ್ಲಿ ಚರಂಡಿಗೆ ನೀರು ಹೋಗದೆ, ರಸ್ತೆಯಲ್ಲಿ ನೀರು ನಿಂತ ಕಾರಣ ಹೊರಮಾವು ಕಡೆಯಿಂದ ರಾಮಮೂರ್ತಿನಗರ ಕಡೆಗೆ ವಾಹನಗಳ ಸಂಚಾರ ನಿಧಾನವಾಗಿತ್ತು. ಬಿನ್ನಿಮಿಲ್ ಜಂಕ್ಷನ್ ಬಳಿ ನೀರು ನಿಂತು ವಾಹನ ಸವಾರರು ಪರದಾಡುವಂತಾಗಿತ್ತು. ಪ್ರೀತಿಯ ಬಿಬಿಎಂಪಿ, ಬೆಂಗಳೂರಿನಲ್ಲಿ ಮಳೆ ಇಲ್ಲದೆ ನೀವು 6 ತಿಂಗಳು ಕಳೆದಿದ್ದೀರಿ ಆದರೆ ನೀವು ಎಂದಿನಂತೆ ಕೆಲಸ ಮಾಡುವ ಬದಲು ಮಲಗಿ ಕಾಲ ಕಳೆದಿದ್ದಾರೆ. ಚರಂಡಿಗಳನ್ನು ತೆರವುಗೊಳಿಸಲಿಲ್ಲ, ರಸ್ತೆಗಳನ್ನು ದುರಸ್ತಿ ಮಾಡಲಿಲ್ಲ, ಇದರಿಂದಾಗಿ ಸಾಮಾನ್ಯ ಮಳೆಗೂ ಟ್ರಾಫಿಕ್ ಜಾಮ್ ರಸ್ತೆಗಳು ಜಲಾವೃತಗೊಂಡಿವೆ, ನಾವು ಪ್ರಯಾಣಿಸಲು ನರಕವನ್ನು ಅನುಭವಿಸುತ್ತಿದ್ದೇವೆ, ಇದು ಮಳೆಯ ಸಮಯದಲ್ಲಿ ಸುಂದರವಾದ ಅನುಭವವಾಗಬೇಕಿತ್ತು. ನಿಮಗೆ ಧನ್ಯವಾದಗಳು, ನಾವು ನಾಗರಿಕರು ತೊಂದರೆ ಅನುಭವಿಸುವಾಗ ನಿದ್ದೆ ಮಾಡಿ ಎಂದು ಹೇಳಿದ್ದಾರೆ.

> **ಕೆ ಆರ್ ಪುರ ತೂಗು ಸೇತುವೆ ಡಿವೈಡರ್ ಮೇಲೆ ಇಟ್ಟಿರುವ ಕುಂಡಗಳು ಮಳೆಯಿಂದಾಗಿ ಒಡೆದು ರಸ್ತೆ ಮೇಲೆ ಬಿದ್ದಿದ್ದು, ಇದರಿಂದ ಸಂಚಾರಕ್ಕೆ ಅಡಚಣೆ ಉಂಟಾಗಿತ್ತು. ಟ್ರಾಫಿಕ್ ಪೊಲೀಸರು ತಕ್ಷಣ ಮಣ್ಣಿನ ಕುಂಡಗಳನ್ನು ತೆರವುಗೊಳಿಸಿ ಸಂಚಾರಕ್ಕೆ ಅನುಕೂಲ ಮಾಡಿಕೊಟ್ಟಿದ್ದಾರೆ.**

# ಲೋಕಸಭಾ ಕ್ಷೇತ್ರದಲ್ಲಿ ನಡೆದ ಬೃಹತ್ ಸಾರ್ವಜನಿಕ ಸಭೆ

## ಎಲ್ಲಾ ಸ್ಥಾನಗಳಲ್ಲಿ ಬಿಜೆಪಿಯನ್ನು ಗೆಲ್ಲಿಸುವ ಮೂಲಕ ಕರ್ನಾಟಕದ ಜನತೆ ಕಾಂಗ್ರೇಸ್‌ಗೆ ತಕ್ಕ ಉತ್ತರ ನೀಡಲಿದ್ದಾರೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಶಾ, ಕಾಂಗ್ರೇಸ್ ವಿರುದ್ಧ ವಾಗ್ದಾಳಿ**

ಕರ್ನಾಟಕದ ಧಾರವಾಡ ಲೋಕಸಭಾ ಕ್ಷೇತ್ರದಲ್ಲಿ ನಡೆದ ಬೃಹತ್ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಹಾಗೂ ಬಿಜೆಪಿಯ ವರಿಷ್ಠ ನಾಯಕ ಅಮಿತ್ ಶಾ, ಕಾಂಗ್ರೇಸ್ ವಿರುದ್ಧ ವಾಗ್ದಾಳಿ ನಡೆಸಿ, 2024ರ ಐತಿಹಾಸಿಕ ಚುನಾವಣೆ ? 12 ಲಕ್ಷ ಕೋಟಿ ಹಗರಣ ಮಾಡಿರುವ ಭ್ರಷ್ಟ ಕಾಂಗ್ರೇಸ್ ಪಕ್ಷ ಮತ್ತು ನಯಾ ಪೈಸೆಯಷ್ಟು ಹಗರಣ ಮಾಡದ ಪ್ರಮಾಣಿಕ ಪ್ರಧಾನಿ ನರೇಂದ್ರ ಮೋದಿ ಅವರ ನಡುವಿನ ನೇರ ಸ್ಪರ್ಧೆಯಾಗಿದೆ. ಎಲ್ಲಾ ಸ್ಥಾನಗಳಲ್ಲಿ ಬಿಜೆಪಿಯನ್ನು ಗೆಲ್ಲಿಸುವ ಮೂಲಕ ಕರ್ನಾಟಕದ ಜನತೆ ಕಾಂಗ್ರೇಸ್‌ಗೆ ತಕ್ಕ ಉತ್ತರ ನೀಡಲಿದ್ದಾರೆ.

ಕಾಂಗ್ರೇಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ಕಾಶ್ಮೀರದ ಬಗೆಗಿನ ಅರ್ಥಹೀನ ಟೀಕೆಗಳ ಬಗ್ಗೆ ತೀವ್ರ ವಾಗ್ದಾಳಿ ನಡೆಸಿದ ಅವರು, ಕರ್ನಾಟಕ ಮತ್ತು ರಾಜಸ್ಥಾನದ ಜನರಿಗೂ ಕಾಶ್ಮೀರಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಖರ್ಗೆ ಹೇಳಿದ್ದಾರೆ, ಇದು ಭಾರತದ ರಾಜ್ಯಗಳ ಒಕ್ಕೂಟದ ಬಗ್ಗೆ ಅವರಿಗಿರುವ ಸಂಕುಚಿತ ತಿಳುವಳಿಕೆಗೆ ಸಾಕ್ಷಿಯಾಗಿದೆ. ಈ ಹೇಳಿಕೆಗಳು ಬಿಜೆಪಿಯ ಭಾರತೀಯ ಒಕ್ಕೂಟದ ಕಲ್ಪನೆಗೆ ವಿರೋಧವಾಗಿರುವ, ಕಾಂಗ್ರೇಸ್ ಆಳವಾಗಿ ಬೇರೂರಿರುವ ಪ್ರಾದೇಶಿಕ ಮನಸ್ಥಿತಿಯನ್ನು ಪ್ರತಿಬಿಂಬಿಸುತ್ತವೆ. ಜನತೆಯ ರಾಷ್ಟ್ರೀಯತಾವಾದಿ ಬಯಕೆಯನ್ನು ಗೌರವಿಸಿ ಮೋದಿ ಸರ್ಕಾರವು 370 ನೇ ವಿಧಿಯನ್ನು ರದ್ದುಗೊಳಿಸುವ ಮೂಲಕ ಐತಿಹಾಸಿಕ ತಪ್ಪನ್ನು ಸರಿಪಡಿಸಿ ಕಾಶ್ಮೀರದಲ್ಲಿ ಶಾಂತಿ ಮತ್ತು ಸಮೃದ್ಧಿಯ ಹೊಸ ಯುಗವನ್ನು ಪ್ರಾರಂಭಿಸಿತು.

ಭಯೋತ್ಪಾದನೆಯ ಬಗ್ಗೆ ಕಾಂಗ್ರೇಸ್ ಅತ್ಯಂತ ಬೇಜವಾಬ್ದಾರಿ ಧೋರಣೆ ಹೊಂದಿತ್ತು, ಇದು ಭಾರತವು ಪಾಕಿಸ್ತಾನದಲ್ಲಿನ ಭಯೋತ್ಪಾದಕರಿಗೆ ನೇರ ಗುರಿಯಾಗಲು ಕಾರಣವಾಯಿತು. ವೋಟ್ ಬ್ಯಾಂಕ್ ಓಲೈಕೆ ರಾಜಕಾರಣದಿಂದಾಗಿ ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳಲಿಲ್ಲ. ಏತನ್ಮಧ್ಯೆ, ನರೇಂದ್ರ ಮೋದಿ ಅವರು ಪಾಕ್ ನೆಲದಲ್ಲಿ ಯುದ್ಧತಂತ್ರ ಯೋಜಿತ ವಾಯು ಮತ್ತು ಸರ್ಜಿಕಲ್ ಸ್ಟ್ರೈಕ್ಗಳನ್ನು ನಡೆಸುವ ಮೂಲಕ ಭಯೋತ್ಪಾದಕರಿಗೆ ತಕ್ಕ ಉತ್ತರ ನೀಡಿದರು. ಇತ್ತೀಚಿನ ಬೆಂಗಳೂರು ಸ್ಫೋಟಗಳಲ್ಲಿ ಕೂಡ ಕಾಂಗ್ರೇಸ್ ಬೇಜವಾಬ್ದಾರಿ ಧೋರಣೆಯು ಸ್ಪಷ್ಟವಾಗಿ ಕಂಡುಬಂದಿತು, ಪಕ್ಷವು ಎಸ್ಡಿಪಿಐ ಸಹಾಯದಿಂದ ಚುನಾವಣೆಯಲ್ಲಿ ಗೆದ್ದಿದ್ದರಿಂದ ಬಾಂಬ್ ಸ್ಫೋಟಗಳನ್ನು ಕೇವಲ ಗ್ಯಾಸ್ ಸಿಲಿಂಡರ್ ಸ್ಫೋಟ ಎಂದು ಅನುಕೂಲಕರವಾಗಿ ಲೇಬಲ್ ಮಾಡಿತು. ಎನ್‌ಐಎ ತನ್ನ ವಿಸ್ತೃತ ವರದಿಯಲ್ಲಿ ಭಾರತ ವಿರೋಧಿ ಪಡೆಗಳಿಂದ ಸ್ಫೋಟ ನಡೆಸಲಾಗಿದೆ ಎಂದು ಸ್ಪಷ್ಟಪಡಿಸಿದೆ. ಈಗ, ಕರ್ನಾಟಕದ ಜನರು ಭಾರತ ವಿರೋಧಿ ಶಕ್ತಿಗಳೊಂದಿಗೆ ಕೈಜೋಡಿಸುವ ಕಾಂಗ್ರೇಸ್ ಪಕ್ಷವನ್ನು ಬೆಂಬಲಿಸಬೇಕೋ ಅಥವಾ ಅಜೇಯ ಭದ್ರತಾ ವ್ಯವಸ್ಥೆಯನ್ನು ಸ್ಥಾಪಿಸಲು ಹಗಲಿರುಳು ಶ್ರಮಿಸುತ್ತಿರುವ ನರೇಂದ್ರ ಮೋದಿಯನ್ನು ಬೆಂಬಲಿಸಬೇಕೋ ಎಂದು ನಿರ್ಧರಿಸಬೇಕು. ಪ್ರತಿಷ್ಠಿತ ಮುಖ್ಯಮಂತ್ರಿ ಹುದ್ದೆಗಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ನಡುವಿನ ಆಂತರಿಕ ಕಚ್ಚಾಟದ ವಿಷಯದ ಬಗ್ಗೆ ಕೂಡ ಶಾ ಪ್ರಸ್ತಾಪಿಸಿದರು. ಕಾಂಗ್ರೇಸ್ ಪಕ್ಷಕ್ಕೆ ಮಹಿಳೆಯರ ಘನತೆಯ ಬಗ್ಗೆ ಯಾವುದೇ ಗೌರವವಿಲ್ಲ, ಇತ್ತೀಚಿನ ನೇಹಾ ಹಿರೇಮಠ್ ಪ್ರಕರಣದಲ್ಲಿ ಪಕ್ಷವು ಯಾವುದೇ ಕ್ರಮ ಕೈಗೊಂಡಿಲ್ಲ, ಮೇಲಾಗಿ ಅದು ವೈಯಕ್ತಿಕ ಕಾರಣಗಳಿಂದ ಸಂಭವಿಸಿದ ಸಾವು ಎಂದು ಪ್ರಕರಣದ ದಿಕ್ಕನ್ನು ತಪ್ಪಿಸುತ್ತಿದೆ. ರಾಜ್ಯದಲ್ಲಿ ಮಹಿಳೆಯರ ಸುರಕ್ಷತೆ ಮತ್ತು ಭದ್ರತೆ, ಕೇವಲ ಬಿಜೆಪಿ ಸರ್ಕಾರದಿಂದ ಮಾತ್ರ ಸಾಧ್ಯ. ಕರ್ನಾಟಕದ ಅಭಿವೃದ್ಧಿಗಾಗಿ ಮೋದಿ ಸರ್ಕಾರ ಕೈಗೊಂಡಿರುವ ಅಪ್ರತಿಮ ಉಪಕ್ರಮಗಳು ಪ್ರಶಂಸನಾರ್ಹವಾಗಿವೆ. ಮೋದಿಯವರ ಅಧಿಕಾರಾವಧಿಯ ಮೊದಲು, ಕರ್ನಾಟಕವು ಕೇವಲ 25 ರಾಷ್ಟ್ರೀಯ ಹೆದ್ದಾರಿಗಳನ್ನು ಹೊಂದಿತ್ತು, ಈಗ ಈ ಸಂಖ್ಯೆ 47 ಕ್ಕೆ ತಲುಪಿ, ಸುಮಾರು ದ್ವಿಪಟ್ಟಾಗಿದೆ. 2004 ರಿಂದ 2014 ರವರೆಗೆ ಕಾಂಗ್ರೇಸ್ ಪಕ್ಷವು ಕರ್ನಾಟಕಕ್ಕೆ ಕೇವಲ ರೂ 1.42 ಲಕ್ಷ ಕೋಟಿ ಮಂಜೂರು ಮಾಡಿತ್ತು, ಮತ್ತೊಂದೆಡೆ ನರೇಂದ್ರ ಮೋದಿ ಸರ್ಕಾರವು ಕಳೆದ ಹತ್ತು ವರ್ಷಗಳಲ್ಲಿ ಕರ್ನಾಟಕಕ್ಕಾಗಿ ರೂ 4.98 ಲಕ್ಷ ಕೋಟಿಗಳನ್ನು ವಿನಿಯೋಗಿಸಿದೆ. ಖಂಡಿತವಾಗಿಯೂ, ಪ್ರಧಾನಿ ನರೇಂದ್ರ ಮೋದಿಯವರ ಅಮೋಘ ನಾಯಕತ್ವದಲ್ಲಿ ಕರ್ನಾಟಕದ ಜನರು ಬಿಜೆಪಿಯ ಕಾರ್ಯಕ್ಷಮತೆಯ ರಾಜಕೀಯಕ್ಕೆ ಮತ ಹಾಕಲಿದ್ದಾರೆ, ಇದರ ಪರಿಣಾಮವಾಗಿ 400 ಕ್ಕೂ ಹೆಚ್ಚು ಸ್ಥಾನಗಳೊಂದಿಗೆ ಭಾಜಪ ಅಭೂತಪೂರ್ವ ಗೆಲುವು ಸಾಧಿಸಲಿದೆ.

> **ತುಷ್ಟೀಕರಣದ ರಾಜಕೀಯದಿಂದ ಪ್ರೇರೇಪಿತವಾಗಿರುವ ಕಾಂಗ್ರೇಸ್, 370 ನೇ ವಿಧಿಯನ್ನು ಕೇವಲ ಮತ ಬ್ಯಾಂಕ್ ಆಗಿ ಬಳಸಿಕೊಂಡಿತು, ಅದು ಐತಿಹಾಸಿಕ ತಪ್ಪನ್ನು ಸರಿಪಡಿಸಲು ಬೇರೆ ಏನೂ ಮಾಡಲಿಲ್ಲ. ಧಾರವಾಡದ ಪ್ರತಿ ಮಗುವೂ ಕಾಶ್ಮೀರಕ್ಕಾಗಿ ಪ್ರಾಣ ತ್ಯಾಗ ಮಾಡಲು ಸಿದ್ಧ ಎಂಬುದನ್ನು ಖರ್ಗೆ ಅರಿಯಬೇಕು ಎಂದು ಶಾ ಹೇಳಿದರು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ಇತರರ ವಿರುದ್ಧ ದ್ವೇಷ ಕಾರುವುದು ಮಾನಸಿಕ ಒತ್ತಡವನ್ನು ನೀಡುತ್ತದೆ. ಇವುಗಳು ಜೀವನವನ್ನು ವ್ಯರ್ಥಗೊಳಿಸುವುದರಿಂದ ನಿಮ್ಮ ಸಾಮರ್ಥ್ಯವನ್ನು ಕೊಲ್ಲುವುದರಿಂದ ನೀವು ಈ ರೀತಿಯ ಆಲೋಚನೆಗಳನ್ನು ತಪ್ಪಿಸಬೇಕು.

**ವೃಷಭ** ಕುಟುಂಬಕ್ಕೆ ಸಾಕಷ್ಟು ಸಮಯವನ್ನು ನೀಡುವುದಿಲ್ಲ ಎಂದು ಅವರ ಕುಟುಂಬಗಳು ದೂರು ನೀಡುತ್ತಾರೆ, ಅವರು ಇಂದು ಕುಟುಂಬ ಸದಸ್ಯರಿಗೆ ಸಮಯವನ್ನು ನೀಡುವ ಬಗ್ಗೆ ಯೋಚಿಸಬಹುದು.

**ಮಿಥುನ** ನೀವು ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಿದಲ್ಲಿ ಖಿನ್ನತೆಗೊಳಗಾಗಬೇಡಿ. ಆಹಾರದ ಸ್ವಾದಕ್ಕೆ ಉಪ್ಪು ಬೇಕಾದ ಹಾಗೆ ಅತೃಪ್ತಿಯಿಂದ ಮಾತ್ರ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ.

**ಕರ್ಕಾಟಕ** ಪ್ರಣಯ ಸಂಬಂಧದಲ್ಲಿ ನಿಮ್ಮನ್ನು ತಪ್ಪಾಗಿ ತಿಳಿದುಕೊಳ್ಳುವ ಸಾಧ್ಯತೆಯಿದೆ. ಸಮಯಲಿಕ್ಕೆ ಸರಿಯಾಗಿ ಕೆಲಸವನ್ನು ಪೂರ್ಣಗೊಳಿಸಿ ಬೇಗ ಮನೆಗೆ ಹೋಗುವುದು ಇಂದು ನಿಮಗೆ ಉತ್ತಮವಾಗಲಿದೆ.

**ಸಿಂಹ** ನಿಮ್ಮ ಪ್ರೀತಿಪಾತ್ರರೊಡನೆ ಪ್ರಯಾಣಕ್ಕೆ ಹೋಗುವ ಮೂಲಕ ನಿಮ್ಮ ಅಮೂಲ್ಯ ಕ್ಷಣಗಳನ್ನು ಪುನಃ ಜೀವಿಸಿ. ಸಮಯಕ್ಕೆ ಅನುಗುಣವಾಗಿ ಪ್ರತಿಯೊಂದು ಕೆಲಸವನ್ನು ಪೂರೈಸುವುದು ಉತ್ತಮ.

**ಕನ್ಯಾ** ನಿಮ್ಮ ದೊಡ್ಡ ಆಸ್ತಿಯೆಂದರೆ ನಿಮ್ಮ ಹಾಸ್ಯ ಪ್ರಜ್ಞೆಯಾಗಿದೆ ಇದನ್ನು ನಿಮ್ಮ ಅನಾರೋಗ್ಯ ಗುಣಪಡಿಸಲು ಬಳಸಲು ಪ್ರಯತ್ನಿಸಿ. ತಮ್ಮ ಹಣವನ್ನು ಇನ್ನೊಬ್ಬರಿಗೆ ನೀಡಲು ಇಷ್ಟಪಡುವುದಿಲ್ಲ.

**ತುಲಾ** ಹಣಕಾಸು, ಪ್ರೀತಿ, ಕುಟುಂಬದಿಂದ ದೂರ ಹೋಗಿ ಇಂದು ನೀವು ಆನಂದವನ್ನು ಹುಡುಕುತ್ತ ಯಾವುದೇ ಆಧ್ಯಾತ್ಮಿಕ ಗುರುವನ್ನು ಭೇಟಿ ಮಾಡಲು ಹೋಗಬಹುದು.

**ವೃಶ್ಚಿಕ** ನಿಮ್ಮ ದೈಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ಆನಂದಿಸಬಹುದು. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ.

**ಧನಸ್ಸು** ನಿಮ್ಮ ಬಲವಾದ ಧೃಢತೆ ಮಾನಸಿಕ ಶಕ್ತಿ ವರ್ಧಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತವೆ. ಇದು ನಿಮಗೆ ಯಾವುದೇ ಪರಿಸ್ಥಿತಿಯನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಉತ್ತೇಜಿಸುವುದರಿಂದ ಇದನ್ನು ಕಾಯ್ದುಕೊಳ್ಳಿ.

**ಮಕರ** ಪ್ರಣಯದ ನೆನಪುಗಳು ನಿಮ್ಮ ದಿನವನ್ನು ಆಕ್ರಮಿಸುತ್ತವೆ. ವ್ಯಾಪಾರಿಗಳು ಇಂದು ವ್ಯಾಪಾರಕ್ಕಿಂತ ಹೆಚ್ಚಾಗಿ ತಮ್ಮ ಕುಟುಂಬದ ಸದಸ್ಯರೊಂದಿಗೆ ಸಮಯವನ್ನು ಕಳೆಯಲು ಇಷ್ಟಪಡುವಿರಿ.

**ಕುಂಭ** ನಿಮ್ಮ ಅಸಡ್ಡೆಯ ವರ್ತನೆ ಪೋಷಕರನ್ನು ಚಿಂತೆಗೀಡು ಮಾಡಬಹುದು. ನೀವು ಯಾವುದೇ ಹೊಸ ಯೋಜನೆಯನ್ನು ಆರಂಭಿಸುವ ಮೊದಲು ಅವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬಹುದು.

**ಮೀನ** ಪ್ರೇಮ ಜೀವನದ ವಿವಾದಾತ್ಮಕವಾಗಿರಬಹುದು. ಜೀವನದಲ್ಲಿ ನಡೆಯುತ್ತಿರುವ ಅಡಚಣೆಗಳ ನಡುವೆ ಇಂದು ನಿಮಗೆ ನಿಮಗಾಗಿ ಸಮಯ ಸಿಗುತ್ತದೆ. ನಿಮ್ಮ ನೆಚ್ಚಿನ ಕೆಲಸಗಳನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

## ಪ್ರಜಾಧ್ವನಿ-02 ಲೋಕಸಭಾ ಚುನಾವಣಾ ಪ್ರಚಾರ ಕಾರ್ಯಕ್ರಮ

### ● ಕುರುಬರಿಗೆ ಒಂದೂ ಟಿಕೆಟ್ ಕೊಡದ ಮೋದಿ ಕರಿ ಕಂಬಳಿ ವೇಷ ತೊಟ್ಟು ಡ್ರಾಮಾ ಆಡ್ತಾರೆ: ಸಿದ್ದರಾಮಯ್ಯ ವ್ಯಂಗ್ಯ

• **ಉದಯವಾಹಿನಿ ಬಾಗಲಕೋಟೆ**

ರೈತ ಸಾಲ ಮನ್ನಾ ಮಾಡಲು ಯಾವುದೇ ಕಾರಣಕ್ಕೂ ಒಪ್ಪದ ಮೋದಿ ಅತ್ಯಂತ ಶ್ರೀಮಂತ ಬಂಡವಾಳಶಾಹಿಗಳ 16 ಲಕ್ಷ ಕೋಟಿ ಸಾಲ ಮನ್ನಾ ಮಾಡಿದ್ದಾರೆ. ಆದರೆ ಮೋದಿಯವರು ಬಡ ಭಾರತೀಯರನ್ನು ನಂಬಿಸಿದ್ದ, ಭಾಷಣಗಳಲ್ಲಿ ಹೇಳಿದ ಯಾವುದೇ ಭರವಸೆಗಳನ್ನು ಈಡೇರಿಸದೇ 'ಸುಳ್ಳಿನ ಸರದಾರ' ಆಗಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಲೇವಡಿ ಮಾಡಿದರು.

ಅವರು ಇಂದು ಪ್ರಜಾಧ್ವನಿ-02 ಲೋಕಸಭಾ ಚುನಾವಣಾ ಪ್ರಚಾರ ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಪಕ್ಷದ ಅಭ್ಯರ್ಥಿ ಸಂಯುಕ್ತ ಪಾಟೀಲ್ ಅವರ ಪರವಾಗಿ ಮತದಾರರಲ್ಲಿ ಮತಯಾಚಿಸಿ ಮಾತನಾಡಿದರು. ಬಸವಣ್ಣ ಹುಟ್ಟಿದ ಸ್ಥಳವಾಗಿರುವ ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ರಚನೆಯನ್ನು ಈ ಬಜೆಟ್‌ನಲ್ಲಿ ಘೋಷಿಸಲಾಗಿದೆ. 2013 ರಲ್ಲಿ ಬಸವಣ್ಣನವರ ಜನ್ಮದಿಂದು ಮುಖ್ಯಮಂತ್ರಿಯಾಗಿ ಪ್ರಮಾಣ ವಚನವನ್ನು ಸ್ವೀಕರಿಸಿದ್ದೇನೆ. ನನಗೆ ಬಸವಾದಿ ಶರಣರ ತತ್ವಾದರ್ಶಗಳ ಮೇಲೆ ಅಪಾರ ನಂಬಿಕೆಯಿದೆ. ಶರಣರ ಹಾದಿಯಲ್ಲಿ ನಡೆಯುವ ಪ್ರಯತ್ನ ಮಾಡುತ್ತಿದ್ದೇನೆ. ಬಸವಣ್ಣನವರ ವಿಚಾರಧಾರೆಯನ್ನು ಪಾಲಿಸಬೇಕೆಂಬ ಉದ್ದೇಶದಿಂದ ಅವರ ಭಾವಚಿತ್ರವನ್ನು ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಇಡಬೇಕೆಂದು ಆದೇಶ ಮಾಡಿದೆ. ಜಾತಿ ವರ್ಗ ವ್ಯವಸ್ಥೆ ತೊಲಗಿ ಸಮಾನತೆ ಸ್ಥಾಪನೆಯಾಗಿ, ಜಾತ್ಯಾತೀತ ಸಮಾಜ ನಿರ್ಮಾಣವಾಗಬೇಕೆಂಬ ಆಶಯವನ್ನು ಬಸವಣ್ಣನವರು ಹೊಂದಿದ್ದರು. ವಿಶ್ವಗುರು ಬಸವಣ್ಣನವರನ್ನು 'ಸಾಂಸ್ಕೃತಿಕ ನಾಯಕ' ಎಂದು ನಮ್ಮ ಸರ್ಕಾರ ಘೋಷಣೆ ಮಾಡಿದೆ. ಈ ಕಾರ್ಯವನ್ನು ಬಿಜೆಪಿಯಿಂದ ಮುಖ್ಯಮಂತ್ರಿಗಳಾಗಿದ್ದ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿಯವರಾಗಲಿ ಮಾಡಲಿಲ್ಲ ಎಂದರು. ಕಾಂಗ್ರೆಸ್‌ನವರು ಶಿವಾಜಿ ಮಹಾರಾಜರು ಹಾಗೂ ಕಿತ್ತೂರು ರಾಣಿ ಚೆನ್ನಮ್ಮನಿಗೆ ಗೌರವ ನೀಡಲಿಲ್ಲ ಎಂದು ಮೋದಿಯವರು ಸುಳ್ಳು ಹೇಳಿದ್ದರು, ಆದರೆ ಸರ್ಕಾರದ ವತಿಯಿಂದ ಕಿತ್ತೂರು ಚೆನ್ನಮ್ಮ ದಿನಾಚರಣೆಯನ್ನು ಆಚರಿಸಬೇಕೆಂಬ ಆದೇಶವನ್ನು ಮಾಡಿದ್ದು ನಮ್ಮ ಕಾಂಗ್ರೆಸ್ ಸರ್ಕಾರವೇ. ಮೋದಿಯ ವರು ಕರಿಕಂಬಳಿ ವೇಷ ಹಾಕಿ ಕೊ ಂಡು ಭಾಷಣ ಮಾಡಿರುವುದು ಕೇವಲ ನಾಟಕವೇ ಹೊರತು, ಕುರುಬ ಸಮುದಾಯದ ಮೇಲಿನ ಪ್ರೀತಿ ಯಿಂದಲ್ಲ. ಇವರ ವೇಷ ಭೂಷಣ ನಾಟಕಗಳು ಭಾರತೀಯರಿಗೆ ಈಗ ಅರ್ಥವಾಗಿದೆ ಎಂದರು. ಕರ್ನಾಟಕದ 28 ಲೋಕಸಭಾ ಚುನಾವಣೆಯಲ್ಲಿ ಒಬ್ಬ ಕುರುಬ ಸಮುದಾಯದವರಿಗಾದರೂ ಟಿಕೇಟನ್ನು ಬಿಜೆಪಿಯ ಮೋದಿ ನೀಡಿಲ್ಲ, ಒಬ್ಬ ಮುಸಲ್ಮಾನನಿಗಾಗಲಿ, ಒಬ್ಬ ಕ್ರಿಶ್ಚಯನ್ನರಿಗಾಗಲಿ ಟಿಕೇಟು ನೀಡಿಲ್ಲ. ಏಕೆಂದರೆ ಬಿಜೆಪಿಯವರಿಗೆ ಸಾಮಾಜಿಕ ನ್ಯಾಯದಲ್ಲಿ ನಂಬಿಕೆಯೇ ಇಲ್ಲ ಎಂದರು.

**ಜಾತ್ಯಾತೀತ ಸಮಾಜ ನಿರ್ಮಾಣ**



> **ನಾನು ಸಿಎಂ ಆದ ನಂತರ 27 ಲಕ್ಷ ರೈತರಿಗೆ 8165 ಕೋಟಿ ರೈತ ಸಾಲ ಮನ್ನಾ ಮಾಡಿದೆ. ಬಿಜೆಪಿಯವರು ರೈತ ಸಾಲ ಮನ್ನಾ ಮಾಡಲೇ ಇಲ್ಲ. ಯಡಿಯೂರಪ್ಪನವರು 'ರೈತ ಸಾಲ ಮನ್ನಾ ಮಾಡಲು ಮನವಿ ಮಾಡಿದಾಗ,'ನಮ್ಮಲ್ಲಿ ನೋಟು ಪ್ರಿಂಟ್ ಮಾಡುವ ಮಷೀನು ಇಲ್ಲ ಎಂದಿದ್ದರು. ರೈತ ಸಾಲ ಮನ್ನಾ ಮಾಡದಿದ್ದ ಮೋದಿಯವರು ದೇಶದ ಬಂಡವಾಳ ಶಾಹಿಗಳ 16 ಲಕ್ಷ ಕೋಟಿ ಸಾಲ ಮನ್ನಾ ಮಾಡಿದ್ದಾರೆ. ಮೋದಿಯವರು ನೀಡಿದ ಯಾವುದೇ ಭರವಸೆಗಳನ್ನು ಈಡೇರಿಸದೇ 'ಸುಳ್ಳಿನ ಸರದಾರ ಆಗಿದ್ದಾರೆ**
> -ಸಿದ್ದರಾಮಯ್ಯ

### ಬೆಳೆಗಳಿಗೆ ನ್ಯಾಯಯುತ ಬೆಲೆ ನೀಡಲು ಹೋರಾಟ

**ಸ್ವಾಮಿನಾಥನ್ ವರದಿ ಜಾರಿಯಾಗದೇ , ರೈತರು ತಮ್ಮ ಬೆಳೆಗಳಿಗೆ ನ್ಯಾಯಯುತ ಬೆಲೆ ನೀಡಲು ಹೋರಾಟ ಮಾಡುತ್ತಲೇ ಇದ್ದಾರೆ. ಈ ಹೋರಾಟದಲ್ಲಿ 700 ಕ್ಕೂ ಹೆಚ್ಚು ರೈತರು ಮೃತಪಟ್ಟರು. ಮೋದಿಯವರು 10 ವರ್ಷಗಳ ಪ್ರಧಾನಿಯ ಅವಧಿಯಲ್ಲಿ ಒಮ್ಮೆಯೂ ರೈತರ ಸಾಲ ಮನ್ನಾ ಮಾಡಲಿಲ್ಲ. ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದಾಗ, 76 ಸಾವಿರ ಕೋಟಿ ರೈತರ ಸಾಲ ಮನ್ನಾ ಮಾಡಿದರು.**

## ಪ್ರಜ್ವಲ್ ರೇವಣ್ಣನ ನ್ಯಾಯಾಂಗ ಬಂಧನಕ್ಕೆ ಮಹಿಳಾ ಸಂಘಟನೆ ಒತ್ತಾಯ

• **ಉದಯವಾಹಿನಿ ಸಿರುಗುಪ್ಪ**

ಪೆನ್‌ಡ್ರೈವ್ ಪ್ರಕರಣವನ್ನು ಸೂಕ್ತ ತನಿಖೆ ನಡೆಸಿ ಸಂಬಂದಿಸಿದ ಹೆಚ್.ಡಿ.ರೇವಣ್ಣ ಹಾಗೂ ಪ್ರಜ್ವಲ್ ರೇವಣ್ಣ ಅವರನ್ನು ಬಂದಿಸುವಂತೆ ಆಗ್ರಹಿಸಿ ನಗರದ ತಾಲ್ಲೂಕು ಕಛೇರಿಯಲ್ಲಿ ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆ ತಾಲ್ಲೂಕು ಸಮಿತಿಯಿಂದ ಶಿರಸ್ಥೆದಾರ ಸಿದ್ದಾರ್ಥ್ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಜನವಾದಿ ಮಹಿಳಾ ಸಂಘಟನೆ ತಾಲ್ಲೂಕು ಸಮಿತಿ ಅಧ್ಯಕ್ಷೆ ಮಂಗಮ್ಮ ಮಾತನಾಡಿ ರಾಜ್ಯದ ಪ್ರಭಾವಿ ರಾಜಕಾರಣ ಮನೆತನವಾದ ಹೆಚ್.ಡಿ.ದೇವೇಗೌಡರ ಕುಟುಂಬದವರಾದ ಪ್ರಜ್ವಲ್ ರೇವಣ್ಣ ತನ್ನ ಕಾಮದಾಟಕ್ಕೆ ಮಹಿಳೆಯರ ಮೇಲೆ ಒತ್ತಡ ಹೇರುತ್ತಿರುವ ಬಗ್ಗೆ ಇಡೀ ರಾಜ್ಯದಲ್ಲಿ ತಲ್ಲಣವನ್ನುಂಟು ಮಾಡಿದ್ದು ಆರೋಪಿಗಳು ಎಷ್ಟೇ ಪ್ರಭಾವಿತರಾಗಿದ್ದರೂ ಪ್ರಕರಣವನ್ನು ದಾಖಲಿಸಿ ಸೂಕ್ತ ತನಿಖೆ ನಡೆಸಿ ನೊಂದವರಿಗೆ ನ್ಯಾಯ ಒದಗಿಸಬೇಕೆಂದರು.



ಉದಯವಾಹಿನಿ ಚಿತ್ರ

> **ಪ್ರಜಾಪ್ರಭುತ್ವದಲ್ಲಿ ಜನಸಾಮಾನ್ಯರಿಗೆ ಭದ್ರತೆಯಿಲ್ಲಂದಾಗಿದ್ದು, ಇನ್ನೂ ಮುಂದಾದರೂ ಇಂತಹ ಪ್ರಕರಣಗಳು ಮರುಕಳಿಸದಂತೆ ಅಗತ್ಯ ಕಾನೂನು ರಕ್ಷಣಾ ಪಡೆಗಳು ಮುಂದಾಗಬೇಕು. ಯಾವುದೇ ಒತ್ತಡಗಳಿಗೆ ಮಣಿಯದೇ ನಿಷ್ಪಕ್ಷಪಾತವಾಗಿ ತನಿಖೆ ನಡೆಸಬೇಕೆಂದು ಆಗ್ರಹಿಸಿದರು.** -ತಿಪ್ಪಯ್ಯ

ಕರ್ನಾಟಕ ಪ್ರಾಂತ ರೈತ ಸಂಘದ ತಾಲ್ಲೂಕಾಧ್ಯಕ್ಷ ವಿ.ಮಾರುತಿ ಮಾತನಾಡಿ ಇಂತಹ ಪ್ರಕರಣಗಳನ್ನು ವಿಶೇಷ ತನಿಖಾದಳಕ್ಕೆ ಒದಗಿಸಬೇಕು. ಲೈಂಗಿಕತೆ ದೌರ್ಜನ್ಯಕ್ಕೆ ಒಳಗಾಗಿರುವ ಸಂತ್ರಸ್ತ ಮಹಿಳೆಯರ ಬದುಕು ಛಿದ್ರವಾಗಿದ್ದು ದೃಶ್ಯಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಡಲು ಕಾರಣವಾದವರನ್ನು ಪತ್ತೆ ಹಚ್ಚಬೇಕೆಂದರು.

ಸಿ.ಪಿ.ಎಮ್. ಮುಖಂಡ ತಿಪ್ಪಯ್ಯ ಮಾತನಾಡಿ ಅಧಿಕಾರದ ಮದದಿಂದ ಅನ್ಯಾಯ ಅಕ್ರಮಗಳನ್ನು ಎಸಗುತ್ತಿರುವವರನ್ನು ಹಾಗೂ ಆರೋಪಿಯು ವಿದೇಶಕ್ಕೆ ತೆರಳಿದ್ದರೂ ಮೌನವಹಿಸಿದ್ದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜನತೆಗೆ ಯಾವ ಸಂದೇಶವನ್ನು ನೀಡಲು ಹೊರಟಿವೆ. ಇದೇ ವೇಳೆ ಮುಖಂಡರಾದ ಜನವಾದಿ ಮಹಿಳಾ ಸಂಘಟನೆಯ ಕಾರ್ಯದರ್ಶಿ ರುದ್ರಮ್ಮ, ಸದಸ್ಯರಾದ ಕೆ.ಈರಮ್ಮ, ಆಲಂಬೀ, ಡಿ.ತರಂಗಿಣಿ, ಈರಮ್ಮ, ವಿವಿಧ ಸಂಘಟನೆಗಳ ಮುಖಂಡರಾದ ಓಬಳೇಶ್ವರಪ್ಪ, ಹೆಚ್.ತಿಪ್ಪಯ್ಯ, ಕೆ.ಬಸವರಾಜ, ಬಿ.ನಾಗರಾಜಗೌಡ, ಎಮ್.ಲಕ್ಷ್ಮಣ, ಎಮ್. ಹುಲೆಪ್ಪ, ಬಿ.ಎಲ್.ಈರಣ್ಣ, ಇನ್ನಿತರರಿದ್ದರು.

## ಜೈಲಿನಲ್ಲಿದ್ದ ಕೈದಿಯ ಹೊಟ್ಟೆಯಲ್ಲಿತ್ತು ಫೋನ್

• **ಉದಯವಾಹಿನಿ ಶಿವಮೊಗ್ಗ**

ಶಿವಮೊಗ್ಗದ ಜೈಲಿನಲ್ಲಿದ್ದ ಕೈದಿಯೊಬ್ಬನ ಹೊಟ್ಟೆಯಲ್ಲಿ ಮೊಬೈಲ್ ಫೋನ್ ಪತ್ತೆಯಾಗಿದ್ದು, ಅದನ್ನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯ ವೈದ್ಯರು ಶಸ್ತ್ರಚಿಕಿತ್ಸೆ ನಡೆಸಿ ಹೊರತೆಗೆದಿದ್ದಾರೆ.

ಶಿವಮೊಗ್ಗದ ಕೇಂದ್ರ ಕಾರಾಗೃಹದಲ್ಲಿದ್ದ ಪರಶುರಾಮ್ ಕಳೆದ ಒಂದು ತಿಂಗಳಿನಿಂದ ಹೊಟ್ಟೆ ನೋವು ಎಂದು ಒದ್ದಾಡುತ್ತಿದ್ದ.ವಿಷಯವನ್ನು ಕಾರಾಗೃಹದ ವೈದ್ಯರ ಬಳಿ ತಿಳಿಸಿದ್ದ. ಬಳಿಕ ಆತನನ್ನು ವೈದ್ಯರು ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ಕಳುಹಿಸಿ ಕೊಟ್ಟಿದ್ದರು. ಆದರೆ ಅಲ್ಲಿ ಎಕ್ಸ್‌ರೇ ತೆಗೆದಾಗ ಹೊಟ್ಟೆಯಲ್ಲಿ ಏನಿದೆ ಎಂಬುದು ಸರಿಯಾಗಿ ತಿಳಿದು ಬಂದಿಲ್ಲ. ಆಸ್ಪತ್ರೆಯಲ್ಲಿ ಎಂಡೋಸ್ಕೋಪಿ ವ್ಯವಸ್ಥೆ ಇಲ್ಲದ ಕಾರಣ ಆತನನ್ನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಶಿಫಾರಸು ಮಾಡಲಾಗಿತ್ತು.



ಉದಯವಾಹಿನಿ ಚಿತ್ರ

ಈ ಬಳಿಕ ಪರಶುರಾಮ್‌ನನ್ನು ಶಿವಮೊಗ್ಗ ಕೇಂದ್ರ ಕಾರಾಗೃಹ ವೈದ್ಯಾಧಿಕಾರಿಗಳ ಸಲಹೆ ಮೇರೆಗೆ ಶಿವಮೊಗ್ಗದಿಂದ ಮೆಗ್ಗಾನ್ ಆಸ್ಪತ್ರೆಗೆ ಕಳುಹಿಸಿ ಕೊಡಲಾಗಿತ್ತು. ಆತನ ಹೊಟ್ಟೆಯಲ್ಲಿ ಮೊಬೈಲ್ ಫೋನ್ ಕಂಡುಬಂದ ಹಿನ್ನೆಲೆ ವಿಕ್ಟೋರಿಯಾ ಆಸ್ಪತ್ರೆಯ ವೈದ್ಯರು ಏಪ್ರಿಲ್ 25 ರಂದು ಶಸ್ತ್ರಚಿಕಿತ್ಸೆ ನಡೆಸಿ ಮೊಬೈಲ್ ಫೋನ್ ಅನ್ನು ಹೊರತೆಗೆದಿದ್ದಾರೆ.

ಪರಶು ರಾಮ್ ಯಾವ ಕಾರಣಕ್ಕೆ ಮೊಬೈಲ್ ನುಂಗಿದ್ದ ಎಂಬುದು ತಿಳಿದು ಬಂದಿಲ್ಲ. ಸದ್ಯ ಆತ ಚೇತರಿಕೆ ಕಂಡಿದ್ದಾನೆ ಎಂದು ಮೂಲಗಳು ತಿಳಿಸಿವೆ.

## ಅರೆಬೆಂದ ಸ್ಥಿತಿಯಲ್ಲಿ ವ್ಯಕ್ತಿಯ ಶವ ಪತ್ತೆ

• **ಉದಯವಾಹಿನಿ ಹುಬ್ಬಳ್ಳಿ**

ಅರೆಬೆಂದ ಸ್ಥಿತಿಯಲ್ಲಿ ವ್ಯಕ್ತಿಯ ಒಬ್ಬನ ಶವ ಅತ್ತೆಯಾಗಿರುವ ಘಟನೆ ಹುಬ್ಬಳ್ಳಿಯ ನೇಕಾರ ನಗರದ ಸಮೀಪದಲ್ಲಿರುವ ಬಿಡಿಸಿ ಬಳಿ ಈ ಒಂದು ಅರೇಬೆಂದ ಸುಟ್ಟ ಸ್ಥಿತಿಯಲ್ಲಿ ಶವ ಪತ್ತೆಯಾಗಿದೆ. ಹುಬ್ಬಳ್ಳಿ ನಗರದ ಹೊರವಲಯದಲ್ಲಿರುವ ನೇಕಾರ ನಗರದ ಚೆಕ್ ಪೋಸ್ಟ್ ಸಮೀಪದ ಬ್ರಿಡ್ಜ್ ಹತ್ತಿರ ಅರ್ಧ ಸುಟ್ಟ ಸ್ಥಿತಿಯಲ್ಲಿ ಅಂದಾಜು 35 – 40 ವಯಸ್ಸಿನ ವ್ಯಕ್ತಿ ಸಾವನ್ನಪ್ಪಿದ್ದಾನೆ. ಇಂದು ಬೆಳಿಗ್ಗೆ ದಾರಿಯಲ್ಲಿ ಸಂಚರಿಸುವ ಜನರು ಮೃತದೇಹವನ್ನು ನೋಡಿ ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ತಕ್ಷಣ ಹಳೆ ಹುಬ್ಬಳ್ಳಿಯ ಪೊಲೀಸ್ ಠಾಣೆಯ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಶವದ ಕುರಿತು ಹಾಗೂ ಸ್ಥಳದಲ್ಲಿ ಪರಿಶೀಲನೆ ನಡೆಸಿದರು. ಆದರೆ ಮೃತ ವ್ಯಕ್ತಿಯ ಗುರುತು ಇದುವರೆಗೂ ಪತ್ತೆ ಆಗಿಲ್ಲ. ಈ ಕುರಿತಂತೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ ಎಂದು ತಿಳಿದು ಬಂದಿದೆ.

## ದೇಶದಲ್ಲಿ ಸ್ವಾತಂತ್ರ್ಯ ನಂತರ ಅಧಿಕಾರ ಹಿಡಿದ ಎಲ್ಲಾ ಸರ್ಕಾರಗಳಿಂದ ಕೃಷಿಕರಿಗೆ ಅನ್ಯಾಯ: ನಾಗೇಂದ್ರ

• **ಉದಯವಾಹಿನಿ ಬೆಳಗಾವಿ**

ಭಾರತದ ಸಂವಿಧಾನ, ಪ್ರಜಾಪ್ರಭುತ್ವ ಮತ್ತು ಕೃಷಿಕರ ಉಳಿವಿಗಾಗಿ ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಸೋಲಿಸಲು ನಿರ್ಧರಿಸಿದ್ದೇವೆ' ಎಂದು ರಾಜ್ಯ ರೈತ ಸಂಘದ ರಾಜ್ಯ ಘಟಕದ ಅಧ್ಯಕ್ಷ ಬಡಗಲಪುರ ನಾಗೇಂದ್ರ ಹೇಳಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ದೇಶದಲ್ಲಿ ಸ್ವಾತಂತ್ರ್ಯ ನಂತರ ಅಧಿಕಾರ ಹಿಡಿದ ಎಲ್ಲಾ ಸರ್ಕಾರಗಳಿಂದ ಕೃಷಿಕರಿಗೆ ಅನ್ಯಾಯವಾಗಿದೆ.

ನರೇಂದ್ರ ಮೋದಿ ನೇತೃತ್ವದ ಸರ್ಕಾರದಿಂದ ರೈತರು ಹೆಚ್ಚಿನ ಸಮಸ್ಯೆ ಎದುರಿಸಿದ್ದಾರೆ. ಕೇಂದ್ರ, ಕರ್ನಾಟಕ ಮತ್ತು ಗೋವಾ ರಾಜ್ಯಗಳಲ್ಲಿ ಬಿಜೆಪಿಯೇ ಅಧಿಕಾರದಲ್ಲಿತ್ತು. ಆದರೂ, ಮಹದಾಯಿ ಯೋಜನೆ ಕಾಮಗಾರಿಗೆ ಚಾಲನೆ ಸಿಕ್ಕಿಲ್ಲ. ಭದ್ರಾ ಮೇಲ್ದಂಡೆ ಯೋಜನೆಗೆ 5 ಸಾವಿರ ಕೋಟಿ ಮೀಸಲಿಟ್ಟಿದ್ದೇವೆ ಎಂದು ಘೋಷಿಸಿದ್ದರೂ, ಒಂದೇ ರೂಪಾಯಿ ಅನುದಾನ ಬಿಡುಗಡೆಗೊಳಿಸಲಿಲ್ಲ. ರೈತ ಸಮುದಾಯ ಉಳಿಸುವುದಕ್ಕಾಗಿ ಬಿಜೆಪಿಯನ್ನು ಅಧಿಕಾರದಿಂದ ಕೆಳಗಿಳಿಸಲೇಬೇಕಿದೆ' ಎಂದರು.



> **ರಾಜ್ಯದ ಜನರು ಬರ ಮತ್ತು ಪ್ರವಾಹದಿಂದ ತತ್ತರಿಸಿದ ವೇಳೆ ಬಾರದ ಮೋದಿ, ಈಗ ಚುನಾವಣೆ ಪ್ರಚಾರಕ್ಕೆ ಬರುತ್ತಿದ್ದಾರೆ. ಅವರಿಗೆ ಈ ಸಲದ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಬೇಕಿದೆ**
> -ಬಡಗಲಪುರ ನಾಗೇಂದ್ರ

ಸಂಘದ ಗೌರವಾಧ್ಯಕ್ಷ ಚಾಮರಸ ಮಾಲಿಪಾಟೀಲ, 'ಕಳೆದೊಂದು ದಶಕದಲ್ಲಿ ಕೃಷಿಕರು ಸಾಕಷ್ಟು ತೊಂದರೆ ಅನುಭವಿಸಿದ್ದಾರೆ. ಆದರೆ, ಮೋದಿ ಸುಳ್ಳು ಹೇಳುತ್ತ ಮೋಸ ಮಾಡುತ್ತಿದ್ದಾರೆ. ಫಸಲ್ ಬೀಮಾ ವಿಮೆ ಯೋಜನೆ ಯಡಿ ರೈತರಿಗೆ ಅನ್ಯಾಯ ಮಾಡಲಾಗಿದೆ. ಇವೆಲ್ಲ ಕಾರಣಕ್ಕಾಗಿ ಈ ಬಾರಿ ಬಿಜೆಪಿ ಮತ್ತು ಅದರ ಮಿತ್ರ ಪಕ್ಷಗಳಿಗೆ ಈ ಬಾರಿ ಮತ ನೀಡದಂತೆ ನಿರ್ಣಯ ತೆಗೆದುಕೊಂಡಿದ್ದೇವೆ' ಎಂದರು.

## ಕೆರೆ ಮೀನು ತಿಂದು ಇಬ್ಬರ ಸಾವು, 15 ಜನ ಅಸ್ವಸ್ಥ

• **ಉದಯವಾಹಿನಿ ಹಾಸನ**

ಕೆರೆ ಮೀನು ತಿಂದು ಇಬ್ಬರು ಸಾವನ್ನಪ್ಪಿದ್ದು ಅಲ್ಲದೆ 15ಕ್ಕೂ ಹೆಚ್ಚು ಜನರು ಅಸ್ವಸ್ಥರಾಗಿರುವ ಘಟನೆ ಹಾಸನ ಜಿಲ್ಲೆಯ ಅರಕಲಗೂಡು ತಾಲ್ಲೂಕಿನ ಬಸವನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಬಸವನಹಳ್ಳಿ ಗ್ರಾಮದಲ್ಲಿ ಕೆರೆ ಮೀನು ತಿಂದು ಇಬ್ಬರ ಸಾವನ್ನಾಪ್ಪಿದ್ದರೆ. ಗ್ರಾಮಕ್ಕೆ ಹಾಸನ ಜಿಲ್ಲಾಧಿಕಾರಿ ಸತ್ಯಭಾಮಾ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದು, ಹಾಸನ ಜಿಲ್ಲೆಯ ಅರಕಲಗೂಡು ತಾಲ್ಲೂಕಿನ ಬಸವನಹಳ್ಳಿ ಗ್ರಾಮದಲ್ಲಿ ಈ ದುರ್ಘಟನೆ ಸಂಭವಿಸಿದೆ. ಕೆರೆ ಮೀನು ತಿಂದಿದ್ದ 15ಕ್ಕೂ ಹೆಚ್ಚು ಜನರು ಅಸ್ವಸ್ಥಗೊಂಡಿದ್ದಾರೆ ಎಂದು ಹೇಳಲಾಗುತ್ತಿದ್ದು, ಇದೆ ವೇಳೆ ಮೃತ ಕುಟುಂಬಕ್ಕೆ ಜಿಲ್ಲಾಧಿಕಾರಿ ಸತ್ಯಭಾಮ ಭೇಟಿ ಮಾಡಿ ಸಾಂತ್ವನ ಹೇಳಿದರು. ನಂತರ ಆಸ್ಪತ್ರೆಗೆ ಭೇಟಿ ನೀಡಿ ಅಸ್ವಸ್ಥರ ಆರೋಗ್ಯ ಕೂಡ ವಿಚಾರಣೆ ನಡೆಸಿದರು. ಘಟನೆ ಬಗ್ಗೆ ಜಿಲ್ಲಾಧಿಕಾರಿಸತ್ಯಭಾಮಾ ಅವರು ಅಧಿಕಾರಿಗಳಿಂದ ಮಾಹಿತಿಯನ್ನು ಪಡೆದು ಕೊಂಡಿದ್ದಾರೆ ಎಂದು ತಿಳಿದುಬಂದಿದೆ.

## 10 ಕೋಟಿ ಜನ ಸೌಲಭ್ಯಗಳಿಂದ ವಂಚಿತ

• **ಉದಯವಾಹಿನಿ ಬೆಳಗಾವಿ**

'ಹತ್ತು ವರ್ಷಗಳಿಗೊಮ್ಮೆ ಜನಗಣತಿ ನಡೆಯಬೇಕು. ಅದರಿಂದ ಎಲ್ಲಾ ಧರ್ಮಗಳ, ಜಾತಿಗಳ ಜನರಿಗೆ ಯೋಜನೆಗಳ ಸೌಲಭ್ಯಗಳು ತಲುಪುತ್ತವೆ. 2021ರಲ್ಲಿ ಮೋದಿ ಸರ್ಕಾರ ಜನಗಣತಿ ನಡೆಸಲಿಲ್ಲ. ಇದೇ ಕಾರಣದಿಂದ 10 ಕೋಟಿ ಜನ ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಇದರಲ್ಲಿ ಹೆಚ್ಚಾಗಿ ಹಿಂದುಳಿದ ವರ್ಗ ದವರೇ ಇದ್ದಾರೆ' ಎಂದು ಕೇಂದ್ರದ ಮಾಜಿ ಸಚಿವ, ಮಾಜಿ ಮುಖ್ಯಮಂತ್ರಿಯೂ ಆದ ಎಂ.ವೀರಪ್ಪ ಮೊಯ್ಲಿ ಆರೋಪಿಸಿದರು.



ಉದಯವಾಹಿನಿ ಚಿತ್ರ

**ಹತ್ತು ವರ್ಷಗಳಿಗೊಮ್ಮೆ ಜನಗಣತಿ ನಡೆಯಬೇಕು**

'ಮೋದಿ ಮತ್ತೆ ಅಧಿಕಾರಕ್ಕೆ ಬಂದರೆ ಒಂದು ದೇಶ, ಒಂದು ಚುನಾವಣೆ ಮತ್ತು ಏಕರೂಪ ನಾಗರಿಕ ಸಂಹಿತೆ ಜಾರಿಗೆ ಬರಬಹುದು. 2029ರಲ್ಲಿ ಚುನಾವಣೆಯೇ ನಡೆಯುವುದಿಲ್ಲ ಎಂಬ ಭಯವೂ ನಮಗಿದೆ ಎಂದರು.

ಬಿಜೆಪಿಗೆ ಅನುಕೂಲ ಆಗಲಿ ಎಂಬ ಕಾರಣಕ್ಕೆ ಈ ಬಾರಿ ಚುನಾವಣೆಯ ಅವಧಿಯನ್ನೇ ವಿಸ್ತರಿಸಲಾಗಿದೆ. ಕಾಶ್ಮೀರ ದಿಂದ ಕನ್ಯಾಕುಮಾರಿಯವರೆಗೆ ಪ್ರಧಾನಿ ಮೋದಿ ಸಂಚಾರ ಮಾಡಲು ಅನುಕೂಲ ಕಲ್ಪಿಸಲಾಗಿದೆ' ಎಂದು ಮೊಯ್ಲಿ ಆರೋಪಿಸಿದರು.

## ಯಾವ ಮೋದಿ ಆಟವೂ ನಡೆಯೊಲ್ಲ, ಈ ಬಾರಿ ಗೀತಾ ಗೆಲುವು ಗ್ಯಾರಂಟಿ : ಮಧು ಬಂಗಾರಪ್ಪ

• **ಉದಯವಾಹಿನಿ ಶಿವಮೊಗ್ಗ**



ಶಿವಮೊಗ್ಗದಲ್ಲಿ ಈ ಬಾರಿ ಗೀತಾ ಶಿವರಾಜ್ ಕುಮಾರ ಗೆಲುವು ಗ್ಯಾರಂಟಿ. ಆದರೆ ರಾಜ್ಯದಲ್ಲಿ ಯಾವ ಮೋದಿ ಆಟವೂ ನಡೆಯೊಲ್ಲ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದರು.

ಇಂದು ಶಿವಮೊಗ್ಗದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜ್ ಕುಮಾರ ಪರ ಮತಯಾಚನೆ ವೇಳೆ ಮಾತನಾಡಿದ ಅವರು, ಶಿವಮೊಗ್ಗದಲ್ಲಿ ಯಾವತ್ತೂ ಇಷ್ಟೊಂದು ಒಗ್ಗಟ್ಟು ಕಂಡಿರಲಿಲ್ಲ. ಈ ಬಾರಿ ಕಾರ್ಯಕರ್ತರು ಕಮಿಟ್‌ಮೆಂಟ್ ಇಟ್ಟುಕೊಂಡು ಪ್ರಚಾರ ಮಾಡುತ್ತಿದ್ದಾರೆ.

ಗೀತಾ ಶಿವರಾಜ್ ಕುಮಾರ್ ಅಭ್ಯರ್ಥಿ ಆದ ಮೇಲೆ ಕೆಲಸಗಳು ಚೆನ್ನಾಗಿ ನಡೆಯುತ್ತಿವೆ. ಮತದಾರರು ಕೂಡ ಈ ಬಾರಿ ಬದಲಾವಣೆ ಮಾಡಬೇಕು ಅಂದುಕೊಂಡಿದ್ದಾರೆ. ಶಿವಮೊಗ್ಗ ನಗರದಲ್ಲಿ ಸಂಘಟನೆ ಕೊರತೆ ಇತ್ತು. ಈಗ ಬಹಳ ಚೆನ್ನಾಗಿ ಸಂಘಟನೆ ಆಗಿದೆ ಎಂದರು. ಈ ಬಾರಿ ಗೀತಾ ಶಿವರಾಜ್ ಕುಮಾರ್ ಅವರನ್ನ ಮತದಾರರು ಗೆದ್ದೇ ಗೆಲ್ಲಿಸುತ್ತಾರೆ. ಯಾವ ಮೋದಿಯೂ ಏನೂ ಮಾಡಲು ಆಗಲ್ಲ. ಈ ಬಾರಿ ಗೀತಾ ಗೆಲುವು ಗ್ಯಾರಂಟಿ ಎಂದು ವಿಶ್ವಾಸ ವ್ಯಕ್ತಪಡಿಸಿದರು.

## ಮೋದಿಯದ್ದು ರಾಮಸೇನೆ, 'ಇಂಡಿ' ರಾವಣಸೇನೆ: ಏಕನಾಥ ಶಿಂದೆ

• **ಉದಯವಾಹಿನಿ ಖಾನಾಪುರ**

ಪ್ರಧಾನಿ ನರೇಂದ್ರ ಮೋದಿ ಅವರು ರಾಮಸೇನೆ ಮುನ್ನಡೆಸುತ್ತಿದ್ದಾರೆ. ಆದರೆ 'ಇಂಡಿ' ಒಕ್ಕೂಟ ಹತ್ತು ತಲೆಯ ರಾವಣ ಸೇನೆಯನ್ನು ಒಳಗೊಂಡಿದೆ' ಎಂದು ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ ಶಿಂದೆ ಟೀಕಿಸಿದರು. ಬಿಜೆಪಿ ಅಭ್ಯರ್ಥಿ ವಿಶ್ವೇಶ್ವರ ಹೆಗಡೆ ಕಾಗೇರಿ ಪರವಾಗಿ ಪ್ರಚಾರ ಸಭೆಯಲ್ಲಿ ಅವರು, ದೇಶಕ್ಕಾಗಿ ತಮ್ಮ ಜೀವನ ಸಮರ್ಪಿಸಿದ ಮೋದಿ ಎಲ್ಲಿ ವಿದೇಶಗಳಲ್ಲಿ ಭಾರತದ ಮಾನ ಹಾನಿ ಮಾಡುವ ಕಾಂಗ್ರೆಸ್ ಯುವರಾಜ ಎಲ್ಲಿ ಎಂದು ರಾಹುಲ್ ಗಾಂಧಿ ಹೆಸರು ಹೇಳದೆ ಲೇವಡಿ ಮಾಡಿದರು.





ಉದಯವಾಹಿನಿ ಚಿತ್ರ

ಮೋದಿ 10 ವರ್ಷಗಳಲ್ಲಿ ದೇಶವನ್ನು ಪ್ರಗತಿಪಥದತ್ತ ಮುನ್ನಡೆಸಿದ್ದಾರೆ. ಯಾವುದೇ ಅಜೆಂಡಾ ಇಲ್ಲದ 'ಇಂಡಿ' ಮೈತ್ರಿ ಕೂಟದಿಂದ ಮೋದಿ ಅವರನ್ನು ಸೋಲಿಸುವುದು ಅಸಾಧ್ಯ'ಎಂದರು. 60 ವರ್ಷಗಳಲ್ಲಿ ಆಗದಷ್ಟು ಅಭಿವೃದ್ಧಿ ಕೆಲಸಗಳನ್ನು ಮೋದಿ ಸರ್ಕಾರ ಹತ್ತೇ ವರ್ಷ ಗಳಲ್ಲಿ ಮಾಡಿದೆ. ಕಾಂಗ್ರೆಸ್ ಅಧಿಕಾರವಧಿಯಲ್ಲಿ ಹಗರಣಗಳು, ಭ್ರಷ್ಟಾಚಾರ ಮತ್ತು ಬಾಂಬ್ ಸ್ಫೋಟ ಸಾಮಾನ್ಯವಾಗಿದ್ದವು. ಎಂದರು.

> **ಕಾಂಗ್ರೆಸ್ ಸುಡುವ ಮನೆ ಎಂದಿದ್ದು ಅಂಬೇಡ್ಕರ್ ಮೋದಿ ಅವರು ಸಂವಿಧಾನ ಬದಲಿಸುತ್ತಿದ್ದಾರೆ ಎಂದು ಕಾಂಗ್ರೆಸ್‌ನವರು ಪ್ರಚಾರ ಮಾಡುತ್ತಿದ್ದಾರೆ. ಇಂತಹ ಅಪಪ್ರಚಾರಕ್ಕೆ ಜನತೆ ಬಲಿ ಆಗಬಾರದು. ಬಾಬಾಸಾಹೇಬ ಕಾಂಗ್ರೆಸ್ ಪಕ್ಷವನ್ನು ಸುಡುವ ಮನೆ ಎಂದು ಅಂಬೇಡ್ಕರ್ ಟೀಕಿಸಿದ್ದರು** -ಶಿಂದೆ

## ರಿಪ್ಪನ್ ಪೇಟೆ ಬಳಿ ಕಾಡಾನೆ ದಾಳಿಗೆ ವ್ಯಕ್ತಿ ಸಾವು

• **ಉದಯವಾಹಿನಿ ಶಿವಮೊಗ್ಗ**



ಉದಯವಾಹಿನಿ ಚಿತ್ರ

ಕಾಡಾನೆ ದಾಳಿಗೆ ರಿಪ್ಪನ್ ಪೇಟೆ ಬಳಿಯ ಅರಸಾಳು ಗ್ರಾಮ ಪಂಚಾಯತಿ ವ್ಯಾಪ್ತಿಯ ಬಸವಾಪುರ ಗ್ರಾಮದ ನಿವಾಸಿ ತಿಮ್ಮಪ್ಪ ಮಡಿವಾಳ (54) ಎಂಬುವವರು ಮೃತಪಟ್ಟಿದ್ದಾರೆ. ಶುಕ್ರವಾರ ಬೆಳಿಗ್ಗೆ 7 ಗಂಟೆಗೆ ಕಾಡಿನಿಂದ ತಿಮ್ಮಪ್ಪ ಬರುವಾಗ ಈ ಘಟನೆ ನಡೆದಿದೆ. ಸ್ಥಳಕ್ಕೆ ವನ್ಯಜೀವಿ ವಿಭಾಗದ ಸಿಸಿಎಫ್ ಹನುಮಂತಪ್ಪ, ಡಿ ಎಫ್ ಓ ಪ್ರಸನ್ನ ಪಟಗಾರ, ಎಸಿಎಫ್ ಸುರೇಶ್, ಹಣಗೆರೆ ವಿಜಯ್ ಕುಮಾರ್, ಮುಗುಡ್ತಿ ವನ್ಯಜೀವಿ ವಿಭಾಗದ ಆರ್‌ಎಫ್‌ಓ ಪವನ್ ಕುಮಾರ್ ಹಾಗೂ ಸಿಬ್ಬಂದಿಗಳು ಸ್ಥಳಕ್ಕೆ ಭೇಟಿ ನೀಡಿದ್ದಾರೆ.ಮೃತನ ಮನೆಗೆ ಶಾಸಕ ಗೋಪಾಲಕೃಷ್ಣ ಬೇಳೂರು ಅವರು ಭೇಟಿ ನೀಡಿ 1 ಲಕ್ಷ ಪರಿಹಾರ ನೀಡಿದರು.

## ಕಾಂಗ್ರೆಸ್ ಬಿಜೆಪಿ ಕಾರ್ಯಕರ್ತರ ನಡುವೆ ಗಲಾಟೆ : 7 ಜನರಿಗೆ ಗಾಯ, ಪ್ರಕರಣ ದಾಖಲು

• **ಉದಯವಾಹಿನಿ ಯಾದಗಿರಿ**

ಕಾಂಗ್ರೆಸ್ ಹಾಗೂ ಬಿಜೆಪಿ ಕಾರ್ಯಕರ್ತರ ನಡುವೆ ಗಲಾಟೆ ನಡೆದಿದ್ದು, ಈ ಒಂದು ಘಟನೆಯಲ್ಲಿ 6 ರಿಂದ 7 ಜನರಿಗೆ ಗಾಯಗಳಾಗಿರುವ ಘಟನೆ ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ರಾಯನಪಾಳ್ಯ ಗ್ರಾಮದಲ್ಲಿ ನಡೆದಿದೆ.

ನಿನ್ನೆ ಕಾಂಗ್ರೆಸ್ ಬಿಜೆಪಿ ಕಾರ್ಯಕರ್ತರ ನಡುವೆ ಗಲಾಟೆ ನಡೆದಿತ್ತು.ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ರಾಯನ ಪಾಳ್ಯದಲ್ಲಿ ನಿನ್ನೆ ರಾತ್ರಿ ಎರಡು ಪಕ್ಷಗಳ ಕಾರ್ಯಕರ್ತರ ನಡುವೆ ಗಲಾಟೆ ನಡೆದಿತ್ತು. ಪರಸ್ಪರ ಕಲ್ಲು ತೂರಾಟದ ವೇಳೆ ಆರು ಏಳು ಜನರಿಗೆ ಗಾಯವಾಗಿದೆ.



ಉದಯವಾಹಿನಿ ಚಿತ್ರ

ಪ್ರಕರಣ ಸಂಬಂಧ ಬಿಜೆಪಿ ಕಾರ್ಯಕರ್ತರನ್ನು ಬಂಧಿಸಲಾಗಿದ್ದು, ಕಾರ್ಯಕರ್ತರನ್ನು ಕರೆದೊಯ್ಯುವಾಗ ಬಿಜೆಪಿ ಅಭ್ಯರ್ಥಿ ರಾಜು ಗೌಡ ಪೊಲೀಸ್ ವಾಹನವನ್ನು ತಡೆದಿದ್ದಾರೆ.

ಪೊಲೀಸ್ ವಾಹನದ ಮುಂದೆ ಈ ವೇಳೆ ರಾಜುಗೌಡ ಮಲಗಿ ಕಾರ್ಯಕರ್ತರನ್ನು ಕರೆದುಕೊಂಡು ಹೋಗದಂತೆ ತಡೆದಿದ್ದಾರೆ. ಪರೀಕ್ಷೆ ಬರೆಯಲು ಹೊರಟವರನ್ನು ಬಂಧಿಸಿದ್ದಾರೆ ಎಂದು ಪೊಲೀಸರು ವಿರುದ್ಧ ಅವರು ಕಿಡಿ ಕಾರಿದ್ದಾರೆ. ಘಟನೆ ಕುರಿತಂತೆ ಕೊಡೆಕಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗಟ್ಟಿಗೊಳ್ಳುತ್ತಿದೆ ಚುನಾವಣಾ ಬಹಿಷ್ಕಾರದ ಕೂಗು

### ● ಮೂಲ ಸೌಕರ್ಯಗಳ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಗ್ರಾಮಸ್ಥರು ಸಭೆ ನಡೆಸಿ ಮತದಾನ ಬಹಿಷ್ಕಾರ ಹಾಕುತ್ತಿರುವ ಘಟನೆ

• **ಉದಯವಾಹಿನಿ ಹೊಸನಗರ**

ತಾಲ್ಲೂಕಿನಲ್ಲಿ ಲೋಕಸಭಾ ಚುನಾವಣೆಯ ರಂಗು ಹೆಚ್ಚುತ್ತಿದ್ದಂತೆ ಗ್ರಾಮೀಣ ಪ್ರದೇಶದಲ್ಲಿ ಚುನಾವಣೆ ಬಹಿಷ್ಕಾರದ ಕೂಗು ಗಟ್ಟಿಗೊಳ್ಳುತ್ತಿದೆ. ಗ್ರಾಮಗಳ ಮೂಲ ಸೌಕರ್ಯಗಳ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಗ್ರಾಮಸ್ಥರು ಸಭೆ ನಡೆಸಿ ಮತದಾನ ಬಹಿಷ್ಕಾರ ಹಾಕುತ್ತಿರುವ ಘಟನೆಗಳು ಅಲ್ಲಲ್ಲಿ ನಡೆಯುತ್ತಿವೆ.

ತಾಲ್ಲೂಕಿನ ಏಳೆಂಟು ಗ್ರಾಮಗಳು ಈಗಾಗಲೇ ಚುನಾವಣೆ ಬಹಿಷ್ಕಾರ ಹಾಕಿದ್ದು, ಅಧಿಕಾರಿಗಳ ವರ್ಗ ಅಲ್ಲಿಗೆ ಭೇಟಿ ನೀಡಿ ಮನವೊಲಿಸುವ ಕೆಲಸ ಮಾಡಿದ್ದರೂ ಗ್ರಾಮಸ್ಥರು ಅದಕ್ಕೆ ಜಗ್ಗದೆ ಮತದಾನ ಬಹಿಷ್ಕಾರದ ನಿರ್ಣಯವನ್ನು ಅಚಲಗೊಳಿಸಿದ್ದಾರೆ.

ತಾಲ್ಲೂಕಿನ ಸಂಸೆಕ್ಕೈ, ತೌಡುಗೊಳಿ ಗ್ರಾಮಸ್ಥರು ತಮ್ಮ ಊರಿನ ಸಂಪರ್ಕ ರಸ್ತೆ ದುರಸ್ತಿಗೆ ಆಗ್ರಹಿಸಿ ಮತದಾನ ಬಹಿಷ್ಕಾರ ಹಾಕಿದ ಮೊದಲ ಗ್ರಾಮವಾಗಿದೆ. ನಂತರ ವಾರಂಬಳ್ಳಿ ಗ್ರಾಮದಲ್ಲಿ ದೂರ ಸಂಪರ್ಕ ಇಲ್ಲವೆಂದು ಆರೋಪಿಸಿದ ಗ್ರಾಮಸ್ಥರು ಮತದಾನ ಮಾಡುವುದಿಲ್ಲ ಎಂದು ನಿರ್ಣಯ ಕೈಗೊಂಡರು.

ಯಡೂರು ಬಳಿಯ ಮಾಗಲು ಗ್ರಾಮಸ್ಥರು ಕೂಡ ರಸ್ತೆ ಸರಿ ಇಲ್ಲ ಎಂದು ಬಹಿಷ್ಕಾರದ ಕೂಗು ಎಬ್ಬಿಸಿದ್ದಾರೆ. ಇನ್ನು ಕುಂಬತ್ತಿ ಗ್ರಾಮದಲ್ಲಿ ನಡೆಯುತ್ತಿರುವ ಅಕ್ರಮ ಗಣಿಗಾರಿಕೆ ಖಂಡಿಸಿ ಮತ ಬಹಿಷ್ಕಾರದ ಎಚ್ಚರಿಕೆ ನೀಡಿದ್ದಾರೆ. ಬಿಲಗೋಡಿ, ಈಚಲಕೊಪ್ಪ, ಕಾಪೇರಮನೆ ಗ್ರಾಮಸ್ಥರು ಕೂಡ 'ನಮ್ಮೂರಿಗೆ ಮತ ಕೇಳಲು ಬರಬೇಡಿ' ಎಂದು ಒಕ್ಕೊರಲ ಧ್ವನಿಯಲ್ಲಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ರಸ್ತೆಯದ್ದೇ ದೊಡ್ಡ ಸಮಸ್ಯೆ:** ತಾಲ್ಲೂಕಿನ ಮತ್ತಿಕೈ ಗ್ರಾಮದ ತುತ್ತಿಕೊಡ್ಲು, ಸಂಸೆಕ್ಕೈ, ತೌಡುಗೊಳ್ಳಿ ಕುಗ್ರಾಮಗಳಾಗಿವೆ. ಇಲ್ಲಿ ಉತ್ತಮ ರಸ್ತೆ ಇಲ್ಲ. ಇದರಿಂದ ಬೇಸತ್ತ ಗ್ರಾಮಸ್ಥರು ಚುನಾವಣೆ ಬಹಿಷ್ಕಾರದ ತೀರ್ಮಾನ ಕೈಗೊಂಡು ಬ್ಯಾನರ್ ಕಟ್ಟಿ ಎಚ್ಚರಿಕೆ ನೀಡಿದ್ದಾರೆ. ಈ ಮೂರು ಗ್ರಾಮಗಳಲ್ಲಿ 35ಕ್ಕೂ ಹೆಚ್ಚು ಮನೆಗಳಿದ್ದು, 200 ಮಂದಿ ವಾಸವಿದ್ದಾರೆ. ಗ್ರಾಮ ಸಂಪರ್ಕಿಸುವ 3 ಕಿ.ಮೀ. ರಸ್ತೆ ಇಂದಿಗೂ ದುರಾವಸ್ಥೆಯಲ್ಲಿದೆ. 'ನಾವು ನಡೆಸಿದ ಹತ್ತಾರು ಹೋರಾಟ ವ್ಯರ್ಥವಾಗಿದೆ' ಎಂದು ಗ್ರಾಮಸ್ಥರು ದೂರುತ್ತಾರೆ.

**ಕುಗ್ರಾಮಗಳ ತವರು:** ಹೊಸನಗರ ಹೇಳಿ ಕೇಳಿ ಅಭಿವೃದ್ಧಿಯಲ್ಲಿ ಹಿಂದುಳಿದ ತಾಲ್ಲೂಕು. ಕುಗ್ರಾಮಗಳ ತವರೂರು. ಬಹಳಷ್ಟು ಗ್ರಾಮಗಳಲ್ಲಿ ಜನರ ಓಡಾಟಕ್ಕೆ ಸಂಪರ್ಕ ವ್ಯವಸ್ಥೆಯೇ ಇಲ್ಲ. ರಸ್ತೆ, ಮೋರಿ, ಸೇತುವೆ, ಕುಡಿಯುವ ನೀರು, ದೂರವಾಣಿ, ಕಾಲುಸಂಕ ಇಲ್ಲಿನ ಜ್ವಲಂತ ಸಮಸ್ಯೆಗಳು.

### ಸಾಲು ಸಾಲು ಮನವಿ

**ಗ್ರಾಮಸ್ಥರು ಸೌಕರ್ಯ ಪಡೆಯುವಲ್ಲಿ ಸೋತ್ತಿದ್ದಾರೆ. ಸಾಲು ಸಾಲು ಮನವಿ ನೀಡಿ ಬೇಸತ್ತಿದ್ದಾರೆ. ಇದೀಗ ಲೋಕಸಭಾ ಚುನಾವಣೆ ಎದುರಾಗಿದ್ದು ಗ್ರಾಮಸ್ಥರು ಮತ ಬಹಿಷ್ಕಾರದಂತಹ ಹೋರಾಟಕ್ಕೆ ಇಳಿದು ಎಚ್ಚರಿಕೆ ರವಾನಿಸಿದ್ದಾರೆ.**



ಉದಯವಾಹಿನಿ ಚಿತ್ರ

> **ಗ್ರಾಮೀಣ ಭಾಗದಲ್ಲಿ ಚುನಾವಣೆ ಬಹಿಷ್ಕಾರದ ಕೂಗು ಇದೇ ಮೊದಲಲ್ಲ. ಬಹಿಷ್ಕಾರ ಕೇಳಿ ಬಂದಾಗ ಅಧಿಕಾರಿಗಳು ಗ್ರಾಮಸ್ಥರ ಮನವೊಲಿಸಿ ಚುನಾವಣೆ ನಡೆಸಿದ್ದರು. ಈ ಬಾರಿಯೂ ಬಹಿಷ್ಕಾರ ಎಚ್ಚರಿಕೆಯ ಕೂಗು ಗಟ್ಟಿಗೊಳ್ಳುತ್ತಿದೆ. ಇದು ಅಧಿಕಾರಿಗಳಿಗೆ ತಲೆಬಿಸಿಯಾಗಿದೆ. ಬಹಿಷ್ಕಾರದ ಕೂಗು ಕೇಳಿ ಬಂದ ಗ್ರಾಮಗಳಿಗೆ ಭೇಟಿ ನೀಡಿ ಗ್ರಾಮಸ್ಥರ ಮನವೊಲಿಸುವ ನೆಪ ಮಾತ್ರದ ನಾಟಕ ನಡೆಯುತ್ತಿದೆ. ಆದರೆ ಇದಕ್ಕೆಲ್ಲ ಜಗ್ಗದ ಗ್ರಾಮಸ್ಥರು ತಮ್ಮ ನಿರ್ಧಾರ ಅಚಲ ಎನ್ನುತ್ತಿದ್ದಾರೆ.** -ಗ್ರಾಮಸ್ಥರು

**ಜಗ್ಗದೆ ಮತದಾನ ಬಹಿಷ್ಕಾರ**

### ಜನಪ್ರತಿನಿಧಿಗಳ ಮೌನ

**ಗ್ರಾಮೀಣ ಭಾಗದಲ್ಲಿ ಮತ ಬಹಿಷ್ಕಾರದಂತಹ ಗಟ್ಟಿಧ್ವನಿ ಕೇಳಿ ಬರುತ್ತಿದ್ದರೂ ಜನಪ್ರತಿನಿಧಿಗಳು ಇದರತ್ತ ತಲೆ ಕೆಡಿಸಿಕೊಳ್ಳುತ್ತಿಲ್ಲ. ಈ ಬಗ್ಗೆ ಮಾಹಿತಿ ಇದ್ದರೂ ಸಮಸ್ಯೆ ನಿವಾರಣೆಗೆ ಆಸಕ್ತಿ ತೋರುತ್ತಿಲ್ಲ ಎಂಬ ಆರೋಪ ಕೇಳಿ ಬರುತ್ತಿದೆ.**

# ಯುವ ರಾಜನಿಗೆ ವಯನಾಡಿನಲ್ಲಿ ಸೋಲುವ ಭೀತಿ

## ಹೆದರಬೇಡಿ, ಓಡಿ ಹೋಗಬೇಡಿ: ಅಮೇಥಿಯಿಂದ ದೂರವಾದ ರಾಹುಲ್ ಗಾಂಧಿಗೆ ಪ್ರಧಾನಿ ಮೋದಿ ಟಾಂಗ್

**ಹೊಸ ದಿಲ್ಲಿ:** ಉತ್ತರ ಪ್ರದೇಶ ರಾಜ್ಯದ ಅಮೇಥಿ ಹಾಗೂ ರಾಯ್‌ಬರೇಲಿ ಲೋಕಸಭಾ ಕ್ಷೇತ್ರಗಳಲ್ಲಿ ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾದ ಮೇ 3 ಶುಕ್ರವಾರದಂದೇ ಬೆಳಗ್ಗೆ ತನ್ನ ಅಭ್ಯರ್ಥಿ ಪಟ್ಟಿ ಪ್ರಕಟ ಮಾಡಿದ ಕಾಂಗ್ರೆಸ್ ಪಕ್ಷ ಈ ಬಾರಿ ಅಮೇಥಿಯಲ್ಲಿ ಕಿಶೋರಿ ಲಾಲ್ ಶರ್ಮಾ ಅವರಿಗೆ ಟಿಕೆಟ್ ಕೊಟ್ಟಿದೆ. ರಾಹುಲ್ ಗಾಂಧಿ ಅವರು ತಮ್ಮ ತಾಯಿ ಪ್ರತಿನಿಧಿಸುತ್ತಿದ್ದ ರಾಯ್‌ಬರೇಲಿ ಕ್ಷೇತ್ರದಿಂದ ಸ್ಪರ್ಧೆ ಮಾಡಲಿದ್ದಾರೆ.

ಕಾಂಗ್ರೆಸ್ ಪಕ್ಷದ ಈ ನಿರ್ಧಾರಕ್ಕೆ ಪ್ರಧಾನಿ ಮೋದಿ ಅವರು ವ್ಯಂಗ್ಯವಾಡಿದ್ದಾರೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಸೋಲಿನ ಭಯದಿಂದ ಅಮೇಥಿ ಕ್ಷೇತ್ರದಿಂದ ಓಡಿ ಹೋದರು ಎಂದು ಹೇಳಿದ್ದಾರೆ. ನಾನು ಕಾಂಗ್ರೆಸ್ ನಾಯಕರಿಗೆ ಹೇಳಲು ಇಚ್ಛಿಸುತ್ತೇನೆ. ನೀವು ಹೆದರಬೇಡಿ, ಓಡಿ ಹೋಗಬೇಡಿ ಎಂದು ಪ್ರಧಾನಿ ಮೋದಿ ವ್ಯಂಗ್ಯವಾಡಿದರು. ಕೇಂದ್ರದ ಎನ್‌ಡಿಎ ಸರ್ಕಾರ ತನ್ನ

- ಅಮೇಥಿ ಕ್ಷೇತ್ರದಲ್ಲಿ 2019ರ ಲೋಕಸಭಾ ಚುನಾವಣೆಯಲ್ಲಿ ಸೋಲು ಕಂಡಿದ್ದ ರಾಹುಲ್ ಗಾಂಧಿ
- 2024ರ ಚುನಾವಣೆಯಲ್ಲಿ ಅಮೇಥಿ ಬದಲು ರಾಯ್‌ಬರೇಲಿ ಆಯ್ಕೆ
- ರಾಹುಲ್ ಗಾಂಧಿ ನಿರ್ಧಾರಕ್ಕೆ ಪ್ರಧಾನಿ ಮೋದಿ ವ್ಯಂಗ್ಯ

ರಾಜಕೀಯ ವಿರೋಧಿಗಳ ವಿರುದ್ಧ ತನಿಖಾ ಸಂಸ್ಥೆಗಳನ್ನು ಬಳಸಿಕೊಂಡು ಕಿರುಕುಳ ನೀಡುತ್ತದೆ ಎಂದು ಆರೋಪಿಸುವ ಸಂದರ್ಭಗಳಲ್ಲಿ ರಾಹುಲ್ ಗಾಂಧಿ ಅವರು 'ಹೆದರಬೇಡಿ' ಎಂಬ ಪದ ಪ್ರಯೋಗ ಮಾಡುತ್ತಿದ್ದರು. ಇದೀಗ ಈ ಪದವನ್ನೇ ಪ್ರಧಾನಿ ಮೋದಿ ರಾಹುಲ್ ಗಾಂಧಿ ವಿರುದ್ಧ ಬಳಕೆ ಮಾಡಿದ್ದಾರೆ.

ರಾಯ್‌ಬರೇಲಿ ಲೋಕಸಭಾ ಕ್ಷೇತ್ರದಲ್ಲಿ ಸೋನಿಯಾ ಗಾಂಧಿ ಅವರು ಸ್ಪರ್ಧೆ ಮಾಡುತ್ತಿದ್ದರು.



ಈ ಬಾರಿ ಅವರು ರಾಜ್ಯಸಭೆಗೆ ಹೋಗಿರುವ ಕಾರಣ, ಗಾಂಧಿ ಪರಿವಾರದ ಈ ಕ್ಷೇತ್ರದಲ್ಲಿ ಯಾರು ಸ್ಪರ್ಧೆ ಮಾಡ್ತಾರೆ ಅನ್ನೋ ಪ್ರಶ್ನೆ ಎದುರಾಗಿತ್ತು.

ಇನ್ನು 2019ರ ಲೋಕಸಭಾ ಚುನಾವಣೆಯಲ್ಲಿ ಕೇಂದ್ರ ಸಚಿವೆ ಸ್ಮೃತಿ ಇರಾನಿ ಅವರ ವಿರುದ್ಧ ಸೋಲು ಕಂಡಿದ್ದ ರಾಹುಲ್ ಗಾಂಧಿ, ಈ ಬಾರಿ ಅಮೇಥಿ ಬದಲು ರಾಯ್‌ಬರೇಲಿಯಿಂದ ಸ್ಪರ್ಧೆ ಮಾಡುತ್ತಿದ್ದಾರೆ.

ಜೊತೆಯಲ್ಲೇ ಎರಡನೇ ಕ್ಷೇತ್ರವಾಗಿ ಕೇರಳದ ವಯನಾಡಿನಿಂದಲೂ ರಾಹುಲ್ ಸ್ಪರ್ಧೆ ಮಾಡಿದ್ದಾರೆ.

ಪ್ರಧಾನಿ ಮೋದಿ ವ್ಯಂಗ್ಯ

> ಪ್ರಧಾನಿ ಮೋದಿ ಮಾತ್ರವಲ್ಲ ಹಲವು ನಾಯಕರು ಕಾಂಗ್ರೆಸ್ ಪಕ್ಷದ ನಿರ್ಧಾರಕ್ಕೆ ಲೇವಡಿ ಮಾಡಿದ್ದಾರೆ. ಅಮೇಥಿಯ ಹಾಲಿ ಸಂಸದೆ ಕೇಂದ್ರ ಸಚಿವೆ ಸ್ಮೃತಿ ಇರಾನಿ ಅವರು 2024ರ ಲೋಕಸಭಾ ಚುನಾವಣೆಯಲ್ಲೂ ಅಮೇಥಿಯಿಂದಲೇ ಕಣಕ್ಕೆ ಇಳಿದಿದ್ದಾರೆ. ಅವರ ವಿರುದ್ಧ ಸೋಲುವ ಭಯದಿಂದ ರಾಹುಲ್ ಗಾಂಧಿ ಅಮೇಥಿ ಬಿಟ್ಟು ರಾಯ್‌ಬರೇಲಿಗೆ ಓಡಿ ಹೋದರು ಎಂದು ವ್ಯಂಗ್ಯವಾಡಿದ್ದಾರೆ.

ಕಳೆದ ಬಾರಿ ಅಮೇಥಿಯಲ್ಲಿ ಸೋತಿದ್ದರೂ ಕೂಡಾ ವಯನಾಡಿನಲ್ಲಿ ಗೆಲುವು ಸಾಧಿಸಿದ್ದ ಕಾರಣ ರಾಹುಲ್ ಗಾಂಧಿ ಅವರ ಸಂಸತ್ ಸದಸ್ಯ ಸ್ಥಾನ ಉಳಿದಿತ್ತು. ಈ ಎಲ್ಲಾ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಪಶ್ಚಿಮ ಬಂಗಾಳದಲ್ಲಿ ಚುನಾವಣಾ ಪ್ರಚಾರ ಭಾಷಣ ಮಾಡುವ ವೇಳೆ ರಾಹುಲ್ ಗಾಂಧಿ ಅವರ ಹೆಸರನ್ನು ಹೇಳದೆ ವಿಷಯ ಪ್ರಸ್ತಾಪಿಸಿದ ಪ್ರಧಾನಿ ಮೋದಿ, 'ಯುವ ರಾಜನಿಗೆ ವಯನಾಡಿನಲ್ಲಿ ಸೋಲುವ ಭೀತಿ ಶುರುವಾಗಿದೆ.

ಮತದಾನ ಮುಗಿದ ಕೂಡಲೇ ಮತ್ತೊಂದು ಕ್ಷೇತ್ರದ ಕಡೆಗೆ ಗಮನ ಕೊಟ್ಟಿದ್ದಾರೆ. ಅಮೇಥಿಯಲ್ಲಿ ಗೆಲ್ಲುತ್ತೀರಾ ಎಂದು ಬೆಂಬಲಿಗರು ಎಷ್ಟೇ ಭರವಸೆ ತುಂಬಿದರೂ ಕೂಡಾ ಆತಂಕಕ್ಕೆ ಒಳಗಾಗಿದ್ದ ಯುವರಾಜ ರಾಯಬರೇಲಿ ಕಡೆಗೆ ಗಮನ ಹರಿಸಿದ್ದಾರೆ. ಈ ಜನರು ಎಲ್ಲೆಡೆ ಓಡಾಡುತ್ತಾ ಭಯ ಪಡಬೇಡಿ ಎಂದು ಹೇಳುತ್ತಿರುತ್ತಾರ. ಹೀಗಾಗಿ, ಇವತ್ತು ನಾನು ಇವರಿಗೆ ಹೇಳುತ್ತೇನೆ. ನೀವು ಯಾವುದೇ ಕಾರಣಕ್ಕೂ ಭಯ ಪಡಬೇಡಿ, ಓಡಬೇಡಿ' ಎಂದು ಪ್ರಧಾನಿ ಮೋದಿ ರಾಹುಲ್ ಗಾಂಧಿ ಅವರ ಕಾಲೆಳೆದರು.

ಉದಯ ವಾಹಿನಿ
ದೇಶ/ವಿದೇಶ
ಶನಿವಾರ 04 ಮೇ 2024


## ಜೋ ಬಿಡೆನ್ ಹೇಳಿಕೆ ಸಮರ್ಥಿಸಿಕೊಂಡ ಶ್ವೇತಭವನ

**ವಾಷಿಂಗ್ಟನ್:** ಭಾರತ, ಚೀನಾ, ರಷ್ಯಾ ಮತ್ತು ಜಪಾನ್ ಅನ್ಯ ದ್ವೇಷ ರಾಷ್ಟ್ರಗಳು ಎಂಬ ಜೋ ಬಿಡೆನ್ ಹೇಳಿಕೆಯನ್ನು ಸಮರ್ಥಿಸಿಕೊಂಡಿರುವ ಶ್ವೇತ ಭವನ ಕೇವಲ ಅಮೆರಿಕ ಮಾತ್ರ ವಲಸಿಗರನ್ನು ಸ್ವಾಗತಿಸುವ ಏಕೈಕ ರಾಷ್ಟ್ರವಾಗಿದೆ ಎಂದು ಪುನರುಚ್ಚರಿಸಿದೆ.



ಚುನಾವಣಾ ನಿಧಿಸಂಗ್ರಹಣೆಯಲ್ಲಿ ಬಿಡೆನ್ ಮಾಡಿದ ಟೀಕೆಗಳ ಬಗ್ಗೆ ಪ್ರಶ್ನೆಗೆ ಪ್ರತಿಕ್ರಿಯಿಸಿದ ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕರೀನ್ ಜೀನ್-ಪಿಯರ್ ಅವರು ಅಧ್ಯಕ್ಷರು ವಿಶಾಲವಾದ ಅಂಶವನ್ನು ಮಾಡುತ್ತಿದ್ದಾರೆ ಎಂದು ಪ್ರತಿಪಾದಿಸಿದರು. ನಮ ಮಿತ್ರರಾಷ್ಟ್ರಗಳು ಮತ್ತು ಪಾಲುದಾರರಿಗೆ ಅದು ಚೆನ್ನಾಗಿ ತಿಳಿದಿದೆ ಈ ಅಧ್ಯಕ್ಷರು ಅವರನ್ನು ಎಷ್ಟು ಗೌರವಿಸುತ್ತಾರೆ ಎಂದು ಜೀನ್-ಪಿಯರ್ ಅವರು ತನ್ನ ದೈನಂದಿನ ಸುದ್ದಿಗೋಷ್ಠಿಯಲ್ಲಿ ಸುದ್ದಿಗಾರರಿಗೆ ತಿಳಿಸಿದರು. ನಿಮಗೆ ತಿಳಿದಿರುವಂತೆ, ಜಪಾನ್‌ಗೆ ಸಂಬಂಧಿಸಿದಂತೆ, ಅವರು ರಾಜ್ಯ ಭೇಟಿಗಾಗಿ ಇಲ್ಲಿಗೆ ಬಂದಿದ್ದರು. ಯುಎಸ್-ಜಪಾನ್ ಸಂಬಂಧವು ಒಂದು ಪ್ರಮುಖ ಸಂಬಂಧವಾಗಿದೆ. ಇದು ಆಳವಾದ, ನಿರಂತರ ಮೈತ್ರಿಯಾಗಿದೆ, ಅವರು ಹೇಳಿದರು.

ಇದು ನಮ ಮಿತ್ರರಾಷ್ಟ್ರಗಳೊಂದಿಗಿನ ನಮ ಸಂಬಂಧಕ್ಕೆ ಸಂಬಂಧಿಸಿದೆ, ಅದು ಮುಂದುವರಿಯುತ್ತದೆ. ನಿಸ್ಸಂಶಯವಾಗಿ, ನಾವು ಭಾರತದೊಂದಿಗೆ (ಮತ್ತು) ಜಪಾನ್‌ನೊಂದಿಗೆ ಬಲವಾದ ಸಂಬಂಧ ವನ್ನು ಹೊಂದಿದ್ದೇವೆ. ಮತ್ತು ಅಧ್ಯಕ್ಷರು, ನೀವು ಕಳೆದ ಮೂರು ವರ್ಷಗಳನ್ನು ನೋಡಿದರೆ, ಖಂಡಿತವಾಗಿಯೂ ಆ ರಾಜತಾಂತ್ರಿಕ ಸಂಬಂಧಗಳ ಮೇಲೆ ಕೇಂದ್ರೀಕರಿಸಿದ್ದಾರೆ ಎಂದು ಜೀನ್-ಪಿಯರ್ ಹೇಳಿದರು.

ನಮದು ವಲಸಿಗರ ದೇಶ ಎನ್ನುವುದು ಮುಖ್ಯವಾಗಿದೆ ಮತ್ತು ನಾವು ಅನೇಕ ದಾಳಿಗಳನ್ನು ನೋಡಿದ್ದೇವೆ ಆದ್ದರಿಂದ ಅಧ್ಯಕ್ಷರು ಎಂದಿಗೂ ತಮ ಮಾತಿನಿಂದ ದೂರ ಸರಿಯುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

## ಅಮೇಥಿಯಲ್ಲಿ 26 ವರ್ಷಗಳ ನಂತರ ಗಾಂಧಿಯೇತರ ಕುಟುಂಬದವರ ಸ್ಪರ್ಧೆ

**ಅಮೇಥಿ:** ಉತ್ತರ ಪ್ರದೇಶದ ಅಮೇಥಿ ಲೋಕಸಭಾ ಕ್ಷೇತ್ರದಲ್ಲಿ 26 ವರ್ಷಗಳ ನಂತರ ಇದೇ ಮೊದಲ ಬಾರಿಗೆ ಗಾಂಧಿ ಕುಟುಂಬ ಹೊರತುಪಡಿಸಿದ ಅಭ್ಯರ್ಥಿಯೊಬ್ಬರು ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದಾರೆ. ಗಾಂಧಿ ಕುಟುಂಬದ ಹಿಡಿತದಲ್ಲಿದ್ದ ಉತ್ತರ ಪ್ರದೇಶದ ಅಮೇಥಿ ಕ್ಷೇತ್ರವೂ 2019ರಲ್ಲಿ ಬಿಜೆಪಿ ಪಾಲಾಗಿತ್ತು ಅಂತಹ ಕ್ಷೇತ್ರವನ್ನು ಮರು ಕೈವಶ ಮಾಡಿಕೊಳ್ಳಲು ಕಾಂಗ್ರೆಸ್ ಇನ್ನಿಲ್ಲದ ಕಸರತ್ತು ನಡೆಸುತ್ತಿದೆ.

ಈ ಬಾರಿ ರಾಹುಲ್‌ಗಾಂಧಿ ಅವರೇ ಸ್ಪರ್ಧಿಸುವ ಮೂಲಕ ಕ್ಷೇತ್ರವನ್ನು ಮರುವಶ ಮಾಡಿಕೊಳ್ಳಲಿದ್ದಾರೆ ಎಂದು ಭಾವಿಸಲಾಗಿತ್ತು. ಆದರೆ ಕೈ ಮುಖಂಡರು ಗಾಂಧಿ ಕುಟುಂಬ ಆಪ್ತರಾಗಿರುವ ಕಿಶೋರಿ ಲಾಲ್ ಶರ್ಮಾ ಅವರಿಗೆ ಟಿಕೆಟ್ ನೀಡಿದೆ. ಮೂರು ದಶಕಗಳಲ್ಲಿ ಕನಿಷ್ಠ ನಾಲ್ವರು ಗಾಂಧಿ ಕುಟುಂಬದ ಸದಸ್ಯರು ವಿವಿಧ ಸಮಯಗಳಲ್ಲಿ



ಎರಡನೇ ಗಾಂಧಿಯೇತರ ಕಾಂಗ್ರೆಸ್ ಅಭ್ಯರ್ಥಿ

ಸ್ಪರ್ಧಿಸಿದ ಈ ಕ್ಷೇತ್ರದ ಎರಡನೇ ಗಾಂಧಿಯೇತರ ಕಾಂಗ್ರೆಸ್ ಅಭ್ಯರ್ಥಿ ಎಂಬ ಖ್ಯಾತಿಗೆ ಶರ್ಮಾ ಒಳಗಾಗಿದ್ದಾರೆ.

ಮಾಜಿ ಪ್ರಧಾನಿ ರಾಜೀವ್ ಗಾಂಧಿಯವರ ಹತ್ಯೆಯ ನಂತರ ತೆರವಾದ ನಂತರ ಗಾಂಧಿಯೇತರ ಕುಟುಂಬದ ಸತೀಶ್ ಶರ್ಮಾ ಅವರು ಎರಡು ಬಾರಿ ಗೆದ್ದಿದ್ದು, 1998ರ ಚುನಾವಣೆಯಲ್ಲಿ ಸೋಲಿನ ರುಚಿ ಕಂಡಿದ್ದರು.

ಸಂಜಯ್ ಗಾಂಧಿ 1990 ರಲ್ಲಿ ಈ ಸ್ಥಾನವನ್ನು ಗೆದ್ದರು, ಆದರೆ ಆ ವರ್ಷ ವಿಮಾನ ಅಪಘಾತದಲ್ಲಿ ಅವರ ಮರಣದ ನಂತರ 1981 ರಲ್ಲಿ ಉಪಚುನಾವಣೆಗಳಿಗೆ ಕಾರಣವಾಯಿತು. ರಾಜೀವ್ ಗಾಂಧಿ ಅವರು ಸ್ಥಾನವನ್ನು ಪಡೆದರು ಮತ್ತು 1991 ರಲ್ಲಿ ಅವರ ಹತ್ಯೆಯಾಗುವವರೆಗೂ ನಾಲ್ಕು ಬಾರಿ ಗೆದ್ದಿದ್ದರು.

### ಸತತವಾಗಿ ಗೆಲುವು

ಆ ನಂತರ 2004, 2009 ಹಾಗೂ 2014ರಲ್ಲಿ ಈ ಕ್ಷೇತ್ರದಿಂದ ರಾಹುಲ್ ಸತತವಾಗಿ ಗೆಲುವು ಸಾಧಿಸಿದ್ದರೂ ಆದರೆ, ಕಳೆದ 2019ರಲ್ಲಿ ಅವರು ಸ್ಮೃತಿ ಇರಾನಿ ವಿರುದ್ಧ ಸೋತಿದ್ದರು. ಇದೀಗ ಅಮೇಥಿಗೆ ಮತ್ತೆ ಚುನಾವಣೆ ನಡೆಯುತ್ತಿದ್ದು ಎರಡನೇ ಬಾರಿಗೆ ಗಾಂಧಿಯೇತರ ಕುಟುಂಬದ ವ್ಯಕ್ತಿಯಾಗಿರುವ ಶರ್ಮಾ ಅವರು ತಮ್ಮ ಅದೃಷ್ಟ ಪರೀಕ್ಷೆಗೆ ಇಳಿದಿದ್ದಾರೆ.

## ಓವೈಸಿ ಕಾರಿನ ಮೇಲೆ ಗುಂಡಿನ ದಾಳಿ ನಡೆಸಿದ್ದವರಿಗೆ ಜಾಮೀನು ಮಂಜೂರು

**ಪ್ರಯಾಗರಾಜ್:** ಉತ್ತರ ಪ್ರದೇಶ ವಿಧಾನ ಸಭೆಯ ವೇಳೆ ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ಅವರ ವಾಹನದ ಮೇಲೆ ಗುಂಡು ಹಾರಿಸಿದ ಆರೋಪದ ಮೇಲೆ ಬಂಧಿತರಾಗಿದ್ದ ಇಬ್ಬರು ಆರೋಪಿಗಳಿಗೆ ಅಲಹಾಬಾದ್ ಹೈಕೋರ್ಟ್ ಜಾಮೀನು ಮಂಜೂರು ಮಾಡಿದೆ.

ನ್ಯಾಯಮೂರ್ತಿ ಪಂಕಜ್ ಭಾಟಿಯಾ ಅವರು ಆರೋಪಿಗಳಿಗೆ ಜಾಮೀನು ನೀಡುವಾಗ ಆರೋಪಿಗಳಾದ ಸಚಿನ್ ಶರ್ಮಾ ಮತ್ತು ಸುಭಮ್ ಗುರ್ಜಾರ್ ಅವರನ್ನು ಪ್ರಥಮ ಮಾಹಿತಿ ವರದಿಯಲ್ಲಿ (ಎಫ್‌ಐಆರ್) ಹೆಸರಿಸಲಾಗಿಲ್ಲ ಎಂದು ಹೇಳಿದರು.

ಸಿಸಿಟಿವಿ ದಶ್ಯಾವಳಿಗಳನ್ನು ವಿಶ್ಲೇಷಿಸಿದ ನಂತರ ತನಿಖಾಧಿಕಾರಿ ವ್ಯಕ್ತಪಡಿಸಿದ ಅಭಿಪ್ರಾಯದ ಆಧಾರದ ಮೇಲೆ ಅವರನ್ನು ಅಪರಾಧದೊಂದಿಗೆ ಸಂಪರ್ಕಿಸಲಾಗಿದೆ ಎಂದು ನ್ಯಾಯಾಲಯವು ಹೇಳಿದೆ. ಅರ್ಜಿದಾರರನ್ನು ಪ್ರಶ್ನಾರ್ಹ ಅಪರಾಧದೊಂದಿಗೆ ಜೋಡಿಸುವ ಸಾಕ್ಷ್ಯಗಳು ಪ್ರಾಥಮಿಕವಾಗಿ ದುರ್ಬಲ ಸಾಕ್ಷ್ಯಗಳಾಗಿವೆ ಎಂದು ನ್ಯಾಯಾಲಯವು ಹೇಳಿದೆ.



ಪ್ರಾಥಮಿಕ ದುರ್ಬಲ ಸಾಕ್ಷ್ಯ


ಸಿಸಿಟಿವಿ ದಶ್ಯಾವಳಿಗಳಲ್ಲಿ ಕಂಡುಬರುವ ವ್ಯಕ್ತಿಗಳ ಗುರುತನ್ನು ಪರಿಶೀಲಿಸುವ ಮತ್ತು ನಿಜವಾದ ಛಾಯಾಚಿತ್ರಗಳೊಂದಿಗೆ ಹೊಂದಿಸುವ ವಸ್ತುವು ಪ್ರಕರಣದ ಡೈರಿಯಿಂದ ಕಾಣೆಯಾಗಿದೆ. ಹೀಗಾಗಿ, ಅರ್ಜಿದಾರರನ್ನು ಪ್ರಶ್ನಾರ್ಹ ಅಪರಾಧದೊಂದಿಗೆ ಜೋಡಿಸುವ ಸಾಕ್ಷ್ಯವು ಪ್ರಾಥಮಿಕವಾಗಿ ದುರ್ಬಲವಾಗಿದೆ.

ಇಲ್ಲಿಯವರೆಗೆ ದಾಖಲಿಸಲಾದ ಮೂರು ಹೇಳಿಕೆಗಳಲ್ಲಿ ಆರೋಪಿಗಳ ಹೆಸರುಗಳು ಹೊರಬಿದ್ದಿಲ್ಲ ಮತ್ತು ಸಂತ್ರಸ್ಥ ಹಾಗೂ ಕಾರಿನಲ್ಲಿ ಅವರೊಂದಿಗಿದ್ದ ಇಬ್ಬರು ವ್ಯಕ್ತಿಗಳಿಗೆ ಆರೋಪಿಗಳ ಪರಿಚಯವಿಲ್ಲ ಎಂದು ನ್ಯಾಯಾಲಯ ಹೇಳಿದೆ.

2022 ರ ಉತ್ತರ ಪ್ರದೇಶ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಉತ್ತರ ಪ್ರದೇಶದ ಹಾಪುರ್ ಜಿಲ್ಲೆಯ ಪಿಲ್ಖುವಾದಲ್ಲಿ ಅಸಾದುದ್ದೀನ್ ಓವೈಸಿ ಅವರ ಕಾರಿನ ಮೇಲೆ ಗುಂಡಿನ ದಾಳಿ ನಡೆಸಲಾಗಿತ್ತು.

## ಸಿಸೋಡಿಯಾ ಜಾಮೀನು ಕುರಿತು ಸಿಬಿಐ-ಇಡಿಗೆ ನೋಟೀಸ್

**ನವದೆಹಲಿ:** ದಿಲ್ಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದಂತೆ ದಾಖಲಾಗಿರುವ ಭ್ರಷ್ಟಾಚಾರ ಮತ್ತು ಅಕ್ರಮ ಹಣ ವರ್ಗಾವಣೆ ಪ್ರಕರಣಗಳಲ್ಲಿ ಜಾಮೀನು ಕೋರಿ ಮಾಜಿ ಉಪಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರು ಸಲ್ಲಿಸಿರುವ ಮನವಿಗಳ ಕುರಿತು ದೆಹಲಿ ಹೈಕೋರ್ಟ್ ಇಂದು ಸಿಬಿಐ ಮತ್ತು ಇಡಿಗೆ ಪ್ರತಿಕ್ರಿಯೆ ಕೇಳಿದೆ.



ನ್ಯಾಯಮೂರ್ತಿ ಸ್ವರಣಾ ಕಾಂತ ಶರ್ಮಾ ಅವರು ತಮ್ಮ ಜಾಮೀನು ಅರ್ಜಿಗಳನ್ನು ವಜಾಗೊಳಿಸಿದ ವಿಚಾರಣಾ ನ್ಯಾಯಾಲಯದ ಏಪ್ರಿಲ್ 30 ರ ಆದೇಶವನ್ನು ಪ್ರಶ್ನಿಸಿ ಸಿಸೋಡಿಯಾ ಅವರ ಮನವಿಯ ಮೇಲೆ ಕೇಂದ್ರೀಯ ತನಿಖಾ ದಳ (ಸಿಬಿಐ) ಮತ್ತು ಜಾರಿ ನಿರ್ದೇಶನಾಲಯ (ಇಡಿ) ಗೆ ನೋಟಿಸ್ ಜಾರಿ ಮಾಡಿದರು.

ಮೇ 8 ರಂದು ಹೆಚ್ಚಿನ ವಿಚಾರಣೆಗೆ ಹೈಕೋರ್ಟ್ ಈ ವಿಷಯವನ್ನು ಪಟ್ಟಿ ಮಾಡಿದೆ. ಸಿಸೋಡಿಯಾ ಅವರು ಮಧ್ಯಂತರ ಅರ್ಜಿಯಲ್ಲಿ, ತಮ್ಮ ಅರ್ಜಿಗಳು ಬಾಕಿ ಇರುವಾಗ ವಾರಕ್ಕೊಮ್ಮೆ ತಮ್ಮ ಅನಾರೋಗ್ಯ ಪೀಡಿತ ಪತ್ನಿಯನ್ನು ಭೇಟಿಯಾಗಲು ಅವಕಾಶ ನೀಡುವ ವಿಚಾರಣಾ ನ್ಯಾಯಾಲಯದ ಆದೇಶವನ್ನು ಮುಂದುವರಿಸುವಂತೆ ನ್ಯಾಯಾಲಯಕ್ಕೆ ಮನವಿ ಮಾಡಿಕೊಂಡಿದ್ದಾರೆ. ವಿಚಾರಣಾ ನ್ಯಾಯಾಲಯದ ಆದೇಶವನ್ನು ಮುಂದುವರಿಸಿದರೆ ತನಿಖಾ ಸಂಸ್ಥೆಗೆ ಯಾವುದೇ ಅಭ್ಯಂತರವಿಲ್ಲ ಎಂದು ಇಡಿ ಪರ ವಕೀಲರು ಅರ್ಜಿ ಸಲ್ಲಿಸಿದ್ದರಿಂದ, ನ್ಯಾಯಮೂರ್ತಿ ಶರ್ಮಾ ಅವರು ಮನವಿಯನ್ನು ಅನುಮತಿಸಿದರು.

### ಜಾಮೀನು ಅರ್ಜಿ ವಜಾ

2021-22ರ ದೆಹಲಿ ಅಬಕಾರಿ ನೀತಿಯ ರಚನೆ ಮತ್ತು ಅನುಷ್ಠಾನದಲ್ಲಿನ ಅಕ್ರಮಗಳಿಗೆ ಸಂಬಂಧಿಸಿದಂತೆ ಸಿಬಿಐ ಮತ್ತು ಇಡಿ ಕ್ರಮವಾಗಿ ಸಲ್ಲಿಸಿದ ಭ್ರಷ್ಟಾಚಾರ ಮತ್ತು ಅಕ್ರಮ ಹಣ ವರ್ಗಾವಣೆ ಪ್ರಕರಣಗಳಲ್ಲಿ ಸಿಸೋಡಿಯಾ ಅವರ ಜಾಮೀನು ಅರ್ಜಿಗಳನ್ನು ವಿಚಾರಣಾ ನ್ಯಾಯಾಲಯವು ವಜಾಗೊಳಿಸಿದೆ.

## ಕೋವಿಶೀಲ್ಡ್ ಲಸಿಕೆ ತಯಾರಿಕಾ ಸಂಸ್ಥೆ ವಿರುದ್ಧ ಕಾನೂನು ಹೋರಾಟಕ್ಕೆ ಮುಂದಾದ ದಂಪತಿ

**ನವದೆಹಲಿ:** ತನ್ನ ಮಗಳ ಸಾವಿಗೆ ಕಾರಣ ಅಸ್ಟ್ರಾಜೆನೆಕಾ ಸಂಸ್ಥೆ ತಯಾರಿಸಿದ ಕೋವಿಡ್ ಲಸಿಕೆ ಕೋವಿಶೀಲ್ಡ್ ಎಂದು ಆರೋಪಿಸಿರುವ ದಂಪತಿ ಔಷಧಿ ತಯಾರಕ ಸಂಸ್ಥೆ ವಿರುದ್ಧ ಪ್ರಕರಣ ದಾಖಲಿಸಲು ತೀರ್ಮಾನಿಸಿದ್ದಾರೆ. ಬ್ರಿಟಿಷ್ ಫಾರ್ಮಾ ದೈತ್ಯ ಸಂಸ್ಥೆ ತಯಾರಿಸಿದ್ದ ಕೋವಿಶೀಲ್ಡ್ ಲಸಿಕೆಯಿಂದ ತಮ ಮಗಳು ಮೃತಪಟ್ಟಿದ್ದಾಳೆ ಎಂದು ಆರೋಪಿಸಿ ಅಸ್ಟ್ರಾಜೆನಿಕಾ ಸಂಸ್ಥೆ ವಿರುದ್ಧ ಮೊಕದ್ದಮೆ ಹೂಡಲು ದಂಪತಿ ಯೋಜಿಸುತ್ತಿದ್ದಾರೆ. ಕೋವಿಶೀಲ್ಡ್ ಲಸಿಕೆಯು ರಕ್ತ ಹೆಪ್ಪುಗಟ್ಟುವಿಕೆ ಮತ್ತು ಕಡಿಮೆ ಪ್ಲೇಟ್‌ಲೆಟ್ ಎಣಿಕೆಗೆ ಕಾರಣವಾಗುವ ಅಪರೂಪದ ಅಡ್ಡ ಪರಿಣಾಮಗಳನ್ನು ಉಂಟುಮಾಡಬಹುದು ಎಂದು ಅಸ್ಟ್ರಾಜೆನೆಕಾ ಸಂಸ್ಥೆ ಯುಕೆ ನ್ಯಾಯಾಲಯದ ದಾಖಲೆಗಳಲ್ಲಿ ಒಪ್ಪಿಕೊಂಡ ನಂತರ ದಂಪತಿ ಈ ತೀರ್ಮಾನ ಕೈಗೊಂಡಿದ್ದಾರೆ.

ಅಸ್ಟ್ರಾಜೆನೆಕಾ ಲಸಿಕೆಯನ್ನು ಭಾರತದಲ್ಲಿ ಸೀರಮ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ (ಎಸ್‌ಐಐ) ಸಹಯೋಗದಲ್ಲಿ ಕೋವಿಶೀಲ್ಡ್ ಎಂಬ ಹೆಸರಿನಲ್ಲಿ ಲಸಿಕೆ ತಯಾರಿಸಿತ್ತು. 2021 ರಲ್ಲಿ ತನ್ನ 20 ವರ್ಷದ ಮಗಳು ಕಾರುಣ್ಯಳನ್ನು ಕಳೆದುಕೊಂಡ ವೇಣುಗೋಪಾಲನ್ ಗೋವಿಂದನ್ ದಂಪತಿ ಸಾಮಾಜಿಕ ಜಾಲತಾಣದ ಮೂಲಕ ತಮ ಈ ನಿರ್ಧಾರವನ್ನು ಪ್ರಕಟಿಸಿದ್ದಾರೆ. 15 ಯುರೋಪಿಯನ್ ದೇಶಗಳು ರಕ್ತ ಹೆಪ್ಪುಗಟ್ಟುವಿಕೆಯಿಂದ ಉಂಟಾಗುವ ಸಾವುಗಳ ಮೇಲೆ ಅದರ ಬಳಕೆಯನ್ನು ನಿರ್ಬಂಧಿಸಿದ ನಂತರ ಸೀರಮ್ ಇನ್‌ಸ್ಟಿಟ್ಯೂಟ್ ಲಸಿಕೆ ಪೂರೈಕೆಯನ್ನು ನಿಲ್ಲಿಸಬೇಕಿತ್ತು ಎಂದು ದಂಪತಿ ಮನವಿ ಮಾಡಿಕೊಂಡಿದ್ದಾರೆ. ನ್ಯಾಯಕ್ಕಾಗಿ ಮತ್ತು ಸಾರ್ವಜನಿಕ ಆರೋಗ್ಯದ ಹೆಸರಿನಲ್ಲಿ ನಡೆಸಲಾದ ಈ ದುಷ್ಕೃತ್ಯವು ಮರುಕಳಿಸುವುದನ್ನು ತಡೆಯಲು, ನಾವು ಯಾವುದೇ ಮತ್ತು ಎಲ್ಲಾ ಅಪರಾಧಿಗಳ ವಿರುದ್ಧ ಹೊಸ ಪ್ರಕರಣಗಳನ್ನು ದಾಖಲಿಸುತ್ತೇವೆ.



### ಪೂನಾವಾಲಾ ಉತ್ತರಿಸಬೇಕು

ನಮ ಮಕ್ಕಳು ಎಂಟು ಸಂತ್ರಸ್ತರ ಕುಟುಂಬಗಳನ್ನು ಸಂಪರ್ಕಿಸಿದ್ದಾರೆ ಮತ್ತು ನಾನು ನಮೆಲ್ಲರ ಸಾಮಾನ್ಯ ಭಾವನೆಗಳನ್ನು ಪ್ರತಿಧ್ವನಿಸುತ್ತಿದ್ದೇನೆ ಎಂದು ಅವರು ಹೇಳಿದರು. ನಮ ಈ ಆರೋಪಗಳಿಗೆ ಸೆರಮ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾದ ಮಾಲಿಕ ಪೂನಾವಾಲಾ ಉತ್ತರಿಸಬೇಕಾಗುತ್ತದೆ ಎಂದು ಗೋವಿಂದನ್ ಆನ್‌ಲೈನ್ ಪೋಸ್ಟ್‌ನಲ್ಲಿ ಬರೆದಿದ್ದಾರೆ, ಲಸಿಕೆ ರೋಲ್‌ಔಟ್ ಅನ್ನು ಅನುಮೋದಿಸಿದ್ದಕ್ಕಾಗಿ ಸರ್ಕಾರಿ ಅಧಿಕಾರಿಗಳನ್ನು ಅವರು ದೂಷಿಸಿದ್ದಾರೆ.

## ಕಿಮ್ ಮೆಚ್ಚಿಸಲು 25 ಕನ್ಯೆಯರ ಸ್ಕ್ವಾಡ್ ತಂಡ

**ಸಿಯೋಲ್:** ಉತ್ತರ ಕೊರಿಯಾದ ಅಧ್ಯಕ್ಷ ಕಿಮ್ ಜಾಂಗ್ ಉನ್ ಬಗ್ಗೆ ಯಾವಾಗಲೂ ಏನಾದರೂ ಸುದ್ದಿ ಪ್ರಕಟವಾಗುತ್ತದೆ . ಅವನ ಅರಾಜಕತೆ, ಶಿಕ್ಷೆ ಮತ್ತು ಸರ್ವಾಧಿಕಾರಿ ಧೋರಣೆಗಳ ಬಗ್ಗೆ ಸಾವಿರಾರು ಕಥೆಗಳು ಇವೆ.ಇತ್ತೀಚೆಗೆ ಮತ್ತೊಂದು ವಿಷಯ ಬೆಳಕಿಗೆ ಬಂದಿದೆ. ಕಿಮ್ ಜಾಂಗ್ ಉನ್ ಅವರನ್ನು ಮೆಚ್ಚಿಸಲು ವರ್ಷಕ್ಕೆ 25 ಯುವತಿಯರು ಬೇಕು ಎಂದು ಇತ್ತೀಚಿನ ವರದಿ ಬಹಿರಂಗಪಡಿಸಿದೆ. ಇವರೆಲ್ಲರೂ 20 ವರ್ಷದೊಳಗಿನವರಾಗಿರಬೇಕು ಎನ್ನಲಾಗಿದೆ.

ಉತ್ತರ ಕೊರಿಯಾದ ನಾಯಕ ಕಿಮ್ ಜಾಂಗ್ ಉನ್ ಅವರನ್ನು ಮೆಚ್ಚಿಸಲು ವಾರ್ಷಿಕವಾಗಿ 25 ಕನ್ಯೆಯರನ್ನು ಆಯ್ಕೆ ಮಾಡಲಾಗುತ್ತದೆ ಎಂಬ ಅಂಶ ಬೆಳಕಿಗೆ ಬಂದಿದೆ.

25 ಮಂದಿ ಕನ್ಯೆಯರ ಈ ತಂಡವನ್ನು ಪ್ಲೀಷರ್ ಸ್ಕ್ವಾಡ್ ಎಂದು ಕರೆಯಲಾಗುತ್ತದೆ. ಇವರನ್ನು ಆಯ್ಕೆ ಮಾಡುವಾಗ ಸೌಂದರ್ಯದ ಜೊತೆಗೆ ಕೌಟುಂಬಿಕ ಹಿನ್ನೆಲೆಯನ್ನೂ ಗಣನೆಗೆ ತೆಗೆದು ಕೊಳ್ಳಲಾಗುತ್ತದೆ. ಇದು ಆ ದೇಶದಿಂದ ಪರಾರಿಯಾಗಿರುವ ಯುವತಿ ಯುನ್ಮಿ



ಪಾರ್ಕ್ ಬಹಿರಂಗಪಡಿಸಿದ ಸಂವೇದನಾಶೀಲ ವಿಷಯಗಳಲ್ಲಿ ಒಂದಾಗಿದೆ. ಈ ಕಿಮ್ ಪ್ಲೆಷರ್ ಸ್ಕ್ವಾಡ್‌ಗಾಗಿ ತಾನು ಎರಡು ಬಾರಿ ಪ್ರಯತ್ನಿಸಿದ್ದೇನೆ ಆದರೆ ತನ್ನ ಕುಟುಂಬದ ಹಿನ್ನೆಲೆಯಿಂದ ಆಯ್ಕೆಯಾಗಲಿಲ್ಲ ಎಂದು ಅವರು ಹೇಳಿದ್ದಾರೆ. ಆಯ್ಕೆ ಮಾಡಲು ದೊಡ್ಡ ಪ್ರಕ್ರಿಯೆ ನಡೆಯುತ್ತದೆ. ಆ ಯುವತಿಯರಿಗೆ ಯಾವುದೇ ಸಣ್ಣ ದೋಷ ಅಥವಾ ಸಮಸ್ಯೆ ಇದ್ದರೂ ಆಯ್ಕೆ ಪ್ರಕ್ರಿಯೆಯಿಂದ ದೂರ ಇಡಲಾಗುತ್ತದೆ. ಸುಂದರ ಯುವತಿಯರ ಕನ್ಯತ್ವವನ್ನು ವೈದ್ಯಕೀಯ ಪರೀಕ್ಷೆ ನಡೆಸಿ ಅಂತಿಮಗೊಳಿಸಲಾಗುತ್ತದೆ. ಈ ರೀತಿ ನಡೆಯುತ್ತಿರುವುದು ಇದೇ ಮೊದಲು ಏನು ಅಲ್ಲ, 1970ರಲ್ಲೇ ಇದನ್ನು ಆರಂಭಿಸಲಾಗಿದೆ. ಕಿಮ್ ಜೊಂಗ್-ಇಲ್ ಆರಂಭದಲ್ಲಿ ತನ್ನ ತಂದೆ ಕಿಮ್ ಇಲ್-ಸುಂಗ್ ಮೆಚ್ಚಿಸಲು ಮತ್ತು ಅವರ ಪರಂಪರೆಯನ್ನು ಸಂರಕ್ಷಿಸಲು ಪ್ಲೆಷರ್ ಸ್ಕ್ವಾಡ್ ರಚಿಸಿದ್ದಾರೆ.

### 20 ದಾಟಿದರೆ ಕಿಮ್ಸ್ ಅಂಗರಕ್ಷಕರಿಗೆ ಕೊಟ್ಟು ಮದುವೆ

ಆ 25 ಯುವತಿಯರನ್ನು 3 ತಂಡಗಳಾಗಿ ಬೇರ್ಪಡಿಸಲಾಗುವುದು. ಕಿಮ್‌ಗೆ ಮಸಾಜ್ ಮಾಡಲು, ಹಾಡುಗಳನ್ನು ಹಾಡಲು ಮತ್ತು ನೃತ್ಯ ಮಾಡಲು ಒಂದು ತಂಡವನ್ನು ಪಕ್ಕಕ್ಕೆ ಇರಿಸಲಾಗುತ್ತದೆ. ಅಂತಿಮವಾಗಿ, ಸಂಪೂರ್ಣ ಮೂರನೇ ತಂಡವು ಕಿಮ್ ಜೊತೆ ಲೈಂಗಿಕ ಸಂಭೋಗದಲ್ಲಿ ತೊಡಗಿಸಿಕೊಳ್ಳಲು ಮಾಡಲಾಗುತ್ತದೆ. ಅತ್ಯಂತ ಸುಂದರ ಹುಡುಗಿಯರನ್ನು ಮಾತ್ರ ಈ ಮೂರನೇ ವರ್ಗಕ್ಕೆ ತೆಗೆದುಕೊಳ್ಳಲಾಗುತ್ತದೆ. ಆದರೆ ಯುವತಿಯರನ್ನು 20 ವರ್ಷ ವಯಸ್ಸಿನವರೆಗೂ ಆ ಗುಂಪಿನಲ್ಲಿ ಇರಿಸಲಾಗುತ್ತದೆ. 20 ದಾಟಿದರೆ ಕಿಮ್ಸ್ ಅಂಗರಕ್ಷಕರಿಗೆ ಕೊಟ್ಟು ಮದುವೆ ಮಾಡಲಾಗುವುದು ಎಂದು ಪಾರ್ಕ್ ಹೇಳಿದ್ದಾರೆ.

# ವಿಶ್ವಸಂಸ್ಥೆಯಲ್ಲಿ ಭಾರತವನ್ನು ಟೀಕಿಸಿದ ಪಾಕ್‌ಗೆ ತಕ್ಕ ಉತ್ತರ

## ನಾವು ಶಾಂತಿಯ ಸಂಸ್ಕೃತಿಯನ್ನು ಬೆಳೆಸಲು ಪ್ರಯತ್ನಿಸುತ್ತಿರುವಾಗ, ನಮ್ಮ ಗಮನವು ರಚನಾತ್ಮಕ ಸಂಭಾಷಣೆಯ ಮೇಲೆ ಸ್ಥಿರ

**ವಿಶ್ವಸಂಸ್ಥೆ:** ವಿಶ್ವಸಂಸ್ಥೆಯಲ್ಲಿ ಪಾಕ್ ರಾಯಭಾರಿ ಮಾಡಿದ ವಿನಾಶಕಾರಿ ಟೀಕೆಗಳಿಗೆ ಭಾರತ ತಕ್ಕ ಪ್ರತ್ಯುತ್ತರ ನೀಡಿದೆ. ಕಾಶೀರ, ಪೌರತ್ವ (ತಿದ್ದುಪಡಿ) ಕಾಯ್ದೆ ಮತ್ತು ಅಯೋಧ್ಯೆಯಲ್ಲಿನ ರಾಮ ಮಂದಿರದ ಉಲ್ಲೇಖಗಳನ್ನು ಒಳಗೊಂಡಂತೆ ಪಾಕಿಸ್ತಾನದ ಯುಎನ್ ರಾಯಭಾರಿ ಮುನೀರ್ ಅಕ್ರಂ ಅವರು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಮಾಡಿದ ಭಾಷಣದಲ್ಲಿ ಭಾರತದ ವಿರುದ್ಧ ಸುದೀರ್ಘ ಟೀಕೆಗಳನ್ನು ಮಾಡಿದ ನಂತರ ವಿಶ್ವಸಂಸ್ಥೆಯ ರಾಯಭಾರಿಯಾಗಿರುವ ಭಾರತದ ಖಾಯಂ ಪ್ರತಿನಿಧಿ ರುಚಿರಾ ಕಾಂಬೋಜ್ ಅವರು ಕಠಿಣ ಪ್ರತಿಕ್ರಿಯೆ ನೀಡಿದ್ದಾರೆ.

ಈ ಅಸೆಂಬ್ಲಿಯಲ್ಲಿ ಒಂದು ಅಂತಿಮ ಅಂಶವೆಂದರೆ, ಈ ಸವಾಲಿನ ಸಮಯದಲ್ಲಿ ನಾವು ಶಾಂತಿಯ ಸಂಸ್ಕೃತಿಯನ್ನು ಬೆಳೆಸಲು ಪ್ರಯತ್ನಿಸುತ್ತಿರುವಾಗ, ನಮ್ಮ ಗಮನವು ರಚನಾತ್ಮಕ ಸಂಭಾಷಣೆಯ ಮೇಲೆ ಸ್ಥಿರವಾಗಿರುತ್ತದೆ.

> ನಮ ಚರ್ಚೆಗಳಿಗೆ ಯಾವಾಗಲೂ ಮಾರ್ಗದರ್ಶನ ನೀಡಬೇಕಾದ ಗೌರವ ಮತ್ತು ರಾಜತಾಂತ್ರಿಕತೆಯ ಕೇಂದ್ರ ತತ್ವಗಳೊಂದಿಗೆ ಒಗ್ಗೂಡಿಸಲು ನಾವು ಆ ನಿಯೋಗವನ್ನು ಬಲವಾಗಿ ಪ್ರೋತ್ಸಾಹಿಸುತ್ತೇವೆ. ಅಥವಾ ಎಲ್ಲಾ ಅಂಶಗಳ ಮೇಲೆ ಅತ್ಯಂತ ಸಂಶಯಾಸ್ಪದ ದಾಖಲೆಯನ್ನು ಹೊಂದಿರುವ ದೇಶವನ್ನು ಕೇಳಲು ಇದು ತುಂಬಾ ಹೆಚ್ಚು - ಕಾಂಬೋಜ್

ಹೀಗಾಗಿ ನಾವು ನಿರ್ದಿಷ್ಟ ನಿಯೋಗದ ಟೀಕೆಗಳನ್ನು ಬದಿಗಿಡಲು ಆಯ್ಕೆ ಮಾಡಿದ್ದೇವೆ, ಇದು ಅಲಂಕಾರದ ಕೊರತೆಯನ್ನು ಮಾತ್ರವಲ್ಲದೆ ಅವರ ವಿನಾಶಕಾರಿ ಮತ್ತು ವಿನಾಶಕಾರಿ ಸ್ವಭಾವದಿಂದಾಗಿ ನಮ ಸಾಮೂಹಿಕ ಪ್ರಯತ್ನಗಳಿಂದ ದೂರವಿರುತ್ತದೆ ಎಂದು ಕಾಂಬೋಜ್ ಹೇಳಿದರು.

ನನ್ನ ದೇಶವು ಬಲವಾಗಿ ನಂಬಿದಂತೆ ಶಾಂತಿಯ



ನಿಜವಾದ ಸಂಸ್ಕೃತಿಯನ್ನು ಪೋಷಿಸಲು ಮತ್ತು ಜಗತ್ತನ್ನು ಒಂದು ಏಕ ಕುಟುಂಬವಾಗಿ ವೀಕ್ಷಿಸಲು ಸಕ್ರಿಯವಾಗಿ ಒಟ್ಟಾಗಿ ಕೆಲಸ ಮಾಡುವುದು ಸದಸ್ಯ ರಾಷ್ಟ್ರಗಳಿಗೆ ಅತ್ಯಗತ್ಯ ಎಂದು ಅವರು ಹೇಳಿದರು. ಚರ್ಚುಗಳು, ಮಠಗಳು, ಗುರುದ್ವಾರಗಳು, ಮಸೀದಿಗಳು, ದೇವಾಲಯಗಳು ಮತ್ತು ಸಿನಗಾಗ್‌ಗಳು ಸೇರಿದಂತೆ ಪವಿತ್ರ ಸ್ಥಳಗಳ ಮೇಲೆ ಹೆಚ್ಚುತ್ತಿರುವ ದಾಳಿಯಿಂದ ನಾವು ವಿಶೇಷವಾಗಿ ಕಳವಳಗೊಂಡಿದ್ದೇವೆ ಎಂದು ಅವರು ಹೇಳಿದರು. ಅಂತಹ ಕತ್ಯಗಳಿಗೆ ಜಾಗತಿಕ ಸಮುದಾಯದಿಂದ ತ್ವರಿತ ಮತ್ತು ಒಗ್ಗಟ್ಟಿನ ಪ್ರತಿಕ್ರಿಯೆಯ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದರು.

ಆದ್ದರಿಂದ ನಮ ಚರ್ಚೆಗಳು ಈ ಸಮಸ್ಯೆಗಳನ್ನು ನೇರವಾಗಿ ಪರಿಹರಿಸುವುದು, ರಾಜಕೀಯ ಲಾಭದಾಯಕತೆಯನ್ನು ವಿರೋಧಿಸುವುದು ಬಹಳ ಮುಖ್ಯ. ನಾವು ಈ ಸವಾಲುಗಳನ್ನು ನೇರವಾಗಿ ನಿಭಾಯಿಸಬೇಕು ಮತ್ತು ಅವು ನಮ ನೀತಿ, ಸಂವಾದಗಳು ಮತ್ತು ಅಂತರಾಷ್ಟ್ರೀಯ ತೊಡಗಿಸಿಕೊಳ್ಳುವಿಕೆಗಳಿಗೆ ಕೇಂದ್ರವಾಗಿವೆ ಎಂದು ಖಚಿತಪಡಿಸಿಕೊಳ್ಳಬೇಕು, ಎಂದು ಅವರು ಹೇಳಿದರು. ಮಹಾತ್ಮಾ ಗಾಂಧಿಯವರು ಪ್ರತಿಪಾದಿಸಿದ ಅಹಿಂಸಾ ಸಿದ್ಧಾಂತವು ಶಾಂತಿಗಾಗಿ ಭಾರತದ ಬದ್ಧತೆಯ ತಳಹದಿಯಾಗಿದೆ ಎಂದು ಕಾಂಬೋಜ್ ಯುಎನ್‌ಜಿಎ ಸಭೆಯಲ್ಲಿ ಹೇಳಿದರು.


### ಅಪಶ್ರುತಿಯನ್ನು ಬಿತ್ತುತ್ತದೆ

ಭಯೋತ್ಪಾದನೆಯು ಶಾಂತಿಯ ಸಂಸ್ಕೃತಿ ಮತ್ತು ಎಲ್ಲಾ ಧರ್ಮಗಳ ಮೂಲ ಬೋಧನೆಗಳಿಗೆ ನೇರವಾದ ವಿರೋಧವಾಗಿದೆ ಎಂದು ಕಾಂಬೋಜ್ ಪ್ರತಿಪಾದಿಸಿದರು, ಇದು ಸಹಾನುಭೂತಿ, ತಿಳುವಳಿಕೆ ಮತ್ತು ಸಹಬಾಳ್ವೆಯನ್ನು ಪ್ರತಿಪಾದಿಸುತ್ತದೆ. ಇದು ಅಪಶ್ರುತಿಯನ್ನು ಬಿತ್ತುತ್ತದೆ, ಹಗೆತನವನ್ನು ಹುಟ್ಟುಹಾಕುತ್ತದೆ ಮತ್ತು ವಿಶ್ವಾದ್ಯಂತ ಸಾಂಸ್ಕೃತಿಕ ಮತ್ತು ಧಾರ್ಮಿಕ ಸಂಪ್ರದಾಯಗಳಿಗೆ ಆಧಾರವಾಗಿರುವ ಗೌರವ ಮತ್ತು ಸಾಮರಸ್ಯದ ಸಾರ್ವತ್ರಿಕ ಮೌಲ್ಯಗಳನ್ನು ದುರ್ಬಲಗೊಳಿಸುತ್ತದೆ.

ಒಗ್ಗಟ್ಟಿನ ಪ್ರತಿಕ್ರಿಯೆಯ ಅಗತ್ಯ

## ಮಿನಿ ನ್ಯೂಸ್

### ಪಾಕಿಸ್ತಾನದಲ್ಲಿ ಬಸ್ ಕಂದಕಕ್ಕೆ ಉರುಳಿ ಬಿದ್ದು 10 ಮಂದಿ ಸಾವು



**ಪೇಶಾವರ:** ಬಸ್ ಕಂದಕಕ್ಕೆ ಉರುಳಿ 10 ಪ್ರಯಾಣಿಕರು ಮೃತಪಟ್ಟಿರುವ ಘಟನೆ ಪಾಕಿಸ್ತಾನದಲ್ಲಿ ನಡೆದಿದೆ. ವಾಯುವ್ಯ ಪಾಕಿಸ್ತಾನದಲ್ಲಿ ಇಂದು ಬೆಳಿಗ್ಗೆ ಪ್ರಯಾಣಿಕರ ಬಸ್ಸೊಂದು ಪರ್ವತ ಪ್ರದೇಶದಿಂದ ಸ್ಕಿಡ್ ಆಗಿ ಕಂದರಕ್ಕೆ ಉರುಳಿ ಬಿದ್ದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ.

30 ಪ್ರಯಾಣಿಕರಿದ್ದ ಬಸ್ ರಾವಲ್ಪಿಂಡಿಯಿಂದ ಗಿಲ್ಗಿಟ್‌ಗೆ ಸಂಚರಿಸುತ್ತಿದ್ದಾಗ ಗಿಲ್ಗಿಟ್- ಬಾಲ್ಟಿಸ್ತಾನ್ ಪ್ರದೇಶದಲ್ಲಿ ಈ ಘಟನೆ ಸಂಭವಿಸಿದೆ ಎಂದು ಪಾಕ್ ಪೊಲೀಸರು ತಿಳಿಸಿದ್ದಾರೆ. ಕನಿಷ್ಠ 30 ಪ್ರಯಾಣಿಕರಿದ್ದ ಬಸ್ ರಾವಲ್ಪಿಂಡಿಯಿಂದ ಗಿಲ್ಗಿಟ್‌ಗೆ ತೆರಳುತ್ತಿದ್ದಾಗ ಗಿಲ್ಗಿಟ್-ಬಾಲ್ಟಿಸ್ತಾನ್ ಪ್ರದೇಶದ ಡೈಮರ್ ಜಿಲ್ಲೆಯ ಕರಕೋರಂ ಹೆದ್ದಾರಿಯ ಸಮೀಪದ ಕಂದರಕ್ಕೆ ಬಸ್ ಉರುಳಿ 10 ಪ್ರಯಾಣಿಕರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಬದುಕುಳಿದವರ ರಕ್ಷಣಾ ಕಾರ್ಯ ಭರದಿಂದ ಸಾಗುತ್ತಿದೆ. ಕೆಲವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಇನ್ನು ಕೆಲವರ ಸ್ಥಿತಿ ಚಿಂತಾಜನಕವಾಗಿರುವುದರಿಂದ ಸಾವು-ನೋವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆಗಳಿವೆ.

### ಶಿವಸೇನೆ ನಾಯಕಿ ಪ್ರಯಾಣಿಸಬೇಕಿದ್ದ ಹೆಲಿಕಾಪ್ಟರ್ ಪತನ, ಪೈಲಟ್ ಪಾರು

**ರಾಯಗಢ:** ಶಿವಸೇನೆ ಉಪನಾಯಕಿ ಸುಷಾ ಅಂಧಾರೆಯನ್ನು ಕರೆದುಕೊಂಡು ಬರಲು ಹೊರಟಿದ್ದ ಖಾಸಗಿ ಹೆಲಿಕಾಪ್ಟರ್ ಲ್ಯಾಂಡಿಂಗ್ ವೇಳೆ ಹಠಾತ್ ಅಪಘಾತಕ್ಕೀಡಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಹೆಲಿಕಾಪ್ಟರ್ ಅಪರಿಚಿತ ಸ್ಥಳದಲ್ಲಿ ಲ್ಯಾಂಡಿಂಗ್ ಮಾಡಲು ಪ್ರಯತ್ನಿಸುತ್ತಿದ್ದ ಸಂದರ್ಭದಲ್ಲಿ ಇದ್ದಕ್ಕಿದ್ದಂತೆ ಅದು ತಿರುಗಿ ನಡುಗಿತು ಮತ್ತು ಸಮತೋಲನವನ್ನು ಕಳೆದುಕೊಂಡು ತೆರೆದ ಮೈದಾನದಲ್ಲಿ ಧೂಳಿನ ಮೋಡದಲ್ಲಿ ದೊಡ್ಡ ಶಬ್ದದೊಂದಿಗೆ ಅಪ್ಪಳಿಸಿತು ಎಂದು ವರದಿಯಾಗಿದೆ.

ಹೆಲಿಕಾಪ್ಟರ್‌ನ ಪೈಲಟ್ ಅದೃಷ್ಟವಶಾತ್ ಹೆಲಿಕಾಪ್ಟರ್‌ನಿಂದ ಜಿಗಿದು ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಅಧಿಕಾರಿಗಳೂ ತಿಳಿಸಿದ್ದಾರೆ. ಘಟನೆಯ ತನಿಖೆಗಾಗಿ ಪೊಲೀಸರು ಮತ್ತು ರಕ್ಷಣಾ ತಂಡಗಳು ಸ್ಥಳಕ್ಕೆ ಧಾವಿಸಿದ್ದು, ಅದೇ ಹೆಲಿಕಾಪ್ಟರ್‌ನಿಂದ ಹಾರಲು ನಿಗದಿಯಾಗಿದ್ದ ಅಂಧರೆ ಅವರು ಜಿಲ್ಲೆಯ ವಿವಿಧ ಭಾಗಗಳಲ್ಲಿ ತನ್ನ ನಿಗದಿತ ಚುನಾವಣಾ ಸಭೆಗಳಿಗಾಗಿ ಕಾರಿನಲ್ಲಿ ತೆರಳಿದರು.

### ಪೊಲೀಸ್ ಕಚೇರಿಗೆ ಬಾಂಬ್ ಬೆದರಿಕೆ ಇ-ಮೇಲ್ ಕಳುಹಿಸಿದ್ದ ಬಾಲಕನ ಬಂಧನ

**ನವದೆಹಲಿ:** ದೆಹಲಿಯ ನಂಗ್ಲೋಯ್ ಪ್ರದೇಶದಲ್ಲಿ ಬಾಂಬ್ ಇಡಲಾಗಿದೆ ಎಂದು ದೆಹಲಿ ಪೊಲೀಸ್ ಪ್ರಧಾನ ಕಚೇರಿಗೆ ಇಮೇಲ್ ಕಳುಹಿಸಿದ್ದ ಆರೋಪದ ಮೇಲೆ ಬಾಲಕನೊಬ್ಬ ಸಿಕ್ಕಿಬಿದ್ದಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಪ್ರದೇಶದಲ್ಲಿ ಕೂಲಂಕುಷವಾಗಿ ತಪಾಸಣೆ ನಡೆಸಿದ ಬಳಿಕ ಬಾಲಕನ ಕೃತ್ಯ ಎಂದು ತಿಳಿದುಬಂದಿದೆ. ಮಧ್ಯ ದೆಹಲಿಯ ಜೈ ಸಿಂಗ್ ರಸ್ತೆಯಲ್ಲಿರುವ ದೆಹಲಿ ಪೊಲೀಸ್ ಪ್ರಧಾನ ಕಛೇರಿಯು ನಂಗ್ಲೋಯಿಯಿಂದ ಸುಮಾರು 18 ಕಿಲೋಮೀಟರ್ ದೂರದಲ್ಲಿದೆ. ಇಮೇಲ್ ಕಳುಹಿಸುವವರು ಅಪ್ರಾಪ್ತ ಬಾಲಕನಾಗಿದ್ದು ಆದ್ದರಿಂದ ಆತನ ವಿವರಗಳನ್ನು ಹಂಚಿಕೊಳ್ಳಲಾಗುವುದಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಇದು ಕಿಡಿಗೇಡಿತನದ ಕೃತ್ಯವೆಂದು ಬಾಲಾಪರಾಧಿ, ಸರಿಯಾದ ಕೌನ್ಸೆಲಿಂಗ್ ನಂತರ ಪೋಷಕರಿಗೆ ಹಸ್ತಾಂತರಿಸಲಾಗುವುದು ತಿಳಿಸಿದ್ದಾರೆ. ಬಾಲಕ ಹೀಗೆ ಮಾಡಲು ಕಾರಣವೇನು ಎಮಬುದು ನಿಗೂಢವಾಗಿದೆ ಆದರೂ ಪೋಷಕರ ನಿರ್ಲಕ್ಷ ಕಾಣುತ್ತಿದೆ ಮುಚ್ಚಳಿಕೆ ಬರೆಸಿಕೊಂಡು ಎಚ್ಚರಿಕೆ ನೀಡಲಾಗಿದೆ.

### 500 ಸಿಬ್ಬಂದಿ ವಜಾಗೊಳಿಸಿದ ಮಸ್ಕ್




**ನ್ಯೂಯಾರ್ಕ್:** ವಿಶ್ವದ ಶ್ರೀಮಂತರ ಪಟ್ಟಿಯಲ್ಲಿ ಕೆಲವೊಮ್ಮೆ ಮೊದಲ ಅಥವಾ ಕೆಲವೊಮ್ಮೆ ಎರಡನೇ ಸ್ಥಾನದಲ್ಲಿರುವ ಉದ್ಯಮಿ ಎಲಾನ್ ಮಸ್ಕ್ ಅವರನ್ನು ನಿರ್ದಯಿ ಎಂದು ಕರೆದರೆ ತಪ್ಪಾಗುವುದಿಲ್ಲ. 2022 ರ ಕೊನೆಯಲ್ಲಿ ಅವರು ಟ್ವಿಟರ್ ಸ್ವಾಧೀನಪಡಿಸಿಕೊಂಡಾಗ, ಆಗಿನ ಭಾರತೀಯ ಮೂಲದ ಸಿಇಒ ಪರಾಗ್ ಅಗರ್ವಾಲ್ ಅವರಿಗೆ ಒಂದೇ ಏಟಿಗೆ ಹೊರಗಿನ ದಾರಿ ತೋರಿಸಲಾಯಿತು. ಪರಾಗ್ ಮಾತ್ರವಲ್ಲ, ಅನೇಕ ದೊಡ್ಡ ಮತ್ತು ಸಣ್ಣ ಅಧಿಕಾರಿಗಳೂ ಇದೇ ಪರಿಸ್ಥಿತಿಯನ್ನು ಎದುರಿಸಿದ್ದಾರೆ. ಈಗ ಮತ್ತೊಮ್ಮೆ ಎಲೋನ್ ಮಸ್ಕ್ ತಮ್ಮ ಹಿಂಬಡ್ತಿ ಎಂಬ ಕತ್ತಿಯನ್ನು ಎತ್ತಿದ್ದಾರೆ ಮತ್ತು ಏಕಕಾಲದಲ್ಲಿ 500 ಕ್ಕೂ ಹೆಚ್ಚು ಜನರನ್ನು ಕಂಪನಿಯಿಂದ ಹೊರಹಾಕಿದ್ದಾರೆ. ಇವರಲ್ಲಿ ಒಬ್ಬರು ಪಾಕಿಸ್ತಾನಿ ಮೂಲದ ಮಹಿಳೆ ಕೂಡ ಒಬ್ಬರು.

ಎಲೋನ್ ಮಸ್ಕ್ ಅವರ ಈ ನಿರ್ಧಾರದ ನಂತರ, ಕಂಪನಿಯಿಂದ ವಜಾಗೊಂಡ ಈ ಪಾಕಿಸ್ತಾನಿ ಮಹಿಳೆ ಸಾಮಾಜಿಕ ಮಾಧ್ಯಮ ವೇದಿಕೆ ಲಿಂಕ್ಡ್‌ಇನ್‌ನಲ್ಲಿ ತಮ್ಮ ದುಃಖವನ್ನು ಹಂಚಿಕೊಂಡಿದ್ದಾರೆ. ಕೆಲಸ ಕಳೆದುಕೊಳ್ಳುವುದು ಮತ್ತು ಮಹಾನ್ ವ್ಯಕ್ತಿಗಳ ತಂಡದಿಂದ ಬೇರ್ಪಡುವುದು ಕಷ್ಟದ ಸಮಯ ಎಂದು ಈ ಮಹಿಳೆ ಬರೆದಿದ್ದಾರೆ. ಆದರೆ, ಭವಿಷ್ಯದ ಭರವಸೆಯನ್ನು ಕಳೆದುಕೊಂಡಿಲ್ಲ ಎಂದು ಹೇಳಿದ್ದಾರೆ.

### ಜ್ವಾಲಾಮುಖಿ ಸ್ಫೋಟ: 10,000 ಜನರ ಶಾಶ್ವತ ಸ್ಥಳಾಂತರಕ್ಕೆ ಇಂಡೋನೇಷ್ಯಾ ಕ್ರಮ

**ಜಕಾರ್ತ:** ರುವಾಂಗ್ ಪರ್ವತದಲ್ಲಿ ನಿರಂತರವಾಗಿ ಜ್ವಾಲಾಮುಖಿ ಸ್ಫೋಟಗೊಳ್ಳುತ್ತಿರುವುದರಿಂದ ಎಚ್ಚೆತ್ತುಕೊಂಡಿರುವ ಇಂಡೋನೇಷ್ಯಾ ಸರ್ಕಾರ, 10,000 ಜನರನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಲು ಮುಂದಾಗಿದೆ. ಉತ್ತರ ಸುಲಾವೆಸಿ ಪ್ರಾಂತ್ಯಕ್ಕೆ ಸೇರಿದ ರುವಾಂಗ್ ದ್ವೀಪದಲ್ಲಿ ಸುಮಾರು 9,800 ಜನರು ನೆಲೆಸಿದ್ದಾರೆ. ಆದರೆ, ಇಲ್ಲಿನ ಪರ್ವತದಲ್ಲಿ ಇತ್ತೀಚಿನ ದಿನಗಳಲ್ಲಿ ನಿರಂತರವಾಗಿ ಲಾವಾ ಉಕ್ಕುತ್ತಿದ್ದು, ಬೂದಿ ಆಗಸದಲ್ಲಿ ಕಿಲೋಮೀಟರ್‌ವರೆಗೆ ಹಾರುತ್ತಿದೆ. ಹೀಗಾಗಿ, ಜನರನ್ನು ಸ್ಥಳಾಂತರಿಸುವಂತಾಗಿದೆ. ಜ್ವಾಲಾಮುಖಿ ಸ್ಫೋಟ ಮತ್ತಷ್ಟು ಹೆಚ್ಚುವ ಸಾಧ್ಯತೆ ಇದೆ ಎಂದಿರುವ ಅಧಿಕಾರಿಗಳು, ಮನಡೊ ನಗರದಲ್ಲಿರುವ ಪ್ರಾಂತೀಯ ವಿಮಾನ ನಿಲ್ದಾಣವನ್ನು ಬಂದ್ ಮಾಡಿಸಿದ್ದಾರೆ. ಪರ್ವತದ ಒಂದು ಭಾಗ ಸಮುದ್ರಕ್ಕೆ ಕುಸಿದರೆ, ಸುನಾಮಿ ಪರಿಸ್ಥಿತಿ ಎದುರಾಗಬಹುದು ಎಂದೂ ಎಚ್ಚರಿಸಿದ್ದಾರೆ. ಜ್ವಾಲಾಮುಖಿ ಪರಿಸ್ಥಿತಿ ಕುರಿತು ನಡೆದ ಸಚಿವ ಸಂಪುಟ ಸಭೆ ಬಳಿಕ ಮಾತನಾಡಿರುವ ಮಾನವ ಅಭಿವೃದ್ಧಿ ಇಲಾಖೆ ಸಚಿವ ಮುಹಬ್ಬಿರ್ ಎಫ್ರೆಂಡಿ, 'ಜನರ ಸ್ಥಳಾಂತರಕ್ಕೆ ಅನುಕೂಲವಾಗುವಂತೆ ನೊಲಾಂಗ್ ಮೊಂಗೋನ್‌ಡೌ ಪ್ರದೇಶದಲ್ಲಿ ನೂರಾರು ಸರಳ, ಶಾಶ್ವತ ಮನೆಗಳನ್ನು ನಿರ್ಮಿಸಲಾಗುತ್ತಿದೆ' ಎಂದು ಮಾಹಿತಿ ನೀಡಿದ್ದಾರೆ.

ಉದಯ ವಾಹಿನಿ
www.udayavahini.in
epaper.udayavahini.in
Udaya vahini news
Udaya vahini news
Udayavahini news youtube
udayavahininews@gmail.com






# ಮುಂಬೈ ವಿರುದ್ಧ ಕೋಲ್ಕತ್ತಾಗೆ ಗೆಲುವು

## 145 ರನ್ ಗಳಿಗೆ ಆಲೌಟ್ ಆಗುವ ಮೂಲಕ ಕೆಕೆಆರ್ ವಿರುದ್ಧ 24 ರನ್‌ಗಳಿಂದ ಸೋಲು

ಮುಂಬೈ ಇಂಡಿಯನ್ಸ್ ತಂಡವು 18,5 ಓವರ್‌ಗೆ 145 ರನ್ ಗಳಿಗೆ ಆಲೌಟ್ ಆಗುವ ಮೂಲಕ ಕೆಕೆಆರ್ ವಿರುದ್ಧ 24 ರನ್ ಗಳಿಂದ ಸೋಲನ್ನಪ್ಪಿತು. ಈ ಮೂಲಕ ಮುಂಬೈ ಬಹುತೇಕ ಪ್ಲೇಆಫ್ ರೇಸ್‌ನಿಂದ ಹೊರಬಿದ್ದಿದೆ.

ಐಪಿಎಲ್‌ನಲ್ಲಿ ಇಂದು ಮುಂಬೈ ಇಂಡಿಯನ್ಸ್ ಮತ್ತು ಕೋಲ್ಕತ್ತಾ ನೈಟ್ ರೈಡರ್ಸ್ ನಡೆಯಿತು. ಈ ಪಂದ್ಯದಲ್ಲಿ ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿತು. ಆದರೆ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಮುಂಬೈ ಇಂಡಿಯನ್ಸ್ ಮತ್ತೊಮ್ಮೆ ಕೆಕೆಆರ್‌ಗೆ ಸ್ಟ್ರಾಂಗ್ ಎಂಬುದನ್ನು ಸಾಬೀತುಪಡಿಸಿದೆ.

ವಾಂಖೆಡೆಯಲ್ಲಿ ಭರ್ಜರಿಯಾಗಿ ಬ್ಯಾಟ್ ಮಾಡಿದ ಕೆಕೆಆರ್ ಅಂತಿಮವಾಗಿ 19.5 ಓವರ್‌ಗೆ ತನ್ನೆಲ್ಲಾ 10 ವಿಕೆಟ್ ಕಳೆದುಕೊಂಡು 169 ರನ್ ಸಿಡಿಸಿತು. ಈ ಟಾರ್ಗೆಟ್ ಬೆನ್ನಟ್ಟಿದ ಮುಂಬೈ ಇಂಡಿಯನ್ಸ್ ತಂಡವು 18,5 ಓವರ್‌ಗೆ 145 ರನ್ ಗಳಿಗೆ ಆಲೌಟ್ ಆಗುವ ಮೂಲಕ ಕೆಕೆಆರ್ ವಿರುದ್ಧ 24 ರನ್ ಗಳಿಂದ ಸೋಲನ್ನಪ್ಪಿತು. ಈ ಮೂಲಕ ಮುಂಬೈ ಬಹುತೇಕ ಪ್ಲೇಆಫ್ ರೇಸ್‌ನಿಂದ ಹೊರಬಿದ್ದಿದೆ.

ಅಯ್ಯರ್ ಭರ್ಜರಿ ಬ್ಯಾಟಿಂಗ್






### ಅರ್ಧಶತಕ ಸಿಡಿಸಿದ ಸೂರ್ಯ

ಕೆಕೆಆರ್ ನೀಡಿದ 170 ರನ್ ಟಾರ್ಗೆಟ್ ಬೆನ್ನಟ್ಟಿದ ಮುಂಬೈ ತಂಡಕ್ಕೆ ಉತ್ತಮ ಆರಂಭ ದೊರಕಲಿಲ್ಲ. ಆರಂಭಿಕರಾಗಿ ಕಣಕ್ಕಿಳಿದ ಇಶಾನ್ ಕಿಶನ್ 13 ರನ್ ಮತ್ತು ರೋಹಿತ್ ಶರ್ಮಾ 11 ರನ್ ಸಿಡಿಸಿದರೆ ನಮನ್ ಧೀರ್ ಸಹ 11 ರನ್ ಗಳಿಸಿ ಪೆವಿಲಿಯನ್ ಸೇರಿದರು. ಬಳಿಕ ತಂಡದ ಪ್ರಮುಖ ಆಟಗಾರನಾಗಿದ್ ತಿಲಕ್ ವರ್ಮಾ ಸಹ ಕೇವಲ 4 ರನ್‌ಗೆ ಸುಸ್ತಾದರೆ ನೆಹಾಲ್ ವದೇರಾ 6 ರನ್ ಸಿಡಿಸಿ ಔಟ್ ಆದರು. ಮಹತ್ವದ ಪಂದ್ಯದಲ್ಲಿ ನಿಂತು ಆಟವಾಡಬೇಕಿದ್ದ ನಾಯಕ ಹಾರ್ದಿಕ್ ಪಾಂಡ್ಯ ಸಹ ಕೇವಲ 1 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಆದರೆ ಸೂರ್ಯಕುಮಾರ್ ಯಾದವ್ ಉತ್ತಮ ಬ್ಯಾಟಿಂಗ್ ಮಾಡುವ ಮೂಲಕ ಅರ್ಧಶತಕ ಸಿಡಿಸಿದರು. ಈ ವೇಳೆ ಸೂರ್ಯ 35 ಎಸೆತದಲ್ಲಿ 2 ಸಿಕ್ಸ್ ಮತ್ತು 6 ಫೋರ್ ಮೂಲಕ 56 ರನ್ ಗಳಿಸಿದರು.


### ಅಬ್ಬರಿಸಿದ ಅಯ್ಯರ್

ವೆಂಕಟೇಶ್ ಅಯ್ಯರ್ ಮತ್ತು ಮನೀಷ್ ಪಾಂಡೆ ಹೊರತುಪಡಿಸಿ ಕೋಲ್ಕತ್ತಾದ ಯಾವೊಬ್ಬ ಆಟಗಾರನೂ ಉತ್ತಮ ಬ್ಯಾಟಿಂಗ್ ಮಾಡಲಿಲ್ಲ. ವೆಂಕಟೇಶ ಅಯ್ಯರ್ ಒಂದೇ ಕಡೆ ಗೋಡೆಯಂತೆ ನಿಂತು ಹೋರಾಟ ಮುಂದುವರಿಸಿದರು. ಮುಂಬೈ ಇಂಡಿಯನ್ಸ್ ಟಾಸ್ ಗೆದ್ದು ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿತು. ಈ ದಿನ, ಕೆಕೆಆರ್‌ನ ಬ್ಯಾಟಿಂಗ್ ಕ್ರಮಾಂಕವು ಆರಂಭದಿಂದಲೇ ಕುಸಿಯಿತು. ಒಂದರ ಹಿಂದೆ ಒಂದರಂತೆ ವಿಕೆಟ್ ಕಳೆದುಕೊಂಡು ನೈಟ್ಸ್ ಒತ್ತಡಕ್ಕೆ ಸಿಲುಕಿತ್ತು. ಅದರಂತೆ 57 ರನ್‌ಗಳ ಒಳಗೆ, ಏಐಖ ತಂಡದ ಅರ್ಧದಷ್ಟು ಮಂದಿ ಪೆವಿಲಿಯನ್‌ಗೆ ಮರಳಿದರು. ಫಿಲ್ ಸಾಲ್ಟ್ 5 ರನ್, ಸುನಿಲ್ ನರೈನ್ 8 ರನ್, ಆಂಗ್ರಿಶ್ ರಘುವಂಶಿ 13 ರನ್, ನಾಯಕ ಶ್ರೇಯಸ್ ಅಯ್ಯರ್ 6 ರನ್, ರಿಂಕು ಸಿಂಗ್ 9 ರನ್ ಗಳಿಸಿ ಔಟ್ ಆದರು. ಆದರೆ ವೆಂಕಟೇಶ್ ಅಯ್ಯರ್ ಒಂದು ಕಡೆಯಿಂದ ಇನ್ನಿಂಗ್ಸ್ ಉಳಿಸಿಕೊಂಡರು. ಇವರೊಂದಿಗೆ ಕನ್ನಡಿಗ ಮನೀಶ್ ಪಾಂಡೆ ಇಂಫ್ಯಾಕ್ಟ್ ಆಟಗಾರನಾಗಿ ಮಿಂಚಿದರು. ಇಬ್ಬರು ಅನುಭವಿ ಬ್ಯಾಟ್ಸ್‌ಮನ್‌ಗಳು ಕೂಡ ಅಗತ್ಯಕ್ಕೆ ತಕ್ಕಂತೆ ಆಕ್ರಮಣಕಾರಿ ಹೊಡೆತಗಳನ್ನು ಆಡಿದರು. ಈ ವೇಳೆ ವೆಂಕಟೇಶ್ ಅಯ್ಯರ್ ಐವತ್ತನ್ನು ಪೂರೈಸಿದ್ದಾರೆ. ವೆಂಕಟೇಶ್ ಅಯ್ಯರ್ ಮತ್ತು ಮನೀಶ್ ಪಾಂಡೆ 83 ರನ್ ಜೊತೆಯಾಟವಾಡಿದರು. ಮನೀಶ್ ಪಾಂಡೆ 31 ಎಸೆತದಲ್ಲಿ 2 ಸಿಕ್ಸ್ 2 ಫೋರ್ ಮೂಲಕ 42 ರನ್ ಗಳಿಸಿ ಔಟಾದರು.

# ವಿಂಡೀಸ್ ಕ್ರಿಕೆಟಿಗನಿಗೆ ಐದು ವರ್ಷಗಳ ನಿಷೇಧದ ಶಿಕ್ಷೆ..!

ಕಳೆದ ವರ್ಷ ಮೇ 23 ರಂದೇ ಡೆವೊನ್ ಥಾಮಸ್ ವಿರುದ್ಧ ಮ್ಯಾಚ್ ಫಿಕ್ಸಿಂಗ್ ಆರೋಪ ಕೇಳಿಬಂದಿತ್ತು. ಆ ಬಳಿಕ ಥಾಮಸ್‌ರನ್ನು ತಾತ್ಕಾಲಿಕವಾಗಿ ಅಮಾನತುಗೊಳಿಸಲಾಗಿತ್ತು. ಇದೀಗ ಆರೋಪ ಸಾಭೀತಾದ ಬಳಿಕ ಅವರಿಗೆ ಈ ಐದು ವರ್ಷಗಳ ನಿಷೇಧದ ಶಿಕ್ಷೆ ವಿಧಿಸಲಾಗಿದೆ.

ಮ್ಯಾಚ್ ಫಿಕ್ಸಿಂಗ್ ಆರೋಪದಲ್ಲಿ ವೆಸ್ಟ್ ಇಂಡೀಸ್ ಕ್ರಿಕೆಟಿಗ ಡೆವೊನ್ ಥಾಮಸ್‌ಗೆ ಐಸಿಸಿ ಐದು ವರ್ಷಗಳ ನಿಷೇಧದ ಶಿಕ್ಷೆ ವಿಧಿಸಿದೆ. ಥಾಮಸ್ ವಿರುದ್ಧ 7 ನಿಯಮಗಳನ್ನು ಉಲ್ಲಂಘಿಸಿದ ಆರೋಪ ಕೇಳಿಬಂದಿತ್ತು. ಆ ಬಳಿಕ ನಡೆದ ತನಿಖೆಯಲ್ಲಿ ಥಾಮಸ್ ಈ ಆರೋಪಗಳೆಲ್ಲ ನಿಜವೆಂದು ಒಪ್ಪಿಕೊಂಡಿದ್ದರು. ವಿಂಡೀಸ್ ಬ್ಯಾಟರ್ ಡೆವೊನ್ ಥಾಮಸ್, ಶ್ರೀಲಂಕಾ ಕ್ರಿಕೆಟ್, ಎಮಿರೇಟ್ಸ್ ಕ್ರಿಕೆಟ್ ಮಂಡಳಿ ಮತ್ತು ಕೆರಿಬಿಯನ್ ಪ್ರೀಮಿಯರ್ ಲೀಗ್‌ನ ಭ್ರಷ್ಟಾಚಾರ-ವಿರೋಧಿ ನಿಯಮಗಳನ್ನು ಉಲ್ಲಂಘಿಸಿರುವುದನ್ನು ಸ್ವತಃ ಒಪ್ಪಿಕೊಂಡಿದ್ದಾರೆ ಎಂದು ಐಸಿಸಿ ಹೇಳಿದೆ. ಕಳೆದ ವರ್ಷ ಮೇ 23 ರಂದೇ ಡೆವೊನ್ ಥಾಮಸ್ ವಿರುದ್ಧ ಮ್ಯಾಚ್ ಫಿಕ್ಸಿಂಗ್ ಆರೋಪ ಕೇಳಿಬಂದಿತ್ತು. ಆ ಬಳಿಕ ಥಾಮಸ್‌ರನ್ನು ತಾತ್ಕಾಲಿಕವಾಗಿ ಅಮಾನತುಗೊಳಿಸಲಾಗಿತ್ತು. ಇದೀಗ ಆರೋಪ ಸಾಭೀತಾದ ಬಳಿಕ ಅವರಿಗೆ ಈ ಐದು ವರ್ಷಗಳ ನಿಷೇಧದ ಶಿಕ್ಷೆ ವಿಧಿಸಲಾಗಿದೆ. 34 ವರ್ಷದ ಬ್ಯಾಟ್ಸ್‌ಮನ್ ಡೆವೊನ್ ಥಾಮಸ್ 2009 ರಲ್ಲಿ ವೆಸ್ಟ್ ಇಂಡೀಸ್ ಪರ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ್ದರು. ಆ ಬಳಿಕ 2011 ರ ವಿಶ್ವಕಪ್‌ನಲ್ಲಿ ವೆಸ್ಟ್ ಇಂಡೀಸ್ ತಂಡದ ಭಾಗವಾಗಿದ್ದ ಥಾಮಸ್ 2022 ರಲ್ಲಿ ವಿಂಡೀಸ್ ಪರ ತಮ್ಮ ಕೊನೆಯ ಅಂತರಾಷ್ಟ್ರೀಯ ಪಂದ್ಯವನ್ನು ಆಡಿದ್ದರು. ಡೆವೊನ್ ಥಾಮಸ್ ಅಂತರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಇದುವರೆಗೆ ವಿಂಡೀಸ್ ಪರ ಒಂದು ಟೆಸ್ಟ್, 21 ಏಕದಿನ ಮತ್ತು 12 ಟಿ20 ಪಂದ್ಯಗಳನ್ನು ಆಡಿದ್ದಾರೆ. ಇದರಲ್ಲಿ ಕ್ರಮವಾಗಿ 31, 238 ಮತ್ತು 51 ರನ್ ಕಲೆಹಾಕಿದ್ದಾರೆ. ಬೌಲಿಂಗ್‌ನಲೂ ಕಮಾಲ್ ಮಾಡಿರುವ ಅವರು ನಾಲ್ಕು ವಿಕೆಟ್‌ಗಳನ್ನು ಉರುಳಿಸಿದ್ದಾರೆ.



ಮ್ಯಾಚ್ ಫಿಕ್ಸಿಂಗ್ ಆರೋಪ

## ಪಾತಾಳಕ್ಕಿಳಿದ ಪಾಕ್

# 2 ಮಾದರಿಗಳಲ್ಲಿ ಭಾರತವೇ ನಂ.1



ಐಸಿಸಿ ಇಂದು ಮೂರು ಮಾದರಿಯ ಕ್ರಿಕೆಟ್‌ನ ವಾರ್ಷಿಕ ಶ್ರೇಯಾಂಕಗಳನ್ನು ಪ್ರಕಟಿಸಿದೆ. ಬಿಡುಗಡೆಯಾಗಿರುವ ಈ ರ್‍ಯಾಂಕಿಂಗ್‌ಗಳ ಪಟ್ಟಿಯಲ್ಲಿ ಟೀಂ ಇಂಡಿಯಾ ಏಕದಿನ ಹಾಗೂ ಟಿ20 ಮಾದರಿಯಲ್ಲಿ ತನ್ನ ಪಾರುಪತ್ಯವನ್ನು ಮುಂದವರೆಸಿದ್ದರೆ, ಟೆಸ್ಟ್ ಮಾದರಿಯಲ್ಲಿ ಮಾತ್ರ 1 ಸ್ಥಾನ ಕುಸಿದಿದ್ದು, 2ನೇ ಸ್ಥಾನಕ್ಕೆ ಜಾರಿದೆ.

ಐಸಿಸಿ ಇಂದು ಮೂರು ಮಾದರಿಯ ಕ್ರಿಕೆಟ್‌ನ ವಾರ್ಷಿಕ ಶ್ರೇಯಾಂಕಗಳನ್ನು ಪ್ರಕಟಿಸಿದೆ. ಅದರಂತೆ ಪ್ರಕಟವಾಗಿರುವ ರ್‍ಯಾಂಕಿಂಗ್ ಪಟ್ಟಿಯಲ್ಲಿ ಸಾಕಷ್ಟು ಬದಲಾವಣೆಗಳು ಕಂಡುಬಂದಿವೆ. ಟೀಂ ಇಂಡಿಯಾ 2 ಮಾದರಿಗಳಲ್ಲಿ ನಂಬರ್ 1 ಸ್ಥಾನದಲ್ಲಿದ್ದರೆ, 1 ಮಾದರಿಯಲ್ಲಿ ಮಾತ್ರ ತನ್ನ ಅಗ್ರಸ್ಥಾನದಿಂದ ಕೆಳಗಿಳಿದಿದೆ. ಮೊದಲಿಗೆ ಟಿ20 ತಂಡಗಳ ರ್‍ಯಾಂಕಿಂಗ್ ಪಟ್ಟಿಯನ್ನು ನೋಡುವುದಾದರೆ.. ಈ ಮಾದರಿಯಲ್ಲಿ ಎಂದಿನಂತೆ ಟೀಂ ಇಂಡಿಯಾ 264 ರೇಟಿಂಗ್‌ನೊಂದಿಗೆ ಮೊದಲ ಸ್ಥಾನದಲ್ಲಿದೆ. ಭಾರತವು ಈ ಹಿಂದೆಯೂ ಮೊದಲ ಸ್ಥಾನದಲ್ಲಿತ್ತು. ಇದೀಗ ವಾರ್ಷಿಕ ರ್‍ಯಾಂಕಿಂಗ್ ಪಟ್ಟಿಯಲ್ಲೂ ಅದೇ ಸ್ಥಾನದಲ್ಲಿ ಮುಂದುವರೆಸಿದೆ.


ಇಷ್ಟು ದಿನ ಎರಡನೇ ಸ್ಥಾನದಲ್ಲಿದ್ದ ಇಂಗ್ಲೆಂಡ್ ತಂಡ 1 ಸ್ಥಾನ ಕುಸಿತ ಕಂಡಿದ್ದು, ಮೂರನೇ ಸ್ಥಾನಕ್ಕೆ ಜಾರಿದ್ದರೆ, ಒಂದು ಸ್ಥಾನ ಮೇಲೇರಿರುವ ಆಸ್ಟ್ರೇಲಿಯಾ ಇದೀಗ ಎರಡನೇ ಸ್ಥಾನಕ್ಕೆ ಬಂದು ನಿಂತಿದೆ. ಆಸ್ಟ್ರೇಲಿಯಾ 257 ರೇಟಿಂಗ್ ಪಾಯಿಂಟ್ ಹೊಂದಿದ್ದರೆ, ಇಂಗ್ಲೆಂಡ್ ಬಳಿ 252 ರೇಟಿಂಗ್ ಪಾಯಿಂಟ್‌ಗಳಿವೆ. ದಕ್ಷಿಣ ಆಫ್ರಿಕಾ ಎರಡು ಸ್ಥಾನ ಕುಸಿದಿದ್ದು 250 ರೇಟಿಂಗ್‌ನೊಂದಿಗೆ ನಾಲ್ಕನೇ ಸ್ಥಾನಕ್ಕೆ ಜಾರಿದೆ. ನ್ಯೂಜಿಲೆಂಡ್ ಒಂದು ಸ್ಥಾನ ಕಳೆದುಕೊಂಡಿದ್ದು, 250 ರೇಟಿಂಗ್‌ನೊಂದಿಗೆ 5ನೇ ಸ್ಥಾನದಲ್ಲಿದೆ. ವೆಸ್ಟ್ ಇಂಡೀಸ್ ತಂಡ 249 ರೇಟಿಂಗ್‌ನೊಂದಿಗೆ 6ನೇ ಸ್ಥಾನದಲ್ಲಿದೆ.

ಸಾಕಷ್ಟು ನಷ್ಟ ಅನುಭವಿಸಿರುವ ಪಾಕಿಸ್ತಾನ ಕ್ರಿಕೆಟ್ ತಂಡ ಎರಡು ಸ್ಥಾನ ಕೆಳಗಿಳಿದ್ದು, 247 ರೇಟಿಂಗ್‌ನೊಂದಿಗೆ ತಂಡ ಏಳನೇ ಸ್ಥಾನದಲ್ಲಿದೆ. ಉಳಿದಂತೆ ಶ್ರೀಲಂಕಾ ತಂಡ 232 ರೇಟಿಂಗ್‌ನೊಂದಿಗೆ ಎಂಟನೇ ಸ್ಥಾನದಲ್ಲಿದ್ದರೆ, ಬಾಂಗ್ಲಾದೇಶದ ಒಂಬತ್ತನೇ, ಅಫ್ಘಾನಿಸ್ತಾನ ಹತ್ತನೇ ಸ್ಥಾನದಲ್ಲಿದೆ. ಇನ್ನು ಏಕದಿನ ಮಾದರಿಯಲ್ಲೂ ಮೊದಲ ಸ್ಥಾನದಲ್ಲಿರುವ ಟೀಂ ಇಂಡಿಯಾ 122 ರೇಟಿಂಗ್ ಪಾಯಿಂಟ್ಸ್ ಹೊಂದಿದ್ದರೆ, ಆಸ್ಟ್ರೇಲಿಯಾ 116 ಅಂಕಗಳೊಂದಿಗೆ ಎರಡನೇ ಸ್ಥಾನದಲ್ಲಿದೆ.

# ಟಾಕ್ಸಿಕ್

## ಕರೀನಾ ಬಂದ ಪುಟ್ಟ, ಹೋದ ಪುಟ್ಟ ಕಥೆ





ರಾಕಿಂಗ್ ಸ್ಟಾರ್ ಯಶ್ ನಟನೆಯ 'ಟಾಕ್ಸಿಕ್' ಸಿನಿಮಾದಲ್ಲಿ ಬಾಲಿವುಡ್ ನಟಿ ಕರೀನಾ ಕಪೂರ್ ನಟಿಸಲಿದ್ದಾರೆ ಎಂದು ಸುದ್ದಿ ಆಗಿತ್ತು. ಯಶ್ ಈ ಸಿನಿಮಾದ ನಾಯಕ, ಗೀತಾ ಮೋಹನ್ ದಾಸ್ ನಿರ್ದೇಶಕಿ, ಯಶ್ ಮತ್ತು ಕೆವಿಎನ್ ಪ್ರೊಡಕ್ಷನ್ ನಿರ್ಮಾಪಕರು ಎನ್ನುವ ವಿಷಯದ ಹೊರತಾಗಿ ಮತ್ತೊಂದು ಮಾಹಿತಿಯನ್ನೂ ಚಿತ್ರತಂಡ ಹಂಚಿಕೊಂಡಿರಲಿಲ್ಲ. ಆದರೂ, ಹಲವು ವಿಷಯಗಳು ಹರಿದಾಡುತ್ತಲೇ ಇದ್ದವು. ಬಾಲಿವುಡ್ ನ ಬಹುಬೇಡಿಕೆ ನಟಿ ಈ ಸಿನಿಮಾದ ನಾಯಕಿಯಾಗಲಿದ್ದಾರೆ ಎನ್ನುವುದರಜೊತೆಗೆ ಕರೀನಾ ಕಪೂರ್ ಪ್ರಮುಖ ಪಾತ್ರ ಮಾಡಲಿದ್ದಾರೆ ಎಂದು ಬಿಟೌನ್ ಮಾತನಾಡಿಕೊಂಡಿತ್ತು. ಇದ್ಯಾವುದೋ ಅಧಿಕೃತ ಮಾಹಿತಿ ಆಗಿರಲಿಲ್ಲ. ಆದರೂ, ಸುದ್ದಿಯಂತೂ ಭರ್ಜರಿ ಸೇಲ್ ಆಗಿತ್ತು. ಈಗ ಕರೀನಾ ಸಿನಿಮಾದಲ್ಲಿ ಇರಲ್ಲ ಎನ್ನುವ ಮತ್ತೊಂದು ಸುದ್ದಿ ಇದೆ.

ಯಶ್ ಅವರ ಸಹೋದರಿಯಾಗಿ ಈ ಸಿನಿಮಾದಲ್ಲಿ ಕರೀನಾ ನಟಿಸಬೇಕಿತ್ತು. ಆದರೆ, ಡೇಟ್ ಹೊಂದಾಣಿಕೆಯ ಕಾರಣದಿಂದಾಗಿ ಅವರು ಚಿತ್ರದಿಂದ ಹಿಂದೆ ಸರಿದಿದ್ದಾರೆ ಎಂದು ಹೇಳಲಾಗುತ್ತಿದೆ. ಒಡಹುಟ್ಟಿದವರ ಕಥೆಯನ್ನು ಇದು ಒಳಗೊಂಡಿದ್ದರಿಂದ ಯಶ್ ಅವರ ಸರಿಸಮಾನಾಗಿ ಡೇಟ್ ಬೇಕಿತ್ತಂತೆ. ಆದರೆ, ಅಷ್ಟೊಂದು ಸಮಯ ಕರೀನಾ ಬಳಿ ಇಲ್ಲವಂತೆ. ಹಾಗಂತ ಈ ವಿಷಯವಾದರೂ ನಿಜವಾ ಗೊತ್ತಿಲ್ಲ. ಹಾಗಂತ ಬಾಲಿವುಡ್ ಚಿತ್ರರಂಗ ಹೇಳುತ್ತಿದೆ. ಅಲ್ಲಿನ ಮಾಧ್ಯಮಗಳು ಸುದ್ದಿ ಮಾಡಿವೆ. ಆದರೆ, ಚಿತ್ರತಂಡ ಹೇಳುವ ತನಕ ಎಲ್ಲಾವೂ ಹೋದ ಪುಟ್ಟ, ಬಂದ ಪುಟ್ಟ ಕಥೆಗಳಾಗಿಯೇ ಉಳಿಯುತ್ತವೆ.



ಶ್ರೀರೆಡ್ಡಿ ರಹಸ್ಯ ಬಯಲು

ತನಗೆ ಅನ್ಯಾಯವಾಗಿದೆ, ಲೈಂಗಿಕ ಶೋಷಣೆಗೆ ಒಳಗಾಗಿದ್ದೇನೆ ಎಂದು ಹಲವಾರು ಬಾರಿ ತೆಲುಗು ನಿರ್ಮಾಪಕರ ಸಂಘ, ಕಲಾವಿದರ ಸಂಘದ ಮುಂದೆ ಬೆತ್ತಲೆಯಾಗಿ ಪ್ರತಿಭಟನೆ ಮಾಡಿದ್ದ ನಟಿ ಶ್ರೀರೆಡ್ಡಿ ಕುರಿತಾಗಿ ಆಘಾತಕಾರಿ ಸುದ್ದಿಯೊಂದು ಬಂದಿದೆ. ಬೇರೆಯವರಿಂದ ಹಣ ಪಡೆದುಕೊಂಡು ಹೀಗೆ ಬೆತ್ತಲೆ ನಾಟಕ ಮಾಡುತ್ತಿದ್ದರು ಎಂದು ಹೇಳಲಾಗುತ್ತಿದೆ. ಈ ಕುರಿತಂತೆ ಹೆಚ್ಚಿನ ಮಾಹಿತಿಯನ್ನು ಶೀಘ್ರವೇ ಹೊರ ಹಾಕಲಾಗುವುದು ಎಂದು ಉದ್ಯಮದವರು ಹೇಳುತ್ತಿದ್ದಾರೆ.


ಶ್ರೀರೆಡ್ಡಿ ಈ ಹಿಂದೆ ಮೀಟೂ ಆರೋಪ ಮಾಡಿದ್ದರು. ಅದರಲ್ಲೂ ನರೇಶ್ ಮತ್ತು ಪವಿತ್ರಾ, ಲೋಕೇಶ್ ಪ್ರಕರಣದಲ್ಲಿ ಪ್ರತಿಕ್ರಿಯೆ ನೀಡಿದ್ದರು. ಈ ಹಿಂದೆ ಮೀಟೂ ಪ್ರಕರಣಕ್ಕೆ ಸಂಬಂಧಿಸಿದಂತೆ ಶ್ರೀರೆಡ್ಡಿ ಬೆತ್ತಲೆ ಪ್ರತಿಭಟನೆ ಮಾಡಿದ್ದರು ಈ ಸಂದರ್ಭವನ್ನು ನೆನಪಿಸಿಕೊಂಡು ಲೈವ್ ಮಾಡಿದ್ದ ಶ್ರೀರೆಡ್ಡಿ ಮತ್ತೆ ನರೇಶ್ ಹಾಗೂ ಪವಿತ್ರಾ, ವಿಷಯವನ್ನು ಪ್ರಸ್ತಾಪಿಸಿದ್ದರು. 'ನಾನು ಮೀಟೂ ವಿರುದ್ಧ ಪ್ರತಿಭಟನೆ ನಡೆಸಿದಾಗ

# ಹಣ ಪಡೆದು ಬೆತ್ತಲೆ ನಾಟಕ

ನರೇಶ್, ಆ್ಯಸಿಡ್‌ನಿಂದ ಕೈ ತೊಳೆಯಬೇಕು ಎಂದು ಕಾಮೆಂಟ್ ಮಾಡಿದ್ದರು. ಈಗ ಅವರ ಸ್ಥಿತಿ ಏನಾಗಿದೆ ನೋಡಿ' ಎಂದು ಕಾಮೆಂಟ್ ಮಾಡಿದ್ದರು. ಯಾರ ಬದುಕಿನಲ್ಲೂ ಯಾರು ಬಿರುಗಾಳಿ ಎಬ್ಬಿಸಬಾರದು ಎಂದು ಪರೋಕ್ಷವಾಗಿ ಪವಿತ್ರಾ, ಲೋಕೇಶ್ ಕುರಿತಾಗಿಯೂ ಮಾತನಾಡಿದ್ದ ಶ್ರೀರೆಡ್ಡಿ, ರಮ್ಯಾ ಅವರ ಜೀವನವನ್ನು ಹಾಳು ಮಾಡುವ ಹಕ್ಕು ಯಾರಿಗೂ ಇಲ್ಲ. ಅಲ್ಲದೇ, ಮಹಿಳೆ ಅಂದಾಕ್ಷಣ ಅವರ ಶೀಲವನ್ನು ಶಂಕಿಸಲಾಗುತ್ತದೆ. ರಮ್ಯಾ ಮೇಲೂ ಅದೇ ಆಗಿದೆ. ಆದರೆ, ನಿಜವಾಗಿಯೂ ಜನರ ಮುಂದೆ ಬೆತ್ತಲೆ ಆದವರು ಯಾರು ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ನರೇಶ್ ಅವರನ್ನು ಕೇಳಿದ್ದರು. ಶ್ರೀರೆಡ್ಡಿ ಲೈವ್ ಗೆ ಬಂದು ಮತ್ತೆ ಹಲವು ಕಲಾವಿದರ ಹೆಸರುಗಳನ್ನು ಬಹಿರಂಗ ಪಡಿಸಿದ್ದರು. ಅವರು ಜೀವನವೂ ಇದೇ ಹಾದಿಯಲ್ಲಿದೆ. ಮುಂದೆ ಜನರಿಗೂ ಗೊತ್ತಾಗಲಿದೆ ಎಂದು ಅಬ್ಬರಿಸಿದ್ದರು. ಶ್ರೀರೆಡ್ಡಿ ಲೈವ್ ಗೆ ಬರುತ್ತಿದ್ದಂತೆಯೇ ಮೀಟೂ ಚಳವಳಿ ಮತ್ತೆ ಆರಂಭವಾಗಲಿದೆಯಾ ಅನ್ನುವ ಅನುಮಾನವನ್ನಂತೂ ಅವರು ಹುಟ್ಟು ಹಾಕಿದ್ದರು. ಇದೆಲ್ಲದ ಹಿಂದೆ ಹಣದ ವಾಸನೆ ಇದೆ ಎನ್ನಲಾಗುತ್ತಿದೆ.

# ಶ್ರೀದೇವಿ ನೋಡೋಕೆ ಸ್ವರ್ಗಕ್ಕೆ ಹೋಗಿದ್ದೆ

ಹೆಸರಾಂತ ನಿರ್ದೇಶಕ ರಾಮ್ ಗೋಪಾಲ್ ವರ್ಮಾಗೆ ಬಾಲಿವುಡ್ ನಟಿ ಶ್ರೀದೇವಿ ಎಂದರೆ ಎಲ್ಲಿಲ್ಲದ ಅಭಿಮಾನ. ಆಗಾಗ್ಗೆ ಶ್ರೀದೇವಿ ಅವರನ್ನು ನೆನಪಿಸಿಕೊಳ್ಳುತ್ತಲೇ ಇರುತ್ತಾರೆ ವರ್ಮಾ. ಶ್ರೀದೇವಿಯ ಸೌಂದರ್ಯವನ್ನು ಸಾಕಷ್ಟು ಬಾರಿ ಹೊಗಳಿದ್ದಾರೆ. ಶ್ರೀದೇವಿ ಮರಣ ಹೊಂದಿದ್ದಾಗ ಕಣ್ಣೀರಿಟ್ಟಿದ್ದಾರೆ. ಶ್ರೀದೇವಿ ಅಗಲಿಕೆಯ ನಂತರವೂ ಅವರ ಜೊತೆಗಿನ ಫೋಟೋವೊಂದನ್ನು ಹಂಚಿಕೊಂಡಿದ್ದಾರೆ ವರ್ಮಾ. ಕಾರಿನಲ್ಲಿ ಡ್ರೈವರ್ ಸೀಟ್‌ನಲ್ಲಿ ಶ್ರೀದೇವಿ ಕುಳಿತಿದ್ದು, ಅದರ ಪಕ್ಕದ ಸೀಟಿನಲ್ಲಿ ಸೀಗರೇಟು ಹಿಡಿದುಕೊಂಡು ವರ್ಮಾ ಕೂತಿದ್ದಾರೆ. ಈ ಫೋಟೋವನ್ನು ಅವರು ಸೋಷಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ. ನಾನು ಶ್ರೀದೇವಿ ಅವರನ್ನು ಭೇಟಿ ಮಾಡೋಕೆ ಸ್ವರ್ಗಕ್ಕೆ ಹೋಗಿದ್ದೆ ಎಂದು ಬರೆದುಕೊಂಡಿದ್ದಾರೆ. ಅದು ನಿಜವಾದ ಫೋಟೋವನ್ನು ಎಡಿಟ್ ಮಾಡಿದ ಫೋಟೋ ಅದಾಗಿದೆ ಎಂಬುದು ಗೊತ್ತಾಗಿದೆ. ಆದರೂ, ಶ್ರೀದೇವಿ ಮೇಲಿನ ಅಭಿಮಾನವನ್ನು ಮತ್ತೆ ತೋರಿಸಿದ್ದಾರೆ ವರ್ಮಾ.



# ನಿಶ್ಚಿತಾರ್ಥ ಸುದ್ದಿ ಬಹಿರಂಗವಾಗಲು ಅಮ್ಮ ಕಾರಣ ಎಂದ ನಟಿ ಅದಿತಿ



ಇತ್ತೀಚೆಗಷ್ಟೇ ನಟಿ ಅದಿತಿ ರಾವ್ ಹೈದರ್ ಮತ್ತು ತೆಲುಗು ನಟ ಸಿದ್ಧಾರ್ಥ ಎಂಗೇಜ್ ಆದ ವಿಷಯ ಬಹಿರಂಗವಾಗಿತ್ತು. ಆಪ್ತರಿಗೂ ಈ ವಿಷಯ ತಿಳಿಸದೇ ಕೇವಲ ಕುಟುಂಬಸ್ಥರು ಸೇರಿ ನಿಶ್ಚಿತಾರ್ಥ ಕಾರ್ಯಕ್ರಮವನ್ನು ಮುಗಿಸಿದ್ದರು. ಇದು ಗಾಸಿಪ್ ರೀತಿಯಲ್ಲಿ ಹರಡಿತ್ತಾದರೂ, ಯಾರೂ ವಿಷಯವನ್ನು ಖಚಿತ ಪಡಿಸಿರಲಿಲ್ಲ. ನಂತರ ಅದಿತಿ ಅವರೇ ಈ ವಿಷಯ ಹಂಚಿದ್ದರು.

ಹೌದು, ನಿಶ್ಚಿತಾರ್ಥದ ವಿಷಯವು ಬಹಿರಂಗವಾಗಲು ತಮ್ಮ ತಾಯಿಯೇ ಕಾರಣ ಎಂದಿದ್ದಾರೆ ನಟಿ. ನಾನು ಎಂಗೇಜ್ ಮೆಂಟ್ ಮಾಡಿಕೊಂಡ ವಿಷಯವನ್ನು ಯಾರಿಗೂ ಹೇಳಿರಲಿಲ್ಲ. ಆದರೂ, ಗೊತ್ತಾಗಿತ್ತು. ಅಮ್ಮನಿಗೆ ಪದೇ ಪದೇ ಕಾಲ್ ಮಾಡಿ ಕೇಳುತ್ತಿದ್ದರು. ಹಾಗಾಗಿ ಅವರೇ ಈ ವಿಷಯವನ್ನು ತಿಳಿಸಿ ಬಿಡು ಅಂದಿದ್ದರು ಎಂದಿದ್ದಾರೆ ಅದಿತಿ.

ಆಗಿದ್ದು ನಿಶ್ಚಿತಾರ್ಥವಾದರೂ, ಸೋಷಿಯಲ್ ಮೀಡಿಯಾದಲ್ಲಿ ಅದಿತಿ ರಾವ್ ಹೈದರಿ ಸಿದ್ಧಾರ್ಥ್ ಸದ್ದಿಲ್ಲದೇ ಮದುವೆಯಾ ಆಗಿದ್ದಾರೆ ಎಂದು ಸುದ್ದಿ ಆಗಿತ್ತು. ತೆಲಂಗಾಣದ ವನಪರ್ತಿ ಜಿಲ್ಲೆಯಲ್ಲಿರುವ ಶ್ರೀರಂಗಪುರಂನಲ್ಲಿರುವ ಶ್ರೀ ರಂಗನಾಯಕ ಸ್ವಾಮಿ ದೇವಸ್ಥಾನದಲ್ಲಿ ಸಿಂಪಲ್ ಆಗಿ ಈ ಜೋಡಿ ಮದುವೆಯಾಗಿದೆ ಎಂದು ಸುದ್ದಿ ಹಬ್ಬಿಸಿದ್ದರು.

ಇರಾ ಖಾನ್ ಮದುವೆಯಲ್ಲಿ ಕಾಣಿಸಿಕೊಂಡಿದ್ದ ಅದಿತಿ ಮತ್ತು ಸಿದ್ಧಾರ್ಥ ಅವರ ಫೋಟೋವನ್ನೇ ಮದುವೆ ಫೋಟೋ ಎಂದು ವೈರಲ್ ಮಾಡಲಾಗಿತ್ತು. ಶೂಟಿಂಗ್ ಎಂದು ಸುಳ್ಳು ಹೇಳಿ ಇಬ್ಬರೂ ಮದುವೆ ಆಗಿದ್ದಾರೆ ಎಂದು ಆರೋಪಿಸಲಾಗಿತ್ತು. ನಂತರ ಎಲ್ಲಾದಕ್ಕೂ ಅದಿತಿ ಉತ್ತರ ನೀಡಿದ್ದರು. ಹಿ ಸೇಡ್ ಎಸ್.. ಎಂಗೇಜ್ಡ್' ಎಂದು ಸಿದ್ಧಾರ್ಥನ ಜೊತೆಗಿರುವ ಫೋಟೋ ಹಂಚಿಕೊಂಡಿದ್ದರು.

ಈ ಜೋಡಿ ಹಲವು ವರ್ಷಗಳಿಂದ ಡೇಟಿಂಗ್ ಮಾಡುತ್ತಿತ್ತು. ಆದರೆ ಈ ಬಗ್ಗೆ ಎಲ್ಲಿಯೂ ಬಹಿರಂಗವಾಗಿ ಹೇಳಿಕೊಂಡಿರಲಿಲ್ಲ. ಆದರೆ ಸಿದ್ಧಾರ್ಥ ಜೊತೆಗಿನ ಖಾಸಗಿ ಫೋಟೋ ಹಂಚಿಕೊಂಡು ಹೊಸ ವರ್ಷದಂದು ಮದುವೆ ಬಗ್ಗೆ ಸುಳಿವು ನೀಡಿದ್ದರು ಅದಿತಿ ರಾವ್.

ನ್ಯೂ ಇಯರ್ ಸಂಭ್ರಮವನ್ನು ನಟಿ ಅದಿತಿ- ಸಿದ್ಧಾರ್ಥ್ ಜೋಡಿ ವಿದೇಶದಲ್ಲಿ ಸೆಲೆಬ್ರೇಟ್ ಮಾಡಿದ್ದರು. ಈ ಕುರಿತ ಇಬ್ಬರೂ ಕೂಡ ಚೆಂದದ ಫೋಟೋ ಶೇರ್ ಮಾಡಿ ಅಭಿಮಾನಿಗಳಿಗೆ ಶುಭಕೋರಿದ್ದರು. ಈ ಮೂಲಕ ಎಂಗೇಜ್ ಆಗಿರೋದು ಖಚಿತವಾಗಿತ್ತು. ಫೋಟೋ ಶೇರ್ ಮಾಡ್ತಿದ್ದಂತೆ ಮದುವೆ ಯಾವಾಗ ಎಂದು ಫ್ಯಾನ್ಸ್ ಕಾಮೆಂಟ್ ಮಾಡಿದ್ದರು.

# ಧೂತ್ 2 ಸರಣಿಗೆ ಕಾಮಾಕ್ಷಿ ಭಾಸ್ಕರಲಾ ನಾಯಕಿ

ಸಸ್ಪೆನ್ಸ್ ಥ್ರಿಲ್ಲರ್ ಮಾದರಿ



'ನಾಗಚೈತನ್ಯ ನಟನೆಯ ಧೂತ್ ಸಿರೀಸ್ ಇದೀಗ ಸಿಕ್ವೇಲ್ ರೂಪದಲ್ಲಿ ಬರಲಿದೆ. ಈಗಾಗಲೇ ಸರಣಿಗಾಗಿ ಸರ್ವಸಿದ್ಧತೆ ಮಾಡಿಕೊಂಡಿರುವ ಚಿತ್ರತಂಡ ನಾಯಕಿಯನ್ನೂ ಆಯ್ಕೆ ಮಾಡಿಕೊಂಡಿದೆ. ಈ ಸರಣಿಯಲ್ಲಿ ಪ್ರಮುಖ ಪಾತ್ರದಲ್ಲಿ ಕಾಮಾಕ್ಷಿ ಭಾಸ್ಕರಲಾ ಕಾಣಿಸಿಕೊಳ್ಳಲಿದ್ದಾರೆ. ವೃತ್ತಿಯಲ್ಲಿ ವೈದ್ಯರಾಗಿರುವ ಕಾಮಾಕ್ಷಿ, ಪ್ರವೃತ್ತಿಯಲ್ಲಿ ನಟಿಯೂ ಹೌದು. ಧೂತ್ ಸರಣಿಯಲ್ಲಿ ಕಾಮಾಕ್ಷಿ, ಟ್ರಕ್ ಡ್ರೈವರ್ ಕೋಟಿ ಎನ್ನುವವರು ಪತ್ನಿಯಾಗಿ ನಟಿಸಿದ್ದರು. ಈಗ ಹೊಸ ಬಗೆಯ ಪ್ರಮುಖ ಪಾತ್ರವೇ ಅವರಿಗೆ ಸಿಕ್ಕಿದೆ. ಈಗಾಗಲೇ ಪ್ರಿ ಪ್ರೊಡಕ್ಷನ್ ಕೆಲಸಗಳೂ ನಡೆಯುತ್ತಿವೆ. ಸಸ್ಪೆನ್ಸ್, ಥ್ರಿಲ್ಲರ್ ಮಾದರಿಯ ಸರಣಿ ಇದಾಗಿದ್ದು, ಮಾಧ್ಯಮಗಳಲ್ಲಿ ನಡೆಯುವ ಅಕ್ರಮಗಳನ್ನು ತೋರಿಸುಲಾಗುತ್ತಿದೆ. ವಿಕ್ರಮ್ ಕುಮಾರ್ ನಿರ್ದೇಶನದಲ್ಲಿ ಈ ಸರಣಿ ಮೂಡಿ ಬಂದಿದ್ದು, ಅದೇ ನಿರ್ದೇಶಕರೇ ಮುಂದುವರೆದಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966